ಸಂಪುಟ: 05 ಸಂಚಿಕೆ: 150 ಪುಟಗಳು: 08 ಮಂಗಳವಾರ 12 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

**ಮುಂಜಾನೆ ಮಾತು**

ಯಶಸ್ಸಿನ ಬಗೆಗಿನ ನನ್ನ ವ್ಯಾಖ್ಯಾನವು ಸಾಕಷ್ಟು ಪ್ರಬಲವಾಗಿದ್ದರೆ ಸೋಲು ನನ್ನನ್ನು ಎಂದಿಗೂ ಹಿಂದಿಕ್ಕುವುದಿಲ್ಲ.

## 18 ಶಾಸಕರ ಅಮಾನತು ರದ್ದು ಸದನದ ಒಪ್ಪಿಗೆ ಸೂಚನೆ

• **ಉದಯವಾಹಿನಿ,ನವದೆಹಲಿ**

ಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಕಾರಣಕ್ಕೆ ಅಮಾನತುಗೊಂಡಿದ್ದ ಬಿಜೆಪಿಯ 18 ಶಾಸಕರ ಅಮಾನತು ಆದೇಶ ರದ್ದುಪಡಿಸುವ ಪ್ರಸ್ತಾವಕ್ಕೆ ವಿಧಾನಸಭೆ ಅನುಮೋದನೆ ನೀಡಿತು. ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ ಅವರು ಪ್ರಸ್ತಾವ ಮಂಡಿಸಿದರು. ಮೇ 25 ರಂದು ಸಭಾಧ್ಯಕ್ಷ ಯು.ಟಿ.ಖಾದರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಮಾನತು ಆದೇಶ ರದ್ದುಗೊಳಿಸಲು ತೀರ್ಮಾನಿಸಲಾಗಿತ್ತು. ಇದಕ್ಕೆ ಘಟನೋತ್ತರ ಅನುಮೋದನೆ ನೀಡಲಾಯಿತು. ಬಜೆಟ್ ವೇಳೆ ಸದನದಲ್ಲಿ ಗದ್ದಲ ನಡೆಸಿ, ಸಭಾಧ್ಯಕ್ಷರ ಪೀಠಕ್ಕೆ ಕಾಗದ ತೂರಿದ ಕಾರಣಕ್ಕೆ ಬಿಜೆಪಿಯ ದೊಡ್ಡನಗೌಡ ಪಾಟೀಲ, ಡಾ.ಸಿ.ಎನ್. ಅಶ್ವತ್ಥ ನಾರಾಯಣ, ಎಸ್.ಆರ್. ವಿಶ್ವನಾಥ್, ಬೈರತಿ ಬಸವರಾಜು, ಎಸ್.ಎನ್. ಚನ್ನಬಸಪ್ಪ, ಉಮಾನಾಥ ಕೋಟ್ಯಾನ್, ಬಿ. ಸುರೇಶ್ ಗೌಡ, ಡಾ. ಶೈಲೇಂದ್ರ ಬೆಲ್ದಾಳೆ, ಶರಣು ಸಲಗರ, ಸಿ.ಕೆ.ರಾಮಮೂರ್ತಿ, ಯಶ್‌ಪಾಲ್ ಸುವರ್ಣ, ಹರೀಶ್ ಬಿ. ಪಿ, ಡಾ.ಭರತ್ ಶೆಟ್ಟಿ, ಬಸವರಾಜ ಮತ್ತಿಮಡು, ಧೀರಜ್ ಮುನಿರಾಜು, ಮುನಿರತ್ನ ಮತ್ತು ಡಾ.ಚಂದ್ರು ಲಮಾಣಿ ಅಮಾನತುಗೊಂಡಿದ್ದರು.

## ರಷ್ಯಾ ಸಂಘರ್ಷ: ಝೆಲೆನ್‌ಸ್ಕಿ ಜತೆ ಪ್ರಧಾನಿ ಮಾತುಕತೆ

• **ಉದಯವಾಹಿನಿ, ಬೆಂಗಳೂರು**

'ರಷ್ಯಾ ಜೊತೆಗಿನ ಸಂಘರ್ಷ ಕೊನೆಗಾಣಿಸಲು ಶಾಂತಿಯುತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಉಕ್ರೇನ್‌ಗೆ ಎಲ್ಲಾ ರೀತಿಯ ನೆರವು ನೀಡಲು ಭಾರತ ಬದ್ಧವಾಗಿದೆ' ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿಗೆ ಭರವಸೆ ನೀಡಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವೆ ಸಭೆ ನಿಗದಿಯಾಗಿರುವ ಬೆನ್ನಲ್ಲೇ, ಉಭಯ ದೇಶಗಳ ನಾಯಕರು ಫೋನ್ ಮೂಲಕ ಸಂಭಾಷಣೆ ನಡೆಸಿದ್ದಾರೆ. 'ಸಂಘರ್ಷದ ಆರಂಭದಿಂದಲೂ ಶಾಂತಿಯುತ ತ್ವರಿತ ಪರಿಹಾರಕ್ಕಾಗಿ ಭಾರತವು ಸತತ ಬೆಂಬಲಿಸುತ್ತಿದೆ' ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

**ಧನ್ಯವಾದ ಸಲ್ಲಿಕೆ:** 'ಪ್ರಧಾನಿ ನರೇಂದ್ರ ಮೋದಿ ಜೊತೆಗೆ ದ್ವಿಪಕ್ಷೀಯ ಸಹಕಾರ ಸೇರಿದಂತೆ ಸಮಗ್ರ ರಾಜತಾಂತ್ರಿಕ ಸ್ಥಿತಿಗತಿಯ ಕುರಿತಂತೆ ಚರ್ಚಿಸಲಾಯಿತು. ಅದರಲ್ಲೂ, ದೇಶದ ಜನರಿಗೆ ಬೆಂಬಲ ಸೂಚಿಸಿ ಪ್ರಧಾನಿ ಮೋದಿಯವರ ಮಾತುಗಳಿಗೆ ಅಭಾರಿಯಾಗಿದ್ದೇನೆ' ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿಗೆ ತಿಳಿಸಿದ್ದಾರೆ.

## ನಿರ್ದೇಶನಾಲಯಕ್ಕೆ ರಾಮಚಂದ್ರ ರಾವ್ ಮರು ನೇಮಕ

• **ಉದಯವಾಹಿನಿ, ಬೆಂಗಳೂರು**

ಡಿಜಿಪಿ ಕೆ.ರಾಮಚಂದ್ರ ರಾವ್ ಅವರನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸಿದ್ದ ಆದೇಶವನ್ನು ವಾಪಸ್ ಪಡೆದಿರುವ ರಾಜ್ಯ ಸರ್ಕಾರವು ಅವರಿಗೆ ಹುದ್ದೆ ನೀಡಿದೆ. ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯಕ್ಕೆ ಮರು ನೇಮಕ ಮಾಡಲಾಗಿದೆ. ಚಿನ್ನ ಕಳ್ಳ ಸಾಗಣೆ ಪ್ರಕರಣದಲ್ಲಿ ನಟಿ ರನ್ಯಾ ರಾವ್ ಅವರನ್ನು ಬಂಧಿಸಲಾಗಿತ್ತು. ಅದಾದ ಮೇಲೆ ರಾಜ್ಯ ಸರ್ಕಾರವು ರಾಮಚಂದ್ರ ರಾವ್ ಅವರನ್ನು ದೀರ್ಘಕಾಲದ ರಜೆಯ ಮೇಲೆ ಕಳುಹಿಸಿತ್ತು. ಇದೀಗ ಅವರಿಗೆ ಜಾರಿ ನಿರ್ದೇಶನಾಲಯದ ಡಿಜಿಪಿ ಹುದ್ದೆ ನೀಡಿ ಆದೇಶಿಸಿದೆ. ದುಬೈನಿಂದ ಚಿನ್ನವನ್ನು ಕಳ್ಳ ಸಾಗಣೆ ಮೂಲಕ ತರುತ್ತಿದ್ದ ರನ್ಯಾ ರಾವ್ ಅವರು ಮಲತಂದೆ ರಾಮಚಂದ್ರ ರಾವ್ ಅವರ ಹೆಸರು ಬಳಸಿಕೊಂಡು ವಿಮಾನ ನಿಲ್ದಾಣದಿಂದ ಹೊರಕ್ಕೆ ಬರುತ್ತಿದ್ದರು ಎಂಬ ಆರೋಪವಿದೆ.

## ಮಹದಾಯಿ ನ್ಯಾಯಮಂಡಳಿ ಅವಧಿ ಮತ್ತೆ ವಿಸ್ತರಣೆ

• **ಉದಯವಾಹಿನಿ, ನವದೆಹಲಿ**

ಮಹದಾಯಿ ಜಲವಿವಾದಕ್ಕೆ ಸಂಬಂಧಿಸಿದಂತೆ ಹೆಚ್ಚಿನ ವರದಿ ಸಲ್ಲಿಸುವ ಸಂಬಂಧ ನ್ಯಾಯಮಂಡಳಿಯ ಅವಧಿಯನ್ನು ಮತ್ತೆ ಒಂದು ವರ್ಷ ವಿಸ್ತರಿಸಲಾಗಿದೆ. ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ನಡುವಿನ ನೀರು ಹಂಚಿಕೆ ವಿವಾದಗಳನ್ನು ಪರಿಹರಿಸಲು ಈ ನ್ಯಾಯಮಂಡಳಿಯನ್ನು 2010ರಲ್ಲಿ ಸ್ಥಾಪಿಸಲಾಗಿತ್ತು. ನ್ಯಾಯಮಂಡಳಿಗೆ ಕರ್ನಾಟಕ ಹಾಗೂ ಗೋವಾ ಸರ್ಕಾರಗಳು ಸ್ಪಷ್ಟೀಕರಣ ಅರ್ಜಿ ಸಲ್ಲಿಸಿವೆ. ಹೀಗಾಗಿ, ಹೆಚ್ಚಿನ ವರದಿ ನೀಡಲು ಇನ್ನಷ್ಟು ಕಾಲಾವಕಾಶ ನೀಡಬೇಕು ಎಂದು ಜಲಶಕ್ತಿ ಸಚಿವಾಲಯವನ್ನು ನ್ಯಾಯಮಂಡಳಿ ಕೋರಿತ್ತು. ವರದಿ ನೀಡುವ ಅವಧಿಯನ್ನು ವಿಸ್ತರಿಸಿ ಸಚಿವಾಲಯ ಅಧಿಸೂಚನೆ ಹೊರಡಿಸಿದೆ. ಮಹದಾಯಿ ವಿವಾದ ಬಗೆಹರಿಸಲು ಅಂತರ ರಾಜ್ಯ ನದಿ ನೀರು ವಿವಾದ ಕಾಯ್ದೆ 1956ರ ಸೆಕ್ಷನ್ 4ರ ಅನ್ವಯ ನ್ಯಾಯಮಂಡಳಿ ರಚಿಸಲಾಗಿತ್ತು. ಸುಪ್ರೀಂ ಆದೇಶದ ಅನುಸಾರ ನ್ಯಾಯಮಂಡಳಿಯು 2018ರ ಆಗಸ್ಟ್‌ನಲ್ಲಿ ವರದಿ ಸಲ್ಲಿಸಿತ್ತು. ಈ ವರದಿಯ ಬಗ್ಗೆ 2020ರ ಫೆ.20ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಹೆಚ್ಚುವರಿ ವರದಿ ನೀಡಲು ನ್ಯಾಯಮಂಡಳಿಯ ಅವಧಿ ವಿಸ್ತರಿಸುತ್ತಿರುವುದು ಇದು 6ನೇ ಬಾರಿ. ಇನ್ನೂ ಒಂದು ವರ್ಷ ಕಾಲಾವಕಾಶ ನೀಡಬೇಕು ಎಂದು ನ್ಯಾಯಮಂಡಳಿಯು ಜಲಶಕ್ತಿ ಸಚಿವಾಲಯಕ್ಕೆ ಪ್ರಸ್ತಾವ ಸಲ್ಲಿಸಿತ್ತು.



**ದಿಢೀರ್ ರಾಜಕೀಯ ಬೆಳವಣಿಗೆಯೊಂದರಲ್ಲಿ ಸಹಕಾರ ಇಲಾಖೆ ಸಚಿವ ಕೆ.ಎನ್. ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಲಾಗಿದೆ. ಈ ಬೆಳವಣಿಯು ರಾಜ್ಯ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆ.ಎನ್.ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಬೇಕು ಎಂದು ಕೋರಿ ರಾಜ್ಯಪಾಲರಿಗೆ ಪತ್ರ ಬರೆದಿದ್ದರು. ಈ ಹಿನ್ನೆಲೆಯಲ್ಲಿ ರಾಜ್ಯಪಾಲ ಥಾವರ್ ಚೆಂದ್ ಗೆಹೋಟ್ ಅವರು ತಕ್ಷಣದಿಂದ ಜಾರಿಗೆ ಬರುವಂತೆ ಮುಖ್ಯಮಂತ್ರಿಯ ಶಿಫಾರಸು ಅನ್ನು ಅಂಗೀಕರಿಸಿದ್ದಾರೆ.**

# ಕೈ ನಡೆ ಕುತೂಹಲ

# ರಾಜಣ್ಣಗೆ ಕೇಡುಗಾಲ!

**ಸೆಪ್ಟೆಂಬರ್ ಕ್ರಾಂತಿ ಎಂದಿದ್ದ ರಾಜಣ್ಣಗೆ ಆಗಸ್ಟ್‌ನಲ್ಲೇ ಕೇಡುಗಾಲ**

**ಆಪ್ತನನ್ನು ಉಳಿಸಲು ಸಿಎಂ ಕಸರತ್ತು..? ಹೈಕಮಾಂಡ್ ಆಕ್ರೋಶ:**

**ಸಂಪುಟದಿಂದ 'ವಜಾ' ಮಾಡಿದ ಕಾಂಗ್ರೆಸ್ ಸರ್ಕಾರ..!**

**ರಾಜಣ್ಣ ವಜಾ ಬೆನ್ನಲ್ಲೇ ಹೊಸ ಬಾಂಬ್ ಸಿಡಿಸಿದ ಕುಣಿಗಲ್ ರಂಗನಾಥ್**

1. ಪಕ್ಷ ,ರಾಹುಲ್ ಅವರ ಮತಕಳ್ಳತನದ ಬಗ್ಗೆ ವಿರೋಧ ಹೇಳಿಕೆ ನೀಡಿದ್ದ ರಾಜಣ್ಣ
2. ರಾಜಣ್ಣ ವಿರುದ್ಧ ಹೈಕಮಾಂಡ್ ಕೆಂಡಾಮಂಡಲವಾಗಿದ್ದು ಉಚ್ಚಾಟನೆ ಮಾಡುವಂತೆ ಸೂಚಿಸಿದೆ.
3. ಉಚ್ಚಾಟನೆ ಸಂಬಂಧ ಹೈಕಮಾಂಡ್ ನಾಯಕರನ್ನು ಸಿಎಂ ಮನವೊಲಿಕೆ

• **ಉದಯವಾಹಿನಿ, ಬೆಂಗಳೂರು**

ಮತಗಳ್ಳತನದ ಬಗ್ಗೆ ಬೆಂಗಳೂರಿನಲ್ಲಿ ಲೋಕಸಭಾ ವಿಪಕ್ಷ ನಾಯಕರಾದ ರಾಹುಲ್ ಗಾಂಧಿ ನೇತೃತ್ವದಲ್ಲಿ ಬೃಹತ್ ಕಾಂಗ್ರೆಸ್ ಸಮಾವೇಶದ ಸಂದರ್ಭದಲ್ಲಿ ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ್ದ ಸಹಕಾರ ಸಚಿವ ಕೆ.ಎನ್. ರಾಜಣ್ಣ 'ಮತದಾರರ ಪಟ್ಟಿ ಯಾವ ಕಾಲದಲ್ಲಿ ಮಾಡಿದ್ದು? ನಮ್ಮದೇ ಸರಕಾರ ಅಧಿಕಾರದಲ್ಲಿ ಇರುವಾಗ ಮಾಡಿರುವುದು ಅಲ್ಲವೇ? ಆವಾಗ ಏನು ಕಣ್ಮುಚ್ಚಿ ಕುಳಿತಿದ್ರಾ?' ಎಂದು ಖಾರವಾಗಿ ಪ್ರಶ್ನಿಸಿದ್ದರು. 'ಮತಪಟ್ಟಿ ಅಕ್ರಮಗಳು ನಡೆದಿರುವುದು ಸತ್ಯ. ಆದರೆ, ಆ ಅಕ್ರಮಗಳು ನಮ್ಮ ಕಣ್ಮುಂದೆ ನಡೆದಿದ್ದಲ್ಲ. ನಮಗೆ ಅವಮಾನ ಆಗಬೇಕು. ನಾವು ನೋಡಿಕೊಳ್ಳಲಿಲ್ಲವಲ್ಲ ಎಂದು ಹೇಳಿದ್ದರು. ಈ ಹೇಳಿಕೆ ವಿವಾದ ಸ್ವರೂಪ ಪಡೆದುಕೊಂಡಿದ್ದು ಮಾತ್ರವಲ್ಲದೆ, ರಾಜಣ್ಣ ಅವರ ಈ ಹೇಳಿಕೆ ಕಾಂಗ್ರೆಸ್ ಪಕ್ಷಕ್ಕೆ ತೀವ್ರ ಮುಜುಗರವನ್ನು ಉಂಟು ಮಾಡಿತ್ತು. ಈ ಹಿನ್ನೆಲೆ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಸೂಚನೆ ಮೇರೆಗೆ ಸಚಿವ ಸಂಪುಟದಿಂದ ಏಕಾಏಕಿ ಕೆ.ಎನ್ ರಾಜಣ್ಣ ಅವರನ್ನು ವಜಾಗೊಳಿಸಲಾಗಿದೆ ಎನ್ನುವ ಮಾತುಗಳು ಕೇಳಿಬಂದಿವೆ.

**ಕೆ.ಎನ್.ರಾಜಣ್ಣ ರಾಜಕೀಯ ಹಾದಿ:** 1972ರಿಂದಲೂ ಕೆ.ಎನ್. ರಾಜಣ್ಣ ಸಹಕಾರಿ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದು, ಹಲವು ಸಹಕಾರಿ ಬ್ಯಾಂಕುಗಳ ಅಧ್ಯಕ್ಷರಾಗಿದ್ದರು. ಕೆ.ಎನ್. ರಾಜಣ್ಣ ಅವರು 1998-2004ರ ಅವಧಿ ವರೆಗೆ ವಿಧಾನ ಪರಿಷತ್ ಸದಸ್ಯರಾಗಿದ್ದರು. 2004ರಲ್ಲಿ ತುಮಕೂರಿನ ಬೆಳ್ಳಾವಿ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದರು.

ಅನಂತರ, ಮಧುಗಿರಿಯಲ್ಲಿ ನಡೆದ ಉಪಚುನಾವಣೆಯಲ್ಲಿ ಕೆ.ಎನ್.ರಾಜಣ್ಣ ಕಾಂಗ್ರೆಸ್ ಪಕ್ಷದಿಂದ ಕಣಕ್ಕಿಳಿದು ಗೆಲುವಿನ ನಗೆ ಬೀಗಿದ್ದರು. 2013ರ ಚುನಾವಣೆಯಲ್ಲೂ ಕಾಂಗ್ರೆಸ್‌ನ ಕೆ.ಎನ್. ರಾಜಣ್ಣ ಮಧುಗಿರಿಯಿಂದ ಸ್ಪರ್ಧಿಸಿ 75,086 ಮತಗಳನ್ನು ಪಡೆದು ಭರ್ಜರಿ ಗೆಲುವು ಸಾಧಿಸಿದ್ದರು. 2023ರಲ್ಲಿ ಮತ್ತೆ ಮಧುಗಿರಿ ಕ್ಷೇತ್ರದಿಂದ ಗೆದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದಲ್ಲಿ ಸಹಕಾರ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು.



**ರಾಜೀನಾಮೆಯಲ್ಲ, ಸಂಪುಟದಿಂದ ವಜಾ**


ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಸೋಮವಾರ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಸರಕಾರದಿಂದ ರಾಜಣ್ಣ ಅವರ ರಾಜೀನಾಮೆಯನ್ನು ಅಂಗೀಕಾರ ಮಾಡಲಾಗಿತ್ತು ಎನ್ನುವ ಸುದ್ದಿ ಹಬ್ಬಿತ್ತು. ಆದರೆ, ರಾಜಣ್ಣ ಅವರಿಂದ ರಾಜೀನಾಮೆ ಪಡೆಯದೇ ಸಚಿವ ಸಂಪುಟದಿಂದ ವಜಾ ಮಾಡಲಾಗಿರುವ ಬೆಳವಣಿಗೆ ತೀವ್ರ ಚರ್ಚೆಗೆ ಗ್ರಾಸವಾಗಿದೆ.

**ಕಾರ್ಯದರ್ಶಿಗೆ ಸೂಚನೆ**

'ಕೆ.ಎನ್.ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ತಕ್ಷಣದಿಂದ ಜಾರಿಗೆ ಬರುವಂತೆ ವಜಾ ಮಾಡುವ ಕುರಿತು ರಾಜ್ಯಪಾಲರು ಸಹಿ ಮಾಡಿದ ಮೂಲ ಅಧಿಸೂಚನೆಯನ್ನು ರಾಜಭವನದಿಂದ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರಿಗೆ ಸೋಮವಾರ ರವಾನೆ ಮಾಡಲಾಗಿದೆ' ಎಂದು ರಾಜ್ಯಪಾಲರ ಕಾರ್ಯದರ್ಶಿ ಮಾಹಿತಿ ನೀಡಿದ್ದಾರೆ.







'ರಾಹುಲ್ ಗಾಂಧಿಯ ಬೇಜವಾಬ್ದಾರಿಯುತ ಸುಳ್ಳು ಆರೋಪವನ್ನು ಒಪ್ಪದೇ, ಸತ್ಯವನ್ನು ಒಪ್ಪಿಕೊಂಡ ಸಹಕಾರಿ ಧುರೀಣ, ಸಚಿವ ಕೆ.ಎನ್.ರಾಜಣ್ಣ ಅವರ ರಾಜೀನಾಮೆ ಪಡೆದುಕೊಂಡ ಕಾಂಗ್ರೆಸ್, ಪಕ್ಷದಲ್ಲಿ ಸತ್ಯ ಹೇಳೋಕೆ ಅವಕಾಶ ಇಲ್ಲ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ'

-ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ



'ಇದು ಕಾಂಗ್ರೆಸ್ ಪಕ್ಷದ, ಹೈಕಮಾಂಡ್‌ನ ತೀರ್ಮಾನವೂ ಆಗಿದೆ. ಇದನ್ನು ನಾನು ಪ್ರಶ್ನೆ ಮಾಡಲು ಹೋಗುವುದಿಲ್ಲ. ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ನಮ್ಮ ನಾಯಕರು ಮತಗಳ್ಳತನ ಕುರಿತು ಹೋರಾಟ ಮಾಡುತ್ತಿದ್ದು, ಇದಕ್ಕೆ ನಮ್ಮ ಬೆಂಬಲ ಇದೆ. ಆದರೆ, ಕೆಲ ವಿಚಾರಗಳಲ್ಲಿ ತಪ್ಪು ಗ್ರಹಿಕೆ ಉಂಟಾಗಿದ್ದು, ಈ ಬಗ್ಗೆ ಹೊಸದಿಲ್ಲಿಯಲ್ಲಿ ಹಿರಿಯ ಸಚಿವರೊಂದಿಗೆ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸುವೆ'

-ಕೆ.ಎನ್.ರಾಜಣ್ಣ ಮಾಜಿ ಸಚಿವ



'ಸಹಕಾರ ಸಚಿವ ಕೆ.ಎನ್.ರಾಜಣ್ಣ ರಾಜೀನಾಮೆ ನೀಡಲು ಕಾರಣವೇನು..? ಅವರು ಎಷ್ಟು ದುಡ್ಡು ಹೊಡೆದಿದ್ದಾರೆ, ಆ ದುಡ್ಡು ಎಲ್ಲಿ ಯಾರ ಮನೆಯಲ್ಲಿ ಇರಿಸಿದ್ದಾರೆ. ಸಚಿವರ ಮೇಲಿನ ಆಪಾದನೆ ಏನು?. ನಾಯಕತ್ವ ಬದಲಾವಣೆಯ ಕೂಗು ಎದ್ದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಗಟ್ಟಿಯಾಗಿದ್ದ ನಿಂತಿದ್ದ ಏಕೈಕ ವ್ಯಕ್ತಿ ರಾಜಣ್ಣ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರೂ, ಸದನದಲ್ಲಿ ಸಚಿವರಿಗೆ ನಿಗದಿಪಡಿಸಿರುವ ಸ್ಥಾನದಲ್ಲಿ ಅವರು ಹೇಗೆ ಆಸೀನರಾಗಿದ್ದಾರೆ ಎಂಬುದು ಗೊತ್ತಾಗಬೇಕು'

-ಆರ್.ಅಶೋಕ್, ವಿರೋಧ ಪಕ್ಷದ ನಾಯಕ, ವಿಧಾನಸಭೆ

## ಗುರುತಿಸಲ್ಪಡದ ರಾಜಕೀಯ ಪಕ್ಷಗಳಿಗೆ ಅಮಾನ್ಯತೆ ಭೀತಿ!

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದ 10 ಪಕ್ಷಗಳು ಸೇರಿದಂತೆ ದೇಶದ ಒಟ್ಟು 334 'ನೋಂದಾಯಿಲ್ಪಟ್ಟಿದ್ದರೂ ಗುರುತಿಸಲ್ಪಡದ ಪಕ್ಷ'ಗಳನ್ನು (ಆರ್ ಯುಪಿಪಿ) ತನ್ನ ಪಟ್ಟಿಯಿಂದ ಕೈಬಿಡಲು ಕೇಂದ್ರ ಚುನಾವಣಾ ಆಯೋಗದಲ್ಲಿ (ಇಸಿಐ) ನಿರ್ಧರಿಸಿದೆ. ಇಸಿಐ ಪಟ್ಟಿಯಿಂದ ಹೊರಹಾಕಲ್ಪಟ್ಟರೆ ಅವು ಇಸಿಐನ ಮಾನ್ಯತೆ ಕಳೆದುಕೊಂಡಂತೆ. ಆಗ ಅವುಗಳಿಗೆ ವಿವಿಧ ಸಂಘ-ಸಂಸ್ಥೆಗಳಿಂದ, ವ್ಯಕ್ತಿಗಳಿಂದ ದೇಣಿಗೆ ಸಂಗ್ರಹಿಸುವುದು ಸಾಧ್ಯವಿಲ್ಲ. ಹಾಗೆ ಸಂಗ್ರಹಿಸಿದ ದೇಣಿಗೆಗಳಿಗೆ ಆದಾಯ ತೆರಿಗೆ ಇಲಾಖೆಯಿಂದ ತೆರಿಗೆ ವಿನಾಯ್ತಿಯನ್ನೂ ಕೋರುವ ಹಾಗಿಲ್ಲ. 1951ರ ಜನಪ್ರತಿನಿಧಿ ಕಾಯ್ದೆಯಡಿ ಚುನಾವಣಾ ಆಯೋಗದಲ್ಲಿ ನೋಂದಾಯಿಸಲ್ಪಟ್ಟಿರುವ ಯಾವುದೇ ರಾಜಕೀಯ ಪಕ್ಷವು ಆರು ವರ್ಷಗಳಲ್ಲಿ ಒಂದಾದರೂ ಸಾರ್ವತ್ರಿಕ ಚುನಾವಣೆಯನ್ನು ಎದುರಿಸಿ ಗುರುತಿಸಿಕೊಳ್ಳಬೇಕು. ಆ ಹಿನ್ನೆಲೆಯಲ್ಲಿ, 2019ರ ನಂತರ 6 ವರ್ಷಗಳಲ್ಲಿ ಯಾವುದಾದರೊಂದು ಸಾರ್ವತ್ರಿಕ ಚುನಾವಣೆಯಲ್ಲಿ ನಿಲ್ಲದಿರುವ ಪಕ್ಷಗಳನ್ನು ನೋಂದಾಯಿಸಿದರೂ ಗುರುತಿಸಿಕೊಳ್ಳದ ಪಕ್ಷಗಳೆಂದು (ಆರ್ ಯುಪಿಪಿ) 2,800ಕ್ಕೂ ಹೆಚ್ಚು ಪಕ್ಷಗಳನ್ನು ಚುನಾವಣಾ ಆಯೋಗ ಪಟ್ಟಿ ಮಾಡಿದೆ.




ಆ ಪಟ್ಟಿಯಲ್ಲಿ ಸದ್ಯಕ್ಕೆ 334 ಪಕ್ಷಗಳನ್ನು ಮಾತ್ರ ನಿಷೇಧಿಸಲು ನಿರ್ಧರಿಸಲಾಗಿದೆ.

ಆ. 11ರಂದು ಆಯೋಗ ಬಿಡುಗಡೆ ಮಾಡಿರುವ ಪಟ್ಟಿಯಲ್ಲಿ ಕರ್ನಾಟಕದ 10 ಪಾರ್ಟಿಗಳನ್ನು ತನ್ನ ಪಟ್ಟಿಯಿಂದ ಕೈಬಿಡಲು ನಿರ್ಧರಿಸಿರುವುದಾಗಿ ಆಯೋಗ ಹೇಳಿದೆ. ಕರ್ನಾಟಕದಲ್ಲಿ ಒಟ್ಟು 12 ಪಾರ್ಟಿಗಳು (ಆರ್ ಯುಪಿಪಿ) ಎಂದು ಗುರುತಿಸಲಾಗಿದೆ.

**ಚುನಾವಣಾ ಆಯೋಗದಿಂದ 3 ನೋಟಿಸ್ ಜಾರಿ**

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕರ್ನಾಟಕದಲ್ಲಿ ಮತ ಕಳ್ಳತನವಾಗಿದೆ ಎಂದು ಆರೋಪ ಮಾಡಿದ್ದರು. ಕರ್ನಾಟಕದ ಬೆಂಗಳೂರು ಸೆಂಟ್ರಲ್ ಲೋಕಸಭಾ ಕ್ಷೇತ್ರದ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ 1 ಲಕ್ಷಕ್ಕೂ ಹೆಚ್ಚು ಮತಗಳ್ಳತನ ಆಗಿದೆ ಎಂದು ಆರೋಪಿಸಿದ್ದಾರೆ. ಆ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಅವರಿಗೆ 3 ನೋಟಿಸ್ ಜಾರಿಗೊಳಿಸಿದೆ.

ಅವುಗಳ ಪಟ್ಟಿ ಹೀಗಿದೆ:

**ಅಂಬೇಡ್ಕರ್ ಜನತಾ ಪಾರ್ಟಿ • ಭಾರತೀಯ ಪ್ರಜಾ ಪಕ್ಷ • ಜನ ಸ್ವರಾಜ್ಯ ಪಕ್ಷ • ಕಲ್ಯಾಣ ಕ್ರಾಂತಿ ಪಾರ್ಟಿ • ಕರ್ನಾಟಕ ಪ್ರಜಾ ವಿಕಾಸ ಪಕ್ಷ • ಕರ್ನಾಟಕ ಸ್ವರಾಜ್ಯ ಪಕ್ಷ • ಮಹಿಳಾ ಪ್ರಧಾನ ಪಕ್ಷ • ನಮ್ಮ ಕಾಂಗ್ರೆಸ್ • ಪ್ರಜಾ ರೈತ ರಾಜ್ಯ ಪಕ್ಷ • ರಕ್ಷಕ ಸೇನೆ • ಸಾಮಾನ್ಯ ಜನತಾ ಪಾರ್ಟಿ (ಲೋಕತಾಂತ್ರಿಕ) • ವಿಚಾರ ಜಾಗೃತಿ ಕಾಂಗ್ರೆಸ್ ಪಕ್ಷ**

**ಉಪೇಂದ್ರರ ಪಕ್ಷದ ಕಥೆಯೇನು?**

ಚಿತ್ರನಟ ಉಪೇಂದ್ರ ಅವರ ಉತ್ತಮ ಪ್ರಜಾಕೀಯ ಪಕ್ಷದ ಕಥೆಯೇನು ಎಂಬ ಪ್ರಶ್ನೆ ಬರುತ್ತದೆ. ವಿಕಿಪೀಡಿಯಾ ಪ್ರಕಾರ, ಅದು ಸಹ ನೋಂದಾಯಿಸಲ್ಪಟ್ಟ ಗುರುತಿಸಲ್ಪಡದ ಪಕ್ಷ. ಆದರೆ, ಅವರ ಪಕ್ಷದ ಹೆಸರು ಚುನಾವಣಾ ಆಯೋಗ ಪಟ್ಟಿ ಮಾಡಿರುವ ಆರ್ ಯುಪಿಪಿ ಪಟ್ಟಿಯಲ್ಲಿಲ್ಲ. ಹಾಗಾಗಿ, ಆ ಪಕ್ಷಕ್ಕೆ ನಿಷೇಧದ ಭೀತಿಯಿಲ್ಲ.

## ನನಗೆ ಪ್ರಧಾನಿ ಮೋದಿ ವೆರಿಗುಡ್ ಡಿಕೆ, ಒಳ್ಳೆ ಕೆಲಸ ಮಾಡುತ್ತಿದ್ದೀರಾ ಅಂದ್ರು


### ■ ಪ್ರತಿಷ್ಠಿತ ಕಂಪೆನಿಗಳ ಹೆಸರಿಡಲು ನಿಧಿ ಸಂಗ್ರಹ, ಸಿಎಸ್‌ಆರ್ ಯೋಜನೆಗಳ ಬಗ್ಗೆ ಮೋದಿ ಬಳಿ ಹೇಳಿದ ಡಿಕೆಶಿ

• **ಉದಯವಾಹಿನಿ, ಬೆಂಗಳೂರು**

''ಪ್ರಧಾನಿ ಮೋದಿ ಅವರಿಗೆ ಡಬಲ್ ಡೆಕ್ಕರ್, ಮೆಟ್ರೋ ನಿಲ್ದಾಣಗಳಿಗೆ ಪ್ರತಿಷ್ಠಿತ ಕಂಪೆನಿಗಳ ಹೆಸರಿಡಲು ನಿಧಿ ಸಂಗ್ರಹ, ಸಿಎಸ್‌ಆರ್ ಯೋಜನೆಗಳ ಬಗ್ಗೆ ವಿವರಿಸಿದಾಗ ವೆರಿಗುಡ್ ಡಿಕೆ, ಒಳ್ಳೆ ಕೆಲಸ ಮಾಡುತ್ತಿದ್ದೀರಾ ಎಂದು ಹೊಗಳಿದರು'' ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು.

ನಗರದ ಖಾಸಗಿ ಹೋಟೆಲ್ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಉತ್ತರಿಸಿದರು. 'ಮೋದಿಯವರ ಜೊತೆ ನೀವು ಆತ್ಮೀಯವಾಗಿ ಮಾತನಾಡುತ್ತಿರುವ ವಿಡಿಯೋ ತುಣುಕುಗಳು ಸಾಮಾಜಿಕ ಜಾಲತಣಗಳಲ್ಲಿ ವೈರಲ್ ಆಗಿವೆಯಲ್ಲ' ಎಂದು ಕೇಳಿದರು.

ಬೆಂಗಳೂರು ಅಭಿವೃದ್ಧಿ ಸಚಿವನಾಗಿ ನಾನು ಅವರ ಬಳಿ ಮಾತನಾಡದೆ ಇನ್ಯಾರು ಮಾತನಾಡಲು ಸಾಧ್ಯ? ಎಲೆಕ್ಟ್ರಾನಿಕ್ ಸಿಟಿ ಭಾಗದ ಮೆಟ್ರೋ ನಿಲ್ದಾಣಗಳಿಗೆ ಇನ್ಫೋಸಿಸ್, ಡೆಲ್ಟಾ, ಬಯೋಕಾನ್ ಅವರ ಹೆಸರನ್ನು ಇಡಲು ಅವರಿಂದ 50, 100 ಕೋಟಿ ರೂ. ನಿಧಿ ಸಂಗ್ರಹಿಸಲಾಗಿದೆ. ಈಗ ಬಾಗಮನೆ ಅವರು ಸಹ ನಿಧಿ ನೀಡುತ್ತೇವೆ ಎಂದಿದ್ದಾರೆ. ಇದೆಲ್ಲವನ್ನು ಪ್ರಧಾನಿ ಅವರಿಗೆ ತಿಳಿಸಿದೆ ಎಂದು ಹೇಳಿದರು.



**ನಾನೇನು ಬಿಜೆಪಿಗೆ ಓಡಿಹೋಗುತ್ತಿಲ್ಲ**

**ನಾನೇನು ಬಿಜೆಪಿಗೆ ಓಡಿಹೋಗುತ್ತಿಲ್ಲ:** ''ನಾನೇನು ಬಿಜೆಪಿಗೆ ಓಡಿ ಹೋಗುತ್ತಿಲ್ಲ, ನನಗೆ ಅದರ ಅವಶ್ಯಕತೆಯೂ ಇಲ್ಲ. ಯಾರೂ ಇದರ ಬಗ್ಗೆ ತಲೆಕೆಡಿಸಿಕೊಳ್ಳುವ ಅಗತ್ಯವಿಲ್ಲ. ಮಾಧ್ಯಮದವರು ನಿಧಿ ನೀಡಿದರೆ ನಿಮ್ಮ ಹೆಸರಿನಲ್ಲಿಯೂ ಮೆಟ್ರೋ ನಿಲ್ದಾಣಗಳ ನಾಮಕರಣ ಮಾಡಲಾಗುವುದು. ಈ ಯೋಜನೆ ಬೇರೆ ಎಲ್ಲಿಯೂ ಇಲ್ಲ. ಈ ಮಾದರಿಯನ್ನು ಬೆಂಗಳೂರಿನಲ್ಲಿ ಪ್ರಾರಂಭ ಮಾಡಿದ್ದೇವೆ'' ಎಂದು ಹೇಳಿದರು.

**ಶಿಕ್ಷಣ ಸಂಸ್ಥೆಗಳು ಇರುವುದು ಸಮಾಜ ಸೇವೆಗೆ ಹೊರತು ಹಣ ಮಾಡಲು ಅಲ್ಲ**

**ನಮ್ಮದು ಮೂರು ಶಾಲೆಗಳಿದ್ದು, ನಮ್ಮ ಮಕ್ಕಳು ಮೂರು ಶಾಲೆಗಳನ್ನು ದತ್ತು ತೆಗೆದುಕೊಂಡಿದ್ದಾರೆ. ಈ ಬಗ್ಗೆ ದೊಡ್ಡ ಆಲಹಳ್ಳಿ ಶಾಲೆಗೆ ತೆರಳಿ ನೀವೇ ಪರಿಶೀಲಿಸಬಹುದು. ನಮ್ಮ ಶಾಲೆಯಿಂದ ಪ್ರತಿ ತಿಂಗಳು ಪಾಠ ಮಾಡುವ ಅಧ್ಯಾಪಕರಿಗೆ ಹಣ ನೀಡುತ್ತಿದ್ದೇವೆ. ಬರೀ ಹಣ ಮಾಡಲು ಶಿಕ್ಷಣ ಸಂಸ್ಥೆಗಳು ಇರುವುದಲ್ಲ, ಸಮಾಜ ಸೇವೆಯೂ ಅವುಗಳ ಜವಾಬ್ದಾರಿ. ಕರ್ನಾಟಕದಲ್ಲಿ ಯಾರೇ ಎಷ್ಟೇ ದೊಡ್ಡ ಸಂಸ್ಥೆಗಳನ್ನು ನಡೆಸುತ್ತಿದ್ದರು ಅವೆಲ್ಲವೂ ಚಾರಿಟಬಲ್ ಸಂಸ್ಥೆಗಳು. ಈ ಚಾರಿಟಿಯನ್ನು ಬೇರೆಯವರಿಗೂ ಮಾಡಿ, ಜೊತೆಗೆ ಸರ್ಕಾರಕ್ಕೂ ಬೆಂಬಲ ನೀಡಿ ಎಂದು ಟೆಕ್ ಸಮ್ಮಿಟ್ ಸಂವಾದ ಸಂದರ್ಭದಲ್ಲಿ ನಾನು ಎಲ್ಲರಲ್ಲಿಯೂ ಮನವಿ ಮಾಡಿದೆ ಎಂದು ಹೇಳಿದರು.**

**ಮೆಟ್ರೋ ಕೂಡ ನನ್ನ ವ್ಯಾಪ್ತಿಗೆ ಬರುತ್ತದೆ:** ''ನಾನು ಬೆಂಗಳೂರು ಅಭಿವೃದ್ಧಿ ಸಚಿವ. ಮೆಟ್ರೋ ಕೂಡ ನನ್ನ ವ್ಯಾಪ್ತಿಗೆ ಬರುತ್ತದೆ. ಹೀಗಿದ್ದಾಗ ನಾನು ಏನು ಕೆಲಸ ಮಾಡಬೇಕೋ ಅದನ್ನು ಮಾಡಿದ್ದೇನೆ. ಅವರನ್ನು ನಾನು ಸ್ವಾಗತಿಸಬೇಕಿತ್ತು.

ಆದರೆ ಒಂದೇ ಕಾರ್ಯಕ್ರಮವಾಗಿ ಮೊಟಕು ಮಾಡಿದ ಕಾರಣಕ್ಕೆ ಸೋಮಣ್ಣ ಅವರಿಗೆ ಆ ಅವಕಾಶ ನೀಡಲಾಯಿತು. ಆದರೆ ನಾವು ನಮ್ಮ ರಾಜ್ಯದ ಬಗ್ಗೆ ಅವಕಾಶ ಸಿಕ್ಕಾಗ ಪ್ರಧಾನಿ ಅವರ ಬಳಿ ಹೇಳಬೇಕಲ್ಲವೇ? ಈ ಕಾರಣಕ್ಕೆ ನಾನು ಅವರಿಗೆ ಮನವಿ ನೀಡಿ ಅನುದಾನದ ಬಗ್ಗೆ ಮಾತನಾಡಿದ್ದೇನೆ ಎಂದು ತಿಳಿಸಿದರು.

1985ರಲ್ಲಿ ಚುನಾವಣೆಗೆ ಸ್ಪರ್ಧಿಸಿದವನು ನಾನು. 1989ರಲ್ಲಿ ವಿಧಾನಸೌಧದ ಮೆಟ್ಟಿಲು ಹತ್ತಿದವನು. ನಾನು ಅಷ್ಟು ಉನ್ನತ ಸ್ಥಾನಕ್ಕೆ ತೆರಳದೇ ಇರಬಹುದು, ಆದರೆ ನಾನೊಬ್ಬ ಹಿರಿಯ ನಾಯಕ. ವಯಸ್ಸು ಚಿಕ್ಕದಿರಬಹುದು, ಆದರೆ ಅನುಭವವಿದೆ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,238/Gram24ct ₹9,375/Gram22ct ಬೆಳ್ಳಿ: ₹117.00/Gram

## ಮಾದಕ ದ್ರವ್ಯ ವಿರುದ್ಧ ಪೊಲೀಸರ ತೀವ್ರ ಕ್ರಮ; ಪತ್ತೆಹಚ್ಚಲು ಶ್ವಾನ ದಳ ನಿಯೋಜನೆ

• ಉದಯವಾಹಿನಿ, ಬೆಂಗಳೂರು

ನಗರ ಪೊಲೀಸರು ಮಾದಕ ವ್ಯಸನಿಗಳ ವಿರುದ್ಧ ತಮ್ಮ ಕಾರ್ಯಾಚರಣೆಯನ್ನು ತೀವ್ರಗೊಳಿಸಿದ್ದಾರೆ. ಈ ಹಿಂದೆ, ಮಾದಕ ವ್ಯಸನಕ್ಕಾಗಿ ದಾಖಲಾಗುವ ಪ್ರಕರಣಗಳ ಸಂಖ್ಯೆಯನ್ನು ಅವರು ಸೀಮಿತಗೊಳಿಸಿದ್ದರು, ಆದರೆ ಈಗ ಈ ಪಿಡುಗನ್ನು ನಿಗ್ರಹಿಸುವ ಭಾಗವಾಗಿ ಹೆಚ್ಚಿನ ಪ್ರಕರಣಗಳನ್ನು ದಾಖಲಿಸುತ್ತಿದ್ದಾರೆ.

ಕೊರಿಯರ್ ಕೇಂದ್ರಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗುತ್ತಿದೆ. ಮಾದಕ ದ್ರವ್ಯಗಳನ್ನು ಪತ್ತೆಹಚ್ಚಲು ಶ್ವಾನ ದಳಗಳನ್ನು ನಿಯೋಜಿಸಲಾಗುತ್ತಿದೆ. ಸುಮಾರು ಒಂದು ವರ್ಷದ ಹಿಂದೆ, ನಗರ ಪೊಲೀಸರು ಮಾದಕ ದ್ರವ್ಯ ಬಳಕೆದಾರರ ವಿರುದ್ಧ ಪ್ರಕರಣಗಳನ್ನು ದಾಖಲಿಸುವುದನ್ನು ನಿಲ್ಲಿಸಿದ್ದರು, ಬದಲಿಗೆ ಪೆಡ್ಲರ್‌ಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸುವತ್ತ ಗಮನಹರಿಸಿದ್ದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಾದಕ ದ್ರವ್ಯ ವ್ಯಸನಿಗಳ ವಿರುದ್ಧ ಮಾದಕ ದ್ರವ್ಯ ಮತ್ತು ಮನೋವಿಕೃತ ವಸ್ತುಗಳ ಕಾಯ್ದೆಯ ಸೆಕ್ಷನ್ 27ಃ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕರಣ ದಾಖಲಾದರೆ ರೂ. 10,000 ದಂಡ ಅಥವಾ ಆರು ತಿಂಗಳವರೆಗೆ ಜೈಲು ಶಿಕ್ಷೆ ವಿಧಿಸಲಾಗುತ್ತದೆ. ಜೊತೆ ಮಾತನಾಡಿದ ಉಪ ಪೊಲೀಸ್ ಆಯುಕ್ತ (ಅಪರಾಧ-2) ರಾಜಾ ಇಮಾಮ್ ಕಾಸಿಮ್ ಪಿ, ಮಾದಕ ದ್ರವ್ಯ ವ್ಯಸನಿಗಳ ವಿರುದ್ಧ ಕಾರ್ಯಾಚರಣೆಗಳನ್ನು ತೀವ್ರಗೊಳಿಸಲಾಗಿದೆ ಎಂದು ಹೇಳಿದರು. ಕೊರಿಯರ್ ಕಚೇರಿಗಳ ಮೇಲೆ ದಾಳಿ ನಡೆಸಲಾಗುತ್ತಿದೆ ಮತ್ತು ಅಂತರರಾಜ್ಯ ಬಸ್‌ಗಳ ಸಾಮಾಗ್ರಿಗಳನ್ನು ಶ್ವಾನ ದಳದ ಸಹಾಯದಿಂದ ಪರಿಶೀಲಿಸಲಾಗುತ್ತಿದೆ. ಸಿಂಥೆಟಿಕ್ ಮಾದಕ ವಸ್ತುಗಳು ವಾಸನೆಯಿಲ್ಲದ, ರುಚಿಯಿಲ್ಲದ ಕಾರಣ ಅವುಗಳನ್ನು ಪತ್ತೆಹಚ್ಚುವುದು ಕಷ್ಟ ಎಂದು ಅವರು ತಿಳಿಸಿದ್ದಾರೆ.

## ವಿಷ್ಣುವರ್ಧನ್ ಸ್ಮಾರಕ ಮಾಡಿ: ಶೋಭಾ ಕರಂದ್ಲಾಜೆ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಅಭಿಮಾನ್ ಸ್ಟುಡಿಯೊ ಆವರಣದಲ್ಲಿರುವ ವಿಷ್ಣುವರ್ಧನ್ ಸಮಾಧಿಯನ್ನು ಶಾಶ್ವತವಾಗಿ ಸಂರಕ್ಷಿಸಿ ರಾಷ್ಟ್ರೀಯ ಮಟ್ಟದ ಆಕರ್ಷಣೆಯ ಕೇಂದ್ರವಾಗಿ ರೂಪಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಒತ್ತಾಯಿಸಿದ್ದಾರೆ. ಸಿದ್ದರಾಮಯ್ಯ ಅವರಿಗೆ ಈ ಕುರಿತು ಪತ್ರ ಬರೆದಿರುವ ಅವರು. ವಿಷ್ಣುವರ್ಧನ್ ಸಮಾಧಿಯ ಜಾಗವನ್ನು ಕೆಲವರು ತಮ್ಮ ಭೂಮಿ ಎಂದು ಹೇಳಿಕೊಂಡು, ಸಮಾಧಿಯನ್ನು ರಾತ್ರೋರಾತ್ರಿ ಧ್ವಂಸ ಮಾಡಿರುವುದು ನೋವು ತಂದಿದೆ. ವಿಷ್ಣು ಅವರ ಸಮಾಧಿ ಇರುವ ಜಾಗವನ್ನು ಸ್ಮಾರಕವನ್ನಾಗಿ ಮಾಡಿ, ಕನ್ನಡ, ಸಂಸ್ಕೃತಿಯ ಪ್ರತೀಕವಾಗಿ ಅಭಿವೃದ್ಧಿಪಡಿಸಬೇಕು ಎಂದು ಸಲಹೆ ನೀಡಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಈ ಭೂಮಿಯನ್ನು ತಕ್ಷಣ ಸ್ವಾಧೀನಪಡಿಸಿಕೊಂಡು ಮಾಲೀಕರಿಗೆ ನಿಯಮಾನುಸಾರ ಪರಿಹಾರ ನೀಡಬೇಕು ಎಂದು ಸೂಚಿಸಿದ್ದಾರೆ.

## ಆಗಸ್ಟ್ 18ರವರೆಗೆ ರುದ್ರಾಕ್ಷಿಗಳ ಪ್ರದರ್ಶನ, ಮಾರಾಟ

• ಉದಯವಾಹಿನಿ, ಬೆಂಗಳೂರು

ಹೈದರಾಬಾದ್‌ನ ಇಂಡಸ್-ನೇಪಾಳ ರುದ್ರಾಕ್ಷ ಸಂಸ್ಥೆಯು ಜೆ.ಪಿ.ನಗರದ ಸಿಆರ್ ಲೇಔಟ್‌ನಲ್ಲಿರುವ ಹೋಟೆಲ್ ಫೋಲಿಜ್ ಬೈ ಟಿಜಿಐನಲ್ಲಿ ಹಮ್ಮಿಕೊಂಡಿರುವ ರುದ್ರಾಕ್ಷಿ ಪ್ರದರ್ಶನ, ಮಾರಾಟ ಮೇಳಕ್ಕೆ ಚಾಲನೆ ದೊರೆಯಿತು. ಈ ಪ್ರದರ್ಶನ, ಮಾರಾಟವು ಇದೇ 18ರವರೆಗೆ ನಡೆಯಲಿದೆ. ಭೂಮಿ ಮೇಲೆ ವಿರಳವಾಗಿ ದೊರಕುವ ರತ್ನದ ಹರಳುಗಳು ಸಹ ಈ ಮೇಳದಲ್ಲಿ ಲಭ್ಯ. ದುಂಡುಮುಖದ ಒಂದು ಮುಖಿ ರುದ್ರಾಕ್ಷಿಯನ್ನೂ (ಸುಮಾರು ರೂ.4.5 ಲಕ್ಷ ಬೆಲೆ) ಪ್ರದರ್ಶನದಲ್ಲಿ ಕಾಣಬಹುದು. ಯಾವ ರುದ್ರಾಕ್ಷಿಯನ್ನು ಯಾವಾಗ, ಯಾರು ಧರಿಸಬೇಕು ಎಂಬುದರ ಬಗ್ಗೆ ಯಾವುದೇ ಪಂಚಾಂಗ, ಕಂಪ್ಯೂಟರ್ ಸಹಾಯವಿಲ್ಲದೆ, ವೇದ ಗಣಿತದ ಮೂಲಕ ಜನ್ಮರಾಶಿ, ಜನ್ಮನಕ್ಷತ್ರದ ಆಧಾರ ತಿಳಿಸಲಾಗುವುದು' ಎಂದು ಸಂಸ್ಥೆಯ ನಿರ್ದೇಶಕ ನರೇಂದ್ರ ಕಾಶಿರೆಡ್ಡಿ ಹೇಳಿದ್ದಾರೆ. 'ಅಸಲಿ ಹಾಗೂ ನಕಲಿ ರುದ್ರಾಕ್ಷಿಗಳ ಭಿನ್ನತೆಯನ್ನೂ ತಿಳಿಸಲಾಗುವುದು. ಗುಣಮಟ್ಟದ ರುದ್ರಾಕ್ಷಿಗಳನ್ನು ಗ್ರಾಹಕರಿಗೆ ಮಾರಾಟ ಮಾಡುವುದರಲ್ಲಿ ಸಂಸ್ಥೆ ವಿಶ್ವಾಸಾರ್ಹತೆ ಹೊಂದಿದೆ. ಆಸಕ್ತರಿಗೆ ವಿವಿಧ ಮುಖಗಳ ರುದ್ರಾಕ್ಷಿಗಳನ್ನು ತರಿಸಿ ಕೊಡಲಾಗುವುದು. ವ್ಯಕ್ತಿಯ ಜನ್ಮದಿನಾಂಕ ಆಧರಿಸಿ ಯಾವ ರಾಶಿಗೆ ಯಾವ ಮುಖದ ರುದ್ರಾಕ್ಷಿ ಸೂಕ್ತ ಎಂದು ನಿರ್ಧರಿಸಿ, ಆ ಪ್ರಕಾರದ ರುದ್ರಾಕ್ಷಿ ಕೊಡಲಾಗುವುದು. ಬೆಳಿಗ್ಗೆ 10.30 ರಿಂದ ರಾತ್ರಿ 9 ಗಂಟೆವರೆಗೆ ಪ್ರದರ್ಶನ ನಡೆಯುತ್ತದೆ' ಎಂದು ತಿಳಿಸಿದ್ದಾರೆ.

## ಬೆಂಗಳೂರು ವಿ.ವಿ: ಫೆಲೋಶಿಪ್ ಹೆಚ್ಚಿಸುವಂತೆ ವಿದ್ಯಾರ್ಥಿಗಳ ಮನವಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ವಿಶ್ವವಿದ್ಯಾಲಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ವಿಶೇಷಾಧಿಕಾರಿ ಪ್ರೊ. ಕೃಷ್ಣಮೂರ್ತಿ ನೇತೃತ್ವದಲ್ಲಿ ವಿಶ್ವವಿದ್ಯಾಲಯದ ಸ್ನಾತಕೋತ್ತರ ಸಂಶೋಧನಾ ವಿದ್ಯಾರ್ಥಿಗಳ ಒಕ್ಕೂಟವು, ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಅವರನ್ನು ಭೇಟಿ ಮಾಡಿ ಎಸ್.ಸಿ/ಎಸ್.ಟಿ ಸಂಶೋಧನಾ ವಿದ್ಯಾರ್ಥಿಗಳಿಗೆ ನೀಡುತ್ತಿರುವ ರೂ.10,000 ಫೆಲೋಶಿಪ್ ಅನ್ನು ತಕ್ಷಣವೇ ಹೆಚ್ಚಿಸುವಂತೆ ಮನವಿ ಮಾಡಿತು.ಫೆಲೋಶಿಪ್ ಹಣವನ್ನು ಇಲಾಖೆಯ ಡಿಬಿಟಿ ವ್ಯವಸ್ಥೆಯ ಮೂಲಕ ನೀಡುತ್ತಿರುವುದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಇದರಿಂದ ವಿಳಂಬ, ಗೊಂದಲಗಳು ಉಂಟಾಗುತ್ತಿವೆ. ಸಹಾಯಧನದ ಮೇಲೆ ಅವಲಂಬನೆ ಆಗಿರುವ ಎಸ್.ಸಿ/ಎಸ್.ಟಿ ಸಂಶೋಧನಾ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಆದ್ದರಿಂದ ತಕ್ಷಣವೇ ಈ ಆದೇಶವನ್ನು ಹಿಂತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು. ವಿದ್ಯಾರ್ಥಿಗಳ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು. ಮನವಿಯನ್ನು ಪರಿಗಣಿಸುವುದಾಗಿ ಭರವಸೆ ನೀಡಿದರು. ಒಕ್ಕೂಟದ ಅಧ್ಯಕ್ಷ ಅರ್ಜುನ್, ಉಪಾಧ್ಯಕ್ಷ ಚಂದ್ರುಮಿಡ್ಲುಮುನಿ, ಬಸವರಾಜ್ ಮುಸಲಾಪುರ, ಗೋಪಾಲಕೃಷ್ಣ ಕೆ.ಎ. ರವಿಕುಮಾರ್, ಅನಿಲ್ ಕುಮಾರ್.ವಿ ಉಪಸ್ಥಿತರಿದ್ದರು.

## ಖಾಸಗಿ ಆಸ್ಪತ್ರೆಯ ಉದ್ಘಾಟನೆ ವೇಳೆ 10 ನಿಮಿಷ ಲಿಫ್ಟ್‌ನಲ್ಲಿ ಸಿಲುಕಿದ ರಾಮಲಿಂಗಾ

• ಉದಯವಾಹಿನಿ, ಆನೇಕಲ್

ಖಾಸಗಿ ಆಸ್ಪತ್ರೆಯ ಉದ್ಘಾಟನೆ ವೇಳೆ ಸಚಿವ ರಾಮಲಿಂಗಾ ರೆಡ್ಡಿ 10 ನಿಮಿಷಗಳ ಕಾಲ ಲಿಫ್ಟ್‌ನಲ್ಲಿ ಸಿಲುಕಿದ ಘಟನೆ ರಾಜ್ಯ ಗಡಿಭಾಗ ತಮಿಳುನಾಡಿನ ಹೊಸೂರಿನಲ್ಲಿ ನಡೆದಿದೆ. ಹೊಸೂರಿನ ಖಾಸಗಿ ಆಸ್ಪತ್ರೆಯ ಉದ್ಘಾಟನೆ ವೇಳೆ ಘಟನೆ ನಡೆದಿದೆ. ನೆಲಮಹಡಿಯಿಂದ ಲಿಫ್ಟ್‌ನಲ್ಲಿ ಹೋಗುವ ವೇಳೆ ಸಚಿವ ರಾಮಲಿಂಗಾರೆಡ್ಡಿ, ಹೊಸೂರು ಶಾಸಕ ಪ್ರಕಾಶ್ ಸೇರಿ ಸುಮಾರು 10 ಮಂದಿ ಇದ್ದ ಲಿಫ್ಟ್ ಕೆಟ್ಟು ನಿಂತು ಕೆಲಕಾಲ ಪರದಾಟ ನಡೆಸಿದರು.

ಸುಮಾರು 10 ನಿಮಿಷಗಳ ಕಾಲ ಸಚಿವರು, ಶಾಸಕರು ಲಿಫ್ಟ್‌ನಲ್ಲಿ ಸಿಲುಕಿದ್ದಾರೆ. ಘಟನೆಯಿಂದ ಕೆಲಹೊತ್ತು ಆಸ್ಪತ್ರೆಯ ಆವರಣ ಗೊಂದಲಕ್ಕೀಡಾಗಿತ್ತು. ಬಳಿಕ ಲಿಫ್ಟ್ ಆಪರೇಟರ್ ಸಹಾಯದಿಂದ ಡೋರ್ ಓಪನ್ ಮಾಡಲಾಯಿತು. ತದನಂತರ ರಾಮಲಿಂಗಾ ರೆಡ್ಡಿ ಆಸ್ಪತ್ರೆ ಉದ್ಘಾಟಿಸಿ ಅಲ್ಲಿಂದ ತೆರಳಿದ್ದಾರೆ.

# 8 ವರ್ಷಗಳ ಸುದೀರ್ಘ ಕಾಯುವಿಕೆ ಅಂತ್ಯ

### ನಮ್ಮ ಮೆಟ್ರೋ ಹಳದಿ ಮಾರ್ಗದಲ್ಲಿ ಪ್ರತಿದಿನ 8 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರ ಸಂಚಾರ ನಿರೀಕ್ಷೆ!

• ಉದಯವಾಹಿನಿ, ಬೆಂಗಳೂರು

ನಿರಂತರ 8 ವರ್ಷಗಳು ಸುದೀರ್ಘ ಕಾಯುವಿಕೆ ನಂತರ ನಮ್ಮ ಮೆಟ್ರೊ, ಹಳದಿ ಮಾರ್ಗಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಚಾಲನೆ ನೀಡಿದ್ದಾರೆ. ಮಾಹಿತಿ ತಂತ್ರಜ್ಞಾನದ ಹಬ್ ಎಲೆಕ್ಟ್ರಾನಿಕ್ ಸಿಟಿ ಸಂಪರ್ಕಿಸುವ ಈ ಮಾರ್ಗವು ಬೊಮ್ಮಸಂದ್ರದಿಂದ ಆರ್.ವಿ. ರಸ್ತೆಗೆ ಸಂಪರ್ಕ ಕಲ್ಪಿಸಲಿದೆ.

ಇದು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಮತ್ತು ಸಂಪರ್ಕವನ್ನು ಸುಧಾರಿಸುವ ಗುರಿಯನ್ನು ಹೊಂದಿದೆ ವಿಶೇಷವಾಗಿ ನಗರದ ಜನನಿಬಿಡ ಐಟಿ ಕೇಂದ್ರದ ಪ್ರಯಾಣಿಕರಿಗೆ ಮತ್ತಷ್ಟು ಪ್ರಯೋಜನ ನೀಡಲಿದೆ. ಮೆಟ್ರೋ ಹಂತ 2 ರ ಭಾಗವಾಗಿ, 7,160 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ 19.15 ಕಿ.ಮೀ. ಉದ್ದದ ಈ ಮಾರ್ಗವು 16 ನಿಲ್ದಾಣಗಳನ್ನು ಒಳಗೊಂಡಿದೆ. ಆ ಮೂಲಕ ಮೆಟ್ರೋ ಜಾಲವನ್ನು 96 ಕಿ.ಮೀ.ಗೆ ವಿಸ್ತರಿಸುತ್ತದೆ.




**ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್ ಪ್ರಕಾರ, 16 ನಿಲ್ದಾಣಗಳ ಈ ಮಾರ್ಗ ಸಂಚರಿಸಲು 35 ನಿಮಿಷಗಳ ಪ್ರಯಾಣದ ಸಮಯವನ್ನು ಹೊಂದಿರುತ್ತದೆ. ಸೋಮವಾರದಿಂದ ಶನಿವಾರದವರೆಗೆ, ಎರಡೂ ಟರ್ಮಿನಲ್‌ಗಳಿಂದ ಬೆಳಿಗ್ಗೆ 6.30 ಕ್ಕೆ ಸೇವೆಗಳು ಪ್ರಾರಂಭವಾಗುತ್ತವೆ. ಬೊಮ್ಮಸಂದ್ರದಿಂದ ಕೊನೆಯ ರೈಲು ರಾತ್ರಿ 10.42 ಕ್ಕೆ ಹೊರಡುತ್ತದೆ, ಆದರೆ ಆರ್‌ವಿ ರಸ್ತೆಯಿಂದ ಅಂತಿಮ ಸೇವೆ ರಾತ್ರಿ 11.55 ಕ್ಕೆ ಹೊರಡುತ್ತದೆ. ರೈಲುಗಳು ಆರಂಭದಲ್ಲಿ ಪ್ರತಿ 25 ನಿಮಿಷಗಳಿಗೊಮ್ಮೆ ಕಾರ್ಯನಿರ್ವಹಿಸುತ್ತವೆ, ಸೇವೆಗಳು ಬೆಳಿಗ್ಗೆ 7 ಗಂಟೆಗೆ ಪ್ರಾರಂಭವಾಗುತ್ತವೆ. ಹೆಚ್ಚಿನ ರೈಲು ಸೆಟ್‌ಗಳನ್ನು ಸೇರಿಸಿದ ನಂತರ ರೈಲುಗಳ ಸಂಚಾರ ಸಂಖ್ಯೆ ಹೆಚ್ಚಾಗುತ್ತದೆ ಎಂದು ಬಿಎಂಆರ್‌ಸಿಎಲ್ ಹೇಳಿದೆ.**

ಹೊಸ ಮಾರ್ಗವು ದಕ್ಷಿಣ ಬೆಂಗಳೂರಿನಲ್ಲಿ ಎಂಟು ಲಕ್ಷಕ್ಕೂ ಹೆಚ್ಚು ದೈನಂದಿನ ಪ್ರಯಾಣಿಕರಿಗೆ ಪ್ರಯೋಜನವನ್ನು ನೀಡುತ್ತದೆ. ಒಟ್ಟಾರೆ ಒಂದು ದಿನದಲ್ಲಿ 12.5 ಲಕ್ಷ ಪ್ರಯಾಣಿಕರು ಮೆಟ್ರೋದಲ್ಲಿ ಸಂಚರಿಸಲಿದ್ದಾರೆ.

ಸೋಮವಾರದಿಂದ (ಆಗಸ್ಟ್ 11) ಹಳದಿ ಮಾರ್ಗದಲ್ಲಿ ಸಂಚಾರ ಪ್ರಾರಂಭವಾಗಲಿವೆ. ಪ್ರಧಾನಿ ನರೇಂದ್ರ ಮೋದಿ ರಾಗಿಗುಡ್ಡದಿಂದ ಎಲೆಕ್ಟ್ರಾನಿಕ್ಸ್ ಸಿಟಿಗೆ ಹೊಸ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಿದರು, ಇದಕ್ಕಾಗಿ ಅವರು QR ಕೋಡ್-ಸಕ್ರಿಯಗೊಳಿಸಿದ ಟಿಕೆಟ್ ವೆಂಡಿಂಗ್ ಯಂತ್ರಗಳ ಮೂಲಕ ಟಿಕೆಟ್ ಖರೀದಿಸಿದರು.

ಈ ಮಾರ್ಗಕ್ಕೆ ಗರಿಷ್ಠ ದರ 60 ರೂ. ಮತ್ತು ಕನಿಷ್ಠ ದರ 10 ರೂ.ಗಳಿರುತ್ತವೆ. ಟಿಕೆಟ್‌ಗಳು ಟೋಕನ್‌ಗಳು, ನ್ಯಾಷನಲ್ ಕಾಮನ್ ಮೊಬಿಲಿಟಿ ಕಾರ್ಡ್ ಸ್ಮಾರ್ಟ್ ಕಾರ್ಡ್‌ಗಳು QR ಕೋಡ್‌ಗಳ ಮೂಲಕ ಲಭ್ಯವಿರುತ್ತವೆ, ಎಲ್ಲವೂ ಅಸ್ತಿತ್ವದಲ್ಲಿರುವ ಮೆಟ್ರೋ ಮಾರ್ಗಗಳಿಗೆ ಹೊಂದಿಕೊಳ್ಳುತ್ತವೆ. ಆಗಸ್ಟ್ 11 ರಿಂದ, ಐಫೋನ್ ಬಳಕೆದಾರರು ಆಪಲ್ ಸ್ಟೋರ್‌ನಿಂದ ಅಧಿಕೃತ ನಮ್ಮ ಮೆಟ್ರೋ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು QR ಟಿಕೆಟ್‌ಗಳನ್ನು ಖರೀದಿಸಬಹುದು ಸ್ಮಾರ್ಟ್ ಕಾರ್ಡ್‌ಗಳನ್ನು ರೀಚಾರ್ಜ್ ಮಾಡಬಹುದು.

ಪ್ರಧಾನಿಯವರು ನಮ್ಮ ಮೆಟ್ರೋದ ಹಂತ 3 ಕ್ಕೆ, ಅಂದರೆ ಆರೆಂಜ್ ಲೈನ್‌ಗೆ ಶಂಕುಸ್ಥಾಪನೆ ನೆರವೇರಿಸಿದರು, ಇದು 31 ಎತ್ತರದ ನಿಲ್ದಾಣಗಳೊಂದಿಗೆ 44 ಕಿ.ಮೀ. ಉದ್ದವಿರುತ್ತದೆ. 15,610 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಇದು ಎರಡು ಕಾರಿಡಾರ್‌ಗಳನ್ನು ಒಳಗೊಂಡಿದೆ. ಜೆಪಿ ನಗರ 4 ನೇ ಹಂತದಿಂದ ಕೆಂಪಾಪುರಕ್ಕೆ (32.15 ಕಿ.ಮೀ., 22 ನಿಲ್ದಾಣಗಳು) ಮತ್ತು ಹೊಸಹಳ್ಳಿಯಿಂದ ಕಡಬಗೆರೆಗೆ (12.5 ಕಿ.ಮೀ., 9 ನಿಲ್ದಾಣಗಳು) ಪ್ರಯಾಣ ವ್ಯವಸ್ಥೆ ಕಲ್ಪಿಸಲಿದೆ. ಪೀಣ್ಯ ಕೈಗಾರಿಕಾ ಪ್ರದೇಶ, ಬನ್ನೇರುಘಟ್ಟ ರಸ್ತೆಯ ಐಟಿ ಬೆಲ್ಟ್, ತುಮಕೂರು ರಸ್ತೆಯ ಉತ್ಪಾದನಾ ಘಟಕಗಳು ಮತ್ತು ಪ್ರಮುಖ ಶಿಕ್ಷಣ ಸಂಸ್ಥೆಗಳಂತಹ ಪ್ರಮುಖ ಕೇಂದ್ರಗಳನ್ನು ಸಂಪರ್ಕಿಸುವ ಮೂಲಕ ಹೊರ ವರ್ತುಲ ರಸ್ತೆ ಪಶ್ಚಿಮದಲ್ಲಿ ದಟ್ಟಣೆಯನ್ನು ಕಡಿಮೆ ಮಾಡುವ ಗುರಿಯನ್ನು ಈ ಯೋಜನೆ ಹೊಂದಿದೆ. ಈ ಆರೆಂಜ್ ಮಾರ್ ನಿರ್ಮಾಣಕ್ಕೆ ಬಿಎಂಆರ್‌ಸಿಎಲ್ ಸುಮಾರು 6,800 ಮರಗಳನ್ನು ಕತ್ತರಿಸುವ ಸಾಧ್ಯತೆಯಿದೆ.

## ಬೆಂಗಳೂರು ನಗರದ ಹಲವೆಡೆ ಭಾರಿ ಮಳೆ, ರಸ್ತೆಗಳು ಜಲಾವೃತ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಭಾನುವಾರ ದಿನವಿಡೀ ಬಿಟ್ಟು ಬಿಟ್ಟು ಮಳೆ ಸುರಿದಿದ್ದು, ಹಲವೆಡೆ ರಸ್ತೆಗಳಲ್ಲೇ ನೀರು ನಿಂತಿತ್ತು. ವಡ್ಡರಪಾಳ್ಯ - ಹೆಣ್ಣೂರು ರಸ್ತೆ, ವಡ್ಡರಪಾಳ್ಯ ಗೆದ್ದಲಹಳ್ಳಿ, ಕಬ್ಬನ್ ರಸ್ತೆ, ಜಯಮಹಲ್ ರಸ್ತೆ, ಖೋಡೆ ವೃತ್ತ, ವಿಂಡ್ಸರ್ ಮ್ಯಾನರ್ ಬಳಿ ಸೇರಿದಂತೆ ಹಲವೆಡೆ ರಸ್ತೆಯಲ್ಲಿ ನೀರು ನಿಂತಿತ್ತು. ಚರಂಡಿ ವ್ಯವಸ್ಥೆ ಸರಿ ಇಲ್ಲದೇ ಮಳೆ ನೀರು ಹರಿಯಲು ಅಡ್ಡಿಯಾಯಿತು. ಪ್ರಧಾನಿ ನರೇಂದ್ರ ಮೋದಿ ಅವರ ವಿವಿಧ ಕಾರ್ಯಕ್ರಮಗಳಿಗೆ ಬಂದೋಬಸ್ತ್ ಮಾಡಲು ಆಗಮಿಸಿದ್ದ ಪೊಲೀಸರಿಗೂ ಮಳೆ ಅಡ್ಡಿಯಾಯಿತು.

**ಮಳೆ ವಿವರ:** ವಿಶ್ವನಾಥ ನಾಗೇನಹಳ್ಳಿ 4.2 ಸೆಂ.ಮೀ., ಹಂಪಿನಗರ 3.1 ಸೆಂ.ಮೀ., ಹೊರಮಾವು 2.8 ಸೆಂ.ಮೀ., ಜಕ್ಕೂರು 2.7 ಸೆಂ.ಮೀ., ಕೋರಮಂಗಲ 2.5 ಸೆಂ.ಮೀ., ಸಿಂಗಸಂದ್ರ 2.4 ಸೆಂ.ಮೀ., ಮನೋರಾಯನ ಪಾಳ್ಯ 2.4 ಸೆಂ.ಮೀ., ರಾಮಮೂರ್ತಿ ನಗರ 2.2 ಸೆಂ.ಮೀ., ಪುಟ್ಟೇನಹಳ್ಳಿ 2.2 ಸೆಂ.ಮೀ., ಬಾಣಸವಾಡಿ 2 ಸೆಂ.ಮೀ. ಮಳೆಯಾಗಿದೆ.

ಹೆಮ್ಮಿಗೆಪುರ, ಶೆಟ್ಟಿಹಳ್ಳಿ, ಚೌಡೇಶ್ವರಿ, ಬೊಮ್ಮನಹಳ್ಳಿ, ಮಾರುತಿ ಮಂದಿರ, ಬಾಗಲಗುಂಟೆ, ಎಚ್.ಎಸ್.ಆರ್. ಲೇಔಟ್, ಕಾಡುಗೋಡಿ, ಬಸವನಪುರ, ಗರುಡಾಚಾರ್ ಪಾಳ್ಯ, ವಿದ್ಯಾಪೀಠ, ಯಶವಂತಪುರ, ಎಂ.ಜಿ. ರಸ್ತೆ, ಮೆಜೆಸ್ಟಿಕ್, ಯಲಹಂಕ ಸೇರಿದಂತೆ ನಗರದ ಎಲ್ಲಾ ಪ್ರದೇಶಗಳಲ್ಲಿ ಬಿರುಸಿನಿಂದ ಮಳೆಯಾಗಿದೆ.

## ಕುಂದು ಕೊರತೆ-ಜನದನಿ: ತ್ಯಾಜ್ಯದಿಂದ ಆವರಿಸಿಕೊಂಡ ಕನಕನಗರದ ರಸ್ತೆ

• ಉದಯವಾಹಿನಿ, ಬೆಂಗಳೂರು

ಯಲಚೇನಹಳ್ಳಿಯ ಕನಕನಗರದ ರಸ್ತೆಯ ಅರ್ಧ ಭಾಗವನ್ನು ಕಸದ ತ್ಯಾಜ್ಯ ಅವರಿಸಿಕೊಂಡಿದೆ. ಇದರಿಂದ ಅಲ್ಲಿ ಮೂಗು ಮುಚ್ಚಿಕೊಂಡೇ ಸಾಗುವ ಪರಿಸ್ಥಿತಿ ಇದೆ. ಈ ರಸ್ತೆಯು ಕಸದ ತೊಟ್ಟಿಯಾಗಿ ಪರಿಣಮಿಸಿದ್ದು, ರಸ್ತೆಯಲ್ಲಿ ನಡೆದಾಡಲೂ ಸಾಧ್ಯವಾಗದ ರೀತಿಯಲ್ಲಿ ಕಸ ಸುರಿಯಲಾಗುತ್ತಿದೆ. ಕ್ರಮೇಣ ಕೊಳೆತು ದುರ್ನಾತ ಬೀರುತ್ತಿದೆ. ಇದರಿಂದ ರಸ್ತೆಯಲ್ಲಿ ಮೂಗು ಮುಚ್ಚಿಕೊಂಡೇ ಸಾಗುವ ಪರಿಸ್ಥಿತಿ ಇದೆ. ರಸ್ತೆಯಲ್ಲೆಲ್ಲ ತ್ಯಾಜ್ಯ ಹರಡಿ, ವಾಹನ ಸವಾರರು ಮತ್ತು ಪಾದಚಾರಿಗಳಿಗೆ ತೊಂದರೆಯಾಗುತ್ತಿದೆ. ಮಳೆ ಕಾರಣ ಸಾಂಕ್ರಾಮಿಕ ರೋಗದ ಭೀತಿಯೂ ಉಂಟಾಗಿದೆ. ಸುತ್ತಮುತ್ತಲಿನ ನಿವಾಸಿಗಳು ಕೂಡ ಎಚ್ಚೆತ್ತುಕೊಳ್ಳದೆ ಇಲ್ಲಿಯೇ ಕಸವನ್ನು ಎಸೆಯುತ್ತಿದ್ದಾರೆ. ಈ ಸ್ಥಳದಲ್ಲಿ ಕಸ ಹಾಕದಂತೆ ಕೂಡಲೇ ಕ್ರಮ ಕೈಗೊಳ್ಳಬೇಕು.

### ಅಪಾಯ ತಂದೊಡ್ಡುವ ಗುಂಡಿ

**ಅವಿನ್ಯೂ ರಸ್ತೆ ಜಂಕ್ಷನ್ ಬಳಿ ಗುಂಡಿಗಳು ಬಿದ್ದಿದ್ದು, ಇದು ಅಪಾಯವನ್ನು ತಂದೊಡ್ಡುತ್ತಿದೆ. ದ್ವಿಚಕ್ರ ವಾಹನ ಸವಾರರು ನಿಯಂತ್ರಣ ತಪ್ಪಿ ಬಿದ್ದು, ಗಾಯಗೊಂಡ ಘಟನೆಯೂ ಇದೆ. ಈ ಮಾರ್ಗದಲ್ಲಿ ವಾಹನ ಚಾಲನೆ ಮಾಡುವುದು ದುಸ್ತರವಾಗಿದೆ. ಮಳೆ ಬಂದರೆ ನೀರು ತುಂಬಿಕೊಂಡು ಗುಂಡಿಗಳನ್ನು ಗುರುತಿಸಲು ಸಾಧ್ಯವಿಲ್ಲ. ಸಂಬಂಧಪಟ್ಟವರು ಕೂಡಲೇ ಕ್ರಮವಹಿಸಿ, ಗುಂಡಿಗಳನ್ನು ಮುಚ್ಚಬೇಕು. ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು.**



ಉದಯವಾಹಿನಿ ಚಿತ್ರ

**ಪೂರ್ಣಗೊಳ್ಳದ ಒಳಚರಂಡಿ ಕಾಮಗಾರಿ:** ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ರಾಜಮಹಲ್ ಗುಟ್ಟಹಳ್ಳಿಯಲ್ಲಿ ಒಳಚರಂಡಿ ಕಾಮಗಾರಿ ಪ್ರಾರಂಭವಾಗಿ ಹತ್ತು ತಿಂಗಳೇ ಕಳೆದಿದ್ದು, ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಲಾಗಿದೆ. ಈ ಒಳಚರಂಡಿ ಮುಚ್ಚದ ಕಾರಣ ಗಬ್ಬು ನಾರುತ್ತಿದ್ದು, ಸ್ಥಳೀಯ ನಿವಾಸಿಗಳು ವಾಹನ ಸವಾರರು ಸಮಸ್ಯೆ ಎದುರಿಸುತ್ತಿದ್ದಾರೆ. ಸೊಳ್ಳೆಗಳ ಕಾಟವೂ ಹೆಚ್ಚಾಗಿದೆ. ಬಿಬಿಎಂಪಿ, ಜಲಮಂಡಳಿ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಲಿಲ್ಲ. ಅವರು ಪರಸ್ಪರ ಆರೋಪ ಮಾಡಿಕೊಂಡು ಕಾಮಗಾರಿಯನ್ನು ಸ್ಥಗಿತ ಮಾಡಿದ್ದಾರೆ. ಇದರಿಂದ ಪ್ರತಿನಿತ್ಯ ನರಕ ಯಾತನೆ ಅನುಭವಿಸುತ್ತಿದ್ದು, ಕೂಡಲೇ ಇದಕ್ಕೆ ಪರಿಹಾರ ಒದಗಿಸಬೇಕು.

## ಪಂಚಾಯತ್ ರಾಜ್ ಇಲಾಖೆಯ ಹಿರಿಯ ಸಹಾಯಕಿಗೆ 45,000 ರೂ. ಸೈಬರ್ ವಂಚನೆ

• ಉದಯವಾಹಿನಿ, ಬೆಂಗಳೂರು

ಸೈಬರ್ ವಂಚನೆಯಿಂದ ಸರ್ಕಾರಿ ಅಧಿಕಾರಿಯೊಬ್ಬರು 45,000 ರೂ. ಹಣ ಕಳೆದುಕೊಂಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ ಪಂಚಾಯತ್ ರಾಜ್ ಇಲಾಖೆಯ ಹಿರಿಯ ಸಹಾಯಕಿ ಹೇಮಲತಾಗೆ ವಂಚನೆ ಎಸಗಲಾಗಿದೆ. ಆ.6ರಂದು ಅಧೀನ ಕಾರ್ಯದರ್ಶಿಗಳ ವಾಟ್ಸಾಪ್‌ನಿಂದ 45,000 ರೂ. ಅವಶ್ಯಕತೆ ಇದೆ ಎಂದು ಸಂದೇಶ ಬಂದಿದೆ. ಕೂಡಲೇ ಹೇಮಲತಾ ಸಂದೇಶದಲ್ಲಿದ್ದ ನಂಬರ್‌ಗೆ ಗೂಗಲ್ ಪೇ ಮೂಲಕ ಹಣ ಕಳುಹಿಸಿದ್ದರು. ಆದರೆ ಕರೆ ಮಾಡಿದಾಗ ಮೊಬೈಲ್ ನಂಬರ್ ಹ್ಯಾಕ್ ಆಗಿರುವುದು ತಿಳಿದುಬಂದಿದೆ. ಈ ಬಗ್ಗೆ ಸೋನುಕುಮಾರ್ ಎಂಬವರ ವಿರುದ್ಧ ವಿಧಾನಸೌಧ ಠಾಣೆಯಲ್ಲಿ ವಂಚನೆ ಬಗ್ಗೆ ಕೇಸ್ ದಾಖಲಾಗಿದೆ.

## ಮೊದಲ ದಿನವೇ ರಾಜ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷಗಳ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ವಿಧಾನಮಂಡಲ ಮುಂಗಾರು ಅಧಿವೇಶನ ಸೋಮವಾರ ಆರಂಭವಾಗಿದ್ದು, ಈ ನಡುವಲ್ಲೇ ಮೊದಲ ದಿನವೇ ರಾಜ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಪ್ರತಿಭಟನೆ ನಡೆಸುತ್ತಿವೆ. ಅಧಿವೇಶನ ಆರಂಭಕ್ಕೂ ಮುನ್ನ ವಿಧಾನಸೌಧದ ಗಾಂಧಿ ಪ್ರತಿಮೆಯ ಮುಂಭಾಗದಲ್ಲಿ ಎನ್‌ಡಿಎ ಮೈತ್ರಿಕೂಟದ ಶಾಸಕರು ಪ್ರತಿಭಟನೆ ನಡೆಸಿದರು.

ಕಾಂಗ್ರೆಸ್ ಸರ್ಕಾರದ ಬೇಜವಾಬ್ದಾರಿತನದಿಂದ 11 ಜನ ಅಮಾಯಕರ ಸಾವಿಗೆ ಕಾರಣವಾದ ಚಿನ್ನಸ್ವಾಮಿ ಸ್ಟೇಡಿಯಂ ಕಾಲ್ತುಳಿತ ಘಟನೆ ಖಂಡಿಸಿ ಪ್ರತಿಪಕ್ಷಗಳು ಪ್ರತಿಭಟನೆ ನಡೆಸಿದರು. ಪ್ರತಿಭಟನೆ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರ ಬೇಜವಾಬ್ದಾರಿತನದಿಂದ ನಡೆದುಕೊಳ್ಳುತ್ತಿದೆ. ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ನಡೆದು 11 ಜನ ಅಮಾಯಕರು ಪ್ರಾಣಕಳೆದುಕೊಂಡ ಘಟನೆಗೆ ಸಂಬಂಧಿಸಿದಂತೆ ಸಿಎಂ, ಡಿಸಿಎಂ, ಸಚಿವರು ಹೊಣೆಹೊರುವುದು ಬಿಟ್ಟು ಅಮಾಯಕ ಪೊಲೀಸ್ ಅಧಿಕಾರಿಗಳ ಮೇಲೆ ಆರೋಪ ಹೊರಿಸಿ, ಅಮಾನತು ಮಾಡಿದ್ದರು. ರೈತರು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ, ಯುವಜನತೆ ಸರ್ಕಾರಿ ಉದ್ಯೋಗಕ್ಕಾಗಿ ಹೋರಾಡುತ್ತಿದ್ದಾರೆ. ಇದರ ವಿರುದ್ಧ ಸದನದ ಹೊರಗಡೆ ಹಾಗೂ ಒಳಗಡೆ ನಾವು ಧ್ವನಿ ಎತ್ತುತ್ತೇವೆ ಎಂದು ಹೇಳಿದರು. ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಶಾಸಕರು, ಪರಿಷತ್ ಸದಸ್ಯರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ರೈತರು ಬೀದಿಗಿಳಿದು ಹೋರಾಟ**

**ವಿಪಕ್ಷ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಕಾಂಗ್ರೆಸ್ ನಾಯಕರ ಫೋಟೋ ಶೋಕಿಯಿಂದ ಹನ್ನೊಂದು ಅಮಾಯಕ ಅಭಿಮಾನಿಗಳ ದುರ್ಮರಣವಾಗಿದೆ. ಇದು ಸರ್ಕಾರಿ ಪ್ರಾಯೋಜಿತ ಕೊಲೆ. ಆ ಸಾವಿಗೆ ನಾವು ನ್ಯಾಯವನ್ನು ಒದಗಿಸಲು ವಿಧಾನಸಭೆ ಮತ್ತು ವಿಧಾನಪರಿಷತ್‌ನಲ್ಲಿ ಧ್ವನಿ ಎತ್ತುತ್ತೇವೆಂದು ತಿಳಿಸಿದರು.**

## ರನ್ಯಾ ರಾವ್ ಮಲತಂದೆ ರಾಮಚಂದ್ರ ರಾವ್ ಡಿಜಿಪಿ ಆಗಿ ಮರುನೇಮಕ!

• ಉದಯವಾಹಿನಿ, ಬೆಂಗಳೂರು

ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಭಾಗಿಯಾಗಿಯಾಗಿದ್ದಾರೆ ಎಂಬ ಆರೋಪ ಮೇಲೆ ಕಡ್ಡಾಯ ರಜೆಯಲ್ಲಿದ್ದ ಪೊಲೀಸ್ ಮಹಾನಿರ್ದೇಶಕ ಕೆ. ರಾಮಚಂದ್ರ ರಾವ್ ಅವರನ್ನು ರಾಜ್ಯ ಸರ್ಕಾರ ಮರುನೇಮಕ ಮಾಡಿದೆ. ಡಿಜಿಪಿ ರಾವ್ ಅವರನ್ನು ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ ಪೊಲೀಸ್ ಮಹಾನಿರ್ದೇಶಕರ ಹುದ್ದೆಗೆ ಮೇಲ್ದರ್ಜೆಗೇರಿಸಲಾಗಿದೆ. ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು ಡಿಜಿಪಿ (ಡಿಸಿಆರ್‌ಇ) ಐಪಿಎಸ್ (ವೇತನ) ನಿಯಮಗಳು 2016ರ ನಿಯಮ 12ರ ಅಡಿಯಲ್ಲಿ ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳ ಮಹಾನಿರ್ದೇಶಕ ಹುದ್ದೆಗೆ ಸಮಾನವಾಗಿದೆ ಎಂದು ಹೇಳಿದೆ.

ಚಿನ್ನ ಕಳ್ಳಸಾಗಣೆ ಪ್ರಕರಣ ಸಂಬಂಧ ರನ್ಯಾ ರಾವ್ ಅವರ ಬಂಧನದ ನಂತರ ಕಳೆದ ಮಾರ್ಚ್‌ನಲ್ಲಿ ಡಿಜಿಪಿ ರಾಮಚಂದ್ರ ರಾವ್ ಅವರನ್ನು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ನೇತೃತ್ವದ ರಾಜ್ಯ ಸರ್ಕಾರ ನೇಮಿಸಿದ ತನಿಖಾ ಸಮಿತಿಯು ಪ್ರಶ್ನಿಸಿತು. ಪೊಲೀಸ್ ಪ್ರೋಟೋಕಾಲ್ ಸೇವೆಗಳ ದುರುಪಯೋಗ ಪ್ರಕರಣದಲ್ಲಿ ಡಿಜಿಪಿ ರಾವ್ ಅವರ ಸಂಭಾವ್ಯ ಪಾತ್ರವನ್ನು ತನಿಖೆ ಮಾಡಲು ಗೌರವ್ ಗುಪ್ತಾ ಸಮಿತಿಯನ್ನು ರಚಿಸಲಾಯಿತು. ಹೀಗಾಗಿ ಮಾರ್ಚ್ 15ರಂದು ಅವರನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸಲಾಯಿತು. ವಿಚಾರಣೆಯ ಸಮಯದಲ್ಲಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ತಪಾಸಣೆ ಮತ್ತು ಚೆಕ್‌ಔಟ್ ತಪ್ಪಿಸಿಕೊಳ್ಳಲು ರನ್ಯಾ ನಿಯಮಗಳನ್ನು ಉಲ್ಲಂಘಿಸಿ ಪೊಲೀಸ್ ಬೆಂಗಾವಲುಗಳನ್ನು ದುರುಪಯೋಗ ಪಡಿಸಿಕೊಂಡಿದ್ದಾಳೆ ಎಂದು ತಿಳಿದುಬಂದಿತ್ತು. ಜುಲೈ ಆರಂಭದಲ್ಲಿ ಕನ್ನಡದ ನಟಿ ರನ್ಯಾ ರಾವ್ ಅವರಿಗೆ ಚಿನ್ನದ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಠಿಣ COFEPOSA ಅಡಿಯಲ್ಲಿ ಒಂದು ವರ್ಷ ಜೈಲು ಶಿಕ್ಷೆ ವಿಧಿಸಲಾಯಿತು. ವಿದೇಶಿ ವಿನಿಮಯ ಸಂರಕ್ಷಣೆ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯ್ದೆ ವಿಷಯವನ್ನು ನಿರ್ವಹಿಸುವ ಸಲಹಾ ಮಂಡಳಿಯು ಇತ್ತೀಚೆಗೆ ರಾವ್ ಅವರ ಬಂಧನದ ಸಂಪೂರ್ಣ ಅವಧಿಯಲ್ಲಿ ಅವರಿಗೆ ಜಾಮೀನು ನೀಡಲಾಗುವುದಿಲ್ಲ ಎಂದು ತೀರ್ಪು ನೀಡಿತು.



**ಡಿಜಿಪಿ ರಾವ್ ಸಂಭಾವ್ಯ ಪಾತ್ರವನ್ನು ತನಿಖೆ**

## ಈ ವರ್ಷ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸ್ಥಾಪನೆ ಇಲ್ಲ

• ಉದಯವಾಹಿನಿ, ಬೆಂಗಳೂರು

ಈ ವರ್ಷ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸ್ಥಾಪನೆ ಇಲ್ಲ ಎಂದು ಹೈಕೋರ್ಟ್‌ಗೆ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಸ್ಪಷ್ಟಪಡಿಸಿದ್ದಾರೆ. ಬಿಬಿಎಂಪಿಯನ್ನು 5 ಪಾಲಿಕೆಗಳಾಗಿ ವಿಭಜಿಸಲಾಗುತ್ತಿದೆ. ಐದು ಪಾಲಿಕೆಗಳಿಗೆ ಜನವರಿ ವೇಳೆಗೆ ಚುನಾವಣೆ ಸಾಧ್ಯತೆ ಇದೆ. ಅಲ್ಲಿಯ ವರೆಗೆ ಬಿಬಿಎಂಪಿ ಆಡಳಿತವೇ ಮುಂದುವರಿಯಲಿದೆ. ಗ್ರೇಟರ್ ಬೆಂಗಳೂರು ಅಥಾರಿಟಿ ಜಾರಿ ಮುಂದೂಡಲಾಗಿದೆ ಎಂದು ಎಜಿ ತಿಳಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಾರಿ ಯಾವಾಗ ಎಂದು ಹೈಕೋರ್ಟ್ ಪ್ರಶ್ನಿಸಿತ್ತು. ಬಿಬಿಎಂಪಿ ಕಟ್ಟಡ ಬೈಲಾ ಉಲ್ಲಂಘನೆ ವಿಚಾರಣೆ ವೇಳೆ ಈ ಪ್ರಶ್ನೆ ಕೇಳಿತ್ತು. ಈ ಹಿನ್ನೆಲೆ ಹೈಕೋರ್ಟ್‌ಗೆ ಎಜಿ ಶಶಿಕಿರಣ್ ಶೆಟ್ಟಿ ಸ್ಪಷ್ಟನೆ ನೀಡಿದ್ದಾರೆ. ಬೆಂಗಳೂರು ಮಹಾನಗರ ಪಾಲಿಕೆಯನ್ನು ಐದು ಪಾಲಿಕೆಗಳಾಗಿ ವಿಭಜಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಿರ್ಮಾಣಕ್ಕೆ ಕರ್ನಾಟಕ ಸರ್ಕಾರ ಈಚೆಗೆ ಆದೇಶ ಹೊರಡಿಸಿತ್ತು



# ಮೋದಿ ಜೀ ಬೆಂಗಳೂರಿನ ರಸ್ತೆಗಳು ಸರಿಯಿಲ್ಲ, ಟ್ರಾಫಿಕ್ ಜಾಸ್ತಿ?

### ರಸ್ತೆಗುಂಡಿ ಸಮಸ್ಯೆ ಟ್ರಾಫಿಕ್ ಸಮಸ್ಯೆಯನ್ನು ಸರಿಪಡಿಸುವಂತೆ ಐದು ವರ್ಷದ ಬಾಲಕಿ ಪ್ರಧಾನಿಗೆ ಬರೆದ ಪತ್ರ

• ಉದಯವಾಹಿನಿ, ಬೆಂಗಳೂರು


ರಸ್ತೆಗುಂಡಿ ಸಮಸ್ಯೆ ಟ್ರಾಫಿಕ್ ಸಮಸ್ಯೆಯನ್ನು ಸರಿಪಡಿಸುವಂತೆ ಐದು ವರ್ಷದ ಬಾಲಕಿ ಪ್ರಧಾನಿ ಮೋದಿಗೆ ಪತ್ರ ಬರೆದಿದ್ದಾಳೆ. ಪ್ರಧಾನಿ ಮೋದಿ ಆಗಸ್ಟ್ 11 ರಂದು ಬೆಂಗಳೂರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಈ ಪತ್ರ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ರಸ್ತೆಗುಂಡಿ ಸಮಸ್ಯೆ ಇಂದಿನದ್ದಲ್ಲ, ಚುನಾವಣೆ ಸಮಯದಲ್ಲಿ ಎಷ್ಟೇ ಸರಿ ಡಾಂಬರು ಹಾಕಿಸಿದರೂ ಕೆಲವೇ ದಿನದಲ್ಲಿ ಅದು ಕಿತ್ತುಬಂದು ಸಮಸ್ಯೆ ಉಂಟಾಗುತ್ತದೆ. ರಸ್ತೆಗುಂಡಿಯಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರು ಇದ್ದಾರೆ, ಪಾತ್‌ಹೋಲ್‌ನಿಂದ ಅಪಘಾತ ನಡೆದು, ಮೃತಪಟ್ಟಿದ್ದ ಘಟನೆಯ ಉದಾಹರಣೆಯೂ ಇದೆ. ಇನ್ನು ಟ್ರಾಫಿಕ್‌ನಿಂದ ಅಂತೂ ಕೇಳೋದೆ ಬೇಡ. ಇದರಿಂದ ಕಚೇರಿಗಳಿಗೆ ಶಾಲಾ ಕಾಲೇಜಿಗೆ ಲೇಟಾಗಿ ಹೋಗಿದ್ದು ಇದೆ. ಗಂಟೆ ಗಂಟಲೆ ಟ್ರಾಫಿಕ್‌ನಲ್ಲಿ ಕಾಯಬೇಕಾದ ಬಗ್ಗೆ ಟ್ವಿಟರ್ ರೆಡ್ಡಿಟ್‌ನಲ್ಲಿ ಟ್ರೋಲ್ ಆಗುತ್ತಲೇ ಇರುತ್ತೆ. ಸದ್ಯ ಈ ಪುಟ್ಟ ಪೋರಿಯ ಲೆಟರ್ ಭಾರಿ ವೈರಲ್ ಆಗಿದೆ.

ಬೆಂಗಳೂರಿನ ನಿವಾಸಿ ಅಭಿರೂಪ್ ಅವರ ಮಗಳು ಆರ್ಯ ಎಂಬ ಐದು ವರ್ಷದ ಹುಡುಗಿ ಈ ಪತ್ರ ಬರೆದಿದ್ದಾಳೆ. ಆರ್ಯಳ ಪತ್ರ ಸಾರ್ವಜನಿಕರ ಗಮನ ಸೆಳೆದಿದೆ. ಆನ್ ಲೈನ್‌ನಲ್ಲಿ ಅನೇಕರು ಆಕೆಗೆ ಬೆಂಬಲ ನೀಡಿದ್ದಾರೆ.

ಆರ್ಯ ಮೋದಿಗೆ ಬರೆದ ಪತ್ರಕ್ಕೆ ಒಬ್ಬರು ಪ್ರತಿಕ್ರಿಯಿಸಿ, ಐದು ವರ್ಷದ ಬಾಲಕಿಯ ಆಸೆ ಈಡೇರುತ್ತದೆ.

ಮತ್ತೊಬ್ಬ ಬಳಕೆದಾರರು 15 ವರ್ಷಗಳ ಹಿಂದೆ ತಮ್ಮ ಮಗಳು ಮುಂಬೈನಲ್ಲಿ ಶಬ್ದ ಮಾಲಿನ್ಯದ ಬಗ್ಗೆ ರಾಷ್ಟ್ರಪತಿಗಳಿಗೆ ಬರೆದಿದ್ದನ್ನು ನೆನಪಿಸಿಕೊಂಡಿದ್ದಾರೆ. ಆ ಬಳಿಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದರು ಎಂದು ಅವರು ಹೇಳಿದ್ದಾರೆ. ಬೆಂಗಳೂರಿನ ಸಿಲ್ಕ್ ಬೋರ್ಡ್, ವೈಟ್‌ಫೀಲ್ಡ್, ನೆಲಮಂಗಲ, ಕೋರಮಂಗಲ ಲೆಕ್ಕಾನೆ ಇಲ್ಲ. ಎಲ್ಲಿ ಟ್ರಾಫಿಕ್ ಇಲ್ಲ ಅಂತಾನೆ ಯೋಚನೆ ಮಾಡೋಕಾಗದಿಲ್ಲ, ಇದರಿಂದ ಸಾಮಾನ್ಯ ಜನರು ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆಗಳು ಸರಿ ಇಲ್ಲದ್ದು, ಒಂದೆಡೆಯಾದರೆ, ಖಾಸಗಿ ವಾಹನಗಳ ಖರೀದಿ ಜಾಸ್ತಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ.



### ಗುಂಡಿ ಸಮಸ್ಯೆ ನಿವಾರಣೆಗೆ ಗಡುವು

**ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಮೊದಲ ಆದ್ಯತೆ ನೀಡಬೇಕು. ಮಳೆಗಾಲ ಆರಂಭಕ್ಕೆ ಮುನ್ನವೇ ಎಲ್ಲರಸ್ತೆ ಗುಂಡಿಗಳನ್ನು ಮುಚ್ಚಲು ಕಾರ್ಯಪ್ರವೃತ್ತರಾಗಬೇಕು. ಮಳೆಯಾಗುವ ಸಂದರ್ಭದಲ್ಲಿಕೋಲ್ಡ್ ಮಿಕ್ಸ್ ಬಳಸಿಕೊಂಡು ರಸ್ತೆ ಗುಂಡಿಗಳನ್ನು ಮುಚ್ಚಬೇಕು. ಡಾಂಬರೀಕರಣ ಕೈಗೊಂಡಿರುವ ರಸ್ತೆಗಳಲ್ಲಿತ್ವರಿತವಾಗಿ ಕೆಲಸ ಮುಗಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಈ ಹಿಂದೆ ಮುಖ್ಯ ಆಯುಕ್ತ ಮಹೇಶ್ವರ ರಾವ್ ಸೂಚನೆ ನೀಡಿದ್ದರು.**

### ಆರ್ಯ ತನ್ನ ಪತ್ರದಲ್ಲಿ ಏನಿದೆ?

**ನರೇಂದ್ರ ಮೋದಿ ಜೀ, ಬೆಂಗಳೂರಿನಲ್ಲಿ ತುಂಬಾ ಟ್ರಾಫಿಕ್ ಇದೆ. ನಾವು ಶಾಲೆ ಮತ್ತು ಕಚೇರಿಗಳಿಗೆ ತಡವಾಗಿ ಹೋಗುತ್ತಿದ್ದೇವೆ. ರಸ್ತೆಗಳು ತುಂಬಾ ಕೆಟ್ಟದಾಗಿವೆ. ದಯವಿಟ್ಟು ಇದನ್ನು ಸರಿಪಡಿಸಲು ಸಹಾಯ ಮಾಡಿ ಎಂದು ಆರ್ಯ ಮೋದಿಗೆ ಬರೆದ ಪತ್ರದಲ್ಲಿ ಉಲ್ಲೇಖಿಸಿದ್ದಾಳೆ.**

# ಕೆಂಪೇಗೌಡರ ಕೋಟೆ ಅಭಿವೃದ್ಧಿ: ಕಡೆಗೂ ಕೂಡಿ ಬಂತು ಕಾಲ

## ಸರ್ಕಾರವು ಜೂನ್‌ನಲ್ಲಿ ನಡೆದಿದ್ದ ಸಚಿವ ಸಂಪುಟ ಸಭೆಯಲ್ಲಿ ಕೋಟೆ ಅಭಿವೃದ್ಧಿಗೆ ರೂ.103 ಕೋಟಿ ಅನುದಾನ ಬಿಡುಗಡೆ

• **ಉದಯವಾಹಿನಿ, ಮಾಗಡಿ**

ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಮಾಗಡಿ ಪಟ್ಟಣದಲ್ಲಿರುವ ಕೆಂಪೇಗೌಡರ ಕೋಟೆ ಅಭಿವೃದ್ಧಿಗೆ ಕಡೆಗೂ ಕಾಲ ಕೂಡಿ ಬಂದಿದೆ. ರಾಜ್ಯ ಸರ್ಕಾರವು ಜೂನ್‌ನಲ್ಲಿ ನಡೆದಿದ್ದ ಸಚಿವ ಸಂಪುಟ ಸಭೆಯಲ್ಲಿ ಕೋಟೆ ಅಭಿವೃದ್ಧಿಗೆ ರೂ.103 ಕೋಟಿ ಅನುದಾನ ಬಿಡುಗಡೆಗೆ ಅನುಮೋದನೆ ಸಿಕ್ಕಿದೆ.ಇದರೊಂದಿಗೆ ಕೆಂಪೇಗೌಡರ ಅಭಿಮಾನಿಗಳ ಕನವರಿಸುತ್ತಿದ್ದ ಕೋಟೆ ಅಭಿವೃದ್ಧಿಯ ಕನಸು ನನಸಾಗುವ ದಿನಗಳು ಸಮೀಪಿಸುತ್ತಿವೆ.

ಸಂಪುಟದಲ್ಲಿ ಅನುದಾನ ಬಿಡುಗಡೆ ಒಪ್ಪಿಗೆ ಸಿಕ್ಕ ಬಳಿಕ, ಕೋಟೆ ಅಭಿವೃದ್ಧಿಗೆ ನೀಲನಕ್ಷೆ ಸಹ ಸಿದ್ಧವಾಗಿದೆ. ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ದಿನಾಂಕವೂ ನಿಗದಿಯಾಗಿದೆ.



**ಜಯನಗರದ ಅಚ್ಯುತರಾಯನಿಂದ ಮಾಗಡಿ ಪ್ರಾಂತ್ಯ ಜಹಗೀರಾಗಿ ಪಡೆದಿದ್ದ ಸಾಮಂತರಾಯ ಎಂಬ ಪಾಳೇಗಾರ ಸಾವನದುರ್ಗದ ನೆಲೆಯಿಂದ ಕ್ರಿ.ಶ 1543ರಿಂದ 1571 ರವರೆಗೆ ಆಳ್ವಿಕೆ ನಡೆಸಿದ್ದ. ಸಂಪಾಜರಾಯ ಮತ್ತು ಚಿಕ್ಕರಾಯ, ಸಾವಂತರಾಯನ ಉತ್ತರಾಧಿಕಾರಿಗಳು. ಪುತ್ರ ಸಂತಾನವಿಲ್ಲದ ಚಿಕ್ಕರಾಯನನ್ನು ಮೂಲೆಗುಂಪು ಮಾಡಿದ ಗುಡೇಮಾರನಹಳ್ಳಿ ಪಾಳೇಗಾರ ತಳಾರಿ ಗಂಗಪ್ಪನಾಯಕ ಮಾಗಡಿಯಲ್ಲಿ ಮಣ್ಣಿನ ಕೋಟೆ ಕಟ್ಟಿಸಿದ ಎನ್ನುತ್ತದೆ ಚರಿತ್ರೆ,**

**ದೇವಸ್ಥಾನಕ್ಕೂ ಅಭಿವೃದ್ಧಿ ಭಾಗ್ಯ**

**ದೇವಸ್ಥಾನಕ್ಕೂ ಅಭಿವೃದ್ಧಿ ಭಾಗ್ಯ:** ಕೋಟೆ ಜೊತೆಗೆ ಕೆಂಪೇಗೌಡರು ನಿರ್ಮಿಸಿದ ಮತ್ತು ಜೀರ್ಣೋದ್ಧಾರ ಮಾಡಿದ ದೇವಸ್ಥಾನಗಳು ಸೇರಿದಂತೆ ವಿವಿಧ ಐತಿಹಾಸಿಕ ಸ್ಥಳಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಮೂಲಕ ಮುಂದಾಗಿರುವುದು ಕೆಂಪೇಗೌಡರ ಅಭಿಮಾನಿಗಳಲ್ಲಿ ಹರ್ಷ ತಂದಿದೆ. 103 ಕೋಟಿ ಅನುದಾನದಲ್ಲಿ ಕೋಟೆ ಅಭಿವೃದ್ಧಿ ಜೊತೆಗೆ, ಕೆಂಪೇಗೌಡರ ಕಟ್ಟಿಸಿರುವ ಪ್ರಸನ್ನ ಸೋಮೇಶ್ವರ ಸ್ವಾಮಿ ದೇವಸ್ಥಾನ, ಕೆಂಪೇಗೌಡರ ಸಮಾಧಿ, ಹೊಂಬಾಳಮ್ಮ ಕೆರೆಗಳನ್ನು ಒಳಗೊಂಡಂತೆ ಕೆಂಪೇಗೌಡರ ಕಾಲದ ಐತಿಹಾಸಿಕ ಸ್ಥಳಗಳ ಅಭಿವೃದ್ಧಿ ಮಾಡಲು ಬದ್ಧರಾಗಿ ಕೆಲಸ ಮಾಡುತ್ತಿದ್ದೇವೆ' ಎಂದು ಶಾಸಕ ಎಚ್.ಸಿ. ಬಾಲಕೃಷ್ಣ ತಿಳಿಸಿದ್ದಾರೆ.

ಗಂಗಪ್ಪನಾಯಕ ವಿಜಯನಗರದ ಅಧಿಪತಿಗಳನ್ನು ಕ್ರಮೇಣ ವಿರೋಧಿಸತೊಡಗಿದ. ಆಗ, ವಿಜಯಪುರದ ದಂಡನಾಯಕ ರಣದುಲ್ಲಾಖಾನ್ ಬೆಂಗಳೂರು ವಶಪಡಿಸಿಕೊಂಡಿದ್ದ. ಮುಂದೆ ಇಮ್ಮಡಿ ಕೆಂಪೇಗೌಡ ಬೆಂಗಳೂರಿನಿಂದ ನೆಲೆಪಟ್ಟದಲ್ಲಿ ತಳಾರಿ ಗಂಗಪ್ಪನಾಯಕನನ್ನು ಕೊಂದು ಸಾವನದುರ್ಗ ವಶಪಡಿಸಿಕೊಂಡ. ಮಾಗಡಿಯ ಮಣ್ಣಿನ ಕೋಟೆ ಹೊರಮೈಗೆ ಕಲ್ಲುಗಳನ್ನು ಕಟ್ಟಿಸಿದ. ಕೋಟೆ ಒಳಗೆ ಕೋಟೆ ರಾಮೇಶ್ವರಸ್ವಾಮಿ, ಶ್ರೀಕೃಷ್ಣ ದೇವಾಲಯ, ಅರಮನೆ ಕಟ್ಟಿಸಿದ ಇಮ್ಮಡಿ ಕೆಂಪೇಗೌಡ ಕ್ರಿ.ಶ. 1638ರವರೆಗೆ ಆಳ್ವಿಕೆ ನಡೆಸಿದ ಎನ್ನುತ್ತವೆ ದಾಖಲೆಗಳು.

### ಹಿಂದೆ ದುರಸ್ತಿಯಾಗಿತ್ತು

**ಸದ್ಯ ಸಚಿವರಾಗಿರುವ ಎಚ್.ಡಿ. ಕುಮಾರಸ್ವಾಮಿ ಅವರು ಹಿಂದೆ ಮುಖ್ಯಮಂತ್ರಿ ಯಾಗಿದ್ದಾಗ ಕೋಟೆ ದುರಸ್ತಿಗೆ ರೂ. 350 ಕೋಟಿ ಹಣ ಮಂಜೂರಾಗಿತ್ತು. ಆಗಲೂ ಮಾಗಡಿಯಲ್ಲಿ ಎಚ್.ಸಿ. ಬಾಲಕೃಷ್ಣ ಅವರೇ ಶಾಸಕರಾಗಿದ್ದರು. ಆದರೆ, ದುರಸ್ತಿ ಕಾರ್ಯ ಪೂರ್ಣಪ್ರಮಾಣದಲ್ಲಿ ನಡೆಯಲಿಲ್ಲ. ಮಾಗಡಿ-ಬೆಂಗಳೂರು ಮುಖ್ಯರಸ್ತೆಯ ಕೋಟೆ ಮಾರಮ್ಮ ದೇವಸ್ಥಾನ ಹೆಬ್ಬಾಗಿಲ ಬಳಿ ಇರುವ ಕಾವಲು ಗೋಪುರ ಸಹ ಮಳೆ-ಗಾಳಿಗೆ ಕುಸಿದು ಬಿದ್ದಿದೆ. ಅದನ್ನು ಸಹ ಇಲ್ಲಿಯವರೆಗೂ ದುರಸ್ತಿ ಮಾಡಿಲ್ಲ. ಪೊಲೀಸ್ ಠಾಣೆ ಮುಂಭಾಗದ ಪಶ್ಚಿಮ ಗೋಪುರದ ದುರಸ್ತಿಯೂ ಪೂರ್ಣವಾಗಿಲ್ಲ. ಇದೀಗ, ಮಳೆಯಿಂದ ಮಣ್ಣೆಲ್ಲ ಕುಸಿಯುತ್ತಿದೆ ಎಂದು ಕೆಂಪೇಗೌಡರ ಅಭಿಮಾನಿಯೊಬ್ಬರು ಬೇಸರ ವ್ಯಕ್ತಪಡಿಸಿದರು.**

**ಕೋಟೆ ಅಭಿವೃದ್ಧಿಪಡಿಸಿದರೆ ಮಾಗಡಿ ಪಟ್ಟಣವು ಅತ್ಯುತ್ತಮ ಪ್ರವಾಸಿ ತಾಣವಾಗುತ್ತದೆ. ಅಭಿವೃದ್ಧಿ ಮೂಲಕ ಕೆಂಪೇಗೌಡರಿಗೆ ಹೆಸರು ತರುವ ಕೆಲಸ ಆಗಬೇಕು. ನಮ್ಮ ಪೂರ್ವಿಕರ ಕುರುಹನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಿ ಕೊಡುವ ಕೆಲಸವಾಗಲಿ**

**– ಡಾ. ಮುನಿರಾಜಪ್ಪ ಇತಿಹಾಸ ತಜ್ಞ ಮಾಗಡಿ**


ಉದಯವಾಹಿನಿ

ಪ್ರಾದೇಶಿಕ

ಮಂಗಳವಾರ
12 ಆಗಸ್ಟ್ 2025




## ಮಿನಿ ನ್ಯೂಸ್

### 14 ರಂದು ನ್ಯಾಯಾಲಯ ಸಂಕೀರ್ಣ ಉದ್ಘಾಟನೆ

• **ಉದಯವಾಹಿನಿ, ಕನಕಪುರ**

ನಗರದಲ್ಲಿ ನಿರ್ಮಾಣವಾಗಿರುವ ನೂತನ ನ್ಯಾಯಾಲಯ ಸಂಕೀರ್ಣದ ಉದ್ಘಾಟನೆ ಸಮಾರಂಭವು ಆಗಸ್ಟ್ 14 ರಂದು ಸಂಜೆ 5ಕ್ಕೆ ನೆರವೇರಲಿದೆ. ಜಿಲ್ಲಾ ನ್ಯಾಯಾಂಗ ಬೆಂಗಳೂರು ದಕ್ಷಿಣ ಜಿಲ್ಲೆ, ಲೋಕೋಪಯೋಗಿ ಇಲಾಖೆ ಬೆಂಗಳೂರು ದಕ್ಷಿಣ ಜಿಲ್ಲೆ, ವಕೀಲರ ಸಂಘ ಕನಕಪುರ ಇವರ ಸಂಯುಕ್ತಾಶ್ರಯಲ್ಲಿ ಕಾರ್ಯಕ್ರಮ ನಡೆಯಲಿದೆ. ಅತಿಥಿಗಳಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗ ರೆಡ್ಡಿ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಸಂಸದ ಡಾ.ಸಿ.ಎನ್.ಮಂಜುನಾಥ್ ಭಾಗವಹಿಸಲಿದ್ದಾರೆ ಎಂದು ವಕೀಲರ ಸಂಘದ ಅಧ್ಯಕ್ಷ ಎ.ಸಿ.ಚನ್ನೇಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾಡಾನೆ ದಾಳಿಗೆ ಬೆಳೆ ನಾಶ

• **ಉದಯವಾಹಿನಿ, ರಾಮನಗರ**

ತಾಲ್ಲೂಕಿನ ವಿಭೂತಿಕೆರೆ ಗ್ರಾಮದ ಜಮೀನಿನಲ್ಲಿ ಕಾಡಾನೆಗಳ ದಾಳಿಯಿಂದಾಗಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳು ನಾಶವಾಗಿವೆ. ಎರಡೂರು ಆನೆಗಳು ಜಮೀನಿಗೆ ಲಗ್ಗೆ ಇಟ್ಟಿವೆ. ಇದರಿಂದಾಗಿ ಶಿವಯ್ಯ, ರೇಣುಕಾ ಹಾಗೂ ಶಿವರಾಜು ಎಂಬ ರೈತರಿಗೆ ಸೇರಿದ ಜಮೀನಿನಲ್ಲಿ ತೆಂಗಿನಮರ, ಪಪ್ಪಾಯ, ಹಲಸಿನಮರ, ನೀರಾವರಿ ಪರಿಕರಗಳು ನಾಶವಾಗಿವೆ. ಕಾಡಾನೆಗಳ ಹಿಂಡು ಕಾವೇರಿ ವನ್ಯಜೀವಿಧಾಮದಿಂದ ಚಿಕ್ಕಮಣ್ಣುಗುಡ್ಡೆ ಅರಣ್ಯ ಪ್ರದೇಶದಲ್ಲಿ ಬೀಡು ಬಿಟ್ಟಿವೆ.

ಆಹಾರಕ್ಕಾಗಿ ಸುತ್ತಮುತ್ತಲಿನ ಗ್ರಾಮಗಳ ಜಮೀನಿಗೆ ಬರುವ ಆನೆಗಳು, ಬೆಳೆಗಳನ್ನು ನಾಶ ಮಾಡುತ್ತಿವೆ. ನೀರಾವರಿ ಸಲಕರಣೆಗಳನ್ನು ಧ್ವಂಸ ಮಾಡಿ ಹೋಗುತ್ತಿವೆ. ಇದರಿಂದಾಗಿ ಸ್ಥಳೀಯರು ಜಮೀನಿನಲ್ಲಿ ಆತಂಕದಲ್ಲೇ ಕೆಲಸ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸ್ಥಳೀಯರು ಅಳಲು ತೋಡಿಕೊಂಡರು.

### ಜೀತ ವಿಮುಕ್ತಿ ಕಾರ್ಮಿಕರ ರಾಜ್ಯ ಮಟ್ಟದ ಸಮಾವೇಶ

• **ಉದಯವಾಹಿನಿ, ಮೈಸೂರು**

ಜೀತ ಪದ್ಧತಿಯಿಂದ ಬಿಡುಗಡೆ ಆಗಿರುವ ಕಾರ್ಮಿಕರ ಕಲ್ಯಾಣಕ್ಕೆ ರೂ.500 ಕೋಟಿ ಮೊತ್ತದ ಸಮಗ್ರ ಪ್ಯಾಕೇಜ್ ಘೋಷಿಸಬೇಕು.

ಕಾರ್ಮಿಕ ವಿರೋಧಿ ಎಸ್ ಒಪಿ ರದ್ದುಗೊಳಿಸಬೇಕು ಎಂದು ಭಾನುವಾರ ಇಲ್ಲಿ ನಡೆದ ಜೀತ ವಿಮುಕ್ತಿ ಕಾರ್ಮಿಕರ ರಾಜ್ಯ ಮಟ್ಟದ ಸಮಾವೇಶವು ಒತ್ತಾಯಿಸಿತು.ಜೀತ ವಿಮುಕ್ತಿ ಕರ್ನಾಟಕ (ಜೀವಿಕ) ಹಾಗೂ ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟವು ಕಲಾಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ ಸಮಾವೇಶದಲ್ಲಿ ಜೀವಿಕ ಜಿಲ್ಲಾ ಸಂಚಾಲಕ ಬಸವರಾಜು ಅವರು ಹಕ್ಕೊತ್ತಾಯ ಮಂಡಿಸಿದರು. ರಾಜ್ಯದಲ್ಲಿ 20 ಸಾವಿರ ಜೀತ ವಿಮುಕ್ತ ಕಾರ್ಮಿಕರಿದ್ದು, ಇವರಲ್ಲಿ 7ಸಾವಿರ ಮಂದಿಗೆ ಸರ್ಕಾರ ವಿಮುಕ್ತಿ ಪತ್ರ ನೀಡಿದೆ. ಜೀತಪದ್ಧತಿ ನಿರ್ಮೂಲನೆ ವಿರೋಧಿಯಾಗಿರುವ 2017ರ ಕೇಂದ್ರ ಹಾಗೂ 2022ರ ಕರ್ನಾಟಕದ ಎಸ್‌ಒಪಿಗಳನ್ನು ಕೂಡಲೇ ರದ್ದುಗೊಳಿಸಬೇಕು' ಎಂದು ಆಗ್ರಹಪಡಿಸಿತು. '

### ಹೋರಾಟ ಪರಂಪರೆ ಮುಂದುವರಿಸಲು ಶಪಥ

• **ಉದಯವಾಹಿನಿ, ತುಮಕೂರು**

ಸ್ವಾತಂತ್ರ್ಯ ಪೂರ್ವದಲ್ಲಿ ದೇಶದ ಹೊರಗಿನವರು ನಮ್ಮ ಸಂಪತ್ತು ಲೂಟಿ ಮಾಡುತ್ತಿದ್ದರು, ಈಗ ರಾಷ್ಟ್ರದ ಒಳಗಿನವರೇ ಕೊಳ್ಳೆ ಹೊಡೆಯುತ್ತಿದ್ದಾರೆ ಎಂದು ಚಿಂತಕ ಜಿ.ರಾಮಕೃಷ್ಣ ಅಸಮಾಧಾನ ವ್ಯಕ್ತಪಡಿಸಿದರು. ನಗರದಲ್ಲಿ ಹಮ್ಮಿಕೊಂಡಿದ್ದ ಭಾರತ ಕಮ್ಯುನಿಸ್ಟ್ ಪಕ್ಷದ (ಸಿಪಿಐ) ಶತಮಾನೋತ್ಸವ ಸಂಭ್ರಮ ಸಮಾರಂಭದಲ್ಲಿ ಮಾತನಾಡಿದರು.ದೇಶದ ಪರಿಸ್ಥಿತಿ ಏನಾಗಿದೆ ಎಂಬುವುದು ಎಲ್ಲರಿಗೂ ಗೊತ್ತಿದೆ. ಆದರೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ನಮಗೆ ನಾವು ಹೇಳಿಕೊಂಡು, ಮಿತ್ರಪಕ್ಷ ಬಲಪಡಿಸಿ ಮುನ್ನಡೆಯಬೇಕು. ಸಿಪಿಐ ಆಶಯ ಪೂರೈಸುವುದಕ್ಕೆ ಕಂಕಣ ಬದ್ಧರಾಗಿರಬೇಕು. ಪಕ್ಷದ ತ್ಯಾಗ, ಬಲಿದಾನ, ಹೋರಾಟದ ಪರಂಪರೆ ಮುಂದುವರಿಸಬೇಕು ಎಂದು ಕರೆ ನೀಡಿದರು. ಯಾವುದೋ ಒಂದು ದೇಶದ ಅಧ್ಯಕ್ಷ ಯುದ್ಧ ನಿಲ್ಲಿಸಿ ಎಂದ ತಕ್ಷಣ ಭಾರತ ಯುದ್ಧ ನಿಲ್ಲಿಸುತ್ತದೆ. ದೇಶದಿಂದ ಒಂದು ಪ್ರತಿಕ್ರಿಯೆ ಬೇಡವೇದೇಶಕ್ಕೆ ಅಷ್ಟು ಸಾರ್ವಭೌಮತ್ವ ಇಲ್ಲವೇ ರಾಷ್ಟ್ರದ ಪ್ರಜೆಗಳನ್ನು ಪ್ರತಿನಿಧಿಸುವವರಿಗೆ ನಾಚಿಕೆ ಆಗುವುದಿಲ್ಲವೇ ಎಂದು ಕಿಡಿಕಾರಿದರು.

# ಜಿಲ್ಲೆಯಲ್ಲಿ ಮುಂದುವರಿದ ವರುಣ ಸಿಂಚನ


• **ಉದಯವಾಹಿನಿ, ರಾಮನಗರ**

ಜಿಲ್ಲೆಯ ವಿವಿಧೆಡೆ ಸಾಧಾರಣ ಮಳೆಯಾಗಿದೆ. ರಾಮನಗರ, ಚನ್ನಪಟ್ಟಣ ಹಾಗೂ ಕನಕಪುರ ತಾಲ್ಲೂಕಿನ ವಿವಿಧೆಡೆ ಮಳೆಯಾಗಿದೆ. ಮಾಗಡಿಯಲ್ಲಿ ಮೋಡ ಕವಿದ ವಾತಾವರಣವಿದ್ದು, ರಾತ್ರಿ ಮಳೆಯಾಗುವ ಸಾಧ್ಯತೆ ಇದೆ.

ಜಿಲ್ಲೆಯಾದ್ಯಂತ ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣವಿತ್ತು. ಮಧ್ಯಾಹ್ನ ಬಿಡದಿ, ರಾಮನಗರ, ಚನ್ನಪಟ್ಟಣ ಸೇರಿದಂತೆ ಕೆಲವೆಡೆ ಕೆಲ ಹೊತ್ತು ಸಾಧಾರಣವಾಗಿ ಸುರಿದ ಮಳೆ, ಸಂಜೆ ಕೆಲ ಹೊತ್ತು ನಿಧಾನವಾಗಿ ಬಂತು. ಸಂಜೆ ನಂತರವೂ ಮೋಡ ಕವಿದ ವಾತಾವರಣ ಮುಂದುವರಿದಿರುವುದರಿಂದ ರಾತ್ರಿ ಮಳೆ ಬರುವ ಸಾಧ್ಯತೆ ಇದೆ.ಈಗ ಸುರಿದಿರುವ ಮಳೆಯು ರಾಗಿ ಸೇರಿದಂತೆ ಇತರ ಬೆಳೆಗಳ ಬಿತ್ತನೆಗೆ ಪೂರಕವಾಗಿದೆ. ರೈತರು ಸಹ ಖುಷಿಯಾಗಿದ್ದಾರೆ. ಕೃಷಿ ಚಟುವಟಿಕೆಗಳು ಗರಿಗೆದರಿವೆ. ಮಳೆಯಿಂದಾಗಿ ಜಿಲ್ಲೆಯಲ್ಲಿ ಬೆಳೆ ಸೇರಿದಂತೆ ಇತರ ಯಾವುದೇ ಹಾನಿಯಾಗಿರುವ ಕುರಿತು ವರದಿಯಾಗಿಲ್ಲ ಎಂದು ಕಂದಾಯ ಇಲಾಖೆ ಅಧಿಕಾರಿಗಳು ತಿಳಿಸಿದರು.

ಚನ್ನಪಟ್ಟಣದಲ್ಲಿ ಯುಜಿಡಿ ಸಮಸ್ಯೆಯಿಂದಾಗಿ ಬೆಂಗಳೂರು ಮೈಸೂರು ಹಳೆ ಹೆದ್ದಾರಿಯಲ್ಲಿರುವ ಪೆಟ್ರೋಲ್ ಬಂಕ್ ಆವರಣ ಸಂಪೂರ್ಣ ಜಲಾವೃತಗೊಂಡಿತ್ತು. ಸಾರ್ವಜನಿಕ ಆಸ್ಪತ್ರೆ, ತಗ್ಗು ಪ್ರದೇಶದ ಮನೆಗಳಿಗೂ ನೀರು ಹರಿದು ಅವಾಂತರ ಸೃಷ್ಟಿಯಾಗಿತ್ತು. ಭಾನುವಾರ ಬೆಳಿಗ್ಗೆ ಹೊತ್ತಿಗೆ ನೀರು ಹರಿದು ಹೋಗಿ ಯಥಾಸ್ಥಿತಿ ಇತ್ತು.

ರಾಮನಗರ ತಾಲ್ಲೂಕಿನ ಕುಂಬಾಪುರದ ರೈಲ್ವೆ ಕೆಳಸೇತುವೆಯಲ್ಲಿ ನೀರು ಕಟ್ಟಿಕೊಂಡಿದ್ದರಿಂದ ಕೆಲ ತಾಸು ಊರಿನ ಸಂಪರ್ಕ ಕಡಿತಗೊಂಡಿತ್ತು. ಬಳಿಕ, ಸ್ಥಳೀಯರೇ ನೀರು ಬೇರೆಡೆಗೆ ಹರಿದು ಹೋಗುವಂತೆ ಮಾಡಿದರು. ಬಳಿಕ, ಊರಿಗೆ ವಾಹನಗಳು ಹಾಗೂ ಜನರು ಓಡಾಡುವಂತಾಯಿತು. ಜಿಲ್ಲೆಯಲ್ಲಿ ಎರಡು ದಿನಗಳಿಂದ ಸುರಿಯುತ್ತಿರುವ ಮಳೆಯು ರೈತರ ಮೊಗದಲ್ಲಿ ಹರ್ಷ ಮೂಡಿಸಿದ್ದು. ಕೆಲವೆಡೆ ನೀರು ನಿಂತು ಅವಾಂತರ ಸೃಷ್ಟಿಯಾಯಿತು.



**ತಗ್ಗಿದ ನೀರು: ಜಿಲ್ಲೆಯ ಚನ್ನಪಟ್ಟಣ, ರಾಮನಗರ, ಬಿಡದಿ, ಹಾರೋಹಳ್ಳಿ ಸೇರಿದಂತೆ ವಿವಿಧೆಡೆ ಸುರಿದ ಮಳೆಯಿಂದಾಗಿ ರಸ್ತೆ, ಅಂಡರ್‌ಪಾಸ್‌ಗಳಲ್ಲಿ ಸಂಗ್ರಹವಾಗಿದ್ದ ಮಳೆ ನೀರು ಅಂದೇ ರಾತ್ರಿ ಮತ್ತು ಭಾನುವಾರ ಬೆಳಿಗ್ಗೆ ಹೊತ್ತಿಗೆ ಹರಿದು ಹೋಯಿತು. ಇದರಿಂದಾಗಿ ವಾಹನ ಸವಾರರು ಸೇರಿದಂತೆ ಸಾರ್ವಜನಿಕರು ನಿಟ್ಟುಸಿರು ಬಿಟ್ಟರು.**

# ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ವಿರುದ್ಧ ಆಕ್ರೋಶ

• **ಉದಯವಾಹಿನಿ, ಚಿಂತಾಮಣಿ**

ನಗರದ ಪ್ರಗತಿ ಕಾಲೇಜಿನಲ್ಲಿ ಮಾಜಿ ಶಾಸಕ. ಜೆ.ಕೆ. ಕೃಷ್ಣರೆಡ್ಡಿ ಅವರು ಉದ್ಯೋಗ ಮೇಳ ಆಯೋಜಿಸಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ವಿ. ಗೋಪಾಲಗೌಡರು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕಳೆದ 2 ವರ್ಷಗಳಿಂದ ಉನ್ನತ ಶಿಕ್ಷಣ ಸಚಿವರಾಗಿರುವ ತಮ್ಮ ಕೊಡುಗೆ ಏನು ಎಂಬುದನ್ನು ಯುವಕರಿಗೆ ತಿಳಿಸಬೇಕು ಎಂದು ಒತ್ತಾಯಿಸಿದರು.

ಪಾಳಿಗಾರಿಕೆ ಆಡಳಿತವನ್ನು ಜನರು ಸಹಿಸುತ್ತಾರೆ ಎಂದು ತಿಳಿದುಕೊಂಡಿದ್ದರೆ, ಅದು ನಿಮ್ಮ ಭ್ರಮೆಯಾಗಲಿದ್ದು, ಮುಂದಿನ ದಿನಗಳಲ್ಲಿ ಜನರು ನಿಮಗೆ ತಕ್ಕ ಶಾಸ್ತಿ ಮಾಡಲಿದ್ದಾರೆ ಎಂದರು.

ಉದ್ಯೋಗವಿಲ್ಲದೆ ನಿರುದ್ಯೋಗಿಗಳಾಗಿರುವ ಯವಕರಿಗೆ ಉದ್ಯೋಗ ಕಲ್ಪಿಸಿಕೊಡಬೇಕು ಎಂಬ ಸದ್ದುದ್ದೇಶದಿಂದ ಮಾಜಿ ಶಾಸಕ ಎಂ. ಕೃಷ್ಣಾರೆಡ್ಡಿ ಉದ್ಯೋಗಮೇಳವನ್ನು ಹಮ್ಮಿಕೊಂಡು ಸಾವಿರಾರು ಜನ ಯುವಕರಿಗೆ ಉದ್ಯೋಗ ಕೊಡಿಸಲು ಮುಂದಾಗಿರುವುದು ಶ್ಲಾಘನೀಯವಾಗಿದೆ. ಉನ್ನತ ಜವಾಬ್ದಾರಿ ಸ್ಥಾನದಲ್ಲಿರುವ ಸಚಿವ ಡಾ.ಎಂ.ಸಿ ಸುಧಾಕರ್ ರವರು ಉದ್ಯೋಗಮೇಳದ ಬಗ್ಗೆ ಲಘುವಾಗಿ ಮಾತನಾಡುವುದು ಖಂಡನೀಯ. ಉನ್ನತ ಶಿಕ್ಷಣ ಇಲಾಖೆಯಲ್ಲಿ ಪ್ರಾಧ್ಯಾಪಕ, ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಖಾಲಿಯಿದ್ದು ಅದನ್ನು ತುಂಬಲು ಯಾಕೆ ಕ್ರಮಕೈಗೊಳ್ಳಲಿಲ್ಲ ಎಂದು ಪ್ರಶ್ನಿಸಿದರು.

ಪ್ರಜಾಪ್ರಭುತ್ವದಲ್ಲಿ ಅಧಿಕಾರ ಪಡೆದು ಸಾರ್ವಜನಿಕರಿಗೆ ಸಂವಿಧಾನದ ಅಡಿಯಲ್ಲಿ ಜನರ ಆಡಳಿತವನ್ನು ನೀಡಬೇಕು, ಸರಿಯಾದ ರೀತಿಯಲ್ಲಿ ನಡೆದುಕೊಂಡು ಹೋಗಬೇಕು ಹಾಗೂ ಆರ್ಥಿಕ ಸ್ವಾವಲಂಬನೆಯನ್ನು ಜನರಿಗೆ ತುಂಬಿಸುವುದು ಸರ್ಕಾರಗಳ ಜವಾಬ್ದಾರಿಯಾಗಿದೆ ಎಂದರು.



**ತಾಲ್ಲೂಕಿನಲ್ಲಿ ಪದವೀಧರ ನಿರುದ್ಯೋಗಿ ಯುವಕ, ಯುವತಿಯರಿಗೆ ಒಂದೇ ಸೂರಿನಲ್ಲಿ ಉದ್ಯೋಗ ಕಲ್ಪಿಸಲು ಮೇಳ ಆಯೋಜಿಸಲಾಗಿದೆ ಎಂದರು. ಕೋಲಾರ ಸಂಸದ ಎಂ. ಮಲ್ಲೇಶ್ ಬಾಬು, ಬಿಜೆಪಿಯ ಜಿ.ಎನ್. ವೇಣುಗೋಪಾಲ್, ಜೆಡಿಎಸ್ ಮುಖಂಡ ಬೈರಾರೆಡ್ಡಿ, ಉದ್ಯೋಗ ಮೇಳದ ಆಯೋಜಕ ಸುರೇಂದ್ರರೆಡ್ಡಿ, ಪ್ರಗತಿ ಕಾಲೇಜಿನ ಮುಖ್ಯಸ್ಥ ಜೆ.ವಿ ನಾರಾಯಣಸ್ವಾಮಿ ಭಾಗವಹಿಸಿದ್ದರು. -ಮಾಜಿ ಶಾಸಕ ಎಂ. ಕೃಷ್ಣಾರೆಡ್ಡಿ**

# ಮಳೆ ಬಂದ ಮರುದಿನ ಹೊರಬಂದ ಈಸುಳ್ಳಿ


• **ಉದಯವಾಹಿನಿ, ಶಿಡ್ಲಘಟ್ಟ**

ಮಳೆ ಬೀಳುತ್ತಿದ್ದಂತೆಯೇ ಹೊರಹೊಮ್ಮುವ ಮಣ್ಣಿನ ಸುಗಂಧ ಎಂಥವರನ್ನೂ ಉಲ್ಲಸಿತಗೊಳಿಸುತ್ತದೆ. ಈ ಸಂದರ್ಭದಲ್ಲಿ ನಿಸರ್ಗದಲ್ಲೂ ಹಲವು ಬದಲಾವಣೆ ಕಂಡುಬರುತ್ತದೆ. ಗದ್ದಲು ಗೂಡಿನಿಂದ ಈಸುಳ್ಳಿಗಳು ಹೊರಬರುತ್ತಿವೆ. ತಾಲ್ಲೂಕಿನ ಅಪ್ಪೇಗೌಡನಹಳ್ಳಿಯಲ್ಲಿ ಮಳೆಬಿದ್ದ ಮರುದಿನ ಗೆದ್ದಲು ಗೂಡಿನಿಂದ ಹೊರಬಂದ ಈಸುಳ್ಳಿಗಳ ಭೇಟೆಗೆ ಕಾಗೆ, ಗೊರವಂಕ ಮೊದಲಾದ ಹಕ್ಕಿಗಳು, ನಾಯಿ, ಅಳಿಲುಗಳು ಸಹ ಕಾದಿದ್ದು ತಿನ್ನುತ್ತಿದ್ದವು.

ಸಾಮಾನ್ಯವಾಗಿ ಬೇಸಿಗೆ ಮುಗಿದು, ಮೊದಲ ಮಳೆ ಬೀಳುತ್ತಿದ್ದಂತೆ ರೆಕ್ಕೆ ಹೊಂದಿದ ಪುಟ್ಟ ಕೀಟಗಳು ಸಾವಿರಾರು ಸಂಖ್ಯೆಯಲ್ಲಿ ಬೆಳಕಿನ ಬಳಿ ಬರುತ್ತವೆ. ಮಳೆಹುಳು ಎಂದು ಕರೆಯಲ್ಪಡುವ ಇವುಗಳು ರೆಕ್ಕೆ ಮೂಡಿದ ಗೆದ್ದಲುಗಳು. ಹೊಸಾ ಸಂಸಾರ ಹೂಡಲು ತಯಾರಾಗುವ ವಯಸ್ಸಿಗೆ ಬಂದ ಗೆದ್ದಲುಗಳಿಗೆ ರೆಕ್ಕೆ ಮೂಡುತ್ತದೆ. ತಂಪಾದ ವಾತಾವರಣವಿದ್ದಾಗ ಅವು ಗೂಡಿನಿಂದ ಹೊರಗೆ ಹಾರುತ್ತವೆ. ಇದು ಅವುಗಳ ಜೀವನದ ಮೊದಲ ಮತ್ತು ಕೊನೆಯ ಹಾರಾಟ. ಸೂಕ್ತ ಸಂಗತಿಯನ್ನು ಹುಡುಕಲು ನಡೆಸುವ ಹಾರಾಟವಿದು. ಸೂಕ್ತ ಸಂಗಾತಿ ಸಿಕ್ಕೊಡನೆ ಭೂಮಿಗಿಳಿದು ತಮ್ಮ ರೆಕ್ಕೆ ಕಳಚಿಕೊಳ್ಳುವ ಇವು ಸೂಕ್ತ ಸ್ಥಳ ಹುಡುಕಿ ಚಿಕ್ಕಗೂಡು ನಿರ್ಮಿಸಿ ಕೂಡುತ್ತವೆ. ನಂತರ ಹೆಣ್ಣು ಮೊಟ್ಟೆ ಇಡಲು ಪ್ರಾರಂಭಿಸುತ್ತದೆ. ತನ್ನ ವಿಶಿಷ್ಟ ಗುಣಗಳಿಂದ ಪರಿಸರದಲ್ಲಿ ಮುಖ್ಯಪಾತ್ರ ವಹಿಸುವಂತಹ ಜೀವಿ ಗೆದ್ದಲು ಹುಳುವು ಮಾನವರಿಗಿಂತಲೂ ಎಷ್ಟೋ ಮೊದಲಿನಿಂದಲೇ ಭೂಮಿಯಲ್ಲಿ ಜೀವಿಸುತ್ತಿವೆ. ಮರಮಟ್ಟುಗಳ ಮೇಲೆ, ಒಣಗಿ ಬಿದ್ದ ದಿಮ್ಮಿಗಳ ಕೆಳಗೆ, ಭೂಮಿಯೊಳಗೆ ಇವು ತಮ್ಮ ಗೂಡು ಕಟ್ಟಿಕೊಳ್ಳುತ್ತವೆ. ಕೆಲವು ಜಾತಿಯ ಗೆದ್ದಲುಗಳು ಇಪ್ಪತ್ತು ಅಡಿಗಳಿಗಿಂತಲೂ ಹೆಚ್ಚು ಎತ್ತರವಾಗಿ ತಮ್ಮ ಗೂಡಿಗೆ ಚಿಮಣಿಯಂತೆ ಹುತ್ತವನ್ನು ನಿರ್ಮಿಸುತ್ತವೆ.

ಮರ, ಒಣಗಿದ ಮರ, ಕೊಳೆಯುತ್ತಿರುವ ಮರ, ಕೊಳೆಯುತ್ತಿರುವ ಶಾಖಾಹಾರಿ ಪ್ರಾಣಿಗಳ ಸಗಣಿ ಮುಂತಾದವು ಇವುಗಳ ಆಹಾರ.

ಮರಮಟ್ಟುಗಳಲ್ಲಿರುವ ಸೆಲ್ಯುಲೋಸ್ ಇದರ ಮುಖ್ಯ ಅಹಾರ. ರೆಕ್ಕೆ ಬಂದ ಗೆದ್ದಲು ಹುಳುಗಳನ್ನು ಗ್ರಾಮೀಣರು ಈಸುಳ್ಳಿಗಳು ಎನ್ನುತ್ತಾರೆ. ಇವೆಂದರೆ ಕೋತಿ, ಕಾಗೆ, ಕೌಜುಗ, ಗೊರವಂಕ ಮುಂತಾದ ಹಕ್ಕಿಗಳಿಗೂ ಪ್ರಿಯ. ಹುತ್ತದಲ್ಲಿ ಗೆದ್ದಲು ಹುಳುಗಳು ಎಲ್ಲಾ ಕಾಲದಲ್ಲೂ ಇರುವುವಾದರೂ ಅವಕ್ಕೆ ರೆಕ್ಕೆ ಬಂದು, ಬಲಿತು ಈಸುಳ್ಳಿಗಳಾದಾಗ ಮಾತ್ರ ಬೇಟೆಯಾಡಿ ತಿನ್ನುವ ಅಭ್ಯಾಸವೂ ಗ್ರಾಮೀಣರಲ್ಲಿದೆ.



**ಈಸುಳ್ಳಿಗಳು ಒಳ್ಳೆಯ ರುಚಿಯ ಖಾದ್ಯ ಎಂಬ ಖ್ಯಾತಿಯಿದೆ. ಇದನ್ನು ಹುರುಳಿಯಂತೆ ಹುರಿದು ತಿನ್ನುತ್ತಾರೆ. ನವಿರಾದ ಖಾರದೊಂದಿಗೆ ಬೆಳ್ಳುಳ್ಳಿ ಅರೆದು ಹಾಕಿ ಹುರಿಯುವರು. ಇದರಲ್ಲಿರುವ ಕೊಬ್ಬು ಕರಗಿ ಮಸಾಲೆಯೊಂದಿಗೆ ಹುಳು ಬೇಯುವುದರಿಂದ ಹುರಿಯಲು ಎಣ್ಣೆಯ ಅಗತ್ಯವಿರದು. ಹಿಂದೆ ಹುತ್ತದಲ್ಲಿನ ರಾಣಿ ಹುಳುವನ್ನು ಪ್ರೋಟೀನು ಅಂಶವಿರುವುದೆಂದು ಮಕ್ಕಳಿಗೆ ನುಂಗಿ ಸುತ್ತಿದ್ದರು. ಮೊದಲೆಲ್ಲಾ ಈಸುಳ್ಳಿಗಳನ್ನು ಹಿಡಿದು ತಿನ್ನುವುದನ್ನು ನಾವೂ ನೋಡಿದ್ದೆವು. ಆದರೆ ಈಗ ಕಡಿಮೆಯಾಗಿದೆ. ಬೆಳಗ್ಗೆ ಹೊಲದ ಕಡೆ ಹೋದಾಗ ಹೊರಬರುತ್ತಿರುವ ಈಸುಳ್ಳಿಗಳನ್ನು ಹಲವಾರು ಹಕ್ಕಿಗಳು ಹಿಡಿದು ತಿನ್ನುತ್ತಿದ್ದವು' ಎಂದು ಅಪ್ಪೇಗೌಡನಹಳ್ಳಿಯ ತ್ಯಾಗರಾಜ್ ತಿಳಿಸಿದರು.**

# ಮತ್ತಿಹಳ್ಳಿ ವಿಮಾನ ಗೋಪುರ ಲೋಕಾರ್ಪಣೆ

• **ಉದಯವಾಹಿನಿ, ತಿಪಟೂರು**

ತಾಲ್ಲೂಕಿನ ಮತ್ತಿಹಳ್ಳಿಯಲ್ಲಿ ಭಕ್ತರ ನಂಬಿಕೆ, ಶ್ರದ್ಧೆಯ ಕೇಂದ್ರವಾಗಿರುವ ವೀರಭದ್ರೇಶ್ವರ ಹಾಗೂ ಬಿದರಾಂಬಿಕ ದೇವಾಲಯಗಳ ನೂತನ ವಿಮಾನ ಗೋಪುರ ಲೋಕಾರ್ಪಣೆ ಮಹೋತ್ಸವ ಭಾನುವಾರ ವಿಜೃಂಭಣೆಯಿಂದ ನೆರವೇರಿತು.ಧಾರ್ಮಿಕ ಸಂಸ್ಕೃತಿ ಹಾಗೂ ಗ್ರಾಮೀಣ ಏಕತೆಗೆ ಮಾದರಿಯಾದ ಈ ಮಹೋತ್ಸವಕ್ಕೆ ಭಕ್ತರ ಸಂಭ್ರಮದಿಂದ ಭಾಗವಹಿಸಿದ್ದರು. ಈ ಮಹೋತ್ಸವಕ್ಕೆ ಕೆರೆಗೋಡಿ ರಂಗಾಪುರ ಕ್ಷೇತ್ರದ ಗುರುಪರದೇಶಿಕೇಂದ್ರ ಸ್ವಾಮೀಜಿ ಹಾಗೂ ಮಾಡಾಳು ನಿರಂಜನ ಪೀಠದ ರುದ್ರಮುನಿ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ವಿಮಾನ ಗೋಪುರಕ್ಕೆ ಕಳಸ ಹಸ್ತಾಂತರಿಸಿದರು.

ಕರಿಕೆರೆ ಬ್ರಹ್ಮಲಿಂಗೇಶ್ವರ, ಬೆಳಗುಂಬ ವೀರಭದ್ರೇಶ್ವರ, ರಾಮನಹಳ್ಳಿ ಮಲ್ಲಿಕಾರ್ಜುನಸ್ವಾಮಿ, ಅಮ್ಮನಹಟ್ಟಿ ಮಾಳಮ್ಮದೇವಿ. ಮತ್ತಿಹಳ್ಳಿ ಯಲ್ಲಮ್ಮದೇವಿ, ಮಡೆನೂರು ಗೌಡನಕಟ್ಟೆ ಬಿದರಾಂಬಿಕ ದೇವಿ ಪ್ರತಿಮೆ ಮೆರವಣಿಗೆ ಗ್ರಾಮಕ್ಕೆ ಭೇಟಿ ನೀಡಿದ್ದವು. ನಂದಿ ಧ್ವಜಾರೋಹಣ, ನಂದಿ ಧ್ವಜ ಕುಣಿತ, ಹೋಮ ಹವನ, ಕಳಸ ಪೂಜೆ, ಮಣೇವು ನಡೆಯಿತು. ಮಹೋತ್ಸವ ಅಂಗವಾಗಿ ಗ್ರಾಮಸ್ಥರು, ಭಕ್ತರ ಸಹಭಾಗಿತ್ವದಲ್ಲಿ ಶನಿವಾರ ಸಂಜೆಯಿಂದ ಅನ್ನಪ್ರಸಾದದ ವ್ಯವಸ್ಥೆ ಮಾಡಲಾಗಿದ್ದು. ಸಾವಿರಾರು ಭಕ್ತರು ಸತ್ಕಾರ ಸ್ವೀಕರಿಸಿದರು. ಮಹೋತ್ಸವಕ್ಕೆ ಮತ್ತಿಹಳ್ಳಿ ಮಾತ್ರವಲ್ಲದೆ ಸುತ್ತಲಿನ ನೂರಕ್ಕೂ ಹೆಚ್ಚು ಗ್ರಾಮಗಳಿಂದ ಭಕ್ತರು ಭೇಟಿ ನೀಡಿದ್ದರು.



# ಸಂಘಟನೆಗಳು ಹಮ್ಮಿಕೊಂಡಿದ್ದ ಚೇಳೂರು ಬಂದ್ ಯಶಸ್ವಿ



• **ಉದಯವಾಹಿನಿ, ಚೇಳೂರು**

ಚೇಳೂರಿನಲ್ಲಿಯೇ ತಾಲ್ಲೂಕು ಕಚೇರಿ ಕಟ್ಟಡ ನಿರ್ಮಿಸಬೇಕು ಎಂದು ರಾಜಕೀಯ ಪಕ್ಷಗಳು, ಸಂಘಟನೆಗಳು ಹಮ್ಮಿಕೊಂಡಿದ್ದ ಚೇಳೂರು ಬಂದ್ ಯಶಸ್ವಿ ಆಯಿತು.ಪಟ್ಟಣದ ಹೊರವಲಯದ ಪುಲ್ಲಗಲ್ಲು ಕ್ರಾಸ್ ಬಳಿ ತಾಲ್ಲೂಕು ಕಚೇರಿಯ ಕಟ್ಟಡ ನಿರ್ಮಿಸಲು ಸರ್ಕಾರ ಮುಂದಾಗಿದೆ. ಇದನ್ನು ವಿರೋಧಿಸಿ ಮತ್ತು ಪಟ್ಟಣದಲ್ಲಿಯೇ ತಾಲ್ಲೂಕು ಕಚೇರಿ ನಿರ್ಮಿಸಲು ಆಗ್ರಹಿಸಿ ಬಂದ್‌ಗೆ ಕರೆ ನೀಡಲಾಗಿತ್ತು.

ಪಟ್ಟಣದಲ್ಲಿ ಅಂಗಡಿಗಳು ಸ್ವಯಂ ಪ್ರೇರಿತವಾಗಿ ಮುಚ್ಚಿದ್ದವು. ಯಾವುದೇ ವಾಹನಗಳ ಸಂಚಾರ ಸಹ ಇರಲಿಲ್ಲ. ಬಿಜೆಪಿ, ಜೆಡಿಎಸ್ ಮುಖಂಡರು, ರೈತ ಸಂಘಗಳು ಹಾಗೂ ಸಂಘ ಸಂಸ್ಥೆಗಳ ಮುಖಂಡರು ಬಂದ್‌ನಲ್ಲಿ ಭಾಗಿಯಾಗಿದ್ದರು. ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿದರು.

ಪ್ರಜಾಸೌಧವನ್ನು ಚೇಳೂರಿನಲ್ಲೇ ನಿರ್ಮಿಸಬೇಕು ಎಂದು ಘೋಷಣೆಗಳನ್ನು ಕೂಗಿದರು.ಎಂ.ಜಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಬಸ್‌ಗಳು ಇಲ್ಲದ ಕಾರಣ ಪ್ರಯಾಣಿಕರು ನಡೆದುಕೊಂಡು ಹೋಗುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಅಂಧ್ರ ಬಸ್‌ಗಳ ಸಂಚಾರ ಸಹ ಸಂಪೂರ್ಣವಾಗಿ ಸ್ಥಗಿತವಾಗಿತ್ತು. ಬೆಳಿಗ್ಗೆ 6ಕ್ಕೆ ಆರಂಭವಾದ ಬಂದ್ ಸಂಜೆ 5ಕ್ಕೆ ಮುಕ್ತಾಯವಾಯಿತು. ರಿಯಲ್ ಎಸ್ಟೇಟ್ ದಂಧೆಕೋರರು ಸ್ವಾರ್ಥಕ್ಕಾಗಿ ಆಂಧ್ರಗಡಿಯಲ್ಲಿ ತಾಲ್ಲೂಕು ಪ್ರಜಾಸೌಧ ಕಟ್ಟಲು ಹುನ್ನಾರ ಮಾಡುತ್ತಿದ್ದಾರೆ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು. ಇದರಿಂದ ಸಮಯ ಹಣ, ನಷ್ಟ, ದಂಧೆಕೋರರ ಮಾತಿಗೆ ಅಧಿಕಾರಿಗಳು ಮರುಳಾಗಿ ಆಂಧ್ರಪ್ರದೇಶದ ಗಡಿಯಲ್ಲಿ ಕಚೇರಿಗಳ ಸ್ಥಾಪಿಸಲು ಮುಂದಾಗಿದ್ದಾರೆ. ಇದರ ವಿರುದ್ಧ ಜು.13ರಂದು ಪ್ರತಿಭಟನಾ ರ್‍ಯಾಲಿ ಸಹ ನಡೆಸುತ್ತೇವೆ ಎಂದು ಹೇಳಿದರು. ಚುನಾಯಿತ ಪ್ರತಿನಿಧಿಗೆ ಜನಪರ ಕೆಲಸ ಮಾಡಬೇಕು ಎನ್ನುವ ಮನಸ್ಸಿದ್ದರೆ ಚೇಳೂರಿನಲ್ಲಿ ಪ್ರಜಾಸೌಧ ನಿರ್ಮಿಸುವರು. ಜನವಿರೋಧಿ ಕೆಲಸ ಮಾಡಬಾರದು. ಚೇಳೂರಿನಲ್ಲಿ ಕಚೇರಿಗಳು ಮಾಡಿದಿದ್ದರೆ ಉಗ್ರ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು. ಸೀತಿರೆಡ್ಡಿಪಲ್ಲಿ ವಿ.ಎಸ್.ಎಸ್.ಎನ್.ಅಧ್ಯಕ್ಷ ಜೆ.ಪಿ.ಚಂದ್ರಶೇಖರರೆಡ್ಡಿ. ಜೆ.ಡಿ.ಎಸ್ ಅಧ್ಯಕ್ಷ ಎಸ್.ಆರ್. ಲಕ್ಷ್ಮಿನಾರಾಯಣ, ಸಿ.ಎನ್.ರೆಡ್ಡಪ್ಪ, ರೈತ ಸಂಘದ ತಾ.ಪಂ. ಮಾಜಿ ಸದಸ್ಯ ಎಸ್.ವೈ.ವೆಂಕಟರಮಣಾರೆಡ್ಡಿ, ಕೆ.ಎನ್.ರಾಮಕೃಷ್ಣಾರೆಡ್ಡಿ, ಗ್ರಾ.ಪಂ. ಸದಸ್ಯರಾದ ಕೊಂಡಿಕೊಂಡ ಸುಬ್ಬಾರೆಡ್ಡಿ ಮತ್ತಿತರರು ಬಂದ್‌ನಲ್ಲಿ ಭಾಗವಹಿಸಿದ್ದರು.

**ತಾಲ್ಲೂಕು ಪ್ರಜಾಸೌಧ ಚೇಳೂರಿನಲ್ಲಿಯೇ ನಿರ್ಮಿಸಬೇಕು. ತಾಲ್ಲೂಕಿನ 12 ಗ್ರಾಮ ಪಂಚಾಯಿತಿಗಳ ಜನರು ಚೇಳೂರಿಗೆ ಬಂದು ಬಸ್ ಇಳಿದು ಮತ್ತೊಂದು ಕಡೆಗೆ ಆಟೊ, ಮತ್ತಿತರ ವಾಹನ ಆಶ್ರಯಿಸಿ ಪುಲಗಲ್ಲು ಕ್ರಾಸ್ ತಲುಪಬೇಕು. ಅಲ್ಲಿ ಇಳಿದು 1 ಕಿಮೀ ದೂರ ಮತ್ತೆ ಪ್ರಯಾಣಿಸಬೇಕು ಎಂದರು.**

**ಮುಖಂಡ ಹರಿನಾಥರೆಡ್ಡಿ**

# ಅಭಿಮನ್ಯುವನ್ನು ಹಿಂದಿಕ್ಕಿದ 25 ವರ್ಷದ ಕಿರಿಯ ಆನೆ

## ಗಜಪಡೆಯ ಎಲ್ಲಾ ಆನೆಗಳು ಆರೋಗ್ಯವಾಗಿದ್ದು, ಅವುಗಳ ತೂಕಕ್ಕೆ ಅನುಸಾರ ಪೌಷ್ಟಿಕ ಆಹಾರ ನಿಗದಿ

• **ಉದಯವಾಹಿನಿ, ಮೈಸೂರು**

ಅರಮನೆ ಪ್ರವೇಶಿಸಿದ್ದ ಗಜಪಡೆಗೆ ಸೋಮವಾರ ತೂಕ ಪರೀಕ್ಷೆ ನಡೆಸಲಾಗಿದ್ದು, ಈ ಬಾರಿ ಕ್ಯಾಪ್ಟನ್ ಅಭಿಮನ್ಯುವನ್ನು ಹಿಂದಿಕ್ಕಿ ಭೀಮ 5,465 ಕೆಜಿ ತೂಗುವ ಮೂಲಕ ಬಲಭೀಮನಾಗಿದ್ದಾನೆ.

ನಗರದ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಮ್ ವೇ ಬ್ರಿಡ್ಜ್‌ನಲ್ಲಿ ಅಭಿಮನ್ಯು ನೇತೃತ್ವದ 9 ಆನೆಗಳಿಗೆ ಸೋಮವಾರ ತೂಕದ ಪರೀಕ್ಷೆ ನಡೆಸಲಾಯಿತು. ಇದರಲ್ಲಿ 25 ವರ್ಷದ ಕಿರಿಯ ಆನೆ ಭೀಮ 5,465 ಕೆಜಿ ತೂಗಿ ಬಲಶಾಲಿ ಎಂಬ ಖ್ಯಾತಿ ಪಡೆದುಕೊಂಡ. ಗಜಪಡೆಯ ಕ್ಯಾಪ್ಟನ್ ಅಭಿಮನ್ಯು 5,360 ಕೆಜಿ ತೂಕವಿದ್ದು, ಗಜಪಡೆಯ ಎರಡನೇ ಬಲಿಷ್ಠ ಆನೆಯಾಗಿದೆ. ಕಳೆದ ದಸರೆಯಲ್ಲಿ 5300 ಕೆಜಿ ಇದ್ದ ಅಭಿಮನ್ಯು ಮೊದಲ ಸ್ಥಾನದಲ್ಲಿದ್ದ. ಈ ಬಾರಿಯ ತೂಕ ಪರೀಕ್ಷೆಯಲ್ಲಿ ಕಳೆದ ಬಾರಿಗಿಂತ 60 ಕೆಜಿ ಹೆಚ್ಚು ತೂಗಿದರೂ ಭೀಮನನ್ನು ಮೀರಿಸಲು ಸಾಧ್ಯವಾಗಲಿಲ್ಲ.

**ಬಲ'ಭೀಮ**

ಸಾರ್ವಜನಿಕರ ನೆಚ್ಚಿನ ಆನೆ ಭೀಮ ಕಳೆದ ನಾಲ್ಕು ವರ್ಷದಿಂದ ದಸರಾ ಮಹೋತ್ಸವದಲ್ಲಿ ಭಾಗವಹಿಸುತ್ತಿದ್ದಾನೆ. 2022ರ ದಸರೆಯಲ್ಲಿ 4 ಸಾವಿರ ಕೆಜಿ ತೂಗುತ್ತಿದ್ದ ಭೀಮ, ವರ್ಷದಿಂದ ವರ್ಷಕ್ಕೆ ತನ್ನ ತೂಕ ಹೆಚ್ಚಿಸಿಕೊಂಡಿದ್ದಾನೆ. ಅನುಭವಿ ಆನೆ ಧನಂಜಯ 5,310 ಕೆಜಿ ತೂಗಿ ಮೂರನೇ ಸ್ಥಾನ ಪಡೆದರೆ, ಏಕಲವ್ಯ 5,305 ಕೆಜಿ ತೂಗಿ 4ನೇ ಸ್ಥಾನ ಪಡೆದುಕೊಂಡಿದ್ದಾನೆ. ಶ್ರೀರಂಗಪಟ್ಟಣ ದಸರೆಯಲ್ಲಿ ಪಾಲ್ಗೊಳ್ಳುತ್ತಿರುವ ಮಹೇಂದ್ರ 5,120 ಕೆಜಿ ತೂಗಿದರೆ, ಪ್ರಶಾಂತ 5,110 ಕೆಜಿ ಇದ್ದಾನೆ. ಮೂರನೇ ಬಾರಿ ದಸರೆಯಲ್ಲಿ ಪಾಲ್ಗೊಳ್ಳುತ್ತಿರುವ 26 ವರ್ಷದ ಕಂಜನ್ 4,880 ಕೆಜಿ ತೂಗಿದರೆ, ಹೆಣ್ಣಾನೆಗಳಲ್ಲಿ ಲಕ್ಷ್ಮಿ 3,730 ಕೆಜಿ ಹಾಗೂ ಕಾವೇರಿ 3,010 ಕೆಜಿ ತೂಕ ಹೊಂದಿವೆ. ತೂಕ ಪರೀಕ್ಷೆ ವೇಳೆ ಎಲ್ಲಾ ಆನೆಗಳ ಮಾವುತರು, ಕಾವಾಡಿಗಳು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಇದ್ದರು.

**ಪೊಲೀಸ್ ಭದ್ರತೆ**

ಅರಮನೆಯಿಂದ ದಾಸಪ್ಪ ವೃತ್ತದ ಸಮೀಪದ ತೂಕ ಪರೀಕ್ಷಾ ಸ್ಥಳಕ್ಕೆ ಪೊಲೀಸ್ ಭದ್ರತೆಯಲ್ಲಿ ಆನೆಗಳು ಸಂಚರಿಸಿದವು. ಜಂಬೂಸವಾರಿ ಸಂಚರಿಸುವ ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆಯಲ್ಲಿ ಹೆಜ್ಜೆಹಾಕಿದವು. ಗಜಪಡೆಯನ್ನು ನಗರದ ನಾಗರಿಕರು ಕಣ್ತುಂಬಿಕೊಂಡರು. ಹೂ ವ್ಯಾಪಾರಿಗಳು ಆನೆಗಳ ಮಾವುತರಿಗೆ ಹೂ, ಹಾರಗಳನ್ನು ಎಸೆದು ನಮಿಸಿದರು.



**ಗಜಪಡೆಯ ಎಲ್ಲಾ ಆನೆಗಳು ಆರೋಗ್ಯವಾಗಿದ್ದು, ಅವುಗಳ ತೂಕಕ್ಕೆ ಅನುಸಾರ ಪೌಷ್ಟಿಕ ಆಹಾರ ನಿಗದಿ ಮಾಡಲಾಗುತ್ತದೆ. ಪಶುವೈದ್ಯರು ಹಾಗೂ ತಜ್ಞರೊಂದಿಗೆ ಚರ್ಚಿಸಿ ಸೋಮವಾರದಿಂದಲೇ ಪೌಷ್ಟಿಕ ಆಹಾರ ನೀಡಲಾಗುತ್ತದೆ. ಈ ಬಾರಿ ಏಳು ಗಂಡಾನೆಗಳಲ್ಲಿ 6 ಆನೆಗಳು 5 ಸಾವಿರ ಟನ್ ದಾಟಿರುವುದು ವಿಶೇಷ, ಎಂದು ತಿಳಿಸಿದರು.**

**ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ**

### ಆನೆಗಳ ತೂಕದ ವಿವರ

- ಅಭಿಮನ್ಯು – 5,360 ಕೆಜಿ
- ಧನಂಜಯ – 5,310 ಕೆಜಿ
- ಭೀಮ – 5,465 ಕೆಜಿ
- ಏಕಲವ್ಯ – 5,305 ಕೆಜಿ
- ಕಂಜನ್ – 4,880 ಕೆಜಿ
- ಮಹೇಂದ್ರ – 5,120 ಕೆಜಿ
- ಪ್ರಶಾಂತ – 5,110 ಕೆಜಿ
- ಲಕ್ಷ್ಮಿ – 3,730 ಕೆಜಿ
- ಕಾವೇರಿ – 3,010 ಕೆಜಿ

ಅಂತರಾಳದಿಂದ... EDITORIAL

# ಮತ ಕಳವಿನ ಗಂಭೀರ ಆರೋಪ: ಜನರಿಗೆ ಸತ್ಯಸಂಗತಿ ತಿಳಿಯಲಿ



ಮಹದೇವಪುರ ವಿಧಾನಸಭಾ ಕ್ಷೇತ್ರವೊಂದರಲ್ಲೇ ಒಂದು ಲಕ್ಷಕ್ಕೂ ಹೆಚ್ಚು ನಕಲಿ ಮತಗಳು ಪತ್ತೆಯಾಗಿವೆ; ಅವುಗಳಲ್ಲಿ 11,000 ನಕಲಿ ನೋಂದಣಿಗಳಾಗಿದ್ದು, 40.000 ಮತದಾರರ ವಿಳಾಸಗಳು ಅನುಮಾನ ಹುಟ್ಟಿಸುವಂತಿವೆ: 33 ಸಾವಿರ ಪ್ರಕರಣಗಳಲ್ಲಿ ನಮೂನೆ-6'ರ ದುರುಪಯೋಗ ನಡೆದಿದೆ; 4,000 ಪ್ರಕರಣಗಳು ಅಮಾನ್ಯ ಛಾಯಾಚಿತ್ರಗಳಿಗೆ ಸಂಬಂಧಿಸಿದವು ಎಂದು ಕಾಂಗ್ರೆಸ್ ಆರೋಪಿಸಿದೆ. ಈ ಅಂಕಿ ಅಂಶಗಳು ನಿಜವಾಗಿದ್ದಲ್ಲಿ, ಚುನಾವಣಾ ಪ್ರಕ್ರಿಯೆ ದೋಷಪೂರಿತವಾಗಿದೆ ಎಂದು ಭಾವಿಸಬೇಕಾಗುತ್ತದೆ. ಚುನಾವಣಾ ಅಕ್ರಮಕ್ಕಾಗಿ ಬೇರೆಯವರನ್ನು ದೂಷಿಸುವ ಮೊದಲು, ಕಾಂಗ್ರೆಸ್ ಪಕ್ಷ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ಮತದಾರರ ಅಂತಿಮ ಪಟ್ಟಿಯನ್ನು ಮತದಾನಕ್ಕೆ ಮೊದಲೇ ಎಲ್ಲಾ ರಾಜಕೀಯ ಪಕ್ಷಗಳಿಗೂ ನೀಡಲಾಗುತ್ತದೆ. ಆ ಸಂದರ್ಭದಲ್ಲಿ, ಲೋಪದೋಷಗಳನ್ನು ಕಾಂಗ್ರೆಸ್ ಏಕೆ ಗಮನಿಸಲಿಲ್ಲ? ಮತಪಟ್ಟಿಯಲ್ಲಿನ ವ್ಯತ್ಯಾಸಗಳನ್ನು ಮನೆ ಮನೆಗೆ ಹೋಗಿ ಪ್ರಚಾರ ನಡೆಸುವ ಬೂತ್ ಮಟ್ಟದ ಕಾರ್ಯಕರ್ತರು ಏಕೆ ಗಮನಿಸಲಿಲ್ಲ? ಮತದಾನದ ದಿನವೂ ಶಂಕಿತ ನಕಲಿ ಮತದಾನದ ಬಗ್ಗೆ ಪಕ್ಷದ ಚುನಾವಣಾ ಏಜೆಂಟರು ಪ್ರತಿಭಟನೆ ನಡೆಸಬಹುದಿತ್ತು. ಫಲಿತಾಂಶದ ನಂತರವೂ ಚುನಾವಣಾ ಅಕ್ರಮದ ಬಗ್ಗೆ ದೂರು ಸಲ್ಲಿಸಲು ಕಾಂಗ್ರೆಸ್‌ಗೆ ಅವಕಾಶವಿತ್ತು.

> **ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಮತ ಕಳವು ಆರೋಪ, ಚುನಾವಣಾ ಪಾವಿತ್ರ್ಯದ ಬಗ್ಗೆ ಅನುಮಾನ ಮೂಡಿಸುವಂತಿದೆ. 'ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ, 2024ರ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಬಹುದೊಡ್ಡ ಚುನಾವಣಾ ಅಕ್ರಮ ಮತ್ತು ಮತ ಕಳವು ನಡೆದಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆಪಾದಿಸಿದ್ದಾರೆ. ಮೇಲ್ನೋಟಕ್ಕೆ ಚುನಾವಣಾ ಪ್ರಕ್ರಿಯೆಯಲ್ಲಿನ ಗಂಭೀರ ಲೋಪದಂತೆ ಕಾಣಿಸುತ್ತಿರುವ ಆರೋಪದ ಬಗ್ಗೆ ವಿಳಂಬ ಮಾಡದೆ ಲೆಕ್ಕಪರಿಶೋಧನೆ- ತನಿಖೆ ನಡೆಯಬೇಕಾಗಿದೆ.**

ಚುನಾವಣೆಗೆ ಮುನ್ನ ಹಾಗೂ ಚುನಾವಣೆಯ ನಂತರ ಪ್ರತಿಭಟಿಸುವ ಅವಕಾಶಗಳನ್ನು ಕಾಂಗ್ರೆಸ್ ಬಿಟ್ಟು ಕೊಟ್ಟಿದ್ದರೂ, ಮರಣೋತ್ತರ ಪರೀಕ್ಷೆಗೆ ಅವಕಾಶ ಇನ್ನೂ ಇದೆ. ಮತದಾರರು ತಮ್ಮ ವಾಸಸ್ಥಳ ಬದಲಿಸಿದಾಗ, ಹಳೆಯ ನೋಂದಣಿಗಳನ್ನು ರದ್ದುಪಡಿಸದೆ ಹೋದಲ್ಲಿ, ನಕಲಿ ನಮೂದುಗಳು ದಾಖಲಾಗುತ್ತವೆ. ಅಂತಹ ಸಂದರ್ಭದಲ್ಲಿ ಆಧುನಿಕ ತಂತ್ರಜ್ಞಾನವನ್ನು ಉಪಯೋಗಿಸಿಕೊಂಡು ದೋಷಗಳನ್ನು ಸರಿಪಡಿಸಬಹುದಾಗಿದೆ. ಪ್ರಸಕ್ತ ಪ್ರಕರಣದಲ್ಲಿ ಚುನಾವಣಾ ಆಯೋಗದ ಲೋಪವನ್ನು ತಳ್ಳಿಹಾಕುವಂತಿಲ್ಲ. ನಕಲಿ ಮತದಾರರು ಚುನಾವಣೆಯಲ್ಲಿ ಮತದಾನ ಮಾಡಿದ್ದಾರೆಯೇ ಹಾಗೂ ಆ ಮತದಾನ ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಬೀರಿದೆಯೇ ಅಥವಾ ಈ ಹೆಸರುಗಳು ಬರೀ ಮತದಾರರ ಪಟ್ಟಿಯಲ್ಲಷ್ಟೇ ಕಾಣಿಸಿಕೊಂಡಿವೆಯೇ ಪ್ರಸ್ತುತ ಉತ್ತರ ದೊರಕಬೇಕಾಗಿರುವ ಮುಖ್ಯ ಪ್ರಶ್ನೆಗಳಿವು. ಹೆಸರು ಮತ್ತು ವಿಳಾಸದಲ್ಲಿ ಸಾಮ್ಯತೆಯಿರುವ ಒಬ್ಬನೇ ವ್ಯಕ್ತಿ ಎರಡು ಕಡೆಗಳಲ್ಲಿ ಮತದಾನ ಮಾಡಿರುವುದನ್ನು ರಾಹುಲ್ ಗಾಂಧಿ ಅವರು ನೀಡಿರುವ ಸಾಕ್ಷ್ಯಗಳು ಸೂಚಿಸುತ್ತಿವೆ. ಆರೋಪಗಳನ್ನು ಸಹಿ ಮಾಡಿದ ಪ್ರಮಾಣ ಪತ್ರದೊಂದಿಗೆ ಸಲ್ಲಿಸುವಂತೆ ಚುನಾವಣಾ ಆಯೋಗ ರಾಹುಲ್ ಗಾಂಧಿ ಅವರಿಗೆ ತಿಳಿಸಿದೆ. ಆರೋಪ ಸುಳ್ಳಾದಲ್ಲಿ ಕಾನೂನು ಕ್ರಮ ಎದುರಿಸಬೇಕಾಗುತ್ತದೆಂದು ಪರೋಕ್ಷವಾಗಿ ಬೆದರಿಸಿದೆ. ಈ ಬೆದರಿಕೆಗೆ ಬದಲು, ಆಯೋಗ ಹೆಚ್ಚು ಕ್ರಿಯಾಶೀಲ ವಿಧಾನ ಅನುಸರಿಸಬಹುದಾಗಿತ್ತು. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ನಡೆಸಬೇಕಾದ ಸಂಸ್ಥೆಯ ವಿಶ್ವಾಸಾರ್ಹತೆಯೇ ಪ್ರಶ್ನೆಗೊಳಗಾದಾಗ, ತೀರ್ಪು ನೀಡುವ ಸ್ಥಾನದಲ್ಲಿ ಆರೋಪಕ್ಕೆ ಗುರಿಯಾದ ಸಂಸ್ಥೆಯೇ ಇರುವುದನ್ನು ಒಪ್ಪಿಕೊಳ್ಳಲಾಗದು. ಮತದಾರರ ಪಟ್ಟಿ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಆಗಿರಬಹುದಾದ ಅಕ್ರಮಗಳ ಬಗ್ಗೆ ತನಿಖೆ ನಡೆಸಲು, ಹೈಕೋರ್ಟ್ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಕಾಂಗ್ರೆಸ್ ಒತ್ತಾಯಿಸಬೇಕಾಗಿದೆ. ಒಂದುವೇಳೆ, ರಾಹುಲ್ ಅವರ ಆರೋಪಗಳು ಆಧಾರ ರಹಿತ ಆಗಿದ್ದಲ್ಲಿ ಅವರನ್ನು ಕಾನೂನು ಕ್ರಮಕ್ಕೆ ಒಳಪಡಿಸಬೇಕು. ಆರೋಪ ದೃಢಪಟ್ಟಲ್ಲಿ, ತಳಮಟ್ಟದ ಅಧಿಕಾರಿಗಳಿಂದ ಹಿಡಿದು ಕಳಂಕಿತ ಮತದಾರರ ಪಟ್ಟಿಗೆ ಅನುಮೋದನೆ ನೀಡಿದ ಎಲ್ಲರೂ ಗುರುತರ ಲೋಪದ ಜವಾಬ್ದಾರಿ ಹೊರಬೇಕಾಗುತ್ತದೆ. ಇದು 2 ಪಕ್ಷಗಳಿಗೆ ಸಂಬಂಧಿಸಿದ ವಿದ್ಯಮಾನವಷ್ಟೇ ಅಲ್ಲ: ಚುನಾವಣೆಗಳಲ್ಲಿ ಅಕ್ರಮ ಎಸಗುವುದು ಮತದಾರರ ಅಭಿಪ್ರಾಯವನ್ನು ಕದಿಯುವುದೆಂದರೆ, ಅದು ಸಂವಿಧಾನಕ್ಕೆ ಎಸಗುವ ದ್ರೋಹ ಪ್ರಜಾಪ್ರಭುತ್ವದ ಮೇಲೆ ನಡೆಸುವ ಆಕ್ರಮಣ.

# ಕನ್ನಡದ ಬೆಳವಣಿಗೆಗೆ ನಾವೇನು ಮಾಡಬಹುದು?



ವಿಶ್ವಾಸ್.ಡಿ.ಗೌಡ



ಕನ್ನಡದ ಬೆಳವಣಿಗೆಗೆ ನಾವೇನು ಮಾಡಬಹುದೆಂದು ನನ್ನನ್ನು ಆಗಿಂದಾಗ ಉತ್ಸಾಹಿ ಯುವಕ ಯುವತಿಯರು ಕೇಳುತ್ತಿರುತ್ತಾರೆ. ಅವರಿಗೆ ತೋರ್ಗಂಬವಾಗಿ ಕೆಲವು ಸಲಹೆಗಳನ್ನು ಇಲ್ಲಿ ಕೊಟ್ಟಿದ್ದೇನೆ. ಇವುಗಳನ್ನು ಅಳವಡಿಸಿಕೊಳ್ಳಿ ಎಂದು ನನ್ನ ವಿನಂತಿ. ಇದೇ ಮಾದರಿಯ ಇತರ ಉಪಾಯಗಳನ್ನು ನಿಮ್ಮ ಬ್ಲಾಗುಗಳಲ್ಲಿ, 6- ಪತ್ರಿಕೆಗಳಲ್ಲಿ ಇತರರಿಗೂ ತಿಳಿಸಿ-ನಿಷ್ಠೆಯಿಂದ ಆಚರಣೆಗೆ ತನ್ನಿ.

1) ನಿಮ್ಮ ದೂರವಾಣಿಯಿಂದಲೋ, ಮೊಬೈಲ್ ನಿಂದಲೋ ಅನೇಕ ಸೇವೆಗಳಿಗಾಗಿ ಬ್ಯಾಂಕ್, ವಿಮೆ ಇತ್ಯಾದಿ-ಕರೆಮಾಡುತ್ತಿರುತ್ತೀರಿ. ಆಗ ನಿಮಗೆ ಎದುರಾಗುವುದು ''ಇಂಟರಾಕ್ಟಿವ್ ವಾಯ್ಸ್ ರೆಸ್ಪಾನ್ಸ್' ಸಿಸ್ಟಮ್, ಅಲ್ಲಿ ಬರುವ ಮೊದಲ ಹೇಳಿಕೆ- ಇಂಗ್ಲಿಷ್‌ಗಾಗಿ ಒಂದನ್ನು ಒತ್ತಿ, ಕನ್ನಡಕ್ಕಾಗಿ ಎರಡನ್ನು ಒತ್ತಿ ಇತ್ಯಾದಿ. ದಯವಿಟ್ಟು ಕನ್ನಡವನ್ನೇ ಆರಿಸಿಕೊಳ್ಳಿ. ಈ ಆಯ್ಕೆಗಳ ಅಂಕಿ ಅಂಶಗಳ ಬಲದಿಂದ ಆ ಉದ್ಯಮಗಳು ಯಾವ ಭಾಷೆಗೆ ಒತ್ತು ನೀಡಬೇಕೆನ್ನುವ ನಿರ್ಧಾರ ಕೈಗೊಳ್ಳುತ್ತವೆ. ಕನ್ನಡದ ಆಯ್ಕೆಯಿಂದ ಕನ್ನಡ ಬೆಳೆಯುತ್ತದೆ.



2)ನೀವು ಆಗಿಂದಾಗ ಅಂತರ್ಜಾಲದಲ್ಲಾಗಲೀ ನೇರವಾಗಿಯಾಗಲೀ ಉದ್ಯಮಗಳು ನಡೆಸುವ ಸರ್ವೆಗಳಲ್ಲಿ ಭಾಗವಹಿಸುತ್ತಿರುತ್ತೀರಿ. ಮುಂದೆ ಆ ರೀತಿ ಭಾಗವಹಿಸುವಾಗ ನಿಮಗೆ ಗೊತ್ತಿರುವ ಭಾಷೆಯ ಬಗ್ಗೆ ಇರುವ ಪ್ರಶ್ನೆಗೆ 'ಕನ್ನಡ' ಎಂದು ಮಾತ್ರ ದಾಖಲಿಸಿ, ನೀವು ಓದುವ ಪತ್ರಿಕೆಗಳ ಬಗ್ಗೆ ಇರುವ ಪ್ರಶ್ನೆಗೆ ಕನ್ನಡದ ದಿನಪತ್ರಿಕೆಗಳ, ನಿಯತ ಕಾಲಿಕಗಳ ಹೆಸರನ್ನು ಮರೆಯದೆ ನಮೂದಿಸಿ. ಇದರಿಂದ ಆ ಸರ್ವೆಯ ಫಲವಾಗಿ ನಡೆಯುವ ಎಲ್ಲಾ ಕಾವ್ಯಗಳಲ್ಲೂ ಕನ್ನಡದ ಬಳಕೆಗೆ ಇಂಬುಕೊಟ್ಟಂತಾಗುತ್ತದೆ.

3) ಇಂದು ಅನೇಕ ವಿಮೆ, ಬ್ಯಾಂಕ್, ಹಣಕಾಸಿನ ವ್ಯವಹಾರದ ಸಂಸ್ಥೆ ಮುಂತಾದ ಉದ್ಯಮಗಳು ತಮ್ಮ ಮಾರಾಟದ ಜಾಲಕ್ಕೆ ಅನೇಕ ಯುವಕರನ್ನು ನೇಮಿಸಿಕೊಂಡಿದೆ. ಇವರಲ್ಲಿ ನಿಜವಾಗಿ ಹೆಚ್ಚು ಮಂದಿ ಹೊರ ರಾಜ್ಯಗಳಿಂದ ಅಕ್ಕಪಕ್ಕದ - ರಾಜ್ಯಗಳಿಂದ ಇಲ್ಲಿಗೆ ಬಂದವರು. ನಮ್ಮ ಜೊತೆ ವ್ಯವಹರಿಸಲು ಕನ್ನಡ ಬಲ್ಲವರನ್ನೇ ಕಳುಹಿಸಬೇಕೆಂದು ನಾವು ಒತ್ತಾಯಿಸಿ ಕೇಳಬೇಕು. ಇದರಿಂದ ಈ ಉದ್ಯಮಗಳು ತಮ್ಮ ವ್ಯವಹಾರದಲ್ಲಿ ಕನ್ನಡವನ್ನು ಬಳಸಲೇಬೇಕಾದ ಪರಿಸ್ಥಿತಿ ಒದಗಿ ಬರುತ್ತದೆ. ಕನ್ನಡಿಗರಿಗೆ ಉದ್ಯೋಗಾವಕಾಶಗಳು ಒದಗುತ್ತವೆ.

4) ನಿಮ್ಮ ಮನೆಗಳಿಗೆ ಕಡೆಯಪಕ್ಷ ಒಂದು ಕನ್ನಡ ವಾರ್ತಾಪತ್ರಿಕೆಯನ್ನೂ ಒಂದು ನಿಯತಕಾಲಿಕವನ್ನೂ ತರಿಸಿ-ಅವನ್ನು ಮನೆಯವರೆಲ್ಲಾ ಓದಿ.

5)ನೀವು ಎಲ್ಲೇ ಇದ್ದರೂ ನಿಮ್ಮ ಮಕ್ಕಳೊಂದಿಗೆ ಕನ್ನಡದಲ್ಲಿ ಮಾತನಾಡಿ, ಇತರ ಕನ್ನಡಿಗರೊಡನೆ ಕನ್ನಡದಲ್ಲೇ ಮಾತನಾಡಲು ಪ್ರೋತ್ಸಾಹಿಸಿ, ಅವರಲ್ಲಿ ಕನ್ನಡ ಪ್ರೇಮದ ಜೊತೆ ಮುಂದಾಳತ್ವದ ಗುಣಗಳು ಹೆಚ್ಚುವಂತೆ ಮಾಡಿ. ಕನ್ನಡ ತಾಯಿಯರು ಈ ಕೆಲಸವನ್ನು ಪ್ರೀತಿಯಿಂದ ಮಾಡಿರಿ.

6) ನಿಮ್ಮ ಪ್ರದೇಶದಲ್ಲಿ ನಡೆಯುವ ಕನ್ನಡದ ಕಾರಕ್ರಮಗಳಲ್ಲಿ ತಪ್ಪದೆ ಭಾಗವಹಿಸಿ.

7) ಕನ್ನಡ-ಕನ್ನಡನಾಡು-ಕನ್ನಡಿಗ ಸಾಧಕರು ಈ ಬಗ್ಗೆ ಬೇರೆ ಭಾಷೆಯವರಲ್ಲಿ ಅಭಿಮಾನದಿಂದ ಮಾತನಾಡಿ.

8) ಆದಷ್ಟೂ ಇತರ ಕನ್ನಡಿಗರಿಗೆ ಸಹಾಯಮಾಡಿ, ಅವರ ಕಾಲನ್ನು ಎಳೆಯಬೇಡಿ. ನೀವು ಕೆಲಸಮಾಡುವ ಸ್ಥಳದಲ್ಲಿ ಇತರರು ಕನ್ನಡ ಮಾತನಾಡುವವರ ಮಧ್ಯೆ ವಿರಸವನ್ನುಂಟು ಮಾಡುವ ರೀತಿಯನ್ನು ಅನುಸರಿಸುವುದರ ಬಗ್ಗೆ ಬಹಳ ಎಚ್ಚರದಿಂದಿರಿ-ನಿಮ್ಮ ಒಗ್ಗಟ್ಟನ್ನು ಕಾಪಾಡಿಕೊಳ್ಳಿ.

9)ಬೇರೆ ರಾಜ್ಯಗಳಿಂದ ಬಂದು ನಿಮ್ಮೊಡನೆ ಕೆಲಸಮಾಡುವ ಮಂದಿಗೆ ಕನ್ನಡ ಕಲಿತು ಅದರಲ್ಲೇ ಮಾತನಾಡಲು ಪ್ರೋತ್ಸಾಹಿಸಿ.

10) ಕನ್ನಡವೆಂದರೆ ಬರಿಯ ಸಾಹಿತ್ಯವಲ್ಲ, ಸುಗಮ ಸಂಗೀತವಲ್ಲ, ಚಲನಚಿತ್ರವಲ್ಲ: ಈ ರೀತಿಯ ಇನ್ನು ಎಷ್ಟೋ ವಿಚಾರಗಳನ್ನು ಒಳಗೊಂಡ ಒಂದು ಸಂಸ್ಕೃತಿ ಎಂಬುದನ್ನು ಯಾವಾಗಲೂ ನೆನಪಿಡಿ. ಕನ್ನಡಿಗರಾಗಿರುವುದಕ್ಕೆ ಹೆಮ್ಮೆಪಡಿ.

# ಏಕ್ಯಾ ಶಾಲೆಯಲ್ಲಿ ಮನಸೆಳೆದ ವೈಶಿಷ್ಟ್ಯಪೂರ್ಣ ಜಪಾನ್ ಉತ್ಸವ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ನಗರದ ಬೈರತಿಯಲ್ಲಿರುವ ಪ್ರತಿಷ್ಠಿತ ಏಕ್ಯಾ ಶಾಲೆಯು ನಿನ್ನೆ ಜಪಾನ್ ಉತ್ಸವ ಎಂಬ ವೈಶಿಷ್ಟ್ಯಪೂರ್ಣ ಕಾರ್ಯಕ್ರಮವನ್ನು ಏರ್ಪಡಿಸುವ ಮೂಲಕ ಭಾರತ-ಜಪಾನ್ ನಡುವಿನ ವೈವಿಧ್ಯತೆಯ ಸಾಂಸ್ಕೃತಿಕ ಸಮ್ಮಿಲನಕ್ಕೆ ಸಾಕ್ಷಿಯಾಯಿತು.

ಆಗಸ್ಟ್ 10, ಭಾನುವಾರ ಏಕ್ಯಾ ಶಾಲಾ ಸಭಾಂಗಣದಲ್ಲಿ ನಡೆದ ಜಪಾನ್ ಉತ್ಸವ ಕಾರ್ಯಕ್ರಮದಲ್ಲಿ ಏಕ್ಯಾ ಸಮೂಹ ಶಾಲೆಗಳು, ಸಿಎಂಆರ್ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಸಿಎಂಆರ್ ನ್ಯಾಷನಲ್ ಪಿಯು ಕಾಲೇಜ್‌ನ ಜಪಾನೀಸ್ ಮತ್ತು ಭಾರತೀಯ ವಿದ್ಯಾರ್ಥಿಗಳು ಜಪಾನ್ ಉತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

ಮುಖ್ಯವಾಗಿ ವಿದ್ಯಾರ್ಥಿಗಳ ನೇತೃತ್ವದಲ್ಲಿ ನಡೆದ ಸಾಂಸ್ಕೃತಿಕ ಮತ್ತು ಸೃಜನಶೀಲತೆಯ ಪ್ರತೀಕವಾಗಿದ್ದ ಜಪಾನ್ ಉತ್ಸವದಲ್ಲಿ ಜಪಾನೀಸ್ ಮತ್ತು ಭಾರತೀಯ ವಿದ್ಯಾರ್ಥಿಗಳ ಜೊತೆಗೆ ಜಪಾನ್‌ನಿಂದ ಆಗಮಿಸಿದ್ದ ಶಿಕ್ಷಕರು, ಕಲಾವಿದರು ವಿವಿಧತೆಯಲ್ಲಿ ಏಕತೆಯನ್ನು ಬಿಂಬಿಸುವ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಿ ತಮ್ಮೊಳಗಿನ ಕಲಾವಂತಿಕೆಯನ್ನು ಮೆರೆದರು. ಜೊತೆಗೆ ಜಪಾನ್ ದೇಶದ ಸಂಸ್ಕೃತಿ, ಕಲೆ ಮತ್ತು ಮನರಂಜನೆಯನ್ನು ಪ್ರದರ್ಶಿಸುವ ಸಾಂಸ್ಕೃತಿಕ ಕಲರವದ ಜೊತೆಗೆ ಜಪಾನಿನ ಆಹಾರ, ಸಂಗೀತ, ನೃತ್ಯ, ಕರಕುಶಲ ವಸ್ತುಗಳು, ಕರಾಟೆ, ಕೆಂಡೋ, ಮತ್ತು ಇತರ ಸಮರ ಕಲೆಗಳ ಪ್ರದರ್ಶನಗಳು, ಜೊತೆಗೆ ಸಾಂಪ್ರದಾಯಿಕ ಜಪಾನೀಸ್ ಸಂಗೀತ ಮತ್ತು ನೃತ್ಯಗಳು ಸೇರಿದಂತೆ ಇತರ ಸಾಂಸ್ಕೃತಿಕ ಪ್ರದರ್ಶನಗಳು ಜಪಾನ್ ಉತ್ಸವಕ್ಕೆ ಇನ್ನಷ್ಟು ಮೆರುಗು ನೀಡಿದವು. ಜಪಾನ್ ಉತ್ಸವವು ಜಪಾನಿನ ಸಂಸ್ಕೃತಿಯನ್ನು ಪ್ರೀತಿಸುವ ಎಲ್ಲರಿಗೂ ಸಾಕಷ್ಟು ಖುಷಿ ನೀಡಿತು.

ಜಪಾನ್ ಉತ್ಸವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಂಗಳೂರಿನಲ್ಲಿರುವ ಜಪಾನ್ ಕಾನ್ಸುಲೇಟ್ ಜನರಲ್ ಹೊಕುಟೊ ಕಯಾ ಅವರು ಭಿತ್ತಿಚಿತ್ರವನ್ನು ಅನಾವರಣಗೊಳಿಸಿದರು. ಡಾ.ಕೆ.ಸಿ. ರಾಮಮೂರ್ತಿ, ಐಪಿಎಸ್ (ನಿವೃತ್ತಿ), ಮಾಜಿ ರಾಜ್ಯ ಸಭಾ ಸದಸ್ಯರು, ಅಧ್ಯಕ್ಷರು, ಸಿಎಂಆರ್ ವಿಶ್ವವಿದ್ಯಾಲಯ ಮತ್ತು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು.

ಡಾ. ಸಬಿತಾ ರಾಮಮೂರ್ತಿ, ಅಧ್ಯಕ್ಷರು ಸಿಎಂಆರ್ ಜ್ಞಾನಧಾರ ಟ್ರಸ್ಟ್, ಕುಲಾಧಿಪತಿ, ಸಿಎಂಆರ್ ವಿಶ್ವವಿದ್ಯಾಲಯ. ಶ್ರೀ. ಜಯದೀಪ್ ಕೆ.ಆರ್. ರೆಡ್ಡಿ, ಸಿಇಒ, ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಡಾ.ತ್ರಿಸ್ಥ ರಾಮಮೂರ್ತಿ, ಸಂಸ್ಥಾಪಕರು, ಏಕ್ಯಾ ಸಮೂಹ ಶಾಲೆಗಳು ಇವರುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಆಶಾ ಕಾರ್ಯಕರ್ತೆಯರ ಧರಣಿ

• ಉದಯವಾಹಿನಿ, ಬೆಂಗಳೂರು

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಆಗಸ್ಟ್ 12ರಿಂದ ಆಶಾ ಕಾರ್ಯಕರ್ತೆಯರು ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸಿದರೆ ಆರೋಗ್ಯ ಸೇವೆಯಲ್ಲಿ ತೊಂದರೆ ಉಂಟಾಗದಂತೆ ಕ್ರಮ ವಹಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕರು ಸೂಚನೆ ನೀಡಿದ್ದಾರೆ.

ಆಗಸ್ಟ್ 12ರಿಂದ 14ರವರೆಗೆ ನಿತ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ತವ್ಯಕ್ಕೆ ಗೈರು ಹಾಜರಾದ ಆಶಾ ಕಾರ್ಯಕರ್ತೆಯರ ಮಾಹಿತಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಪಡೆದು ಜಿಲ್ಲಾಮಟ್ಟದಲ್ಲಿ ಕ್ರೋಡೀಕರಿಸಿ ನಿತ್ಯ 3 ಗಂಟೆಯೊಳಗೆ ಆಯುಕ್ತಾಲಯಕ್ಕೆ ಸಲ್ಲಿಸಬೇಕು. ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರ ಸಹಕಾರ ಪಡೆದು ಆರೋಗ್ಯ ಸೇವೆಯಲ್ಲಿ ತೊಡಕಾಗದಂತೆ ಕ್ರಮ ವಹಿಸಬೇಕು ಎಂದು ಹೇಳಿದ್ದಾರೆ. ಅಧಿಕಾರಿಗಳು, ಕಾಯಂ ಮತ್ತು ಗುತ್ತಿಗೆ ಸಿಬ್ಬಂದಿಗೆ ವೈದ್ಯಕೀಯ ತುರ್ತು ಹೊರತುಪಡಿಸಿ ಇತರೆ ರಜೆ ನಿರ್ಬಂಧಿಸಬೇಕು. ಕಾನೂನು ಬಾಹಿರ ಹೋರಾಟದಲ್ಲಿ ಭಾಗವಹಿಸದಂತೆ ಆಶಾ ಕಾರ್ಯಕರ್ತೆಯರ ಮನವೊಲಿಸಬೇಕು ಎಂದು ತಿಳಿಸಿದ್ದಾರೆ.




# ತೂಕ ಇಳಿಸಿಕೊಳ್ಳಲು ಡಯಟ್ ಮಾಡುತ್ತಿದ್ದೀರಾ? ಹಾಗಾದ್ರೆ ಈ ಹಣ್ಣುಗಳನ್ನು ಮಾತ್ರ ತಿನ್ನಬೇಡಿ!

ಒಮ್ಮೆ ಹೆಚ್ಚಿಸಿಕೊಂಡ ತೂಕವನ್ನು ಮತ್ತೆ ಇಳಿಸಿಕೊಳ್ಳುವುದು ಅಷ್ಟು ಸುಲಭದ ಮಾತಲ್ಲ! ಕೆಲವೊಮ್ಮೆ ಡಯೆಟ್ ವ್ಯಾಯಾಮ ಮಾಡಿದರೂ ಕೂಡ ಮಾಡಿದರೂ ಕೂಡ ತೂಕ ಇಳಿಸಿಕೊಳ್ಳಲು ಅಥವಾ ಕೊಬ್ಬನ್ನು ಕರಗಿಸಲು ಸಾಧ್ಯವಾಗುವುದಿಲ್ಲ! ಹೀಗಾಗಿ ತೂಕ ಇಳಿಸುವ ಸಂದರ್ಭದಲ್ಲಿ ಕೆಲವೊಂದು ಆಹಾರಗಳಿಂದ ತಪ್ಪದೆ ದೂರವಿರಬೇಕು ದೇಹದ ತೂಕ ಹೆಚ್ಚಾದರೆ, ಮುಂದಿನ ದಿನಗಳಲ್ಲಿ ಇಲ್ಲದ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ ಹೀಗಾಗಿ ದೇಹದ ಬಗ್ಗೆ ಕಾಳಜಿ ವಹಿಸುವವರು ಮೊದಲಿಗೆ ದೇಹದ ತೂಕ ಹೆಚ್ಚಾಗದಂತೆ ಕೂಡ ನೋಡಿಕೊಳ್ಳಬೇಕು. ಹೀಗಾಗಲೇ ಅನಾರೋಗ್ಯಕರ ಆಹಾರ ಪದ್ಧತಿಯ ಜೊತೆಗೆ ಜಡ ಜೀವನ ಶೈಲಿಯನ್ನು ಅನುಸರಿಸುತ್ತಿರುವವರು ಹಾಗೂ ಈಗಾಗಲೇ ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಅಂಶ ಅಥವಾ ಕೆಟ್ಟ ಕೊಬ್ಬಿನ ಅಂಶ ಮತ್ತು ಬೊಜ್ಜಿನ ಅಂಶವನ್ನು ತುಂಬಿಕೊಂಡು ತೂಕವನ್ನು ಹೆಚ್ಚಿಸಿಕೊಂಡ ಪ್ರತಿಯೊಬ್ಬರೂ ಕೂಡ, ಆರೋಗ್ಯಕಾರಿ ಆಹಾರಪದ್ಧತಿಯನ್ನು ಅನುಸರಿಸುವ ಪ್ರಯತ್ನ ಮಾಡಬೇಕು ಹಾಗೂ ಕೆಲವೊಂದು ಆಹಾರಪದ್ಧತಿಯಿಂದ ಕೂಡ ದೂರವಿರಬೇಕು...

**ಆವಕಾಡೊ:** ತೂಕ ಇಳಿಸುವ ಪ್ರಯಾಣದ ಸಮಯದಲ್ಲಿ, ಹೆಚ್ಚಿನ ಕ್ಯಾಲೋರಿಗಳನ್ನು ಹೊಂದಿರುವ ಹಣ್ಣುಗಳನ್ನು ತಿನ್ನುವುದನ್ನು ನಾವು ತಪ್ಪಿಸಬೇಕು. ಇವುಗಳಲ್ಲಿ ಒಂದು ಆವಕಾಡೊ ಕೂಡ. ಸುಮಾರು 100 ಗ್ರಾಂ ಆವಕಾಡೊ ಸುಮಾರು 160 ಕ್ಯಾಲೋರಿಗಳನ್ನು ಹೊಂದಿರುತ್ತದೆ ಎಂದು ಹೇಳಲಾಗುತ್ತದೆ. ಆವಕಾಡೊ ಆರೋಗ್ಯಕರ ಕೊಬ್ಬಿನ ಉತ್ತಮ ಮೂಲವಾಗಿದ್ದರೂ, ಅದನ್ನು ಅತಿಯಾಗಿ ತಿನ್ನುವುದರಿಂದ ನಿಮ್ಮ ತೂಕ ಹೆಚ್ಚಾಗಬಹುದು.

**ಅನಾನಸ್ ಮತ್ತು ಮಾವಿನಹಣ್ಣು :** ಅನಾನಸ್ ಮತ್ತು ಮಾವಿನಹಣ್ಣುಗಳಲ್ಲಿ ಕೂಡ ಉತ್ತಮ ಪ್ರಮಾಣದ ಕ್ಯಾಲೊರಿಗಳನ್ನು ಒಳಗೊಂಡಿರುತ್ತವೆ, ಇದು ನಿಮ್ಮ ತೂಕ ಇಳಿಸುವ ಪ್ರಯಾಣಕ್ಕೆ ಅಡ್ಡಿಯಾಗಬಹುದು. ಈ ಹಣ್ಣುಗಳು ತುಂಬಾ ಸಿಹಿಯಾಗಿ ರುವುದರಿಂದ ಇಂತಹ ಹಣ್ಣುಗಳಿಂದ ದೂರವಿರುವುದು ಒಳ್ಳೆಯದು.

**ಖರ್ಜೂರ:** ನಮಗೆಲ್ಲಾ ಗೊತ್ತೇ ಇರುವ ಹಾಗೆ ಖರ್ಜೂರ ಹಣ್ಣು ಅತಿಯಾಗಿ ಸಿಹಿಯಾಗಿ ರುತ್ತದೆ, ಅಂದರೆ ನಿಸರ್ಗದತ್ತವಾಗಿ ಈ ಹಣ್ಣಿನಲ್ಲಿ ಸಕ್ಕರೆಯಾಂಶ ಹಚ್ಚಾಗಿ ಕಂಡು ಬರುತ್ತದೆ, ಇದರ ಜೊತೆಗೆ ಈ ಹಣ್ಣಿನಲ್ಲಿ ಕ್ಯಾಲೋರಿ ಅಂಶಗಳು ಕೂಡ ಅಧಿಕ ಪ್ರಮಾಣದಲ್ಲಿ ಕಂಡು ಬರುವುದರಿಂದ, ಇದನ್ನು ಅತಿಯಾಗಿ ಸೇವನೆ ಮಾಡುವುದರಿಂದ, ದೇಹದ ತೂಕ ಹೆಚ್ಚಾಗುವ ಸಾಧ್ಯತೆ ಇರುತ್ತದೆ! ಹೀಗಾಗಿ ತೂಕ ಇಳಿಸುವ ಪ್ರಯತ್ನದಲ್ಲಿರುವ ಸಂದರ್ಭದಲ್ಲಿ ಖರ್ಜೂರಗಳನ್ನು ಸೇವಿಸಬೇಡಿ.



**ಬಾಳೆಹಣ್ಣು ತೂಕ ಇಳಿಸುವ ಸಂದರ್ಭದಲ್ಲಿ ಬಾಳೆಹಣ್ಣು ಬಾಳೆಹಣ್ಣು ತುಂಬಾನೇ ಆರೋಗ್ಯಕಾರಿ ಹಣ್ಣು ಇದರಲ್ಲಿ ಎರಡು ಮಾತಿಲ್ಲ! ಆದರೆ ಸೇವನೆ ಮಾಡಬಾರದು! ಯಾಕೆಂದ್ರೆ ಬಾಳೆಹಣ್ಣುಗಳು ಕ್ಯಾಲೋರಿಗಳಲ್ಲಿ ಸಮೃದ್ಧವಾಗಿವೆ ಮತ್ತು ಅತಿಯಾದ ನೈಸರ್ಗಿಕ ಸಕ್ಕರೆಯನ್ನು ಹೊಂದಿರುತ್ತವೆ. ಒಂದು ಬಾಳೆಹಣ್ಣಿನಲ್ಲಿ ಸುಮಾರು 150 ಕ್ಯಾಲೋರಿಗಳು ಮತ್ತು ಸುಮಾರು 37.5 ಗ್ರಾಂ ಕಾರ್ಬೋಹೈಡ್ರೇಟ್‌ಗಳಿವೆ. ಅಂತಹ ಪರಿಸ್ಥಿತಿಯಲ್ಲಿ, ನೀವು ದಿನಕ್ಕೆ 2-3 ಬಾಳೆಹಣ್ಣುಗಳನ್ನು ಸೇವಿಸಿದರೆ, ನಿಮ್ಮ ತೂಕ ಹೆಚ್ಚಾಗಬಹುದು. ದಿನಕ್ಕೆ ಒಂದು ಬಾಳೆಹಣ್ಣನ್ನು ಮಾತ್ರ ತಿನ್ನುವುದು ಉತ್ತಮ. ಇದರ ಗ್ಲೈಸೆಮಿಕ್ ಸೂಚ್ಯಂಕ ಕಡಿಮೆಯಾಗಿದೆ, ಇದು ಆರೋಗ್ಯಕರ ತಿಂಡಿಯಾಗಿದೆ, ಆದರೆ ಇದನ್ನು ಸೀಮಿತ ಪ್ರಮಾಣದಲ್ಲಿ ತಿನ್ನಬೇಕು.**

# ರಾಮಾಯಣ



ಚಿತ್ರಕೂಟದಲ್ಲಿದ್ದ ಋಷಿಗಳು ಮತ್ತೊಂದು ವನಕ್ಕೆ ಹೋದದ್ದು

• ಹಿಂದಿನ ಸಂಚಿಕೆಯಿಂದ

## 116 ನೆಯ ಅಧ್ಯಾಯ

ಈತನಿಗೆ ಯಾವ ವಿಘ್ನವು ಸಂಭವಿಸುವುದೋ, ಎಂದು ನಿನ್ನನ್ನು ಕುರಿತು ತಮ್ಮೊಳಗೆ ತಾವೇ ಮಾತಾಡಿಕೊಳ್ಳುತ್ತಿರುವರಲ್ಲದೆ ಮತ್ತೇನೂ ಇಲ್ಲ. ಈ ವನದ ಸಮೀಪದಲ್ಲಿರುವ ಜನಸ್ಥಾನದಲ್ಲಿ ರಾವಣನ ತಮ್ಮನಾದ ಖರನೆಂಬ ರಾಕ್ಷಸನಿದ್ದುಕೊಂಡು ತಪಸ್ವಿಗಳನ್ನು ಸ್ಥಾನಭ್ರಷ್ಟರನ್ನಾಗಿ ಮಾಡಿ ಹೊರಡಿಸುತ್ತಿರುವನು. ಆ ರಾಕ್ಷಸನು ನರಮಾಂಸಭಕ್ಷಕನು.

ಮಹಾಗರ್ವಿಯು, ಮಹಾಪಾಪಿಯು. ಅಂಥ ಖರಸು ನಿನ್ನನ್ನು ಕಂಡರೆ ಸಹಿಸಲಾರನು. ನೀನು ಈ ಆಶ್ರಮಕ್ಕೆ ಬಂದುದೇ ಮೊದಲಾಗಿ ರಾಕ್ಷಸರು ತಪಸ್ವಿಗಳಿಗೆ ಅನೇಕ ಉಪದ್ರವಗಳನ್ನು ಮಾಡುತ್ತಿರುವರು. ಅನೇಕಮಂದಿ ರಾಕ್ಷಸರು ನಾನಾರೂಪಗಳನ್ನು ಧರಿಸಿಕೊಂಡು ವಿಕಾರ ಸ್ವರೂಪರಾಗಿಯೂ ಅಶುಚಿಗಳಾಗಿಯೂ ಬಂದು ತಪಸ್ವಿಗಳೊಡನೆ ಜಗಳವಾಡುತ್ತ ಕೆಲವರನ್ನು ಕೊಲ್ಲುತ್ತಲಿರುವರು. ಅಲ್ಲಲ್ಲಿರುವ ಆಶ್ರಮಗಳಲ್ಲಿ ಅಡಗಿಕೊಂಡಿದ್ದು ಯಾಗವನ್ನು ಮಾಡುವಾಗ ಯಾಗ ಮಂಟಪದಲ್ಲಿ ರಕ್ತದ ಹರವಿಗಳನ್ನು ಹಾಕಿ ವಿಘ್ನ ಮಾಡುತ್ತಿರುವರು. ಹೋಮಾಗ್ನಿಗಳನ್ನು ನೀರು ಹುಯ್ದು ಆರಿಸುತ್ತಿರುವರು. ಹೋಮಯೋಗ್ಯವಾದ ಕಲಶಗಳನ್ನು ಎತ್ತಿಕೊಂಡು ಹೋಗುವರು. ಈ ರೀತಿಯಲ್ಲಿ ರಾಕ್ಷಸರು ಬಾಧಿಸುತ್ತಿರುವುದರಿಂದ ತಪಸ್ವಿಗಳು ಈ ವನವನ್ನು ಬಿಟ್ಟು ಹೋಗಬೇಕೆಂದು ತಮ್ಮೊಳಗೆ ತಾವೇ ಮಾತಾಡಿಕೊಳ್ಳುತ್ತಿರುವರು. ಇಲ್ಲಿಗೆ ಸಮೀಪದಲ್ಲಿ ಒಂದು ತಪೋವನವಿದೆ. ಅಲ್ಲಿ ಕಂದಮೂಲಫಲಾದಿಗಳೂ ಸ್ವಾದೂದಕಗಳೂ ಪುಷ್ಕಲವಾಗಿವೆ. ಆದಕಾರಣ ನಾವು ಆ ತಪೋವನಕ್ಕೆ ಹೋಗುತ್ತೇವೆ ಎಂದು ಸಂತವಿಟ್ಟು ಆತನಿಂದ ಕಳುಹಿಸಿಕೊಂಡು ಆ ಋಷಿಗಳೆಲ್ಲರನ್ನೂ ಕರೆದುಕೊಂಡು ಮತ್ತೊಂದು ವನಕ್ಕೆ ತೆರಳಿದನು. ಶ್ರೀರಾಮನು ಆ ಮುನೀಶ್ವರನನ್ನೂ ಋಷಿಗಳನ್ನೂ ವಂದಿಸಿ ಪವಿತ್ರವಾದ ತನ್ನ ಆಶ್ರಮಕ್ಕೆ ತಿರುಗಿ ಬಂದನು.

**ಅತ್ರಿಮುನಿಯ ಆಶ್ರಮಕ್ಕೆ ಶ್ರೀರಾಮನ ಆಗಮನ**

ಈ ಪ್ರಕಾರದಲ್ಲಿ ಚಿತ್ರಕೂಟಪರ್ವತದಲ್ಲಿದ್ದ ಋಷಿಗಳು ಮತ್ತೊಂದು ಆಲಯಕ್ಕೆ ಹೋದಮೇಲೆ ಶ್ರೀರಾಮನು ಆ ವನದಲ್ಲಿ ಉಪದ್ರವವುಂಟಾದ್ದರಿಂದ ಅಲ್ಲಿರುವುದು ಯಾವ ರೀತಿಯಿಂದಲೂ ಯೋಗ್ಯವಲ್ಲವೆಂದು ಭಾವಿಸಿದನು. ಮೇಲಾಗಿ ಆ ಪುಣ್ಯಾಶ್ರಮದಲ್ಲಿ ತಮ್ಮ ತಾಯಂದಿರು ಒಡಹುಟ್ಟಿದವರೇ ಮೊದಲಾದ ಅನೇಕ ಬಂಧುಗಳನ್ನು ಕಂಡದ್ದನ್ನು ಸ್ಮರಿಸಿಕೊಂಡನು. ಭರತನ ಸೇನೆಯು ಪಾಳೆಯವಿಳಿಯಲು ಆನೆ ಕುದುರೆಗಳ ನುಗ್ಗಾಟದಿಂದಲೂ ಅವುಗಳ ಲದ್ದಿಗಳಿಂದಲೂ ಆ ವನವು ಗಾಸಿಯಾಗಿದ್ದುದನ್ನು ನೋಡಿ ಆ ಸ್ಥಳವನ್ನು ಬಿಟ್ಟು ಮತ್ತೊಂದು ಸ್ಥಳಕ್ಕೆ ಹೋಗಬೇಕೆಂದು ನಿಶ್ಚಯಿಸಿದನು. ಆಮೇಲೆ ಸೀತಾಲಕ್ಷ್ಮಣಸಮೇತನಾಗಿ ಅಲ್ಲಿಂದ ಮುಂದಕ್ಕೆ ತೆರಳಿ ಅತ್ರಿಮುನೀಶ್ವರನ ಆಶ್ರಮಕ್ಕೆ ಹೋಗಿ ಆತನನ್ನು ಕಾಣಿಸಿಕೊಂಡು ಅಭಿವಂದಿಸಿದನು. ಆ ಮುನೀಶ್ವರನು ಮಗನನ್ನು ಕಂಡಂತೆ ಶ್ರೀರಾಮನನ್ನು ಕಂಡು ಹರ್ಷಪಟ್ಟು ಆ ವನದಲ್ಲುಂಟಾದ ಕಂದಮೂಲಫಲಾದಿಗಳಿಂದ ಅತಿಥಿಸತ್ಕಾರಗಳನ್ನು ಮಾಡಿದನು.

**ಮುಂದುವರಿಯುವುದು...**

# ಕೃಷ್ಣ ಜನ್ಮಾಷ್ಟಮಿಯ ದಿನ ವ್ರತದ ಆಚರಣೆ ಹೇಗೆ ಮಾಡಬೇಕು?

ಭಾರತದಲ್ಲಷ್ಟೇ ಅಲ್ಲ, ಸಂಪೂರ್ಣ ವಿಶ್ವದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಅರ್ಥಾತ್ ಶ್ರೀಕೃಷ್ಣ ಜಯಂತಿಯನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಈ ವರ್ಷ 15 ಆಗಸ್ಟ್‌ಗೆ ಶ್ರೀ ಕೃಷ್ಣಜನ್ಮಾಷ್ಟಮಿ ಇದೆ. ಇದು ಹಿಂದೂ ಧರ್ಮದಲ್ಲಿನ ಒಂದು ಹಬ್ಬ, ವ್ರತ ಮತ್ತು ಉತ್ಸವವಾಗಿದೆ. ಬನ್ನಿ ಇದರ ಆಚರಣೆಯ ಸವಿಸ್ತಾರ ಮಾಹಿತಿ ತಿಳಿಯೋಣ !

**ಶ್ರೀ ಕೃಷ್ಣಜನ್ಮಾಷ್ಟಮಿಯ ಉತ್ಸವ:** ಗೋಕುಲ, ಮಥುರಾ, ಬೃಂದಾವನ, ದ್ವಾರಕಾ, ಪುರಿ ಇವು ಶ್ರೀಕೃಷ್ಣನ ಉಪಾಸನೆಗೆ ಸಂಬಂಧಿಸಿದ ಪವಿತ್ರಸ್ಥಾನಗಳಾಗಿವೆ. ಇಲ್ಲಿ ಈ ಉತ್ಸವವನ್ನು ವಿಶೇಷ ರೂಪದಲ್ಲಿ ಆಚರಿಸಲಾಗುತ್ತದೆ. ಈ ದಿನ ಬೃಂದಾವನದಲ್ಲಿ ಡೋಲೋತ್ಸವವಾಗುತ್ತದೆ. ಅದು ನೋಡಲು ಆನಂದದಾಯಕವಾಗಿರುತ್ತದೆ. ಇತರ ಕ್ಷೇತ್ರಗಳ ಅನೇಕ ಸ್ಥಳಗಳಲ್ಲಿ ಶ್ರೀಕೃಷ್ಣನ ದೇವಾಲಯದಲ್ಲಿ ಈ ಉತ್ಸವವನ್ನು ಆಚರಿಸಲಾಗುತ್ತದೆ. ಈ ದಿನ ಕೆಲವರು ತಮ್ಮ ಮನೆಯಲ್ಲಿಯೇ ಗೋಕುಲ-ಬೃಂದಾವನದಂತೆ ಪ್ರತಿರೂಪ ಮಾಡಿ ಶ್ರೀಕೃಷ್ಣನ ಜನ್ಮೋತ್ಸವವನ್ನು ಆಚರಿಸುತ್ತಾರೆ. ವೈಷ್ಣವ ಪಂಥೀಯರು ಈ ದಿನವನ್ನು ಅತೀವ ಭಕ್ತಿಭಾವದಿಂದ ಆಚರಿಸುತ್ತಾರೆ. ಅನೇಕ ವೈಷ್ಣವ ದೇವಾಲಯಗಳಲ್ಲಿ ದೀಪಾರಾಧನೆ, ಶೋಭಾಯಾತ್ರೆ, ಕೃಷ್ಣಲೀಲೆ, ಭಾಗವತ ಪಠಣ, ಕೀರ್ತನೆ, ಭಜನೆ, ನೃತ್ಯ-ಗಾಯನ ಇತ್ಯಾದಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಈ ಕಾರ್ಯಕ್ರಮವು ಶ್ರಾವಣ ಕೃಷ್ಣ ಪಾಡ್ಯದಿಂದ ಶ್ರಾವಣ ಕೃಷ್ಣಾಷ್ಟಮಿಯವರೆಗೂ ನಡೆಯುತ್ತದೆ.

**ಶ್ರೀಕೃಷ್ಣಜನ್ಮಾಷ್ಟಮಿ ವ್ರತ :** ಈ ವ್ರತವನ್ನು ಅಷ್ಟಮಿಯಂದು ಮಾಡಲಾಗುತ್ತದೆ ಮತ್ತು ಎರಡನೆಯ ದಿನ ಅರ್ಥಾತ್ ಶ್ರಾವಣ ಕೃಷ್ಣ ನವಮಿಯಂದು ಪಾರಾಯಣ ಮಾಡಿ ವ್ರತವನ್ನು ಸಂಪನ್ನಗೊಳಿಸುತ್ತಾರೆ. ಈ ವ್ರತವು ಎಲ್ಲರೂ ಮಾಡುವಂತಹದ್ದಾಗಿದೆ. ಈ ವ್ರತವನ್ನು ಮಕ್ಕಳು, ಯುವಕರು, ವೃದ್ಧರು, ಸ್ತ್ರೀ-ಪುರುಷರು ಎಲ್ಲರೂ ಮಾಡಬಹುದು. ಪಾಪನಾಶ, ಸೌಖ್ಯವೃದ್ಧಿ, ಸಂತತಿ-ಸಂಪತ್ತಿ ಮತ್ತು ವೈಕುಂಠ ಪ್ರಾಪ್ತಿಯು ಈ ವ್ರತದ ಫಲವಾಗಿದೆ.

**ಶ್ರೀಕೃಷ್ಣಜನ್ಮಾಷ್ಟಮಿಯ ವ್ರತಕ್ಕೆ ಸಂಬಂಧಿಸಿದ ಉಪವಾಸ :** ಈ ದಿನ ದಿನವಿಡೀ ಉಪವಾಸವನ್ನು ಮಾಡಲಾಗುತ್ತದೆ. ನಿರಾಹಾರ ಉಪವಾಸವು ಸಾಧ್ಯವಿಲ್ಲದಿದ್ದರೆ ಫಲಾಹಾರ ಮಾಡಬಹುದು. ಇದಕ್ಕೆ ಒಂದು ದಿನ ಮುಂಚೆ ಅರ್ಥಾತ್ ಶ್ರಾವಣ ಕೃಷ್ಣ ಸಪ್ತಮಿಯಂದು ಅಂಶಾತ್ಮಕ ಭೋಜನವನ್ನು ಮಾಡುತ್ತಾರೆ.

**ಶ್ರೀಕೃಷ್ಣಜನ್ಮಾಷ್ಟಮಿಯ ಪೂಜಾವಿಧಿ:** ಶ್ರೀಕೃಷ್ಣ ಜಯಂತಿಯಂದು ಶ್ರೀಕೃಷ್ಣನ ವಿಶೇಷ ಪೂಜೆಯನ್ನು ಮಾಡಲಾಗುತ್ತದೆ. ಭಗವಾನ ಶ್ರೀಕೃಷ್ಣನು ಮಧ್ಯರಾತ್ರಿಯಲ್ಲಿ ಜನಿಸಿದ್ದನು. ಆದುದರಿಂದ ಶ್ರೀಕೃಷ್ಣನ ವಿಶೇಷ ಪೂಜೆಯನ್ನು ಮಧ್ಯರಾತ್ರಿಯಲ್ಲಿ ಮಾಡಲಾಗುತ್ತದೆ. ಮಧ್ಯರಾತ್ರಿ ಸ್ನಾನವನ್ನು ಮಾಡಿ ಪೂಜೆಯನ್ನು ಆರಂಭಿಸಲಾಗುತ್ತದೆ. ಭಗವಾನ ಶ್ರೀಕೃಷ್ಣನ ಜನ್ಮವಾಗಿದೆ ಎಂಬ ಧಾರಣೆಯಿಂದ ಪೂಜೆಯನ್ನು ಮಾಡಬೇಕು. ಶ್ರೀಕೃಷ್ಣ ಜಯಂತಿಯಂದು ಶ್ರೀಕೃಷ್ಣತತ್ತ್ವವು ಇತರ ದಿನಗಳ ತುಲನೆಯಲ್ಲಿ ಹೆಚ್ಚು ಪ್ರಮಾಣದಲ್ಲಿ ಅಂದರೆ 1 ಸಾವಿರ ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಆದುದರಿಂದ ಶ್ರೀಕೃಷ್ಣನ ಚೈತನ್ಯದಾಯಕ ತತ್ತ್ವಲಹರಿಗಳು ಪೃಥ್ವಿಯ ಮೇಲೆ ಹೆಚ್ಚು ಪ್ರಮಾಣದಲ್ಲಿ ಆಕರ್ಷಿತವಾಗುತ್ತವೆ. ಈ ಲಹರಿಗಳಿಂದ ಜೀವಕ್ಕೆ ವ್ಯಾವಹಾರಿಕ ಮತ್ತು ಆಧ್ಯಾತ್ಮಿಕ ಈ ಎರಡೂ ಸ್ತರಗಳಲ್ಲಿ ಲಾಭವಾಗುತ್ತದೆ. ಈ ಕಾರ್ಯನಿರತ ತತ್ತ್ವಲಹರಿಗಳ ಸಂಪೂರ್ಣ ಲಾಭವನ್ನು ಪಡೆದುಕೊಳ್ಳಲು ಈ ದಿನ 'ಓಂ ನಮೋ ಭಗವತೇ ವಾಸುದೇವಾಯ।' ಈ ನಾಮಜಪವನ್ನು ಹೆಚ್ಚೆಚ್ಚು ಮಾಡಿರಿ.

**ಕೃಷ್ಣಗಾಯತ್ರಿ:** ದೇವಕೀನಂದನಾಯ ವಿದ್ಮಹೇ । ವಾಸುದೇವಾಯ ಧೀಮಹಿ ।
ತನ್ನೋ ಕೃಷ್ಣಃ ಪ್ರಚೋದಯಾತ್ ॥

**ಅರ್ಥ :** ನಾವು ದೇವಕೀಪುತ್ರ ಕೃಷ್ಣನನ್ನು ಅರಿತಿದ್ದೇವೆ. ವಾಸುದೇವನ ಧ್ಯಾನ ಮಾಡುತ್ತೇವೆ. ಆ ಕೃಷ್ಣನು ನಮ್ಮ ಬುದ್ಧಿಗೆ ಸತ್ ಪ್ರೇರಣೆ ಕೊಡಲಿ.

## ಶ್ರೀಕೃಷ್ಣಜನ್ಮಾಷ್ಟಮಿಯಂದು ಇವುಗಳನ್ನು ಮಾಡಿ!

- ತಮ್ಮ ಬಂಧು ಮಿತ್ರರಿಗೆ ಕಿರುಸಂದೇಶಗಳನ್ನು ಕಳುಹಿಸಿ ಅವರಿಗೆ ಶ್ರೀಕೃಷ್ಣನ ನಾಮಜಪವನ್ನು ಮಾಡಲು ಹೇಳಿರಿ!
- ಶ್ರೀಕೃಷ್ಣನ ದೇವಸ್ಥಾನದಲ್ಲಿ ಸ್ವಚ್ಛತೆಯ ಸೇವೆಯನ್ನು ಮಾಡಿ!
- ಶ್ರೀಕೃಷ್ಣನ ಅವಮಾನವಾಗುತ್ತಿರುವುದು ಕಂಡು ಬಂದಲ್ಲಿ ಅದನ್ನು ತಡೆಗಟ್ಟಿರಿ!
- ಈ ದಿನ ಕೃಷ್ಣತತ್ತ್ವವು ಹೆಚ್ಚು ಪ್ರಮಾಣದಲ್ಲಿರುವುದರಿಂದ ಅದನ್ನು ಗ್ರಹಿಸಲು 'ಓಂ ನಮೋ ಭಗವತೇ ವಾಸುದೇವಾಯ' ನಾಮಜಪವನ್ನು ಮಾಡಿ !



# ಹೈಮಾಸ್ಟ್ ಕಂಬದ ವಿದ್ಯುತ್ ಶಾಕ್‌ಗೆ ಎತ್ತು ಬಲಿ, ಸಿಡಿಲು ಬಡಿದು 04 ಮೇಕೆಗಳು ಸಾವು

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಕೊಡಂಪಳ್ಳಿ ಗ್ರಾಮದಲ್ಲಿ ಅಳವಡಿಸಿದ ಹೈಮಾಸ್ಟ್ ಕಂಬಕ್ಕೆ ವಿದ್ಯುತ್ ತಗುಲಿರಿಂದ ಕೊಡಂಪಳ್ಳಿ ಗ್ರಾಮದ ರೈತ ಅಣ್ಣಪ್ಪ ಗಿರಿಮಲ್ಲಪ್ಪಾ ಎಂಬುವರ ಎತ್ತು ಸಾವನ್ನಪ್ಪಿದರೆ ಮತ್ತೊಂದೆಡೆ ತಾಲ್ಲೂಕಿನ ಕರ್ಚಖೇಡ ಗ್ರಾಮದಲ್ಲಿ ಧಾರಾಕಾರ ಸುರಿದ ಮಳೆಯಿಂದ ಸಿಡಿಲಿನ ಶಾಕ್ ಬಡಿದು ರವಿ ಶಾಮರಾವಗೆ ಸೇರಿದ 04 ಮೇಕೆಗಳು ಸಾವನ್ನೊಪ್ಪಿದ ಘಟನೆ ಜರುಗಿದೆ.

ತಾಲ್ಲೂಕಿನ ಕೊಡಂಪಳ್ಳಿ ಗ್ರಾಮದಲ್ಲಿ ನಿರ್ಮಿಸಿದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಮೈಕ್ರೋ ಯೋಜನೆಯ ಕಾಮಗಾರಿಯಲ್ಲಿ ಹೈಮಾಸ್ಟ್ ವಿದ್ಯುತ್ ಕಂಬದಿಂದ ಬೆಳ್ಳಂಬೆಳಿಗ್ಗೆ ಎತ್ತು ದಾರಿಯಲ್ಲಿ ಹೋಗುವಾಗ ವಿದ್ಯುತ್ ತಗುಲಿ ಸಾವನ್ನೊಪ್ಪಿದರೆ ಮತ್ತೊಂದೆಡೆ ಮೂರ್ನಾಲ್ಕು ದಿನಗಳಿಂದ ಧಾರಾಕಾರವಾಗಿ ಗುಡುಗು ಮಿಂಚಿನಿಂದ ಸುರಿಯುತ್ತಿರುವ ಮಳೆಯಿಂದ ಮಧ್ಯಾಹ್ನ ವೇಳೆ ಕರ್ಚಖೇಡ ಗ್ರಾಮದಲ್ಲಿ ಸಿಡಿಲು ಬಡಿದು 04 ಮೇಕೆಗಳು


ಉದಯವಾಹಿನಿ ಚಿತ್ರ

ಸ್ಥಳದಲ್ಲೇ ಮೃತಪಟ್ಟಿವೆ. ಒಂದು ಹೈಮಾಸ್ಟ್ ಕಂಬ ನಿರ್ಮಿಸಲು 4-5 ಲಕ್ಷ ರೂ.ಖರ್ಚು ಮಾಡಿ ಸರ್ಕಾರ ಸಾರ್ವಜನಿಕರಿಗೆ ಬೆಳಕಿನ ವ್ಯವಸ್ಥೆ ಮಾಡಿ ಅನುಕೂಲ ಕಲ್ಪಿಸಿದರೆ ಕಂಬದ ಸುತ್ತಲೂ ರಕ್ಷಣೆ ಇಲ್ಲದೆ ಹಲವಾರು ಪ್ರಕರಣಗಳು ಬೆಳಕಿಗೆ ಬರುತ್ತಿವೆ ಸರ್ಕಾರ ಮತ್ತು ಜನಪ್ರತಿನಿಧಿಗಳು ಗಮನಹರಿಸಿ ಕಂಬದ ಸುತ್ತಮುತ್ತ ರಕ್ಷಣೆ ಗೋಡೆ ನಿರ್ಮಿಸಬೇಕು ಹಾಗೂ ಈಗಾಗಲೇ ಎತ್ತು ಮೃತಪಟ್ಟಿದ್ದು ಆ ರೈತನಿಗೆ ಸರ್ಕಾರದಿಂದ ಕನಿಷ್ಠ 50ಸಾವಿನ ರೂ.ಪರಿಹಾರ ನೀಡಬೇಕು. ಕರ್ಚಖೇಡ ಗ್ರಾಮದಲ್ಲಿ ಸಿಡಿಲಿನ ಶಾಕ್ ಬಡಿದು ಸಾವನ್ನಪ್ಪಿದ್ದ ಮೇಕೆಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು,ಕ್ಷೇತ್ರದ ಸ್ಥಳೀಯ ಶಾಸಕರು ರೈತನ ಮನೆಗೆ ಭೇಟಿಕೊಟ್ಟು ಧೈರ್ಯತುಂಬಿ ಪರಿಹಾರ ಧನ ಸಹಾಯವನ್ನು ಒದಗಿಸಬೇಕೆಂದು ಯುವ ಹೋರಾಟಗಾರ ಗೋಪಾಲ ಗಾರಂಪಳ್ಳಿ ಒತ್ತಾಯಿಸಿದರು.



**ಜೆಸ್ಕಾಂ ಸ್ಪಷ್ಟನೆ**

ಹೈಮಾಸ್ಟ್ ಕಂಬಗಳು ಜೇಸ್ಕಾಂ ಇಲಾಖೆಗೆ ಸಂಬಂಧ ಪಡುವುದಿಲ್ಲ,ಗ್ರಾಮ ಪಂಚಾಯಿತಿಗೆ ಸಂಬಂಧಪಟ್ಟಿದ್ದು,ಹೈಮಾಸ್ಟ್ ಕಂಬಕ್ಕೆ ವಿದ್ಯುತ್ ಕಲ್ಪಿಸಲು ಜೇಸ್ಕಾಂ ಇಲಾಖೆಯಿಂದ ಪರವಾನಿಗೆ ಕೂಡ ಪಡೆದಿರುವುದಿಲ್ಲ ವಿದ್ಯುತ್ ಕಳ್ಳತನ ಮಾಡಿ ಸ್ಥಳಿಯರು ವಿದ್ಯುತ್ ಸಂಪರ್ಕ ಕೊಟ್ಟಿದ್ದಾರೆ ಆದರೆ ಪರಿಹಾರ ದೊರಕುವುದು ಕಷ್ಟ ಆದರೆ ಅದಕ್ಕೆ ಸಂಬಂಧಪಟ್ಟ ದಾಖಲೆ ಪತ್ರಗಳನ್ನು ಸಲ್ಲಿಸಲಾಗುವುದು ಪರಿಹಾರ ನೀಡುವುದು ಇಲಾಖೆಯ ಮೇಲಾಧಿಕಾರಿಗಳಿಗೆ ಬಿಟ್ಟಿದ ವಿಷಯವಾಗಿದೆ ಎಂದು ಜೇಸ್ಕಾಂ ಎಇಇ ಕಾಮಣ್ಣ ಇಂಜೇಳಿ ಸ್ಪಷ್ಟನೆ ನೀಡಿದ್ದಾರೆ.

# ಎಸ್‌ಐಟಿ ಭೇಟಿಯಾದ ಪದ್ಮಲತಾ ಕುಟುಂಬ 38 ವರ್ಷಗಳ ಹಳೆಯ ಕೇಸ್ ತನಿಖೆಗೆ ಒತ್ತಾಯ

• ಉದಯವಾಹಿನಿ, ಮಂಗಳೂರು

ಧರ್ಮಸ್ಥಳ ಗ್ರಾಮದಲ್ಲಿ ಒಂದು ಕಡೆ ಹೂತಿಟ್ಟ ಶವಗಳ ಶೋಧ ನಡೆಯುತ್ತಿದೆ. ಇನ್ನೊಂದು ಕಡೆ, ಎಸ್‌ಐಟಿ ವಿಚಾರಣೆ ಮಾಡುತ್ತಿದೆ. ಇದರ ಮಧ್ಯೆ, ತನಿಖೆಗೆ ಮತ್ತೊಂದು ಟ್ವಿಸ್ಟ್ ಸಿಕ್ಕಿದ್ದು, 38 ವರ್ಷಗಳ ಹಿಂದೆ ಅಸಹಜ ಸಾವನ್ನಪ್ಪಿದ್ದ ಪದ್ಮಲತಾ ಕುಟುಂಬ ಎಸ್‌ಐಟಿಐನ್ನ ಭೇಟಿಯಾಗಿದ್ದು, ಮರು ತನಿಖೆಗೆ ಮನವಿ ಮಾಡಿದೆ. ಧರ್ಮಸ್ಥಳದ ಬೋಳಿಯಾರ್ ನಿವಾಸಿ ಪದ್ಮಲತಾ, ಕಾಲೇಜಿಗೆ ಹೋಗುವಾಗ ನಿಗೂಢವಾಗಿ ಸಾವನ್ನಪ್ಪಿದ್ದು, 57 ದಿನಗಳ ಬಳಿಕ ಶವ ಪತ್ತೆಯಾಗಿತ್ತು. ಈ ಹಿಂದೆ ಸಿಐಡಿ ಕೂಡ ಇದರ ತನಿಖೆ ನಡೆಸಿತ್ತು. ಈಗ ಎಸ್‌ಐಟಿ ತನಿಖೆ ನಡೆಸಬೇಕೆಂದು ಪದ್ಮಲತಾ ಸಹೋದರಿ ಇಂದ್ರಾವತಿ ದೂರು ಸಲ್ಲಿಸಿದ್ದಾರೆ. ಆದ್ರೆ ಸಿಪಿಎಂ (I) ಮುಖಂಡ ಬಿ.ಎಂ ಭಟ್, ಇದೊಂದು ಮರ್ಯಾದೆ ಹತ್ಯೆ ಅಲ್ಲ, ಅಸಹಜ ಸಾವು ಅಂತ ಹೇಳಿದ್ದಾರೆ.

**ಸತ್ಯಾಸತ್ಯತೆ ಹೊರಬರಲಿ ಅಂದಿದ್ದಾರೆ:** ಈ ಬಗ್ಗೆ ಮಾತನಾಡಿರುವ ಸಿಪಿಎಂ ಬೆಳ್ತಂಗಡಿ ಕಾರ್ಯದರ್ಶಿ ಬಿ.ಎಮ್ ಭಟ್, ಪದ್ಮಲತಾ ಅವರದ್ದು ಮರ್ಯಾದಾ ಹತ್ಯೆ ಅಲ್ಲ. ಅಸಹಜ ಸಾವು ಎಂದಿದ್ದಾರೆ. ಇದು ಕಮ್ಯೂನಿಷ್ಟರ ಟಾರ್ಗೆಟ್ ಎಂದು ಆರೋಪಿಸಲಾಗುತ್ತಿದೆ. ಮಂಜುನಾಥ ಸ್ವಾಮಿ, ಅಣ್ಣಪ್ಪ ಸ್ವಾಮಿಯ ಗೌರವ ಉಳಿಯಬೇಕು. ವೇದವಲ್ಲಿ, ಪದ್ಮಲತಾ -ಆನೆಮಾವುತ ಪ್ರಕರಣದ ಹೋರಾಟ ನಡೆಸುತ್ತಿದ್ದೇವೆ. ಶಾಸಕ ಹರೀಶ್ ಪೂಂಜಾ ಅವರ ನಡೆ ನನಗೆ ಅರ್ಥ ಆಗುತ್ತಿಲ್ಲ. ಪದ್ಮಲತಾ ಅವರದ್ದು ಮರ್ಯಾದ ಹತ್ಯೆ ಅಲ್ಲಂ, ವಸಂತ ಕುಲಾಲ್ ಎಂಬವರನ್ನು ಅರೆಸ್ಟ್ ಮಾಡಿದ್ದರು, ಆ ಬಳಿಕ ಪದ್ಮಲತಾ ತಂದೆ ದೇವಾನಂದ್ ಅವರ ಮೇಲೆ ಆರೋಪ ಮಾಡಲಾಯಿತು. ಎಲ್ಲವೂ ಕೂಡ ಕೃತಕ ಕಥೆ ಸೃಷ್ಟಿ ಮಾಡಲಾಗಿದೆ. ವೇದವಲ್ಲಿ ಪ್ರಕರಣದಲ್ಲಿ ಗಂಡ, ಸೌಜನ್ಯ ಪ್ರಕರಣದಲ್ಲಿ ಸಂತೋಷ್ ಅವರನ್ನ ಆರೋಪಿಗಳನ್ನಾಗಿ ಮಾಡಲಾಗಿದೆ. ಈಗ ಎಸ್‌ಐಟಿಯಲ್ಲಿ ಪ್ರಾಮಾಣಿಕ ಹಿರಿಯ ದಕ್ಷ ಅಧಿಕಾರಿಗಳಿದ್ದಾರೆ. ನಮಗೆ ಯಾವುದೇ ಅಜೆಂಡಾ ಇಲ್ಲ ನ್ಯಾಯ ಸಿಗಬೇಕು ಅಷ್ಟೇ ಅಂತ ಒತ್ತಾಯಿಸಿದ್ದಾರೆ.

**19 ವರ್ಷಗಳ ಹಿಂದಿನ ವೈದ್ಯರ ಲಿಸ್ಟ್ ತಯಾರು:** ಇನ್ನೂ, 1995 ರಿಂದ 2014ರವರೆಗಿನ ಕೇಸ್‌ಗಳ ತನಿಖೆಯನ್ನೂ ಎಸ್‌ಐಟಿ ಆರಂಭಿಸಿದೆ. ಧರ್ಮಸ್ಥಳ ಗ್ರಾಮದಲ್ಲಿ ನಡೆದ ಅತ್ಯಾಚಾರ, ಕೊಲೆ, ಅನಾಥ ಶವ ಪತ್ತೆ ಪ್ರಕರಣಗಳ ತನಿಖೆ ಆರಂಭಿಸಲಾಗಿದ್ದು, ಎಲ್ಲಾ ಕೇಸ್‌ಗಳ ಮರಣೋತ್ತರ ಪರೀಕ್ಷೆ ವರದಿಗಳ ಆಳವಾದ ತನಿಖೆಗೆ ಎಸ್‌ಐಟಿ ಮುಂದಾಗಿದೆ. 19 ವರ್ಷಗಳಲ್ಲಿ ಮರಣೋತ್ತರ ಪರೀಕ್ಷೆ ನಡೆಸಿರುವ ವೈದ್ಯರ ಲಿಸ್ಟ್ ಸಿದ್ಧವಾಗಿದೆ. ವೈದ್ಯರು, ಡಿ ಗ್ರೂಪ್ ನೌಕರರ ದಾಖಲೆಯನ್ನು ಎಸ್‌ಐಟಿ ಪರಿಶೀಲಿಸುತ್ತಿದೆ. ಖಾಸಗಿ ಹಾಗೂ ಸರ್ಕಾರಿ ಫೊರೆನ್ಸಿಕ್ ವೈದ್ಯರ ಸಮಗ್ರ ಮಾಹಿತಿ ಸಂಗ್ರಹಿಸಲಾಗಿದೆ. ವೈದ್ಯರು ಹಾಗೂ ಡಿ ಗ್ರೂಪ್ ನೌಕರರಿಗೆ ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಲಿದೆ. ಪೋಸ್ಟ್ ಮಾರ್ಟಂ ವರದಿಗಳಲ್ಲಿ ಅನುಮಾನ ಅಥವಾ ಗೊಂದಲ ಇದ್ದರೆ ಹೆಚ್ಚಿನ ವಿಚಾರಣೆ ನಡೆಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

# ಕಾಳಸಂತೆಯ ಕಾಳುಮೆಣಸು ತಡೆಗೆ ಪ್ರಯತ್ನ

## ಕಾಳುಮೆಣಸು, ಕಾಫಿ ಬೆಳೆಗಾರರ ಸಮಾವೇಶದಲ್ಲಿ ಕ್ಯಾಂಪ್ಕೊ ಅಧ್ಯಕ್ಷ ಕೊಡ್ಗಿ ಹೇಳಿಕೆ

• ಉದಯವಾಹಿನಿ, ಪುತ್ತೂರು

ಭಾರತಕ್ಕೆ ಶ್ರೀಲಂಕಾ, ವಿಯೆಟ್ನಾಂನಿಂದ ಕಾಳಸಂತೆಯಲ್ಲಿ ಕಾಳುಮೆಣಸು ಆಮದಾಗುತ್ತಿರುವುದನ್ನು ತಡೆಯಲು ಕ್ಯಾಂಪ್ಕೊ, ಕೇಂದ್ರ ಸರ್ಕಾರದ ಜತೆ ಪ್ರಯತ್ನ ನಡೆಸುತ್ತಿದೆ ಎಂದು ಕ್ಯಾಂಪ್ಕೊ ಅಧ್ಯಕ್ಷ ಕಿಶೋರ್ ಕುಮಾರ್ ಕೊಡ್ಗಿ ಹೇಳಿದರು. ದಕ್ಷಿಣ ಕನ್ನಡ ಹಾಗೂ ಕಾಸರಗೋಡು ಜಿಲ್ಲೆಗಳ ಕಾಳುಮೆಣಸು, ಕಾಫಿ ಬೆಳೆಗಾರರ ಒಕ್ಕೂಟದ ವತಿಯಿಂದ ಪುತ್ತೂರಿನ ಸುಭದ್ರಾ ಸಭಾಭವನದಲ್ಲಿ ನಡೆದ ಕಾಳುಮೆಣಸು ಹಾಗೂ ಕಾಫಿ ಬೆಳೆಯ ಕುರಿತ ಮಾಹಿತಿ ಶಿಬಿರ ಮತ್ತು ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಕೊರೊನಾದ ಬಳಿಕ ಅಡಿಕೆ ದರ ಕುಸಿಯದಂತೆ ಕ್ಯಾಂಪ್ಕೊ ಮಹತ್ವದ ಪಾತ್ರ ವಹಿಸುತ್ತಿದೆ. ಅಡಿಕೆ, ಕಾಳುಮೆಣಸು, ಕೊಕ್ಕೊ ದರದ ಸ್ಥಿರತೆ ಸಾಧಿಸಲು ಕ್ಯಾಂಪ್ಕೊ ಪ್ರಯತ್ನ ನಿರಂತರವಾಗಿದೆ. ದ.ಕ ಮತ್ತು ಕಾಸರಗೋಡು ಜಿಲ್ಲೆಗಳಲ್ಲಿ ಕಾಳುಮೆಣಸು ಹಾಗೂ ಕಾಫಿ ಬೆಳೆದು ರೈತರು ಆರ್ಥಿಕವಾಗಿ ಶಕ್ತಿ ಪಡೆಯಲು ಅವಕಾಶವಿದ್ದು, ಬೆಳೆಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಆದ್ಯತೆ ನೀಡಬೇಕು. ರೋಗ ಸೇರಿದಂತೆ ವಿವಿಧ ಸಮಸ್ಯೆಗಳನ್ನು ಎದುರಿಸುತ್ತಿರುವ ಜಿಲ್ಲೆಯಲ್ಲಿ ಅಡಿಕೆಗೆ ಪರ್ಯಾಯವಾಗಿ ಕಾಫಿ ಬೆಳೆಯುವ ಕುರಿತು ಸಂಸದ ಬ್ರಿಜೇಶ್ ಚೌಟ ಅವರು ಸಿಪಿಸಿಆರ್‌ಐ ವಿಜ್ಞಾನಿಗಳ ಜತೆ ಚರ್ಚೆ ನಡೆಸುತ್ತಿದ್ದಾರೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಅಖಿಲ ಭಾರತ ಕಾಳುಮೆಣಸು ಬೆಳೆಗಾರರ ಸಂಘದ ವಿಜ್ಞಾನಿ ವೇಣುಗೋಪಾಲ್ ಅವರು, ಸಮಗ್ರ ಕಾಳುಮೆಣಸು ಬೆಳೆಯುವ ಕುರಿತು ಮಾಹಿತಿ ಮತ್ತು ಸಂರಕ್ಷಣಾ ವಿಧಾನದ ಬಗ್ಗೆ ವಿಷಯ ಮಂಡಿಸಿದರು. ಸೆವೆನ್ ಬೀನ್ ಟೀಮ್ ಮುಖ್ಯಸ್ಥ ಎಚ್.ಎಸ್.ಧರ್ಮರಾಜ್ ಸಕಲೇಶಪುರ ಅವರು ಕಾಫಿ ಮತ್ತು ಕಾಳುಮೆಣಸಿಗೆ ನೀಡುವ ಪೋಷಕಾಂಶಗಳ ಕುರಿತು, ಇಂಧೋರ್‌ನ ಶ್ರೀ ಸಿದ್ಧಿ ಅಗ್ರಿ ಕಂಪನಿಯ ಮುಖ್ಯಸ್ಥ ಪೆರುವೋಡಿ ನಾರಾಯಣ ಭಟ್ ಅವರು ಅಡಿಕೆ ಬೆಳೆಯುವ ವಿಧಾನ ಮತ್ತು ಪೋಷಕಾಂಶಗಳ ಕುರಿತು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

**ಬೇಡಿಕೆಗಿಂತ ಕಡಿಮೆ ಉತ್ಪಾದನೆ**

ಅಖಿಲ ಭಾರತ ಕಾಳುಮೆಣಸು ಬೆಳೆಗಾರರ ಸಂಘದ ವಿಜ್ಞಾನಿ ವೇಣುಗೋಪಾಲ್ ಅವರು, ಸಮಗ್ರ ಕಾಳುಮೆಣಸು ಬೆಳೆಯುವ ಮಾಹಿತಿ ಮತ್ತು ಸಂರಕ್ಷಣಾ ವಿಧಾನದ ಕುರಿತು ವಿಷಯ ಮಂಡಿಸಿದರು. ಕಾಳುಮೆಣಸಿಗೆ ಜಾಗತಿಕವಾಗಿ ಭಾರಿ ಬೇಡಿಕೆ ಇದೆ. ಈಗ 5 ಲಕ್ಷ ಟನ್ ಮಾತ್ರ ಉತ್ಪಾದನೆಯಾಗುತ್ತಿದೆ. ಇದರಲ್ಲಿ 1.05 ಲಕ್ಷ ಟನ್ ಮಾತ್ರ ಭಾರತದಲ್ಲಿ ಉತ್ಪಾದನೆಯಾಗುತ್ತಿದೆ. 89 ಸಾವಿರ ಟನ್ ಕರ್ನಾಟಕದಲ್ಲಿ ಉತ್ಪಾದನೆಯಾಗುತ್ತಿದೆ. 100 ಕೆ.ಜಿ. ಕಾಳುಮೆಣಸು ಕೊಲು ಮಾಡಿದರೆ ಗರಿಷ್ಠ ಶೇ 37ವರೆಗೆ ಒಣ ಕಾಳುಮೆಣಸು ಪಡೆಯಬಹುದು. ಕಾಳುಮೆಣಸು ಕೃಷಿಯ ವ್ಯವಸ್ಥಿತ ನಿರ್ವಹಣೆ ದೊಡ್ಡ ಲಾಭವನ್ನು ತರುತ್ತದೆ ಎಂದರು.

**ಗಿಡಗಳ ಪ್ರದರ್ಶನ, ಮಾರಾಟ**

ವೈವಿಧ್ಯಮಯ ಮಾವಿನ ಗಿಡಗಳು, ಹಲಸಿನ ಗಿಡಗಳು, ಶ್ರೀಗಂಧ, ರಕ್ತಚಂದನದ ಗಿಡಗಳು, ರಾಮ ಫಲ, ಸೀತಾಫಲ, ಚಿಕ್ಕು, ದಾಳಿಂಬೆ, ಜಾಯಿಕಾಯಿ, ಮ್ಯಾಂಗೋಸ್ಟಿನ್, ಕಿತ್ತಳೆ, ಲಿಂಬೆ, ನೇರಳೆ, ಮೂಸುಂಬಿ ಮೊದಲಾದ ಗಿಡಗಳ ಪ್ರದರ್ಶನ ಹಾಗೂ ಮಾರಾಟ ನಡೆಯಿತು. ಹಲವು ಬಗೆಯ ಗೊಬ್ಬರ ತಯಾರಿಕಾ ಸಂಸ್ಥೆಗಳ ಮಳಿಗೆ, ಕಾಳುಮೆಣಸು ಕೀಳಲು ಏರುವ ಏಣಿ, ಕಾಳುಮೆಣಸು ಬಿಡಿಸುವ ಯಂತ್ರ, ಶುದ್ಧೀಕರಿಸುವ ಯಂತ್ರಗಳ ಮಳಿಗೆ, ಆಯುರ್ವೇದ ಮಳಿಗೆ, ಕಾಳುಮೆಣಸು ಬೆಳೆಯುವ ಸಿಮೆಂಟ್ ಕಂಬಗಳ ಮಳಿಗೆ, ಮಂಗಗಳ ಹಾವಳಿ ತಡೆಗಟ್ಟುವ ಸಲಕರಣೆಯ ಮಳಿಗೆ, ಹನಿನೀರಾವರಿ ವ್ಯವಸ್ಥೆಯ ಮಳಿಗೆ, ಬ್ಯಾಂಕ್‌ಗಳ ಮಳಿಗೆ, ಸಾವಯವ ಐಸ್‌ಕ್ರೀಂ ಮಳಿಗೆಗಳಿದ್ದವು.

# ಕೈಗಾರಿಕಾ ಪ್ರದೇಶ: ಮೂಲ ಸೌಕರ್ಯ ಅಭಿವೃದ್ಧಿಗೆ ಕ್ರಮವಹಿಸಿ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

**ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ**

ಜಿಲ್ಲೆಯ ಕೈಗಾರಿಕಾ ಪ್ರದೇಶ, ಕೈಗಾರಿಕಾ ಘಟಕಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಗಮನಹರಿಸಬೇಕು ಎಂದು ಡಿಸಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲಿ ಸೋಮವಾರ ಜಿಲ್ಲಾಮಟ್ಟದ ಏಕಗವಾಕ್ಷಿ ಸಮಿತಿ, ಕೈಗಾರಿಕಾ ಸ್ಪಂದನಾ, ಪಿಎಂಇಜಿಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಅಕ್ಷಯ ಫುಡ್ ಪಾರ್ಕ್, ಕೆಳಗೋಟೆ ಕೈಗಾರಿಕಾ ಪ್ರದೇಶ, ಚಳ್ಳಕೆರೆ ಕೈಗಾರಿಕಾ ವಸಾಹತು, ಮೇಟಿಕುರ್ಕೆ ಕೈಗಾರಿಕಾ ಪ್ರದೇಶಕ್ಕೆ ನೀರು, ವಿದ್ಯುತ್, ರಸ್ತೆ ಸೇರಿದಂತೆ ಇನ್ನಿತರೆ ಅಗತ್ಯ ಮೂಲ ಸೌಕರ್ಯಗಳ ಕಲ್ಪಿಸಬೇಕು ಎಂದು ತಿಳಿಸಿದರು. ಹಿರಿಯೂರು ತಾಲ್ಲೂಕಿನ ಹುಚ್ಚವ್ವನಹಳ್ಳಿ ಗ್ರಾಮದಲ್ಲಿ ಸ್ಥಾಪಿತವಾಗಿರುವ ಅಕ್ಷಯ ಫುಡ್ ಪಾರ್ಕ್‌ಗೆ ಹೋಗಲು ಸಂಪರ್ಕ ರಸ್ತೆ ಇಲ್ಲದೇ ತುಂಬಾ ಸಮಸ್ಯೆಯಾಗುತ್ತಿದೆ ಎಂದು ಉದ್ದಿಮೆದಾರರು ಸಭೆಯ ಗಮನಕ್ಕೆ ತಂದರು. ಅಕ್ಷಯ್ ಫುಡ್ ಪಾರ್ಕ್‌ನ ಸಂಪರ್ಕ ರಸ್ತೆಯನ್ನು ಕೈಗೊಳ್ಳಲು ಹಿರಿಯೂರು ನಗರಸಭೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ, ಸಂಚಾರಕ್ಕೆ ಸಮಸ್ಯೆಯಾಗದಂತೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಇಂಡಸ್ಟ್ರೀಯಲ್ ಕಾರಿಡಾರ್ ಯೋಜನೆಗೆ ಭೂ ಸ್ವಾಧೀನವಾಗಿರುವ ಮೇಟಿಕುರ್ಕೆ ಮತ್ತು ಕರಿಓಬನಹಳ್ಳಿ ಗ್ರಾಮದಲ್ಲಿ ಭೂಸ್ವಾಧೀನ ಜಮೀನು ಪೈಕಿ ಕೆಐಎಡಿಬಿ ಕಾಯ್ದೆ ಕಲಂ 28 (8) ರಡಿ ಅಭಿವೃದ್ಧಿ ಶಾಖೆಗೆ ಈಗಾಗಲೇ ಹಸ್ತಾಂತರವಾಗಿರುವ 920-06 ಎಕರೆ ಜಮೀನು, ಹಸ್ತಾಂತರಿಸಲು ಬಾಕಿ ಇರುವ 236-06 ಎಕರೆ ಜಮೀನು ಹಸ್ತಾಂತರಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಪ್ರಧಾನಮಂತ್ರಿಗಳ ಉದ್ಯೋಗ ಸೃಜನೆ ಯೋಜನೆಗಳ ಜಿಲ್ಲಾಮಟ್ಟದ ಕಾರ್ಯಕಾರಿ ಸಮಿತಿ ಸಭೆ:** ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆನಂದ್ ಮಾತನಾಡಿ, 2025-26ನೇ ಸಾಲಿಗೆ ಪ್ರಧಾನಮಂತ್ರಿಗಳ ಉದ್ಯೋಗ ಸೃಜನೆ ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾ ಕೈಗಾರಿಕಾ ಕೇಂದ್ರ, ಕೆವಿಐಬಿ ಮತ್ತು ಕೆವಿಐಸಿ ಬೆಂಗಳೂರು ಅವರಿಗೆ ಆನ್‌ಲೈನ್‌ನಲ್ಲಿ ಅರ್ಜಿ ಹಾಕಲು ಕೇಂದ್ರ ಸರ್ಕಾರದಿಂದ ಅವಕಾಶ ಕಲ್ಪಿಸಿರುತ್ತಾರೆ. ಆದರೆ ಪ್ರಸ್ತುತ ಸಾಲಿಗೆ ಯಾವುದೇ ಗುರಿ ನಿಗದಿಪಡಿಸದೇ ಇರುವುದರಿಂದ ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಗುರಿ ಬಂದ ನಂತರ ಬ್ಯಾಂಕಿಗೆ ಶಿಫಾರಸ್ಸು ಮಾಡಲಾಗುವುದು ಎಂದು ಸಭೆಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಪಿಎಂ ವಿಶ್ವಕರ್ಮ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಲಾಯಿತು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್. ಆಕಾಶ್, ಜಿಲ್ಲಾ ಕೈಗಾರಿಕಾ ಕೇಂದ್ರದ ಉಪನಿರ್ದೇಶಕ ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# 2 ಕೋಟಿಗೂ ಹೆಚ್ಚಿನ ಅನುದಾನ ದುರುಪಯೋಗ ನೋಡಲ್ ಅಧಿಕಾರಿ ವಿರುದ್ಧ ಕೇಸ್ ದಾಖಲು

• ಉದಯವಾಹಿನಿ, ಹಾಸನ



ಪಿಎಂಎವೈ ವಸತಿ ಯೋಜನೆಯ 2 ಕೋಟಿ ರೂ.ಗೂ ಹೆಚ್ಚಿನ ಅನುದಾನವನ್ನು ಜಿಲ್ಲಾ ವಸತಿ ನೋಡಲ್ ಅಧಿಕಾರಿ ದುರುಪಯೋಗಪಡಿಸಿಕೊಂಡ ಆರೋಪ ಸಕಲೇಶಪುರದಲ್ಲಿ ಕೇಳಿಬಂದಿದೆ. ಸಕಲೇಶಪುರ ಜಿಲ್ಲಾ ಪಂಚಾಯಿತಿಯ ವಸತಿ ನೋಡಲ್ ಅಧಿಕಾರಿಯಾ ಕಾರ್ಯನಿರ್ವಹಿಸುತ್ತಿರುವ ಕೆ.ಎಂ. ರಾಜೇಶ್ ವಿರುದ್ಧ ಈ ಆರೋಪ ಕೇಳಿಬಂದಿದೆ. 2022ರವರೆಗೆ ಸಕಲೇಶಪುರ ತಾಲ್ಲೂಕು ಪಂಚಾಯಿತಿಯಲ್ಲಿ ವಸತಿ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ರಾಜೇಶ್ ಬಳಿಕ ಜಿಲ್ಲಾ ವಸತಿ ನೋಡಲ್ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಈ ಅವಧಿಯಲ್ಲಿ ಅಕ್ರಮ ಎಸಗಿದ್ದಾರೆ ಎನ್ನಲಾಗಿದೆ.


ಯೋಜನೆಗಳ ಫಲಾನುಭವಿಗಳು ಮನೆ ನಿರ್ಮಾಣ ಮಾಡಿಕೊಂಡ ಬಗ್ಗೆ ಪಿಡಿಓ ತೆಗೆದ ಫೋಟೋವನ್ನು ತಾಲ್ಲೂಕು ಪಂಚಾಯಿತಿ ವಸತಿ ನೋಡಲ್ ಅಧಿಕಾರಿ ಪರಿಶೀಲಿಸಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಲಿಖಿತವಾಗಿ ಗಮನಕ್ಕೆ ತರಬೇಕು. ನಂತರ ಜಿಲ್ಲಾ ಪಂಚಾಯಿತಿ ಲಾಗಿನ್‌ಗೆ ಕಳುಹಿಸಬೇಕು.

ಅದೇ ರೀತಿ ತಾಲ್ಲೂಕು ಪಂಚಾಯಿತಿ ಲಾಗಿನ್ ನಿರ್ವಹಣೆಯನ್ನು ಲಿಖಿತವಾಗಿ ತರುವುದು ಮತ್ತು ನಿರ್ವಹಣೆ ಮಾಡುವುದು ವಸತಿ ನೋಡಲ್ ಅಧಿಕಾರಿಯ ಪ್ರಮುಖ ಕರ್ತವ್ಯವಾಗಿದೆ.

ಈ ಯಾವುದನ್ನು ಮೇಲಾಧಿಕಾರಿಗಳ ಗಮನಕ್ಕೆ ತರದೆ ದುರುದ್ದೇಶ ಪೂರ್ವಕವಾಗಿ ಎರಡು ಲಾಗಿನ್‌ಗಳನ್ನು ದುರ್ಬಳಕೆ ಮಾಡಿಕೊಂಡು ಸರ್ಕಾರದ ಹಣ ದುರುಪಯೋಗ ಪಡಿಸಿಕೊಂಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಯೋಜನೆಯ ಫಲಾನುಭವಿಗಳಿಗೆ ಬಿಡುಗಡೆಯಾದ ಅನುದಾನದಲ್ಲಿ ಸಕಲೇಶಪುರ ತಾಲ್ಲೂಕು ಪಂಚಾಯಿತಿಯ ವಸತಿ ಲಾಗಿನ್, ಜಿಲ್ಲಾ ಪಂಚಾಯಿತಿ ಯೋಜನಾಧಿಕಾರಿ ಲಾಗಿನ್ ದುರ್ಬಳಕೆ ಮಾಡಿಕೊಳ್ಳಲಾಗಿದೆ. ಈ ಕಾರಣದಿಂದ ಯಾವುದೇ ಮಾಹಿತಿಗಳು ಮೇಲಾಧಿಕಾರಿಗಳಿಗೆ ಲಭ್ಯವಾಗದ ಕಾರಣ ಲಾಗಿನ್‌ಗಳಲ್ಲಿ ನಡೆಯುತ್ತಿರುವ ಬದಲಾವಣೆಗಳು ಯಾರ ಗಮನಕ್ಕೆ ಬಂದಿರಲಿಲ್ಲ ಎನ್ನಲಾಗಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಸಕಲೇಶಪುರ ನಗರ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಗಾಂಜಾ ಸಾಗಾಟ: ಇಬ್ಬರ ಬಂಧನ

• ಉದಯವಾಹಿನಿ, ಮುಂಡಗೋಡ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಪಾಳಾ ಕ್ರಾಸ್ ಸನಿಹ ಬೈಕ್‌ನಲ್ಲಿ ಅಕ್ರಮವಾಗಿ ಗಾಂಜಾ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ, ಇಲ್ಲಿನ ಪೊಲೀಸರು ದಾಳಿ ನಡೆಸಿ, ಇಬ್ಬರು ವ್ಯಕ್ತಿಗಳನ್ನು ಬಂಧಿಸಿದ್ದಾರೆ. ಹಾನಗಲ್ ಪಟ್ಟಣದ ನವನಗರ ನಿವಾಸಿಗಳಾದ ಮುಜಾಫರ್ ಅಹ್ಮದ ಬ್ಯಾಡಗಿ ಹಾಗೂ ಪ್ರಶಾಂತ ಅಕ್ಕಿವಳಿ ಬಂಧಿತ ಆರೋಪಿಗಳಾಗಿದ್ದಾರೆ. ಆರೋಪಿತರಿಂದ 900ಗ್ರಾಂ ಗಾಂಜಾ ಹಾಗೂ ಕೃತ್ಯಕ್ಕೆ ಬಳಸಿದ ಬೈಕ್ ವಶಪಡಿಸಿಕೊಳ್ಳಲಾಗಿದೆ.

ಹಾನಗಲ್ ಪಟ್ಟಣದ ಇಮ್ರಾನ್ ಬ್ಯಾಡಗಿ ಎಂಬಾತನಿಂದ ಅಕ್ರಮವಾಗಿ ಗಾಂಜಾ ಪಡೆದುಕೊಂಡು, ಹುಬ್ಬಳ್ಳಿ ಕಡೆ ಮಾರಾಟ ಮಾರಲು, ತಾಲ್ಲೂಕಿನ ಪಾಳಾ ಕ್ರಾಸ್ ಮಾರ್ಗವಾಗಿ ಬೈಕ್ ಮೇಲೆ ತೆರಳುತ್ತಿದ್ದಾಗ ದಾಳಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್., ಹೆಚ್ಚುವರಿ ಎಸ್ಪಿ ಕೃಷ್ಣಮೂರ್ತಿ ಜಿ., ಹೆಚ್ಚುವರಿ ಎಸ್ಪಿ ಜಗದೀಶ ನಾಯ್ಕ, ಶಿರಸಿ ಡಿವೈಎಸ್ಪಿ ಗೀತಾ ಪಾಟೀಲ ಮಾರ್ಗದರ್ಶನದಲ್ಲಿ ಸಿಪಿಐ ರಂಗನಾಥ ನೀಲಮ್ಮನವರ, ಪಿಎಸ್ಐ ಪರಶುರಾಮ ಮಿರ್ಜಗಿ, ಸಿಬ್ಬಂದಿಗಳಾದ ಮಂಜಪ್ಪ ಚಿಂಚಲಿ, ಕೊಟೇಶ ನಾಗರವಳ್ಳಿ, ಅಣ್ಣಪ್ಪ ಬುಡಿಗೇರ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಶಿಥಲಗೊಂಡ ಸರ್ಕಾರಿ ಶಾಲಾ ಕಟ್ಟಡ ದುರಸ್ಥಿ ಯಾವಾಗ?

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

**ಹೊಸ ಕಟ್ಟಡ ನಿರ್ಮಾಣಕ್ಕೆ ಒತ್ತಾಯ**



ತಾಲ್ಲೂಕಿನ ಗುರುಮಠಕಲ್ ಮತಕ್ಷೇತ್ರದ ವ್ಯಾಪ್ತಿಗೆ ಬರುವ ನಾಗಲಾಪೂರ ಗ್ರಾಮದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯದಿಂದ ಶಾಲೆ ಕೋಣೆಗಳು ಸಂಪೂರ್ಣ ಶಿಥಲಗೊಂಡು ಮೇಲಛಾವಣಿ ರಾಡು ತೇಲಿ ಬೀಳುವ ಹಂತದಲ್ಲಿದೆ ಶಾಲೆಯ ಆವರಣದಲ್ಲಿ ವಿಷಜಂತುಗಳ ವಿದ್ಯಾರ್ಥಿಗಳು ಭಯದ ವಾತವರಣದಲ್ಲಿ ಕುಳಿತು ಪಾಠ ಕೇಳುವ ದುಸ್ಥಿತಿ ನಿರ್ಮಾಣವಾಗಿದೆ. ಖುದ್ದು ಸ್ಥಳಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿ ಅವಲೋಕಿಸಿದ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ಶಿಕ್ಷಣ ಇಲಾಖೆ, ಜನಪ್ರತಿನಿಧಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಅತಿ ಶೀಘ್ರದಲ್ಲೆ ಶೀಥಲಗೊಂಡ ಕೊಟ್ಟಡಿಯನ್ನು ನೆಲ ಸಮಗೊಳಿಸಿ ಹೊಸ ಕಟ್ಟಡ ಶಾಲೆ ಕೋಣೆಗಳನ್ನು ನಿರ್ಮಾಣ ಮಾಡಿ, ಮಕ್ಕಳಿಗೆ ಅನುಕೂಲಮಾಡಿಕೊಡಬೇಕು ಜಿಲ್ಲಾಡಳಿತ ಮುಂದಾಗಬೇಕು ಉಮೇಶ್ ಕಿಡಿ ಕಾರಿದ್ದಾರೆ. ಈ ಸಂದರ್ಭದಲ್ಲಿ ಎಸ್.ಡಿ.ಎಮ್. ಸಿ. ಅಧ್ಯಕ್ಷ ಮತ್ತು ಸದಸ್ಯರು, ವಿದ್ಯಾರ್ಥಿಗಳ ಪೋಷಕರು ಗ್ರಾಮಸ್ಥರು ಉಪಸ್ಥಿತರಿದ್ದರು

> ಪೋಷಕರು, ಎಸ್ ಡಿ ಎಮ್ ಸಿ ಅಧ್ಯಕ್ಷರು ಗ್ರಾಮದ ಮುಖಂಡರು ಖುದ್ದು ಮನವಿ ಸಲ್ಲಿಸಿದ್ದರು. ಸಹ ಶಾಲೆಗೆ ಬಾರದೇ ಅಧಿಕಾರಿಗಳು ಕುಂಟು ನೆಪ ಹೇಳಿ ಜಾರಿಕೊಳ್ಳುತ್ತಿದ್ದಾರೆನ್ನಲಾಗ್ತಿದೆ. ಅಧಿಕಾರಿಗಳಿಗೆ ಮಿಟಿಂಗ್ ಮಾಡುವುದೊಂದೆ ಸಾಧನವಾಗಿದೆ ಎಂದು ಆಕ್ರೋಶ ಹೊರ ಹಾಕಿದ್ದರು.
> -ಉಮೇಶ .ಕೆ. ಮುದ್ನಾಳ ಸಾಮಾಜಿಕ ಹೋರಾಟಗಾರ

# ಸಂಕಷ್ಟದಲ್ಲಿರುವವರಿಗೆ ನೆರವಾಗಿ: ಯತ್ನಾಳ

## ಬಾಪೂಜಿ ಮಲ್ಟಿಸ್ಟೇಟ್ ಬ್ಯಾಂಕ್ ಉದ್ಘಾಟನೆ ಕಾರ್ಯಕ್ರಮ

• ಉದಯವಾಹಿನಿ, ಬಾಗಲಕೋಟೆ:

ಧೈರ್ಯ ಮಾಡಿ ಸಂಸ್ಥೆ ಕಟ್ಟದಿದ್ದರೆ ಯಾರಿಗೂ ಸಹಾಯ ಮಾಡಲು ಆಗುವುದಿಲ್ಲ. ಅಂತಹ ಧೈರ್ಯವನ್ನು ಮಾಜಿ ಸಚಿವ ಎಸ್.ಆರ್. ಪಾಟೀಲ ಮಾಡಿದ್ದಾರೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು. ನವನಗರದಲ್ಲಿ ಬಹುರಾಜ್ಯ ಬ್ಯಾಂಕ್ ಆಗಿ ಮೇಲ್ದರ್ಜೆಗೇರಿರುವ ಮಾಜಿ ಸಚಿವ ಎಸ್. ಆರ್.ಪಾಟೀಲ ನೇತೃತ್ವದ ಬಾಪೂಜಿ ಮಲ್ಟಿಸ್ಟೇಟ್ ಬ್ಯಾಂಕ್ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯನ ಜೀವನದಲ್ಲಿ ಏರಿಳಿತ ಇದ್ದೇ ಇರುತ್ತದೆ. ನಿಯತ್ತು ಚೆನ್ನಾಗಿರುವವರನ್ನು ಎತ್ತಿ ಹಿಡಿಯಬೇಕು. ಸೌಹಾರ್ದ, ಸಹಕಾರ ಬ್ಯಾಂಕುಗಳು ಸಹಾಯಕ್ಕೆ ಬರುತ್ತವೆಯೇ ಹೊರತು, ರಾಷ್ಟ್ರೀಯ ಬ್ಯಾಂಕುಗಳು ಬರುವುದಿಲ್ಲ ಎಂದರು. ಸಕ್ಕರೆ ಸೇರಿದಂತೆ ಕೃಷಿ ಆಧಾರಿತ ಉದ್ಯಮಗಳು ಸದೃಢಗೊಂಡಿದ್ದೇ ಸಹಕಾರ ಬ್ಯಾಂಕ್‌ನಿಂದ. ರಾಷ್ಟ್ರೀಕೃತ ಬ್ಯಾಂಕ್‌ನಿಂದ ಸಾಧ್ಯವಾಗದ ಕೆಲಸಗಳನ್ನು ಸೌಹಾರ್ದ ಸಹಕಾರಿ ಬ್ಯಾಂಕ್‌ಗಳು ಮಾಡಿ ತೋರಿಸಿವೆ' ಎಂದರು.

'ಸಕ್ಕರೆ ಕಾರ್ಖಾನೆಗಳು ಆರ್ಥಿಕವಾಗಿ ಸದೃಢವಾದರೆ ಹತ್ತಾರು ಸಾವಿರ ರೈತ ಕುಟುಂಬಗಳು ಆರ್ಥಿಕವಾಗಿ ಸಬಲವಾಗುತ್ತವೆ. ಅದಕ್ಕಾಗಿ ಅವುಗಳಿಗೆ ಸಹಕಾರ ಬ್ಯಾಂಕ್‌ಗಳಿಂದ ಸಾಲ ನೀಡಲಾಗುತ್ತದೆ' ಎಂದು ಹೇಳಿದರು. ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ ಮಾತನಾಡಿ, ಸಕ್ಕರೆ ಕಾರ್ಖಾನೆಗಳು ಯಶಸ್ವಿಯಾಗಿ ಮುನ್ನಡೆಯುತ್ತಿದ್ದರೆ ಅದಕ್ಕೆ ಸಹಕಾರ ಬ್ಯಾಂಕ್‌ಗಳು ಕಾರಣ. ನಮ್ಮ ಬ್ಯಾಂಕ್‌ಗಳಿಂದ ಮಾತ್ರವೇ ಸಾಲ ಲಭಿಸುತ್ತದೆ ಎಂದರು.



ಉದಯವಾಹಿನಿ ಚಿತ್ರ

> ಮಾಜಿ ಸಚಿವ ಎಸ್.ಆರ್.ಪಾಟೀಲ ಸಹಕಾರ ಸಂಸ್ಥೆಗಳನ್ನು ಯಶಸ್ವಿಯಾಗಿ ನಡೆಸುವುದಲ್ಲದೇ ಗ್ರಾಮೀಣ ಭಾಗದಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸಿದ್ದಾರೆ. ಅವರ ಶ್ರಮದಿಂದಾಗಿ ಈ ಭಾಗದ ಸಾಕಷ್ಟು ಜನರಿಗೆ ಉದ್ಯೋಗ ಸಿಕ್ಕಿದೆ.
> - ಎಚ್.ವೈ.ಮೇಟಿ, ಶಾಸಕ

> ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಸಾಲ ಕೇಳಿದರೆ ಲೋಡ್‌ಗಟ್ಟಲೇ ದಾಖಲೆಗಳನ್ನು ಕೇಳುತ್ತಾರೆ. ಸಾಮಾನ್ಯ ಜನರಿಗೆ ಸುಲಭದಲ್ಲಿ ಸಾಲ ನೀಡಿ ನೆರವಾಗುತ್ತ ಬಂದಿರುವುದು ಸಹಕಾರಿ ಬ್ಯಾಂಕ್‌ಗಳು ಮಾತ್ರ ಎಂದರು. ಮೆಡಿಕಲ್ ಕಾಲೇಜು ಆರಂಭ ಮಾಡುವಾಗಲೂ ಸಹ ಬೆಳಗಾವಿ, ಬಾಗಲಕೋಟೆ ಡಿಸಿಸಿ ಬ್ಯಾಂಕ್ ನೆರವಾಗಿದ್ದವು. ಬೀಳಗಿ ಸಕ್ಕರೆ ಕಾರ್ಖಾನೆ ರೈತರ ಬಾಕಿ ಪಾವತಿಸುವಾಗ ಯತ್ನಾಳರು ತಮ್ಮ ಬ್ಯಾಂಕ್ ಮೂಲಕ ಸಾಲ ನೀಡಿದ್ದರು. ಬಾಪೂಜಿ ಬ್ಯಾಂಕ್ ಬೇರೆ ರಾಜ್ಯಗಳಲ್ಲಿಯೂ ಕಾರ್ಯಾರಂಭ ಮಾಡಲಿದೆ.
> - ಎಸ್.ಆರ್. ಪಾಟೀಲ, ಬಾಪೂಜಿ ಮಲ್ಟಿಸ್ಟೇಟ್ ಬ್ಯಾಂಕ್ ಅಧ್ಯಕ್ಷ

**ವಧು-ವರರ ಕೇಂದ್ರಗಳಾದ ಬ್ಯಾಂಕ್**

ನಮ್ಮ ಮಗಗ ಕನ್ಯಾ ಸಿಗ್ತಿಲ್ಲ ನಿಮ್ಮ ಬ್ಯಾಂಕ್‌ನಾಗ ನೌಕರಿ ಕೊಡ್ರಿ, ಅಂಥ ದಿನಾ ಹತ್ತಾರು ಜನ ಬರ್ತಾರ. ಸಹಕಾರ ಬ್ಯಾಂಕ್‌ಗಳು ಒಂದು ಅರ್ಥದಲ್ಲಿ ವಧು-ವರರ ಕೇಂದ್ರವಾಗಿವೆ. ಅನೇಕರ ಮದುವೆ ಮಾಡಿಸುವುದರ ಮೂಲಕ ಕಲ್ಯಾಣದ ಕೆಲಸ ಮಾಡಿವೆ. ಇದು ವಾಸ್ತವವೂ ಹೌದು ಎಂದು ಶಾಸಕ ಯತ್ನಾಳ ಎಂದು ಹೇಳಿದರು. ಮಗ ಬ್ಯಾಂಕಿನಲ್ಲಿ ಮ್ಯಾನೇಜರ್ ಇದ್ದಾನೆ ಎಂದರೆ ಕನ್ಯಾ ಸಿಗುತ್ತದೆ. ಅದಕ್ಕಾಗಿ ಉದ್ಯೋಗ ಕೊಡಿ ಎಂದು ಅನೇಕರು ಬರುತ್ತಾರೆ. ಕೊಟ್ಟ ಮೇಲೆ ಅವರ ಕಲ್ಯಾಣವೂ ಆಗಿದೆ. ಇದು ಸಹಕಾರಿ ಬ್ಯಾಂಕ್‌ಗಳ ಕೊಡುಗೆಗಳಲ್ಲಿ ಒಂದು ಎಂದರು.

# ಮಿನಿ ನ್ಯೂಸ್

## ಸ್ವಾಮೀಜಿಯ ವಾಟ್ಸ್‌ಆ್ಯಪ್ ಹ್ಯಾಕ್ ಮಾಡಿ ಭಕ್ತರಿಗೆ ವಂಚನೆ

• ಉದಯವಾಹಿನಿ, ಬೀದರ್

ಗೋರ್ಟಾ-ಬೇಮಳಖೇಡ-ನೌಬಾದ್ ಜ್ಞಾನ ಶಿವಯೋಗಾಶ್ರಮದ ಪೀಠಾಧಿಪತಿ ರಾಜಶೇಖರ ಶಿವಾಚಾರ್ಯ ಸ್ವಾಮೀಜಿಯ ವಾಟ್ಸ್ ಆ್ಯಪ್ ಹ್ಯಾಕ್ ಮಾಡಿ, ಭಕ್ತರ ಸಂಖ್ಯೆಗಳಿಗೆ ಸಂದೇಶ ಕಳುಹಿಸಿ ಹಣ ವಂಚಿಸಿದ್ದಾರೆ. ವಂಚಕರು ಸ್ವಾಮೀಜಿ ಅವರ ವ್ಯಾಟ್ಸಾಪ್ ಸಂಖ್ಯೆಯಿಂದ ಯುಪಿಐ ಕೆಲಸ ಮಾಡುತ್ತಿಲ್ಲ. ತುರ್ತಾಗಿ 60 ಸಾವಿರ ಬೇಕಿದೆ. ಮೊಬೈಲ್ ಸಂಖ್ಯೆ 9905530397ಗೆ ಫೋನ್ ಪೇ ಅಥವಾ ಗೂಗಲ್ ಪೇ ಮಾಡಿ. ಎರಡು ಗಂಟೆಗಳಲ್ಲಿ ಮರಳಿಸಲಾಗುವುದು ಎಂದು ಸಂದೇಶ ಕಳುಹಿಸಿದ್ದರು. ಅದನ್ನು ನಂಬಿ ಭಕ್ತರು ವಂಚನೆಗೊಳಗಾಗಿದ್ದಾರೆ. ಮಹಾರಾಷ್ಟ್ರದ ಉದಗೀರ್‌ನ ಆಶಾ ಚಂದ್ರಕಾಂತ ಚಿಂತಾಮಣಿ 50 ಸಾವಿರ, ಶ್ರೀಶೈಲದ ರಮೇಶ ವಾರದ 30 ಸಾವಿರ, ರೇವಣಸಿದ್ದಪ್ಪ ತೇಗಂಪುರ 25 ಸಾವಿರ ಕಳೆದುಕೊಂಡಿದ್ದಾರೆ. ಈ ಸಂಬಂಧ ಬೀದರ್ ಸೈಬರ್ ಕ್ರೈಂ ಠಾಣೆಗೆ ದೂರು ಕೊಟ್ಟಿದ್ದಾರೆ. ಭಕ್ತರು ಸುಳ್ಳು ಸಂದೇಶಗಳ ಬಗ್ಗೆ ಎಚ್ಚರ ವಹಿಸಬೇಕು ಎಂದು ರಾಜಶೇಖರ ಶಿವಾಚಾರ್ಯ ಸ್ವಾಮೀಜಿ ಮನವಿ ಮಾಡಿದ್ದಾರೆ.

## ಜಿಟಿ ಜಿಟಿ ಮಳೆ; ಹತ್ತಿ ಬೆಳೆಗೆ ಸಂಕಷ್ಟ ಆತಂಕದಲ್ಲಿ ಬೆಳೆಗಾರರು

• ಉದಯವಾಹಿನಿ, ಶಹಾಪುರ

ತಾಲ್ಲೂಕಿನಲ್ಲಿ ಮೂರು ದಿನದಿಂದ ಮಧ್ಯಾಹ್ನವಾಗುತ್ತಿದ್ದಂತೆ ಆರಂಭ ಆಗುವ ಮಳೆ ಒಮ್ಮೆ ಜೋರಾಗಿ ಸುರಿದು ನಂತರ ಜಿಟಿ ಜಿಟಿ ಮಳೆ ಸುರಿಯಲು ಆರಂಭಿಸಿದೆ. ಇದರಿಂದ ತಗ್ಗು ಪ್ರದೇಶ, ಜೇಡಿ ಮಣ್ಣಿನ ಭೂಮಿಯಲ್ಲಿ ಬಿತ್ತನೆ ಮಾಡಿರುವ ಹತ್ತಿ ಬೆಳೆಗೆ ತೇವಾಂಶ ಹೆಚ್ಚಾಗಿ ಬೆಳೆ ಮಾಡುವ ಆತಂಕವನ್ನು ಹತ್ತಿಬೆಳೆಗಾರರು ವ್ಯಕ್ತಪಡಿಸಿದ್ದಾರೆ. ಈಗಾಗಲೇ ಜಮೀನುಗಳಲ್ಲಿ ಹೆಚ್ಚಿನ ತೇವಾಂಶವಿದೆ. ಹತ್ತಿ ಬೆಳೆಯು ಹುಲುಸಾಗಿ ಬೆಳೆದು ಕೆಲ ಕಡೆ ಹೂ, ಮೊಗ್ಗು ಬಿಡಲಾರಂಭಿಸಿವೆ. ಈಗಾಗಲೇ ನಾವು ಒಂದು ಬಾರಿ ರಸಗೊಬ್ಬರವನ್ನು ಹಾಕಿದ್ದೇವೆ. ಬೆಳೆಯು ತುಂಬಾ ಹುಲುಸಾಗಿ ಬೆಳೆದು ನಳ ನಳಿಸುತ್ತಲಿವೆ. ಆದರೆ ಈಚೆಗೆ ಸುರಿಯುತ್ತಿರುವ ಮಳೆಗೆ ಬೆಳೆ ಹಾನಿಯಾಗುವ ಭೀತಿ ಎದುರಾಗಿದೆ ಎನ್ನುತ್ತಾರೆ ರೈತ ಮಾಳಪ್ಪ. ತಾಲ್ಲೂಕಿನಲ್ಲಿ ಹೆಚ್ಚಿನ ಮಳೆಯಾಗಿದ್ದು ತಗ್ಗು ಪ್ರದೇಶದ ಜಮೀನುಗಳಲ್ಲಿ ನೀರು ಸಂಗ್ರಹವಾಗಿದೆ. ಅಲ್ಲದೆ ತಣ್ಣನೆಯ ಗಾಳಿ ಮತ್ತು ಆಗಾಗಾ ಸುರಿಯುತ್ತಿರುವ ಜಿಟಿ ಜಿಟಿ ಮಳೆಯಿಂದ ವಾತಾವರಣವು ತಂಪಾಗಿದ್ದರಿಂದ ಚಿಕ್ಕ ಮಕ್ಕಳಿಗೆ ನೆಗಡಿ, ಕೆಮ್ಮು, ಜ್ವರ ಕಾಣಿಸಿಕೊಂಡಿವೆ ಎನ್ನುತ್ತಾರೆ ಮಹಿಳೆ ಗೌರಮ್ಮ

## ಸೇನಾ ಭರ್ತಿ: ಮೂರನೇ ದಿನ 738 ಅಭ್ಯರ್ಥಿಗಳು ಭಾಗಿ

• ಉದಯವಾಹಿನಿ, ರಾಯಚೂರು

ಇಲ್ಲಿಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕ್ರೀಡಾಂಗಣದಲ್ಲಿ ನಡೆದ ಅಗ್ನಿಪಥ ಸೇನಾ ಭರ್ತಿ ರ್‍ಯಾಲಿಯಲ್ಲಿ ಬೀದರ್ ಜಿಲ್ಲೆಯ 107, ಬೆಳಗಾವಿ ಜಿಲ್ಲೆಯ 753 ಅಭ್ಯರ್ಥಿಗಳ ಪೈಕಿ ಎರಡೂ ಜಿಲ್ಲೆಗಳ ಒಟ್ಟು 738 ಅಭ್ಯರ್ಥಿಗಳು ಹಾಜರಾದರು. 451 ಅಭ್ಯರ್ಥಿಗಳು 1600 ಮೀಟರ್ ಓಟದಲ್ಲಿ ಉತ್ತೀರ್ಣರಾಗಿ ಮುಂದಿನ ದೈಹಿಕ ಪರೀಕ್ಷೆಗೆ ಆಯ್ಕೆಯಾದರು ಎಂದು ಸೇನಾಧಿಕಾರಿ ಮನೋಜ್ ತಿಳಿಸಿದ್ದಾರೆ.

ಆಗಸ್ಟ್ 11ರಿಂದ 19ರ ವರೆಗೆ ನಿತ್ಯ ಬೆಳಗಾವಿ ಜಿಲ್ಲೆಯ 860 ಅಭ್ಯರ್ಥಿಗಳ ದೈಹಿಕ ಪರೀಕ್ಷೆ ನಡೆಯಲಿದೆ. ಆ. 20ರಂದು ರಾಯಚೂರು, ಬೆಳಗಾವಿ, 21, 22 ರಂದು ಎಲ್ಲಾ ಜಿಲ್ಲೆಗಳ ಅಭ್ಯರ್ಥಿಗಳ ದೈಹಿಕ ಪರೀಕ್ಷೆ ನಡೆಯಲಿದೆ. ಆ.23 ರಂದು ಕೇಂದ್ರೀಯ ವರ್ಗ, ಪ್ಯಾರಾ ಆಯ್ಕೆ, ಆ.24ರಂದು ವೈದ್ಯಕೀಯ ಪರೀಕ್ಷೆ ನಡೆಯಲಿದೆ. ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಸರಿಯಾದ ಸಮಯಕ್ಕೆ ಹಾಜರಿರಬೇಕು ಎಂದು ಸೇನಾ ಅಧಿಕಾರಿಗಳು ತಿಳಿಸಿದ್ದಾರೆ.

## ಗಿರೀಶ್ ಮಟ್ಟಣ್ಣನವರ್ ಮೇಲೆ ಎಫ್‌ಐಆರ್

• ಉದಯವಾಹಿನಿ, ಹುಬ್ಬಳ್ಳಿ

ಧರ್ಮಸ್ಥಳ ವಿಚಾರ ಮಾತನಾಡುವ ಭರದಲ್ಲಿ ಜೈನ ಧರ್ಮದ ವಿರುದ್ಧ ಅವಹೇಳನಕಾರಿಯಾಗಿ ಹೇಳಿಕೆ ನೀಡಿರುವ ಸಾಮಾಜಿಕ ಹೋರಾಟಗಾರ ಗಿರೀಶ್ ಮಟ್ಟಣ್ಣನವರ್ ಹಾಗೂ ಅವರ ಹೇಳಿಕೆ ಪ್ರಸಾರ ಮಾಡಿರುವ Kudla Rampage ಯೂಟ್ಯೂಬ್ ಚಾನೆಲ್‌ನ ಮಾಲೀಕನ ವಿರುದ್ಧ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಜೈನ್ ಧರ್ಮೀಯರು ಕ್ರೂರಿಗಳು, ಸ್ತ್ರೀಲೋಲರು, ಮತಾಂಧರು ಸೇರಿದಂತೆ ಇತ್ಯಾದಿ ಪದಗಳನ್ನು ಜೈನರ ವಿರುದ್ಧ ಬಳಕೆ ಮಾಡಿದ್ದಾರೆ. ಯಾವುದೇ ದಾಖಲೆ ಇಲ್ಲದೆ ಅದನ್ನು Kudla Rampage ಚಾನೆಲಿನಲ್ಲಿ ಅಪ್ಲೋಡ್ ಮಾಡಲಾಗಿದೆ. ಇದರಿಂದಾಗಿ ಜೈನ ಸಮಾಜಕ್ಕೆ ನೋವಾಗಿದೆ ಎಂದು ಹುಬ್ಬಳ್ಳಿ ಜೈನ್ ಸಮಾಜದ ಮುಖಂಡ ಅಜಿತ್, ಗ್ರಾಮೀಣ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಜೈನ ಧರ್ಮದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಇಬ್ಬರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಅಜಿತ್ ಆಗ್ರಹಿಸಿದ್ದರು. ಈ ದೂರನ್ನು ಗಂಭೀರವಾಗಿ ಪರಿಗಣಿಸಿದ ಪೊಲೀಸರು ಬಿಎನ್‌ಎಸ್ 2023 ಕಾಯ್ದೆಯ ಕಲಂ 299, 196(1)(ಎ) ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

## ಚಂದ್ರಂಪಳ್ಳಿ ಜಲಾಶಯ ವ್ಯಾಪ್ತಿಯಲ್ಲಿ ಮಳೆ; ನದಿ ಪಾತ್ರದ ಜನರಿಗೆ ಎಚ್ಚರಿಕೆ

• ಉದಯವಾಹಿನಿ, ಕಲಬುರಗಿ

ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಚಂದ್ರಂಪಳ್ಳಿ ಜಲಾಶಯದ ಜಲಾಯನ ಪ್ರದೇಶದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿರುವುದರಿಂದ ಜಲಾಶಯಕ್ಕೆ ಒಳಹರಿವು ಹೆಚ್ಚಿದ್ದು ಯಾವುದೇ ಕ್ಷಣದಲ್ಲಿ ಭರ್ತಿಯಾಗುವ ಹಂತದಲ್ಲಿದೆ. ನೀರು ಗರಿಷ್ಠ ಮಟ್ಟ ತುಂಬಿದ ನಂತರ ಒಳಹರಿವಿನ ನೀರನ್ನು ಅಣೆಕಟ್ಟಿನ ಕೋಡಿಯ ಗೇಟ್‌ಗಳ ಮುಖಾಂತರ ನದಿಗೆ ಹರಿಬಿಡಲಾಗುತ್ತಿದ್ದು, ನದಿ ಪಾತ್ರದ ಜನರು ಎಚ್ಚರಿಕೆಯಿಂದಿರಲು ಸೂಚನೆ ನೀಡಲಾಗಿದೆ.

ಚಂದ್ರಂಪಳ್ಳಿ ಅಣೆಕಟ್ಟಿನ ನದಿ ಪಾತ್ರದ ರೈತರು, ಸಾರ್ವಜನಿಕರು, ದನಕರುಗಳನ್ನು ಮೇಯಿಸುವವರು, ದನಕರುಗಳಿಗೆ ನೀರು ಕುಡಿಸುವುದಾಗಲಿ, ಹಳ್ಳಕ್ಕೆ ಇಳಿಯುವುದಾಗಲಿ, ಮೀನು ಹಿಡಿಯುವು ದು ಆದಾಗಲಿ, ಬಟ್ಟೆ ಒಗೆಯುವುದಾಗಲಿ, ಇನ್ನಿತರ ಯಾವುದೇ ಕಾರಣಕ್ಕೂ ನದಿಗೆ ಇಳಿಯಬಾರದು ಎಂದು ಕೆಎನ್‌ಎನ್‌ಎಲ್ ಚಂದ್ರಂಪಳ್ಳಿ ಯೋಜನೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ಚೇತನ ಕಳಸ್ಕರ್ ಅವರು ಮನವಿ ಮಾಡಿದ್ದಾರೆ. ನದಿ ಪಾತ್ರದಲ್ಲಿರುವ ಸಣ್ಣ ನೀರಾವರಿ ಇಲಾಖೆ, ಸಾರ್ವಜನಿಕರ ಆಸ್ತಿಗಳಿದ್ದಲ್ಲಿ ಮುಂಜಾಗ್ರತೆಯಾಗಿ ಸುರಕ್ಷಿತವಾಗಿಟ್ಟುಕೊಳ್ಳಬೇಕೆಂದು ಕೋರಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಕಣ್ಣಿನ ಪೊರೆ ರೋಗಿಗಳಿಗೆ ಧೂಮಪಾನವು ಕಣ್ಣುಗಳಿಗೆ ಮತ್ತಷ್ಟು ಹಾನಿಉಂಟು ಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ಹಣಕಾಸು ಲಾಭ ಒಂದಕ್ಕಿಂತ ಹೆಚ್ಚು ಮೂಲಗಳಿಂದ ಬರುತ್ತದೆ.

**ವೃಷಭ** ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯ ವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ.

**ಮಿಥುನ** ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಭಾವನಾತ್ಮಕ ತೊಂದರೆಗಳು ನಿಮ್ಮನ್ನು ಕಾಡುತ್ತವೆ. ನಿಮ್ಮ ಮೇಲಿನವರಿಗೆ ಇಂದು ನಿಮ್ಮ ಕೆಲಸದ ಗುಣಮಟ್ಟ ಒಳ್ಳೆಯ ಪ್ರಭಾವ ಬೀರಬಹುದು.

**ಕರ್ಕಾಟಕ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಬಿಕ್ಕಟ್ಟಿನ ಸಮಯದಲ್ಲಿ ಸಂಬಂಧಿಗಳೂ ಸಹಾಯ ಮಾಡುತ್ತಾರೆ. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು,

**ಸಿಂಹ** ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ, ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ಬುದ್ಧಿವಂತ ಹೂಡಿಕೆಗಳು ಮಾತ್ರ ಆದಾಯಗಳನ್ನು ನೀಡುತ್ತವೆ.

**ಕನ್ಯಾ** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ.

**ತುಲಾ** ಲಕ್ಕವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ, ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ, ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ.

**ವೃಶ್ಚಿಕ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ಪ್ರೋತ್ಸಾಹ ನೀಡುತ್ತಾರೆ.

**ಧನಸ್ಸು** ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ, ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.


**ಮಕರ** ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ, ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು. ಇತರರಿಂದ ಸಹಾಯ ಪಡೆಯಿರಿ ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ, ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ.

**ಕುಂಭ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಇತರರಿಗೆ ಮುಜುಗರ ಉಂಟುಮಾಡಬೇಡಿ ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಪ್ರಯತ್ನಿಸಿ. ಜೀವನ ಸಂಗಾತಿ ದೊರಕಿದ ತಕ್ಷಣ ಕೊನೆಗೊಳ್ಳುತ್ತದೆ.

**ಮೀನ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಇಂದು ಯಾರನ್ನೂ ಚುಡಾಯಿಸಬೇಡಿ.

# ಕುಂಟೋಜಿ ಬಸವೇಶ್ವರ ಜಾತ್ರಾಮಹೋತ್ಸವ: ನೂತನ ಮಹಾರಥೋತ್ಸವಕ್ಕೆ ಭಕ್ತರಿಗೆ ಆಹ್ವಾನ

• **ಉದಯವಾಹಿನಿ, ಮುದ್ದೇಬಿಹಾಳ**


ಉದಯವಾಹಿನಿ ಚಿತ್ರ

ತಾಲ್ಲೂಕಿನ ಐತಿಹಾಸಿಕ ಸುಕ್ಷೇತ್ರ, ಕುಂಟೋಜಿಯ ಶ್ರೀಬಸವೇಶ್ವರ ಜಾತ್ರಾಮಹೋತ್ಸವವು ಶ್ರಾವಣ ಕೊನೆಯ ಸೋಮವಾರದಿಂದ ಆ. 17ರಿಂದ 21ರವರೆಗೆ ಐದು ದಿನಗಳ ಕಾಲ ಶ್ರದ್ಧಾಭಕ್ತಿಯಿಂದ ಜರುಗಲಿದೆ. ಈ ಬಾರಿ ಜಾತ್ರೆಯಲ್ಲಿ ನೂತನ ಮಹಾರಥೋತ್ಸವದ ಲೋಕಾರ್ಪಣೆಯನ್ನು ಕೊಪ್ಪಳದ ಗವಿಸಿದ್ದೇಶ್ವರ ಮಹಾಸ್ವಾಮಿಗಳು ನೆರವೇರಿಸಲಿದ್ದಾರೆ ಎಂದು ಬಸವೇಶ್ವರ ಜಾತ್ರಾ ಸಮಿತಿಯ ಅಧ್ಯಕ್ಷ ಗುರುಲಿಂಗಪ್ಪ ಸುಲ್ಲೂಳ್ಳಿ ತಿಳಿಸಿದ್ದಾರೆ.

ಸೋಮವಾರ ಕುಂಟೋಜಿ ಬಸವೇಶ್ವರ ಯಾತ್ರಾ ನಿವಾಸದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಐದು ದಿನಗಳ ಜಾತ್ರೆಯಲ್ಲಿ ಸುಮಾರು 40ರಿಂದ 50 ಸಾವಿರ ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ನಾಗಲಿಂಗಯ್ಯ ಮಠ, ಬಿ.ಎಸ್. ಹೂಗಾರ ಅವರು, 29 ಅಡಿ ಸಾಗವಾಣಿ ಕಟ್ಟಿಗೆಯಿಂದ ನಿರ್ಮಿಸಿರುವ ಮಹಾರಥವನ್ನು ಹೆಸರನ್ನು ಬಹಿರಂಗಪಡಿಸದ ಭಕ್ತನೊಬ್ಬ ಮಾಡಿಸಿಕೊಟ್ಟಿದ್ದು, ದೇವಸ್ಥಾನದ ಶ್ರೀ ಸಂಗಮೇಶ್ವರ ಹಾಗೂ ಬಸವಣ್ಣ ಶ್ರೀಮುಖಕ್ಕೆ 21 ಕೆಜಿ ಬೆಳ್ಳಿಯಿಂದ ಬೆಳ್ಳಿಮುಖ ಮಾಡಲಾಗಿದೆ ಎಂದು ವಿವರಿಸಿದರು. ಮಹಾರಥೋತ್ಸವಕ್ಕಾಗಿ 1 ಕೋಟಿ 22 ಲಕ್ಷ ವೆಚ್ಚದಲ್ಲಿ 2 ಎಕರೆ ಜಮೀನು ಖರೀದಿಸಲಾಗಿದೆ ಎಂದು ಹೇಳಿದರು.

ಐದು ದಿನಗಳ ಕಾಲ ಭಕ್ತರಿಗೆ ಸಿಹಿ–ಭಕ್ಷ್ಯ ಭೋಜನ, ಮೂಲಭೂತ ಸೌಕರ್ಯ, ಸಿಸಿ ಕ್ಯಾಮೆರಾ ಅಳವಡಿಕೆ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಮಹಾರಥಕೆ ಆಲೂರ ಗೂಳಿ ಮನೆತನದಿಂದ ಕಳಸ, ಗರಸಂಗಿ ಹಿರೇಮಠ ಮನೆತನದಿಂದ ಹಗ್ಗ, ಮುದ್ದೇಬಿಹಾಳ ಶರಣು ಹಿರೇಮಠ ಹಾಗೂ ಅಬ್ಬಿಹಾಳ ಗ್ರಾಮದಿಂದ ರುದ್ರಾಕ್ಷಿ ಬೃಹತ್ ಹಾರವನ್ನು ನೀಡಲಾಗುತ್ತಿದೆ. ಆಗಸ್ಟ್ 17ರಿಂದ 21ರವರೆಗೆ ಜಾನಪದ, ಹಾಸ್ಯ ರಸಮಂಜರಿ, ಸಾಂಸ್ಕೃತಿಕ ಕಾರ್ಯಕ್ರಮಗಳು, ದೇಸಿ ಜಾನಪದ ಕ್ರೀಡೆಗಳು ನಡೆಯಲಿವೆ. ಕುಂಟೋಜಿ ಗ್ರಾಮ ಪಂಚಾಯತಿಯಿಂದ ಸ್ವಚ್ಛತೆ, ಕುಡಿಯುವ ನೀರು, ವಿದ್ಯುತ್ ದೀಪಗಳ ವ್ಯವಸ್ಥೆ ಮಾಡಲಾಗುತ್ತದೆ ಎಂದು ಪಿಡಿಓ ಪಿ.ಎಸ್. ನಾಯ್ಕೋಡಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆನಂದ ಗಸ್ತಿಗಾರ, ಮಲ್ಲಿಕಾರ್ಜುನ ನಾಟಿಕಾರ, ರಾಮಣ್ಣ ಹುಲಗಣ್ಣಿ, ಬಸಲಿಂಗಪ್ಪಗೌಡ ಬಿರಾದಾರ, ಸಿದ್ದು ಕೋಲಕಾರ, ಗುರುಪಾದ ಹೆಬ್ಬಾಳ, ಮಲ್ಲಿಕಾರ್ಜುನ ಹುಲಿಬೆಂಚಿ, ಶಿವಣ್ಣ ಕೋಲಕಾರ, ಸಂಗಣ್ಣ ಕುಂಬಾರ, ಬಸವರಾಜ ಹುಲಗಣ್ಣಿ, ಸಂಗಮೇಶ ಯರಝುರಿ, ಗುಂಡಪ್ಪ ಕೋಳೂರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಸ್ತೆ ಬಂದ್; ಪ್ರಯಾಣಿಕರ ಪರದಾಟ

## ರಾಷ್ಟ್ರೀಯ ಹೆದ್ದಾರಿ 150ಎ ವರುಣನ ಆರ್ಭಟಕ್ಕೆ ಕೊಚ್ಚಿಹೋದ ತಾತ್ಕಾಲಿಕ ರಸ್ತೆ

• **ಉದಯವಾಹಿನಿ, ಸಿಂಧನೂರು**


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಹೆದ್ದಾರಿ ಎನ್ ಎಚ್ 150 ಎ ಬೆಂಗಳೂರು ಟು ಕಲ್ಬುರ್ಗಿ ಮಾರ್ಗವಾಗಿರುವ ಸಿಂಧನೂರು ನಡುವೆ ಕಲ್ಲೂರು ಗ್ರಾಮದ ಹತ್ತಿರ ಇರುವ ಬ್ರಿಡ್ಜ್ ಅನ್ನು ತಾತ್ಕಾಲಿಕ ಸಂಪರ್ಕ ಕಲ್ಪಿಸಿದ್ದು ಆದರೆ ನಿನ್ನೆ ರಾತ್ರಿ ಅಕಾಲಿಕ ಮಳೆ ಸುರಿದು ಸೇತುವೆ ಕಿತ್ತಿ ಹೋಗಿ ಪ್ರಯಾಣಿಕರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆ ಉಂಟಾಗಿ ಪರದಾಡುವ ಸ್ಥಿತಿ ನಿರ್ಮಾಣ ಆಗಿದ್ದರಿಂದ. ಗುತ್ತಿಗೆದಾರರಿಗೆ, ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಿಂಧನೂರು ಟು ಮಸ್ಕಿ ರಾಷ್ಟ್ರೀಯ ಹೆದ್ದಾರಿ 150ಎ ಹೆದ್ದಾರಿಯಲ್ಲಿ ಏಳು ಬ್ರಿಡ್ಜ್‌ಗಳ ಬಂದಿದ್ದು. ಈಗಿರುವ ಕಾಮಗಾರಿ ಕೆಲಸ ನಿಧಾನಗತಿಯಲ್ಲಿ. ಕಾರ್ಮಿಕರ ಸಾಗುತ್ತಿದ್ದು. ಸಂಚರಿಸುವ ಪ್ರಯಾಣಿಕರಿಗೆ. ಸಾರ್ವಜನಿಕರಿಗೆ ತಲೆನೋವು ಯಾಗಿದ್ದಂತೂ ಸುಳ್ಳಲ್ಲ. ರಾಜ್ಯದಲ್ಲಿ ಪ್ರತಿ ದಿನ ಅಕಾಲಿಕ ವರ್ಷ ಆರ್ಭಟದಿಂದ ಮಳೆ ನೀರು ಹೆಚ್ಚಾಗುತ್ತಿದ್ದು. ರಭಸಕ್ಕೆ ತಾಲ್ಲೂಕಿನ ಕಲ್ಲೂರು ಬಳಿ ರಸ್ತೆ ಕಿತ್ತು ಹೋಗಿ ಎರಡು ಕಡೆಗೂ ಮೂರು, ನಾಲ್ಕು ಕಿಮೀವರೆಗೆ ಟ್ರಾಫಿಕ್ ಜಾಮ್ ಸಂಭವಿಸಿದ್ದು ಕಂಡು ಬಂದರು ಸಂಬಂಧಿಸಿದ ಜನಪ್ರತಿನಿಧಿಗಳು, ಅಧಿಕಾರಿಗಳು ಸ್ಥಳದಲ್ಲಿ ಯಾರು ಇಲ್ಲ ಎಂದು ಅವರು ವಿರುದ್ಧ ಜನರು ಆಕ್ರೋಶಗೊಂಡು ಇಡೀ ಶಾಪ ಹಾಕಿದರು.

**ಅಧಿಕಾರಿಗಳ ವಿರುದ್ಧ ಆಕ್ರೋಶ**

- ಎರಡು ವರ್ಷಗಳಿಂದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿದೆ ಎಂಬ ಸಾರ್ವಜನಿಕರು ಆರೋಪ
- ಈಗಾಗಲೇ ರಾಜ್ಯಾದ್ಯಂತ ವರುಣನ ಆರ್ಭಟ ಹೆಚ್ಚಾಗಿದ್ದು ಗುತ್ತಿಗೆದಾರರು ಮತ್ತು ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸದೇ ತಾತ್ಕಾಲಿಕ ರಸ್ತೆ ನಿರ್ಮಾಣ. ಜನಾಕ್ರೋಶ
- ನಿನ್ನೆ ರಾತ್ರಿ ಅಧಿಕ ಮಳೆಯಿಂದ ಕೊಚ್ಚಿ ಹೋದ ರಸ್ತೆ ಎರಡು, ಮೂರು ಗಂಟೆ ಕಾಲ ಸಂಚಾರ ಬಂದ್
- ಜನಪ್ರತಿನಿಧಿಗಳೇ ಹಾಗೂ ಗುತ್ತಿಗೆದಾರರು ಮತ್ತು ಅಧಿಕಾರಿಗಳ ಸಾರ್ವಜನಿಕರಿಗೆ ತೊಂದರೆಯಾಗದಂತೆ ಈಗಲಾದರೂ ಎಚ್ಚೆತ್ತುಕೊಳ್ಳಿ.

# ಬಂಕಾಪುರ ರಸ್ತೆ ದುರಸ್ತಿ

• **ಉದಯವಾಹಿನಿ, ಹಾನಗಲ್**

ತಗ್ಗು, ಗುಂಡಿಗಳು ಸೃಷ್ಟಿಯಾಗಿ ಸಂಚಾರಕ್ಕೆ ಸಂಚಕಾರ ತಂದಿದ್ದ ಹಾನಗಲ್‌ನಿಂದ ಬಂಕಾಪುರ ಹೋಗುವ ರಸ್ತೆಯ ದುರಸ್ತಿ ಕಾರ್ಯವನ್ನು ಲೋಕೋಪಯೋಗಿ ಇಲಾಖೆ ಕೈಗೊಂಡಿದೆ. ಈ ರಸ್ತೆಯಲ್ಲಿ ಉಂಟಾಗಿದ್ದ ಬೃಹತ್ ಗಾತ್ರದ ಗುಂಡಿಗಳು ವಾಹನ ಸವಾರರನ್ನು ಫಜೀತಿಗೆ ಸಿಲುಕಿಸುತ್ತಿದ್ದವು. ಈ ರಸ್ತೆಯಲ್ಲಿ ನಿರಂತರವಾಗಿ ಸಂಚರಿಸುವ ಸ್ಥಳೀಯ ಜನರಿಗೆ ಇಲ್ಲಿನ ಅಧ್ವಾನ ಗೊತ್ತಿದ್ದ ಕಾರಣಕ್ಕೆ ಎಚ್ಚರಿಕೆ ವಹಿಸುತ್ತಿದ್ದರು. ಆದರೆ ಬೇರೆ ಊರುಗಳ ವಾಹನ ಸವಾರರು ಇಲ್ಲಿನ ಅಪಾಯವನ್ನು ಲೆಕ್ಕಿಸದೇ ಅನಾಹುತ ಮಾಡಿಕೊಳ್ಳುತ್ತಿದ್ದರು.

ರಸ್ತೆ ನಿರ್ವಹಣೆಯ ವೈಫಲ್ಯ ಸಾರ್ವಜನಿಕವಾಗಿ ಸಾಕಷ್ಟು ಆಕ್ರೋಶಕ್ಕೆ ಕಾರಣವಾಗಿತ್ತು. ಈ ರಸ್ತೆಯಲ್ಲಿನ ಅಪಘಾತಗಳ ಬಗ್ಗೆ ಪತ್ರಿಕೆ ವರದಿ ಪ್ರಕಟಿಸಿತ್ತು. ರಸ್ತೆಯಲ್ಲಿನ ತಗ್ಗು, ಗುಂಡಿ ಮುಚ್ಚುವ ಕಾಮಗಾರಿಯನ್ನು ಪಿಡಬ್ಲುಡಿ ಇಲಾಖೆ ಕೈಗೊಂಡಿದ್ದು, ಮಾಸನಕಟ್ಟಿ ಗ್ರಾಮದ ತನಕ ದುರಸ್ತಿ ಕೆಲಸ ಮಾಡಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿದ ಪಿಡಬ್ಲುಡಿ ಎಇಇ ನಾಗರಾಜ ಎಸ್., ಸದ್ಯಕ್ಕೆ ಕರಗುದರಿ ಕ್ರಾಸ್‌ನಿಂದ ಬೆಳಗಾಲಪೇಟೆ ಕ್ರಾಸ್ ತನಕ ರಸ್ತೆಯಲ್ಲಿನ ಗುಂಡಿಗಳಿಗೆ ಖಡಿ ಹಾಕಿ ಸುಗಮ ಸಂಚಾರಕ್ಕೆ ಅನುವು ಮಾಡಲಾಗಿದೆ. ತಾಲ್ಲೂಕು ಗಡಿ ತನಕ ದುರಸ್ತಿ ಕಾಮಗಾರಿ ಮುಂದುವರಿಯುತ್ತದೆ. ಸದ್ಯದಲ್ಲಿಯೇ ಈ ರಸ್ತೆಯ ದುರಸ್ತಿ ಮತ್ತು ನಿರ್ವಹಣೆಗಾಗಿ ಒಂದು ವರ್ಷದ ಅವಧಿಗೆ ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಕ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

# ಧರ್ಮಾ ಜಲಾಶಯಕ್ಕೆ ಸಿಂಧೂರ ಸಿದ್ಧಪ್ಪ ನಾಮಕರಣಕ್ಕೆ ಒತ್ತಾಯ

• **ಉದಯವಾಹಿನಿ, ಹಾನಗಲ್**

ತಾಲ್ಲೂಕಿನ ಕೃಷಿ ಜೀವನಾಡಿ ಧರ್ಮಾ ಜಲಾಶಯ ತುಂಬಿ ಹರಿಯುತ್ತಿದ್ದು, ಜಲಾಶಯ ನಿರ್ಮಾತೃ, ಮಾಜಿ ಶಾಸಕ ಸಿಂಧೂರ ಸಿದ್ಧಪ್ಪನವರ ಮನೆತನದವರು ಮತ್ತು ರೈತ ಸಂಘದ ಪ್ರಮುಖರು ಜಲಾಶಯಕ್ಕೆ ಬಾಗಿನ ಸಲ್ಲಿಸಿದರು. ಹಾನಗಲ್ ತಾಲ್ಲೂಕಿಗೆ ನೀರಾವರಿ ಆಸರೆಯಾಗಬೇಕು ಎಂಬ ಕನಸಿನೊಂದಿಗೆ ಮುಂಡಗೋಡ ತಾಲ್ಲೂಕಿನ ಮಳಗಿ ಸಮೀಪದಲ್ಲಿ ಧರ್ಮಾ ನದಿಗೆ ಜಲಾಶಯವನ್ನು ನಮ್ಮ ತಾತ ಸಿಂಧೂರ ಸಿದ್ದಪ್ಪನವರು ಶಾಸಕರಾಗಿದ್ದ ಅವಧಿಯಲ್ಲಿ ನಿರ್ಮಾಣ ಮಾಡಿದರು. ಜಲಾಶಯ ನಿರ್ಮಾಣದ ಯೋಜನೆಗೆ ಅನುದಾನ ಕೊರತೆಯಾದಾಗ ಸ್ವಂತ ಹಣ ಖರ್ಚು ಮಾಡಿ ಕಾಮಗಾರಿ ಪೂರ್ಣಗೊಳಿಸಿದ್ದರು. ಹೀಗಾಗಿ ಅವರ ಹೆಸರು ಅಜರಾಮರಗೊಳ್ಳಬೇಕು. ಜಲಾಶಯಕ್ಕೆ ಸಿಂಧೂರ ಸಿದ್ಧಪ್ಪ ಎಂದು ನಾಮಕರಣ ಮಾಡಬೇಕು ಎಂದು ಸಿಂಧೂರ ಮನೆತನದ ಜಗದೀಶ ಸಿಂಧೂರ ಆಗ್ರಹಿಸಿದರು.

ಇದೇ ಮನೆತನದ ನಾಗಪ್ಪ ಸವದತ್ತಿ ಮಾತನಾಡಿ, ಜಲಾಶಯದ ಆವರಣದಲ್ಲಿ ಸೌಂದರ್ಯ ಹೆಚ್ಚಿಸಲು ಉದ್ಯಾನ ನಿರ್ಮಿಸಿ, ಸಿಂಧೂರ ಸಿದ್ದಪ್ಪನವರ ಪುತ್ಥಳಿ ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಿದರು.

# ವನ್ಯಜೀವಿಧಾಮ ಅರಣ್ಯ ಪ್ರದೇಶದಲ್ಲಿ ಮಾಣಿಕಪೂರ ಜಲಾಧಾರೆ: ಪ್ರವಾಸಿಗರ ದಂಡು ಆಗಮನ

• **ಉದಯವಾಹಿನಿ, ಚಿಂಚೋಳಿ**


ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ಮೂರ್ನಾಲ್ಕು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದ್ದು ಹೊಲಗದ್ದೆಗಳಲ್ಲಿ ರೈತರು ಬೆಳೆದ ಬೆಳೆಗಳಲ್ಲಿ ನೀರು ನಿಂತು ಜಲಾವೃತವಾಗಿವೆ. ಹಾಗೆಯೇ ಕುಂಚಾವರಂ ವನ್ಯಜೀವಿಧಾಮ ಅರಣ್ಯ ಪ್ರದೇಶದಲ್ಲಿರುವ ಬರುವ ಮಾಣಿಕಪೂರ ಜಲಾಧಾರೆಯು ಮೈತುಂಬಿ ಹರಿಯುತ್ತಿದೆ ಇದನ್ನು ನೋಡಿ ಕಣ್ತುಂಬಿಕೊಳ್ಳಲು ರಾಜ್ಯ ಅಂತರ ರಾಜ್ಯದಿಂದ ಪ್ರವಾಸಿಗರು ಬೀದರ, ಕಲಬುರ್ಗಿ, ಯಾದಗಿರಿ, ಜಹೀರಾಬಾದ, ತಾಂಡೂರ ಸೇರಿದಂತೆ ತೆಲಂಗಾಣ, ಆಂಧ್ರಪ್ರದೇಶದ ಪ್ರವಾಸಿಗರು ಆಗಮಿಸಿ ನೀರು ಚಿಮ್ಮುವ ಸುಂದರ ದೃಶ್ಯವನ್ನು ಪ್ರವಾಸಿಗರು ನೋಡಿ ಸಂತಸ ವ್ಯಕ್ತಪಡಿಸುತ್ತಿದ್ದಾರೆ.

ಪ್ರವಾಸಿಗ ಹಣಮಂತ ಪೂಜಾರಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಣಿಕಪೂರ ಜಲಾಧಾರೆ ನೋಡಲು ಕರ್ನಾಟಕ, ತೆಲಂಗಾಣ, ಆಂದ್ರಪ್ರ ದೇಶದ ಸೇರಿದಂತೆ ದೂರ ದೂರದಿಂದ ಪ್ರವಾಸಿಗರು ಆಗಮಿಸಿ ಜಲಾಧಾರೆಯ ಮನೋಮೋಹಕ ದೃಶ್ಯ ನೀಡಿ ಕಣ್ತುಂಬಿಕೊಳ್ಳುತ್ತಿದ್ದಾರೆ.

ಆದರೆ ಪ್ರವಾಸಿಗರಿಗೆ ಯಾವುದೇ ಮೂಲ ಸೌಕರ್ಯಗಳನ್ನು ಇಲ್ಲದೆ ಪರದಾಡುವ ಪರಿಸ್ಥಿತಿಯಾಗಿದೆ, ಸ್ಥಳೀಯ ಶಾಸಕರು ಮತ್ತು ಸರ್ಕಾರ ಮಾಣಿಕಪೂರ ಜಲಾಧಾರೆಗೆ ಪ್ರವಾಸಿ ತಾಣವಾಗಿ ಘೋಷಣೆ ಮಾಡಿ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ತಂಗಲು ಕೋಣೆಗಳು, ರಸ್ತೆ ನಿರ್ಮಾಣ ಸೇರಿದಂತೆ ಇತರೆ ಮೂಲಭೂತ ಸೌಕರ್ಯ ಒದಗಿಸಿ ಕೊಡಬೇಕು ಎಂದು ಒತ್ತಾಯಿಸಿದರು.


# ಮಳೆಗೆ ಕುಸಿದ ಮನೆಗಳು

• **ಉದಯವಾಹಿನಿ, ಕೆರೂರ**

ಪಟ್ಟಣದಲ್ಲಿ ನಿರಂತರವಾಗಿ ಸುರಿದ ಮಳೆಗೆ 4 ಮನೆಗಳಿಗೆ ಹಾನಿಯಾಗಿವೆ. ಹೊಸಪೇಟಿ ಬಡಾವಣೆಯ ತಾನಪ್ಪ ಸೂಳಿಕೇರಿ, ಶಶಿಕಲಾ ರಾಮದುರ್ಗ, ಕಡಿವಾಲದ ಅವರ ಮನೆಗಳು ಕುಸಿದು ಬಿದ್ದಿವೆ. ಇನ್ನೂ ಕೆಲವು ಕಡೆ ಮನೆಗಳು ಸೋರುತ್ತಿವೆ. ನಿರಂತರ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಸಮೀಪದ ಹೊಸಕೋಟಿ ಗ್ರಾಮದಲ್ಲಿ ಸುರಿದ ಮಳೆ ಗ್ರಾಮದ ಯಲ್ಲಪ್ಪ ಅಣ್ಣಿಗೇರಿ, ಯಮನವ್ವ ಅಣ್ಣಿಗೇರಿ ಅವರು ಮನೆಯಲ್ಲಿ ಮಳೆಯ ನೀರು ಸಂಗ್ರಹವಾಗಿ ಹಾನಿಯಾಗಿದೆ. ತಾತ್ಕಾಲಿಕವಾಗಿ ಎರಡು ಕುಟುಂಬಗಳನ್ನು ಗ್ರಾಮದ ಶಾಲೆಗೆ ಸ್ಥಳಾಂತರಿಸಲಾಗಿದೆ. ತಾಲ್ಲೂಕು ಆಡಳಿತ ವತಿಯಿಂದ ಗ್ರಾಮದ ಶಾಲೆಯಲ್ಲಿ ಗಂಜಿ ಕೇಂದ್ರ ತೆರೆಯಲಾಗಿದೆ ಎಂದು ಕೆರೂರ ಹೋಬಳಿಯ ಕಂದಾಯ ನಿರೀಕ್ಷಕ ಆನಂದ ಭಾವಿಮಠ ಹೇಳಿದರು.

# ಮುಖ್ಯ ಶಿಕ್ಷಕ ಸಿದ್ದಪ್ಪ.ಎಸ್. ಬಬಲಾದಿ ವಯೋನಿವೃತ್ತಿ ಬಿಳ್ಕೊಡುಗೆ ಸಮಾರಂಭ

• **ಉದಯವಾಹಿನಿ, ವಡಗೇರಾ**


ಉದಯವಾಹಿನಿ ಚಿತ್ರ

ಸರಕಾರಿ ನೌಕರಿಯ ಹುದ್ದೆಯಲ್ಲಿ ಕಾರ್ಯನಿರ್ವಹಿಸಿ ಕೊನೆಗೆ ವಯೋನಿವೃತ್ತಿ ಹೊಂದುವುದು ಸಹಜವಾದದ್ದು ಎಂದು ಗ್ರಾಮದ ಹಿರಿಯ ಮುಖಂಡರು ಹಾಗೂ ಶಿಕ್ಷಣ ಪ್ರೇಮಿಗಳಾದ ಭೀಮಣ್ಣಗೌಡ ಮಾಲಹಳ್ಳಿ ಅವರು ಹೇಳಿದರು. ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಸಿದ್ದಪ್ಪ.ಎಸ್ ಬಬಲಾದಿ ರವರ ವಯೋ ನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸಿದ್ದಪ್ಪ. ಎಸ್. ಬಬಲಾದಿ.ರವರು ಸರಳ ಸಜ್ಜನಿಕೆಯ ನೇರ ನುಡಿಯ ವ್ಯಕ್ತಿ ಅವರು ನಮ್ಮ ಗ್ರಾಮದಲ್ಲಿ ಮುಖ್ಯ ಶಿಕ್ಷಕರಾಗಿ ಹಲವು ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ವಯೋನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಅವರು ಹಾರೈಸಿದರು. ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವಡಗೇರಾ ತಾಲ್ಲೂಕು ಅಧ್ಯಕ್ಷ ಶಂಕ್ರಪ್ಪ ಗೊಂದೇನೂರ ಮಾತನಾಡಿ ಸಿದ್ದಪ್ಪ ಎಸ್. ಬಬಲಾದಿ ರವರು ನಮ್ಮ ಶಿಕ್ಷಣ ಇಲಾಖೆಯಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸುವ ಮುಖಾಂತರ ನಮ್ಮ ವಡಗೇರಾ ತಾಲ್ಲೂಕಿನಲ್ಲಿ ಒಳ್ಳೆಯ ಹೆಸರು ಮಾಡಿದ್ದಾರೆ ಅವರು ನಮಗೆ ಸಹಕಾರ ಸಲಹೆ ಸೂಚನೆಗಳನ್ನು ನೀಡಿದ್ದಾರೆ ಎಂದು ಅವರು ಹೇಳಿದರು. ವಯೋನಿವೃತ್ತಿ ಹೊಂದಿದ ಮಾಲಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಸಿದ್ದಪ್ಪ. ಎಸ್. ಬಬಲಾದಿ ಮಾತನಾಡಿ ನನ್ನ ಶಿಕ್ಷಕ ವೃತ್ತಿಯ ಜೀವನದಲ್ಲಿ ಸೇವೆ ಸಲ್ಲಿಸಿದ್ದು ನನಗೆ ಆತ್ಮ ತೃಪ್ತಿ ಇದೆ ಆದರೆ ನನ್ನ ಶಿಕ್ಷಣ ಇಲಾಖೆ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಪಾಲಕರು ವಿದ್ಯಾರ್ಥಿಗಳು ನನಗೆ ಅತ್ಯಂತ ಸಹಕಾರ ನೀಡಿದ್ದಾರೆ ಅವರ ಸಹಕಾರವನ್ನು ನಾನು ಮರಿಯಲೂ ಸಾಧ್ಯವಿಲ್ಲ ಎಂದು ಅವರು ಹೇಳಿದರು. ಇದೆ ಸಂದರ್ಭದಲ್ಲಿ ವಯೋ ನಿವೃತ್ತಿ ಹೊಂದಿದ ಮುಖ್ಯ ಶಿಕ್ಷಕ ಸಿದ್ದಪ್ಪ .ಎಸ್ .ಬಬಲಾದಿ ದಂಪತಿಗಳನ್ನು ಸನ್ಮಾನಿಸಲಾಯಿತು ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯ ಗುರುಗಳಾದ ನಾಗಪ್ಪ ವಹಿಸಿಕೊಂಡಿದ್ದರು. ಈ ಸಂದರ್ಭದಲ್ಲಿ ಸಿಆರ್‌ಪಿ ನಿಂಗಪ್ಪ ವರಿಕೇರಿ ಗೊಂದೆನೂರ್ ,ಸೂಗಣ್ಣ, ಶ್ರೀಕಾಂತ್ ಕಂದಳ್ಳಿ,ಬೀರಪ್ಪ ಸಂಕಿನ,ಹೊನ್ನಪ್ಪ ದಾಳಿ, ಶರಣಪ್ಪ ಚನ್ನೂರ್, ಮತ್ತು ಎಸ್ ಡಿ ಎಂ ಸಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಗ್ರಾಮಸ್ಥರು ಅವರ ಅಭಿಮಾನಿಗಳು ವಿದ್ಯಾರ್ಥಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು ಈ ಕಾರ್ಯಕ್ರಮವನ್ನು ಗೋವರ್ಧನ್ ರವರು ನಿರೂಪಿಸಿ ವಂದಿಸಿದರು.

# ಬಾಲ್ಯ ವಿವಾಹಕ್ಕೆ ಆಸ್ಪದ ನೀಡಬೇಡಿ: ಡಾ.ಬಿ.ವಿ.ಗಿರೀಶ್

• **ಉದಯವಾಹಿನಿ, ಚಿತ್ರದುರ್ಗ**


ಉದಯವಾಹಿನಿ ಚಿತ್ರ

ಬಾಲ್ಯ ವಿವಾಹ ಮಾಡುವುದರಿಂದ ಬಾಲ ಗರ್ಭಿಣಿಯರಾಗಿ ಹೆರಿಗೆ ಸಮಯದಲ್ಲಿ ಸತ್ತು ಹುಟ್ಟಿದ ಮಕ್ಕಳ ಜನನ, ಮಕ್ಕಳು ಅಂಗವಿಕಲರಾಗುವ ಸಂಭವ, ಇಲ್ಲವೇ ತಾಯಿ ಮರಣ, ಶಿಶು ಮರಣ ಸಂಭವಿಸುವ ಸಾಧ್ಯತೆ ಇರುವುದರಿಂದ ಬಾಲ್ಯ ವಿವಾಹಕ್ಕೆ ಆಸ್ಪದ ನೀಡಬೇಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಬಿ.ವಿ ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಬಾಲ್ಯ ವಿವಾಹ ತಡೆ ಕುರಿತು ಆಯೋಜಿಸಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ. ಮಾತನಾಡಿ, 18 ವರ್ಷದ ಒಳಗಡೆ ಹೆಣ್ಣು ಮಕ್ಕಳಿಗೆ ಮದುವೆ ಮಾಡಿದರೆ ಗರ್ಭಕೋಶದ ಬೆಳವಣಿಗೆ ಆಗಿರುವುದಿಲ್ಲ, ಬಾಲ್ಯ ವಿವಾಹದಿಂದ ಅನೇಕ ದುಷ್ಪರಿಣಾಮಗಳು ಉಂಟಾಗುತ್ತಿದ್ದು, ಹೆಚ್ಚು ಕೆಲಸ ಮಾಡಲು ಸಾಧ್ಯವಾಗುವುದಿಲ್ಲ, ಗರ್ಭಪಾತದ ಸಾಧ್ಯತೆ ಹೆಚ್ಚು, ಬೇಗ ವಯಸ್ಸಾದಂತೆ ಕಾಣುತ್ತಾರೆ, ಹೆರಿಗೆ ಸಮಯದಲ್ಲಿ ಅತ್ಯಂತ ಕಷ್ಟಕರವಾದ ಹೆರಿಗೆ ಮತ್ತು ಅತಿಯಾದ ರಕ್ತಸ್ರಾವದಿಂದ ಅಪಾಯ ಸಂಭವಿಸಬಹುದು. ಬಾಲ್ಯ ವಿವಾಹ ಮಾಡಬೇಡಿ ನಮ್ಮ ಮನೆಯ ಮಗಳನ್ನು ಸಾವಿನ ದವಡೆಗೆ ದೂಡಬೇಡಿರೆಂದರು.

ಬಾಲ್ಯ ವಿವಾಹ ಕಂಡುಬಂದರೆ 1098ಕ್ಕೆ ಕರೆ ಮಾಡಿರಿ, ಕರೆ ಮಾಡಿದವರ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು ಎಂದರು,

ಕಾರ್ಯಕ್ರಮದಲ್ಲಿ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಡಾ.ನಳಿನಾಕ್ಷಿ. ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಡಿ.ಮಹೇಶ್. ಫಾರ್ಮಸಿ ಅಧಿಕಾರಿ ಶಶಿಧರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಟಿ. ನಿರ್ಮಲ. ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಹಾಜರಿದ್ದರು.

> 18 ವರ್ಷದೊಳಗೆ ಹೆಣ್ಣು ಮಕ್ಕಳಿಗೆ ಮದುವೆ ಮಾಡುವುದು, ಮಾಡಿಸುವುದು, ಅದಕ್ಕೆ ಸಾಕ್ಷಿಯಾಗುವುದು, ಭಾಗವಹಿಸುವುದು, ಶಿಕ್ಷಾರ್ಹ ಅಪರಾಧ. ಪೂಜಾರಿ ಸೇರಿದಂತೆ ಸಂಬಂಧಪಟ್ಟವರಿಗೆಲ್ಲಾ ಎರಡು ವರ್ಷ ಜೈಲು, ಒಂದು ಲಕ್ಷ ರೂಪಾಯಿ ದಂಡ ವಿಧಿಸಲಾಗುವುದು. ಸಾರ್ವಜನಿಕ ವಲಯಗಳಲ್ಲಿ ಬಾಲ್ಯ ವಿವಾಹದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಮತ್ತು ಆಶಾ ಕಾರ್ಯಕರ್ತರಿಗೆ ತಿಳಿಸಿದ್ದೇನೆ.
>
> –ಡಾ. ಬಿ.ವಿ ಗಿರೀಶ್, ಚಿತ್ರದುರ್ಗ ತಾಲ್ಲೂಕು ಆರೋಗ್ಯ ಅಧಿಕಾರಿ

**ಬಾಲ್ಯ ವಿವಾಹ ತಡೆ**

# ರಸಗೊಬ್ಬರ ಕೊರತೆ ನಿಭಾಯಿಸುವಲ್ಲಿ ಸರ್ಕಾರ ವಿಫಲ: ಪ್ರತಿಭಟನೆ

• **ಉದಯವಾಹಿನಿ, ಶಿರಹಟ್ಟಿ**

ಯೂರಿಯಾ ಗೊಬ್ಬರ ಕೊರತೆ ನಿಭಾಯಿಸುವಲ್ಲಿ ರಾಜ್ಯ ಸರ್ಕಾರ ವಿಫಲಗೊಂಡಿದೆ ಎಂದು ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಶಾಸಕ ಡಾ.ಚಂದ್ರು ಲಮಾಣಿ ಅವರ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಸ್ಥಳೀಯ ಪೇಟೆ ಆಂಜನೇಯ ದೇವಸ್ಥಾನದಿಂದ ಚಕ್ಕಡಿ ಮೂಲಕ ಪಾದಯಾತ್ರೆ ಪ್ರಾರಂಭಿಸಿ, ನೆಹರು ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ರಾಜ್ಯ ಸರ್ಕಾರದ ವಿರುದ್ಧ ಕಾರ್ಯಕರ್ತರು ಘೋಷಣೆ ಕೂಗಿದರು. ಪ್ರತಿಭಟನಾ ಮೆರವಣಿಗೆಯ ನಂತರ ತಹಶೀಲ್ದಾರ್ ಕೆ. ರಾಘವೇಂದ್ರ ರಾವ್ ಅವರಿಗೆ ಮನವಿ ಸಲ್ಲಿಸಲಾಯಿತು.

ಸಮಾಜ ಸೇವಾ ಸಂಸ್ಥೆಗಳ ಮೂಲಕ ರೈತರಿಗೆ ನ್ಯಾಯಯುತವಾಗಿ ಸಿಗಬೇಕಿದ್ದ ರಸಗೊಬ್ಬರವನ್ನು ದಲ್ಲಾಳಿಗಳ ಮೂಲಕ ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ. ರಾಜ್ಯ ಸರ್ಕಾರ ಪರಿಸ್ಥಿತಿಯನ್ನು ನಿಭಾಯಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

# ಶಾಲೆಗೆ ಉಳಿತಾಯದ ಹಣ ರಾಜಮ್ಮ ಸೇವೆಗೆ ಸಿಎಂ ಶ್ಲಾಘನೆ

• **ಉದಯವಾಹಿನಿ, ಕಂಪ್ಲಿ**

ತಾಲ್ಲೂಕಿನ ಸುಗ್ಗೇನಹಳ್ಳಿ ಗ್ರಾಮದ ಲಿಂಗತ್ವ ಅಲ್ಪಸಂಖ್ಯಾತರಾದ ಪಿ. ರಾಜಮ್ಮ ಅವರು ತಮ್ಮ ದುಡಿಮೆಯಲ್ಲಿ ಉಳಿದ ಹಣವನ್ನು ಸರ್ಕಾರಿ ಶಾಲೆಯ ಬಡ ಮಕ್ಕಳಿಗಾಗಿ ವಿನಿಯೋಗಿಸುತ್ತಿರುವುದನ್ನು ಸಿಎಂ ಸಿದ್ದರಾಮಯ್ಯ ಅವರು ಅಭಿನಂದನಾ ಪತ್ರ ಬರೆದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಶಾರದಾನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ 150ವಿದ್ಯಾರ್ಥಿಗಳಿಗೆ ರಾಜಮ್ಮ ಅವರು 60,000 ಮೊತ್ತದ ಟೀ ಶರ್ಟ್ ಮತ್ತು ಪ್ಯಾಂಟ್‌ಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಕಳೆದ ಸಾಲಿನಲ್ಲಿ 31 ವಿದ್ಯಾರ್ಥಿಗಳಿಗೆ 20,000 ಮೊತ್ತದ ಸಮವಸ್ತ್ರ ನೀಡಿದ್ದರು.

# ಚಾಲಕನ ಮೇಲೆ ಹಲ್ಲೆ ಪೊಲೀಸ್ ಅಮಾನತು

• **ಉದಯವಾಹಿನಿ, ಕೂಡ್ಲಿಗಿ**

ಬಸ್ ಚಾಲಕನ ಮೇಲೆ ಹಲ್ಲೆ ಮಾಡಿದ್ದ ಪೊಲೀಸ್ ಹೆಡ್ ಕಾನ್‌ಸ್ಟೆಬಲ್ ಮಂಜುನಾಥ ಅವರನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷುಗಿರಿ ಆದೇಶ ಹೊರಡಿಸಿದ್ದಾರೆ. ಹರಿಹರದಿಂದ ಬಳ್ಳಾರಿಗೆ ಹೊರಟಿದ್ದ ಕೆಎಸ್‌ಆರ್‌ಟಿಸಿ ಬಸ್ ಕೊಟ್ಟೂರು ತಾಲ್ಲೂಕಿನ ಗಜಾಪುರ ಬಳಿ ತಮ್ಮ ಬೈಕಿಗೆ ತಾಗಿದೆ ಎಂದು ಕೂಡ್ಲಿಗಿ ಪೊಲೀಸ್ ಠಾಣೆಯ ಹೆಡ್ ಕಾನ್‌ಸ್ಟೆಬಲ್ ಮಂಜುನಾಥ, ಬಸ್ ಚಾಲಕನನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ಮಾಡಿದ್ದರು. ಹಲ್ಲೆಗೊಳಗಾಗಿದ್ದ ಬಸ್ ಚಾಲಕ ರಾಮಲಿಂಗಪ್ಪ ನೀಡಿದ ದೂರಿನ ಅನ್ವಯ ಮಂಜುನಾಥ ವಿರುದ್ಧ ಕೂಡ್ಲಿಗಿ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.


## ಹಾವೇರಿ ಜಿಲ್ಲೆಗೆ ಎರಡೆರಡು ವಂದೇ ಭಾರತ್ ರೈಲು; ಕೇಂದ್ರ ಸರ್ಕಾರದ ಕಾರ್ಯಕ್ಕೆ ಬೊಮ್ಮಾಯಿ ಶ್ಲಾಘನೆ

# ಲಿಫ್ಟ್ ವ್ಯವಸ್ಥೆ ಮಾಡಿಸಿಕೊಡುವಂತೆ ಕೇಂದ್ರ ಸರಕಾರಕ್ಕೆ ಮನವಿ

• **ಉದಯವಾಹಿನಿ, ಹಾವೇರಿ**

ನರೇಂದ್ರ ಮೋದಿ ನಾಯಕತ್ವದ ಕೇಂದ್ರ ಸರಕಾರ ಹಾವೇರಿ ಜಿಲ್ಲೆಗೆ ಎರಡೆರಡು ವಂದೇ ಭಾರತ್ ರೈಲು ನಿಲುಗಡೆಗೆ ಅವಕಾಶ ಕಲ್ಪಿಸಿ ಕೊಟ್ಟಿದೆ ಎಂದು ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಶ್ಲಾಘನೆ ವ್ಯಕ್ತಪಡಿಸಿದರು. ನಗರದ ಹುತಾತ್ಮ ಮೈಲಾರ ಮಹದೇವಪ್ಪ ರೈಲು ನಿಲ್ದಾಣದಲ್ಲಿ ಸಂಜೆ ಆಯೋಜಿಸಿದ್ದ ಕೆಎಸ್‌ಆರ್ ಬೆಂಗಳೂರು–ಬೆಳಗಾವಿ ವಂದೇ ಭಾರತ್ ಎಕ್ಸ್‌ಪ್ರೆಸ್‌ಗೆ ಸ್ವಾಗತ ಹಾಗೂ ಹಸಿರು ನಿಶಾನೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಂದೇ ಭಾರತ್ ರೈಲು ನಿಲುಗಡೆ ಹಾವೇರಿಯಲ್ಲಿ ಮಾಡುವುದು ಜಿಲ್ಲೆಯ ಜನರ ಬಹುದಿನದ ಬೇಡಿಕೆಯಾಗಿತ್ತು. ಅದರಂತೆ ಕೇಂದ್ರ ರೈಲ್ವೆ ಸಚಿವರು, ರೈಲ್ವೆ ಖಾತೆ ರಾಜ್ಯ ಸಚಿವರ ಬಳಿ ಮನವರಿಕೆ ಮಾಡಿದಾಗ ಕೇಂದ್ರ ಸರಕಾರ ಆಶೀರ್ವಾದ ಮಾಡಿ ವಂದೇ ಭಾರತ್ ರೈಲು ಹಾವೇರಿಯಲ್ಲಿ ನಿಲುಗಡೆಗೆ ಅವಕಾಶ ಕಲ್ಪಿಸಿದರು. ನಮೋ ಸರಕಾರ ಹಾವೇರಿಗೆ ಒಂದು ಟ್ರೈನು ನಿಲುಗಡೆಗೆ ಅವಕಾಶ ಕೇಳಿದರೆ ಎರಡೆರಡು ರೈಲು ನಿಲುಗಡೆ ಮಾಡಿ ಕೊಟ್ಟಿದ್ದಾರೆ. ಕೇವಲ ನಾಲ್ಕು ತಾಸಿನಲ್ಲಿ ಬೆಂಗಳೂರಿನಿಂದ ಹಾವೇರಿ ತಲುಪಬಹುದು ಎಂದರು.

**ಸ್ಟೇಶನ್ ಅಭಿವೃದ್ಧಿ:** ಹಾವೇರಿ, ಬ್ಯಾಡಗಿ ಸ್ಟೇಶನ್ ಅಭಿವೃದ್ಧಿ ಬಗ್ಗೆ ಕೇಂದ್ರದ ಗಮನಕ್ಕೆ ತಂದಿದ್ದೇವೆ. ಹಾವೇರಿಗೆ ಗುಡ್ ಶೆಡ್ ನಿರ್ಮಾಣ ಮಾಡಲು ಬೇಡಿಕೆ ಕೊಟ್ಟಿದ್ದೇನೆ. ಒಪ್ಪಿಗೆಯೂ ಸಿಕ್ಕಿದೆ.



> ಕೆಎಸ್‌ಆರ್ ಬೆಂಗಳೂರು–ಬೆಳಗಾವಿ ವಂದೇ ಭಾರತ್ ಎಕ್ಸ್‌ಪ್ರೆಸ್‌ಗೆ ಅವರು ಸ್ವಾಗತ ಕೋರಿದರು. ಹಾವೇರಿ ಮತ್ತು ಬ್ಯಾಡಗಿ ರೈಲು ನಿಲ್ದಾಣಗಳ ಅಭಿವೃದ್ಧಿಗೆ ಕೇಂದ್ರದ ಗಮನ ಸೆಳೆದಿದ್ದಾರೆ. ರಾಣೆಬೆನ್ನೂರು–ಶಿವಮೊಗ್ಗ ಮಾರ್ಗಕ್ಕೆ ಭೂಸ್ವಾಧೀನಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶೀಘ್ರದಲ್ಲೇ ಹಾವೇರಿಯಲ್ಲಿ ಲಿಫ್ಟ್ ವ್ಯವಸ್ಥೆ ಮಾಡಲಾಗುವುದು.
>
> – ಬಸವರಾಜ ಬೊಮ್ಮಾಯಿ, ಸಂಸದ


ಉದಯವಾಹಿನಿ ಚಿತ್ರ

- ಕೇಂದ್ರ ಸರಕಾರ ಹಾವೇರಿ ಜಿಲ್ಲೆಗೆ ಎರಡೆರಡು ವಂದೇ ಭಾರತ್ ರೈಲು ನಿಲುಗಡೆಗೆ ಅವಕಾಶ
- ಹಾವೇರಿ, ಬ್ಯಾಡಗಿ ಸ್ಟೇಶನ್ ಅಭಿವೃದ್ಧಿ ಬಗ್ಗೆ ಕೇಂದ್ರದ ಗಮನಕ್ಕೆ ತಂದಿದ್ದೇವೆ

ರಾಣೇಬೆನ್ನೂರು ಗೂಡ್‌ಶೆಡ್ ವಿಸ್ತರಣೆ ಹಾಗೂ ಬ್ಯಾಡಗಿಯಲ್ಲಿ ಹಲವು ಟ್ರೈನ್ ನಿಲುಗಡೆಯಾಗಬೇಕು. ರಾಣೇಬೆನ್ನೂರು–ಶಿವಮೊಗ್ಗ ಮಾರ್ಗ ಹಾಗೂ ಗದಗ–ಯಲವಿಗಿ ಮಾರ್ಗಕ್ಕೆ ಭೂಸ್ವಾಧೀನ ಮಾಡಿಕೊಡುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ರಾಜ್ಯ ಸರಕಾರ ಆದಷ್ಟು ಬೇಗ ಭೂ ಸ್ವಾಧೀನ ಮಾಡಿಸಿ ಕೊಡಬೇಕು. ನಿಗದಿತ ಸಮಯದಲ್ಲಿ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

**ಎಸ್ಕಲೇಟರ್ ತೊಡಕು:** ಹಾವೇರಿಗೆ ಎಸ್ಕಲೇಟರ್ ವ್ಯವಸ್ಥೆ ಮಾಡುವುದು ಕಷ್ಟ ಆಗಲಿದ್ದು, ಲಿಫ್ಟ್ ವ್ಯವಸ್ಥೆ ಮಾಡಿಸಿಕೊಡುವಂತೆ ಕೇಂದ್ರ ಸರಕಾರಕ್ಕೆ ಕಳಕಳಿ ಮಾಡಿದ್ದೇನೆ. ದೇಶದಲ್ಲಿ ಪ್ರಗತಿಯ ವೇಗ ಹೆಚ್ಚಿದೆ. ಅಮೆರಿಕ ಸವಾಲು ಸ್ವೀಕಾರ ಮಾಡಿದ್ದೇವೆ. ಅಭಿವೃದ್ಧಿ ಕಾರ್ಯದಲ್ಲಿ ಬೆಂಬಲ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ವಿರೂಪಾಕ್ಷಪ್ಪ ಬಳ್ಳಾರಿ, ನಗರಸಭೆ ಅಧ್ಯಕ್ಷೆ ಶಶಿಕಲಾ ಮಾಳಗಿ, ರೈಲ್ವೆ ವಿಭಾಗದ ವ್ಯವಸ್ಥಾಪಕ ಮುದಿತ್ ಮಿತ್ತಲ್, ಅಪರ ಜಿಲ್ಲಾಧಿಕಾರಿ ಡಾ.ಎಲ್.ನಾಗರಾಜ, ಹೆಚ್ಚುವರಿ ಎಸ್‌ಪಿ ಲಕ್ಷ್ಮಣ ಶಿರಕೋಳ ಸೇರಿದಂತೆ ರೈಲ್ವೆ ಇಲಾಖೆ ಅಧಿಕಾರಿ, ಸಿಬ್ಬಂದಿ ಇದ್ದರು.

> ಕಳೆದ 11 ವರ್ಷಗಳಿಂದ ಇತ್ತೀಚೆಗೆ ಶಿಕ್ಷಣ, ಕೃಷಿ, ಆರೋಗ್ಯ, ಸಾರಿಗೆ ಸೇರಿದಂತೆ ಎಲ್ಲಾ ವಲಯಗಳಲ್ಲಿ ಅಭಿವೃದ್ಧಿ ಹೊಂದುತ್ತಿದೆ. ಅದರಲ್ಲಿ ಸಾರಿಗೆ ಭಾಗದ ರೈಲ್ವೆ ವಲಯದಲ್ಲಿ ಕ್ರಾಂತಿ ಆಗಿದೆ. ವಿದ್ಯುದ್ದೀಕರಣ, ಹೆಚ್ಚುವರಿ ಹಳಿ ನಿರ್ಮಾಣ, ಡಬ್ಲಿಂಗ್ ವ್ಯವಸ್ಥೆ, ನಮೋ ನಾಯಕತ್ವದಲ್ಲಿ ದೇಶ ಇಡೀ ಜಗತ್ತಿನಲ್ಲಿ ನಂಬರ್ ಒನ್ ರಾಷ್ಟ್ರ ಆಗಿ ಹೊರ ಹೊಮ್ಮುವ ಭರವಸೆ ಇದೆ.
>
> – ಎಸ್.ವಿ.ಸಂಕನೂರ, ವಿಧಾನ ಪರಿಷತ್ ಸದಸ್ಯ

# ಪಾಕಿಸ್ತಾನವೆಂಬ ಟ್ರಕ್ ಭಾರತವೆಂಬ ಫೆರಾರಿಗೆ ಗುದ್ದಿದರೆ ಏನಾಗುತ್ತೆ?



**ವಾಷಿಂಗ್ಟನ್:** ಎರಡನೇ ಬಾರಿ ಅಮೆರಿಕ ಪ್ರವಾಸ ಮಾಡುತ್ತಿರುವ ಪಾಕಿಸ್ತಾನ ಸೇನಾಧ್ಯಕ್ಷ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್, ಜಗತ್ತಿಗೆ ಪರಮಾಣು ಯುದ್ಧದ ಬೆದರಿಕೆ ಹಾಕಿದ್ದಾರೆ. ಅಮೆರಿಕದ ನೆಲದಲ್ಲಿ ನಿಂತು, ಅರ್ಧದಷ್ಟು ಜಗತ್ತನ್ನು ಸರ್ವನಾಶ ಮಾಡಿದ ಬಳಿಕ ಪಾಕಿಸ್ತಾನ ನಾಶವಾಗುತ್ತದೆ ಎಂದು ಅಸಿಮ್ ಮುನೀರ್ ಗುಡುಗಿದ್ದಾರೆ. ಈ ಮೂಲಕ ಪಾಕಿಸ್ತಾನದ ಭವಿಷ್ಯವೇನು ಎಂಬುದನ್ನು, ಖುದ್ದು ಆ ರಾಷ್ಟ್ರದ ಸೇನಾ ಮುಖ್ಯಸ್ಥರೇ ಖಚಿತಪಡಿಸಿದ್ದಾರೆ.

ಫ್ಲೋರಿಡಾದ ಟ್ಯಾಂಪಾದಲ್ಲಿ ಖಾಸಗಿ ಭೋಜನಕೂಟದಲ್ಲಿ ಮಾತನಾಡಿರುವ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್, ಭಾರತವನ್ನು ಗುರಿಯಾಗಿಸಿಕೊಂಡು ತೀವ್ರ ಅಸಂಬದ್ಧ ಹೇಳಿಕೆಗಳನ್ನು ನೀಡಿದ್ದಾರೆ. ಅಸಿಮ್ ಮುನೀರ್ ಅವರ ಹೇಳಿಕೆಗಳಿಂದ ಖುದ್ದು ಪಾಕಿಸ್ತಾನವೇ ಮುಜುಗರಕ್ಕೀಡಾಗಿದೆ. ತಮ್ಮ ಭಾಷಣದುದ್ದಕ್ಕೂ ಭಾರತದ ವಿರುದ್ಧ ಕೆಂಡ ಕಾರಿರುವ ಅಸಿಮ್ ಮುನೀರ್, ಭಾರತ ಸಿಂಧೂ ನದಿ ಪ್ರದೇಶದಲ್ಲಿ ಅಣೆಕಟ್ಟು ಕಟ್ಟುವುದನ್ನೇ ನಾವು ಕಾಯುತ್ತಿದ್ದೇವೆ. ಅವರು ಅಣೆಕಟ್ಟು ಕಟ್ಟಿದ ಬಳಿಕ ನಾವು 10 ಕ್ಷಿಪಣಿ ಉಡಾಯಿಸಿ ಅದನ್ನು ನಾಶ ಮಾಡುತ್ತೇವೆ ಎಂದೆಲ್ಲಾ ತಲೆಬುಡವಿಲ್ಲದೇ ಮಾತನಾಡಿದ್ದಾರೆ.

**ಪಾಕ್ ಟ್ರಂಕ್ ಮತ್ತು ಭಾರತದ ಫೆರಾರಿ:** ಇದೇ ವೇಳೆ ಪಾಕಿಸ್ತಾನವನ್ನು ಜಲ್ಲಿ ತುಂಬಿದ ಟ್ರಕ್‌ಗೆ ಹೋಲಿಸಿರುವ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್, ಭಾರತವನ್ನು ಅತ್ಯಾಧುನಿಕ ಹೊಳೆಯುವ ಮರ್ಸಿಡೀಸ್ ಅಥಾ ಫೆರಾರಿ ಕಾರಿಗೆ ಹೋಲಿಸಿದ್ದಾರೆ.

ಭಾರತ ಹೊಳೆಯುತ್ತಿದೆ. ಫೆರಾರಿಯಂತೆ ಹೆದ್ದಾರಿಯಲ್ಲಿ ವೇಗವಾಗಿ ಓಡುತ್ತಿದೆ. ಆದರೆ ನಾವು ಜಲ್ಲಿಕಲ್ಲುಗಳಿಂದ ತುಂಬಿದ ಡಂಪ್ ಟ್ರಕ್ ರೀತಿ ನಿಧಾನಕ್ಕೆ ಬರುತ್ತಿದ್ದೇವೆ. ಆದರೆ ಹೆದ್ದಾರಿಯಲ್ಲಿ ಟ್ರಕ್‌ವೊಂದು ಕಾರಿಗೆ ಡಿಕ್ಕಿ ಹೊಡೆದರೆ ಏನಾಗುತ್ತದೆ? ಎಂದು ಪಾಕ್ ಸೇನಾಧ್ಯಕ್ಷ ಅಸಿಮ್ ಮುನೀರ್ ಪ್ರಶ್ನಿಸಿದ್ದಾರೆ. ಅಸಿಮ್ ಮುನೀರ್ ಅವರ ಈ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಟ್ರೋಲ್‌ಗೆ ಗುರಿಯಾಗಿದ್ದು, ತಮ್ಮದೇ ಸ್ವಂತ ರಾಷ್ಟ್ರವನ್ನು ಡಂಪ್ ಟ್ರಕ್ ಎಂದು ಕರೆದ ಪಾಕ್ ಸೇನಾಧ್ಯಕ್ಷರಿಗೆ ನೊಬೆಲ್ ಪ್ರಶಸ್ತಿ ಕೊಡಬೇಕೆಂಬ ಆಗ್ರಹ ಕೇಳಿಬಂದಿದೆ.

- ಪಾಕಿಸ್ತಾನ ಒಂದು ಡಂಪ್ ಟ್ರಕ್ ಇದ್ದಂತೆ ಎಂದ ಸೇನಾಧ್ಯಕ್ಷ ಅಸಿಮ್ ಮುನೀರ್.
- ಭಾರತ ಹೊಳೆಯುತ್ತಿರುವ ಫೆರಾರಿ ಕಾರಿನಂತಿದೆ ಎಂದ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್.
- ಭಾರತ-ಪಾಕ್ ಡಿಕ್ಕಿ ಬಗ್ಗೆ ಮಾತನಾಡಿದ ಅಸಿಮ್ ಮುನೀರ್ ಸಕ್ಕತ್ ಟ್ರೋಲ್.


ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಜಾರಿಯಾಗುವಲ್ಲಿ ಶ್ರಮಿಸಿದ್ದಕ್ಕಾಗಿ, ಅಸಿಮ್ ಮುನೀರ್ ಅವರು ನೊಬೆಲ್ ಶಾಂತಿ ಪ್ರಶಸ್ತಿಗೆ ಡೊನಾಲ್ಡ್ ಟ್ರಂಪ್ ಹೆಸರು ಶಿಫಾರಸ್ಸು ಮಾಡಿದ್ದರು.

### ಹೈವೇಗಾದರೂ ಬಾ ಗೊತ್ತಾಗುತ್ತೆ

**ಅಮೆರಿಕದ ವಿರುದ್ಧ ಆಕ್ರೋಶ:** ಇನ್ನು ಪಾಕ್ ಸೇನಾಧ್ಯಕ್ಷ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅಮೆರಿಕದ ನೆಲದಲ್ಲಿ ನಿಂತು ಜಗತ್ತಿಗೆ ಪರಮಾಣು ಯುದ್ಧದ ಬೆದರಿಕೆ ಹಾಕಿದ್ದಾರೆ. ಈ ಮೂಲಕ ಅಮೆರಿಕದ ನೆಲದಿಂದ ಬೇರೊಂದು ದೇಶದ ಮಿಲಿಟರಿ ನಾಯಕ ಜಗತ್ತಿಗೆ ಇದೇ ಮೊದಲ ಬಾರಿಗೆ ಪರಮಾಣು ಬೆದರಿಕೆ ಹಾಕಿದಂತಾಗಿದೆ. ಈ ಕಾರಣಕ್ಕೆ ಅಮೆರಿಕದ ವಿರುದ್ಧವೂ ಎಲ್ಲೆಡೆ ಆಕ್ರೋಶ ವ್ಯಕ್ತವಾಗಿದೆ.

ದೇಶವೊಂದರ ಮಿಲಿಟರಿ ನಾಯಕ ಅಮೆರಿಕಕ್ಕೆ ಬಂದು ಜಗತ್ತಿಗೆ ಪರಮಾಣು ಬೆದರಿಕೆಯೊಡ್ಡಿರುವುದನ್ನು ನಂಬಲಾಗುತ್ತಿಲ್ಲ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ ಇಷ್ಟೊಂದು ದುರ್ಬಲವಾಗಿದೆಯೇ? ಎಂದು ಅನೇಕರು ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ. ಅಸಿಮ್ ಮುನೀರ್ ಅವರ ಮೊದಲ ಅಮೆರಿಕ ಭೇಟಿಯಲ್ಲಿ ಡೊನಾಲ್ಡ್ ಟ್ರಂಪ್-ಅಸಿಮ್ ಮುನೀರ್ ಭೋಜನಕೂಟ ಸಮಾರಂಭಕ್ಕೂ ಇಂತದ್ದೇ ವಿರೋಧ ವ್ಯಕ್ತವಾಗಿತ್ತು. ಅಸಿಮ್ ಮುನೀರ್ ಅವರ ಹೇಳಿಕೆ ತೀವ್ರ ಅಸಂಬದ್ಧ ಮತ್ತು ಬಾಲಿಶವಾಗಿದ್ದು, ರಾಷ್ಟ್ರವೊಂದರ ಸೇನಾ ಮುಖ್ಯಸ್ಥರು ಈ ರೀತಿ ಮಾತನಾಡಬಾರದು ಎಂದು ಹಲವರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

# ನಿಷೇಧಿತ ಸಂಘಟನೆಗಳ ಐವರು ಉಗ್ರರ ಬಂಧನ



**ಇಂಫಾಲ:** ಮಣಿಪುರದ ಬಿಷ್ಣುಪುರ, ಇಂಫಾಲ ಪಶ್ಚಿಮ ಮತ್ತು ಇಂಫಾಲ ಪೂರ್ವ ಜಿಲ್ಲೆಗಳಲ್ಲಿ ಮೂರು ನಿಷೇಧಿತ ಸಂಘಟನೆಗಳಿಗೆ ಸೇರಿದ ಐದು ಉಗ್ರಗಾಮಿಗಳನ್ನು ಸುಲಿಗೆ ಮತ್ತು ಅಕ್ರಮ ಶಸ್ತ್ರಾಸ್ತ್ರಗಳನ್ನು ಹೊಂದಿದ್ದ ಆರೋಪದಡಿ ಭದ್ರತಾ ಪಡೆಗಳು ಬಂಧಿಸಿವೆ. ಕಾಂಗಲೇಯಿಪಾಕ್ ಕಮ್ಯುನಿಸ್ಟ್ ಪಾರ್ಟಿ, ಯುಎನ್‌ಎಲ್‌ಎಫ್, ಪೀಪಲ್ಸ್ ಲಿಬರೇಷನ್ ಆರ್ಮಿಯ ಸದಸ್ಯರನ್ನು ಸ್ಫೋಟಕಗಳ ಸಮೇತ ಬಂಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಬಿಷ್ಣುಪುರ ಜಿಲ್ಲೆಯಲ್ಲಿ ಯುಎನ್‌ಎಲ್‌ಎಫ್‌ನ ಸಕ್ರಿಯ ಕಾರ್ಯಕರ್ತರ 50 ವರ್ಷದ ಚೌಡಮ್ ಬಾಬಿ ಸಿಂಗ್‌ನನ್ನು ಬಂಧಿಸಲಾಗಿದ್ದು, ಆತನ ಬಳಿ 303 ರೈಫಲ್, ಐದು ಮ್ಯಾಗಜೀನ್‌ಗಳು, ಒಂದು ಹ್ಯಾಂಡ್ ಗ್ರೆನೇಡ್, ವಿವಿಧ ಕ್ಯಾಲಿಬರ್‌ಗಳ 501 ಮದ್ದುಗುಂಡುಗಳು ಸೇರಿದಂತೆ ಇತರ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. 2023ರಲ್ಲಿ ಯುಎನ್‌ಎಲ್‌ಎಫ್ (ಪಿ) ಸಂಘಟನೆಯು ಕೇಂದ್ರ ಸರ್ಕಾರದೊಂದಿಗೆ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿತ್ತು. ಆದಾಗ್ಯೂ, ಇದರ ಕಾರ್ಯಕರ್ತರನ್ನು ಸುಲಿಗೆ ಅಕ್ರಮ ಶಸ್ತ್ರಾಸ್ತ್ರಗಳ ಬಳಕೆ ಕಾನೂನು ಬಾಹಿರ ಚಟುವಟಿಕೆಗಳಿಯಿಂದಾಗಿ ಬಂಧಿಸಲಾಗುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ. ಪಿಎಲ್‌ಎ, ಕೆಸಿಪಿ, ಕವೈಕೆಎಲ್, ಯುಎನ್‌ಎಲ್‌ಎಫ್ ಸಂಘಟನೆಗಳಿಗೆ ಸೇರಿದ ಆರು ಬಂಡುಕೋರರನ್ನು ತೌಬಾಲ್, ಪೂರ್ವ ಇಂಫಾಲ್ ಜಿಲ್ಲೆಗಳಲ್ಲಿ ಬಂಧಿಸಲಾಗಿತ್ತು.

### ಬ್ಯಾರಿಕೇಡ್ ಹಾರಿದ ಅಖಿಲೇಶ್ ಯಾದವ್, ಕನ್ನಡದಲ್ಲಿ ಘೋಷಣೆ ಕೂಗಿದ ಪ್ರಿಯಾಂಕಾ ಗಾಂಧಿ

# ಇಂಡಿ ಮೈತ್ರಿಕೂಟ ನಾಯಕರಿಂದ ಪ್ರತಿಭಟನೆ

**ಹೊಸದಿಲ್ಲಿ:** ಬಿಹಾರದಲ್ಲಿ ಚುನಾವಣಾ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಮತ್ತು 2024ರ ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನದ ವಿರುದ್ಧ, ಪ್ರತಿಪಕ್ಷ ಇಂಡಿಯಾ ಮೈತ್ರಿಕೂಟ ರಾಷ್ಟ್ರರಾಜಧಾನಿ ಹೊಸದಿಲ್ಲಿಯಲ್ಲಿ ಇಂದು ಸೋಮವಾರ ಭಾರೀ ಪ್ರತಿಭಟನೆ ನಡೆಸಿದೆ. ಸಂಸತ್ತಿನಿಂದ ಚುನಾವಣಾ ಆಯೋಗದ ಕಚೇರಿವರೆಗೆ ಪ್ರತಿಭಟನೆ ಮೆರವಣಿಗೆ ನಡೆಸುತ್ತಿದ್ದ ಇಂಡಿಯಾ ಮೈತ್ರಿಕೂಟದ ನಾಯಕರನ್ನು ಪೊಲೀರು ವಶಕ್ಕೆ ಪಡೆದುಕೊಂಡಿದ್ದು, ಪೊಲೀಸ್ ಬಂಧನ ವಿರೋಧಿಸಿ ಠಾಣೆ ಬಳಿಯೇ ವಿಪಕ್ಷ ನಾಯಕರು ಧರಣಿ ಕೂಡ ನಡೆಸಿದ್ದಾರೆ. ಈ ಮಧ್ಯೆ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿದ್ದ ಉತ್ತರ ಪ್ರದೇಶ ಮಾಜಿ ಮುಖ್ಯಮಂತ್ರಿ, ಸಮಾಜವಾದಿ ಪಕ್ಷದ ಸಂಸದ ಅಖಿಲೇಶ್ ಯಾದವ್, ಪೊಲೀಸರು ಹಾಕಿದ್ದ ಬ್ಯಾರಿಕೇಡ್‌ನ್ನು ಹಾರಿ ಗಮನ ಸೆಳೆದರು. ಚುನಾವಣಾ ಆಯೋಗದ ಕಚೇರಿಯತ್ತ ತೆರಳುತ್ತಿದ್ದ ಇಂಡಿಯಾ ಮೈತ್ರಿಕೂಟದ ನಾಯಕರನ್ನು ತಡೆಯಲು, ದೆಹಲಿ ಪೊಲೀಸರು ಮಾರ್ಗಮಧ್ಯೆ ಬ್ಯಾರಿಕೇಡ್‌ಗಳನ್ನು ಹಾಕಿದ್ದರು. ಈ ವೇಳೆ ಬ್ಯಾರಿಕೇಡ್‌ನ್ನು ಹಾರಿ ಮುಂದೆ ಸಾಗಿದ ಅಖಿಲೇಶ್ ಯಾದವ್ ಅವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡರು.

**ಪ್ರಿಯಾಂಕಾ ಗಾಂಧಿ ಕನ್ನಡದಲ್ಲಿ ಘೋಷಣೆ:** ಇನ್ನು ಇಂಡಿಯಾ ಮೈತ್ರಿಕೂಟ ಹಮ್ಮಿಕೊಂಡಿದ್ದ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ, ಕನ್ನಡದಲ್ಲಿ ಘೋಷಣೆ ಕೂಗಿ ಗಮನ ಸೆಳೆದರು. ಬೇಡ, ಬೇಡ, SIR ಬೇಡ ಎಂದು ಕನ್ನಡದಲ್ಲಿ ಘೋಷಣೆ ಕೂಗಿದ ಪ್ರಿಯಾಂಕಾ ಗಾಂಧಿ , ಇತರರನ್ನೂ ಕನ್ನಡದಲ್ಲಿ ಘೋಷಣೆ ಕೂಗುವಂತೆ ಒತ್ತಾಯಿಸಿದರು.

ಈ ಕುರಿತು ಕರ್ನಾಟಕ ಕಾಂಗ್ರೆಸ್ ಘಟಕ ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿದ್ದು, ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಕನ್ನಡದಲ್ಲಿ ಘೋಷಣೆ ಕೂಗಿದ್ದಾರೆ ಎಂದು ಹೇಳಿದೆ.



**ರಾಹುಲ್ ಗಾಂಧಿ ಅವರನ್ನು ಕರೆದೊಯ್ದಿದ್ದ ಠಾಣೆಯ ಮುಂದೆ ಜಮಾಯಿಸಿದ ವಿಪಕ್ಷ ನಾಯಕರು, ಪ್ರಜಾಪ್ರಭುತ್ವ ಮಾದರಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದ ನಾಯಕರನ್ನು ಬಿಡುಗಡೆ ಮಾಡಬೇಕು ಎಂದು ಘೋಷಣೆ ಕೂಗಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ಈ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಬಿಹಾರದಲ್ಲಿ SIR ಪ್ರಕ್ರಿಯೆ ಅಕ್ರಮ, ಲೋಕಸಭೆ ಚುನಾವಣೆಗಳಲ್ಲಿ ಮತಗಳ್ಳತನ ಆರೋಪ ಹೊರಿಸಿರುವ ಇಂಡಿಯಾ ಮೈತ್ರಿಕೂಟ, ಚುನಾವಣಾ ಆಯೋಗ ಮತ್ತು ಬಿಜೆಪಿ ಅಕ್ರಮದಲ್ಲಿ ಭಾಗಿ ಆಗಿರುವ ಗಂಭೀರ ಆರೋಪ ಮಾಡಿದೆ.**

### ಮತಗಳ್ಳತನದ ಆರೋಪ

**ರಾಷ್ಟ್ರರಾಜಧಾನಿ ಹೊಸದಿಲ್ಲಿಯಲ್ಲಿ ಸೋಮವಾರ ಇಂಡಿಯಾ ಮೈತ್ರಿಕೂಟ ಹಮ್ಮಿಕೊಂಡಿದ್ದ ಪ್ರತಿಭಟನೆ, ವಿಶಿಷ್ಟಗಳಿಗೆ ಸಾಕ್ಷಿಯಾಗಿದೆ. ಸಂಸತ್ತಿನಿಂದ ಚುನಾವಣಾ ಆಯೋಗದತ್ತ ಹೊರಟಿದ್ದ ವಿಪಕ್ಷ ನಾಯಕರನ್ನು ತಡೆಯಲು, ಪೊಲೀಸರು ಹಾಕಿದ್ದ ಬ್ಯಾರಿಕೇಡ್‌ನ್ನು ಸಮಾಜವಾದಿ ಪಕ್ಷದ ಸಂಸದ ಅಖಿಲೇಶ್ ಯಾದವ್ ಹಾರಿದರೆ, ಪ್ರತಿಭಟನೆ ವೇಳೆ ಕನ್ನಡದಲ್ಲಿ ಘೋಷಣೆ ಕೂಗಿ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಗಮನ ಸೆಳದರು. ಬಿಹಾರದಲ್ಲಿ SIR ಪ್ರಕ್ರಿಯೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಮತಗಳ್ಳತನದ ಆರೋಪ ಹೊರಿಸಿ, ಇಂಡಿಯಾ ಮೈತ್ರಿಕೂಟ ಪ್ರತಿಭಟನೆ ಹಮ್ಮಿಕೊಂಡಿತ್ತು.**

**ವಿಪಕ್ಷ ನಾಯಕರ ಬಂಧನ:** ಇನ್ನು SIR, ಮತಗಳ್ಳತನವನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದ ಇಂಡಿಯಾ ಮೈತ್ರಿಕೂಟದ ನಾಯಕರನ್ನು, ದೆಹಲಿ ಪೊಲೀಸರು ವಶಕ್ಕೆ ಪಡೆದುಕೊಂಡರು. ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಸಂಜಯ್ ರಾವತ್, ಸಾಗರಿಕಾ ಘೋಷ್ ಸೇರಿದಂತೆ ಅನೇಕ ಸಂಸದರನ್ನು ಪೊಲೀಸರು ಬಂಧಿಸಿದರು. ಇಂಡಿಯಾ ಮೈತ್ರಿಕೂಟದ ನಾಯಕರ ಬಂಧನ ವಿರೋಧಿಸಿ, ಠಾಣೆ ಎದುರೇ ಪ್ರತಿಭಟನೆ ನಡೆಸಿದ ವಿಪಕ್ಷ ನಾಯಕರು, ಸರ್ಕಾರ ಪ್ರತಿಭಟನೆ ನಡೆಸುವ ವಿಪಕ್ಷಗಳ ಸಾಂವಿಧಾನಿಕ ಹಕ್ಕಿನ ಮೇಲೆ ದಾಳಿ ಮಾಡುತ್ತಿದೆ ಎಂದು ಆರೋಪಿಸಿದರು.

# ಸ್ವಾತಂತ್ರ್ಯ ದಿನದಂದು ಮಾಂಸ ಮಾರಾಟ ನಿಷೇಧ; ಕೆಡಿಎಂಸಿ ಆದೇಶಕ್ಕೆ ತೀವ್ರ ವಿರೋಧ

**ಮಹಾರಾಷ್ಟ್ರ:** ಸ್ವಾತಂತ್ರ್ಯ ದಿನದಂದು ಮಾಂಸ ಮಾರಾಟವನ್ನು ನಿಷೇಧಿಸಿ ಆದೇಶ ಹೊರಡಿಸಿರುವ ಕಲ್ಯಾಣ್ ಡೊಂಬಿವಾಲಿ ಮುನ್ಸಿಪಲ್ ಕಾರ್ಪೊರೇಷನ್ ಆದೇಶಕ್ಕೆ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಕೆಡಿಎಂಸಿ ಆದೇಶದ ಪ್ರಕಾರ, ಮೇಕೆ, ಕುರಿ, ಕೋಳಿ ಮತ್ತು ದೊಡ್ಡ ಪ್ರಾಣಿಗಳ ಪರವಾನಗಿ ಪಡೆದ ಕಸಾಯಿಖಾನೆಗಳು ಹಾಗೂ ಮಾಂಸ ಮಾರಾಟ ಮಳಿಗೆಗಳು, ಅಂಗಡಿಗಳು ಆಗಸ್ಟ್ 14 ರ ಮಧ್ಯರಾತ್ರಿಯಿಂದ ಆ. 15ರ ಮಧ್ಯರಾತ್ರಿಯವರೆಗೆ ಯಾವುದೇ ಮಾಂಸ ಮಾರಾಟಕ್ಕೆ ಅವಕಾಶವಿಲ್ಲ. ಒಂದು ವೇಳೆ ಆ ದಿನ ಮಾಂಸ ಮಾರಾಟವಾದರೇ, ಕಾಯ್ದೆ 1949 ರ ಅಡಿಯಲ್ಲಿ ಕ್ರಮ ಕೈಗೊಳ್ಳುವುದಾಗಿ ಕಲ್ಯಾಣ್ ಡೊಂಬಿವಾಲಿ ಮುನ್ಸಿಪಲ್ ಕಾರ್ಪೊರೇಷನ್ ಸಂಸ್ಥೆ ಹೇಳಿದೆ. ಕೆಡಿಎಂಸಿ ಆದೇಶಕ್ಕೆ ಪ್ರತಿಕ್ರಿಯಿಸಿರುವ ವಿರೋಧ ಪಕ್ಷಗಳಾದ ಎನ್‌ಸಿಪಿ, ಶಿವಸೇನೆ ನಾಯಕರು, ನಮಗೆ ಯಾವ ಆಹಾರ ಬೇಕೊ ಅದನ್ನು ಸೇವಿಸುತ್ತೇವೆ. ಸ್ವಾತಂತ್ರ್ಯ ದಿನದ ಪ್ರಯುಕ್ತ ಆ ದಿನ ನಾನು ಮಟನ್ ಪಾರ್ಟಿ ಮಾಡುತ್ತೇನೆ. ನಮ್ಮ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲು ನೀವು ಯಾರು ಎಂದು ಪ್ರಶ್ನಿಸಿ ಠಾಣೆ ಜಿಲ್ಲೆಯ ಕಲ್ವಾ-ಮುಂಬ್ರೈ ವಿಧಾನಸಭಾ ಕ್ಷೇತ್ರದ ಅವ್ಹಾದ್ ಆದೇಶವನ್ನು ವಿರೋಧಿಸಿದ್ದಾರೆ. ಜನರ ಆಹಾರ ಆಯ್ಕೆಗಳನ್ನು ನಿರ್ದೇಶಿಸಿದ್ದಕ್ಕಾಗಿ ಕೆಡಿಎಂಸಿ ಆಯುಕ್ತರನ್ನು ಅಮಾನತುಗೊಳಿಸಬೇಕೆಂದು ಶಿವಸೇನೆ ಶಾಸಕ ಆದಿತ್ಯ ಠಾಕ್ರೆ ಒತ್ತಾಯಿಸಿದರು. ಕೆಡಿಎಂಸಿಯ ಕ್ರಮವನ್ನು ಸಮರ್ಥಿಸಿಕೊಂಡ ಶಿವಸೇನಾ ನಾಯಕ ವಿಶ್ವನಾಥ್ ಭೋಯಿರ್, ಜನರ ಆಹಾರ ಕ್ರಮವನ್ನು ವಿರೋಧಿಸುತ್ತಿಲ್ಲ. ಒಂದು ದಿನ ಮಾಂಸ ತಿನ್ನದಿದ್ದರೆ ಏನು ಸಮಸ್ಯೆ ವಿರೋಧ ಪಕ್ಷಗಳಿಗೆ ಟೀಕಿಸುವುದು ಮಾತ್ರ ತಿಳಿದಿದೆ ಎಂದು ಅವರು ಹೇಳಿದರು.



# ಅಣುಬಾಂಬ್ ಬೆದರಿಕೆ ಹಾಕಿದ ಪಾಕ್ ಜನರಲ್ ಮುನೀರ್



**ನ್ಯೂಯಾರ್ಕ್:** ಪಾಕಿಸ್ತಾನ ಸೇನೆ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಅಮೆರಿಕದ ನೆಲದಲ್ಲಿ ನಿಂತು ಭಾರತ ವಿರೋಧಿ ಹೇಳಿಕೆ ನೀಡಿರುವುದಲ್ಲದೇ ಪ್ರಪಂಚಕ್ಕೇ ಅಣು ಬಾಂಬ್ ಬೆದರಿಕೆ ಹಾಕಿರುವುದು ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ಫ್ಲೋರಿಡಾದ ಟಾಂಪಾದಲ್ಲಿ ಪಾಕ್ ಮೂಲದ ಅಮೆರಿಕನ್ ಉದ್ಯಮಿ ಅದ್ನಾನ್ ಅಸಾದ್ ಎಂಬುವರು ಆಯೋಜಿಸಿದ್ದ ಸ್ನೇಹಕೂಟ ಹಾಗೂ ವಲಸಿಗರ ಸಭೆಯಲ್ಲಿ ಭಾಗಿಯಾಗಿದ್ದ ಮುನೀರ್ ಈ ಮಾತುಗಳನ್ನು ಆಡಿದ್ದಾರೆ ಎಂಬ ವರದಿಗಳು ಬಂದಿವೆ.

ನಾವು ಸಹ ಅಣ್ವಸ್ತ್ರಗಳನ್ನು ಹೊಂದಿದ್ದೇವೆ. ಒಂದು ವೇಳೆ ಯುದ್ಧಗಳು ನಡೆದು ನಾವು ಸೋತು ಹೋಗುತ್ತೇವೆ ಎನ್ನುವುದಾದರೆ ಆಗ ಅರ್ಧ ಪ್ರಪಂಚವನ್ನೇ ಮುಳುಗಿಸಿ ಹೋಗುತ್ತೇವೆ ಎಂದು ಅವರು ಪರೋಕ್ಷವಾಗಿ ಭಾರತಕ್ಕೆ ಬೆದರಿಕೆ ಹಾಕಿದ್ದಾರೆ. ಈ ಕುರಿತು ಎನ್‌ಡಿಟಿವಿ ವೆಬ್‌ಸೈಟ್ ವರದಿ ಮಾಡಿದೆ. ಇಂಡಸ್ ನದಿ ಭಾರತದ ಸ್ವತ್ತಲ್ಲ, ಅವರು ನದಿ ನೀರನ್ನು ತಡೆದಿದ್ದಾರೆ. ಡ್ಯಾಮ್ ಕಟ್ಟುತ್ತೇವೆ ಎಂದು ಹೇಳಿದ್ದಾರೆ. ಕಟ್ಟಲಿ ನೋಡೋಣ, ಆಗ ನಮ್ಮ ಹತ್ತೇ ಹತ್ತು ಮಿಸೈಲ್‌ಗಳಿಂದ ಡ್ಯಾಮ್ ಅನ್ನು ಪುಡಿಗಟ್ಟುತ್ತೇವೆ' ಎಂದೂ ಹೇಳಿದ್ದಾರೆ. ಸಿಂಧೂ ಜಲ ಒಪ್ಪಂದ ರದ್ದು ಮಾಡಿದ್ದಾರೆ. ಅದರಿಂದ ಅವರು ನಮ್ಮ 25 ಕೋಟಿ ಜನರನ್ನು ಹಸಿವಿಗೆ ಸಿಕ್ಕಿಸಬಹುದು. ಆದರೆ, ಸಿಂಧೂ ನದಿಗೆ ಡ್ಯಾಮ್ ಕಟ್ಟಿದರೆ ನಮ್ಮ ಹತ್ತಿರ ಮಿಸೈಲ್‌ಗಳಿಗೆ ಕೊರತೆ ಏನೂ ಇಲ್ಲವಲ್ಲ' ಎಂದು ತನ್ನ ಜನರ ಎದುರು ಮುನೀರ್ ಮೈಲೇಜ್ ತೆಗೆದುಕೊಂಡಿದ್ದಾರೆ. ಅಷ್ಟೇ ಅಲ್ಲದೇ ಇದೇ ಸಭೆಯಲ್ಲಿ ಮುನಿರ್ ಪಾಕಿಸ್ತಾನದ ಪಾಲಿಗೆ ಕಾಶ್ಮೀರವು ಕಂಠನಾಳವಿದ್ದಂತೆ. ಕಾಶ್ಮೀರ ಪಾಕಿಸ್ತಾನಕ್ಕೇ ಸೇರಿದ್ದು ಎಂದು ಪುನರುಚ್ಚರಿಸಿರುವುದಾಗಿ ಪಿಟಿಐ ವರದಿ ಮಾಡಿದೆ. ಭಾರತ ಇತ್ತೀಚೆಗೆ ನಮ್ಮ ಜೊತೆ ಆರಂಭಿಸಿದ್ದ ಸಂಘರ್ಷದಲ್ಲಿ ತಕ್ಕ ಎದಿರೇಟು ನೀಡಿದ್ದೇವೆ. ಮತ್ತೆನಾದರೂ ಆಕ್ರಮಣ ಮಾಡಲು ಮುಂದಾದರೆ ಸೂಕ್ತ ಪ್ರತ್ಯುತ್ತರ ನೀಡಲಾಗುವುದು ಎಂದು ಮುನಿರ್ ಹೇಳಿರುವುದಾಗಿ ವರದಿ ತಿಳಿಸಿದೆ.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಾಯಕತ್ವವನ್ನು ನಾವು ಮೆಚ್ಚಿಕೊಂಡಿದ್ದೇವೆ. ಭಾರತ ಪಾಕಿಸ್ತಾನ ಸಂಘರ್ಷ ಶಮನ ಸೇರಿದಂತೆ ಪ್ರಪಂಚದ ಅನೇಕ ಕಡೆ ಸಂಘರ್ಷಗಳನ್ನು ಶಮನ ಮಾಡಿರುವ ಅವರ ಕಾರ್ಯತಂತ್ರಕ್ಕೆ ನಾವು ತಲೆಬಾಗುತ್ತೇವೆ ಎಂದು ಟ್ರಂಪ್ ಅವರನ್ನು ಹಾಡಿಹೊಗಳಿದ್ದಾರೆ. ಇತ್ತೀಚಿನ ಅಮೆರಿಕ-ಪಾಕ್ ವ್ಯಾಪಾರ ಒಪ್ಪಂದಗಳು ಭಾರಿ ಹೂಡಿಕೆಗಳನ್ನು ಆಕರ್ಷಿಸುವ ಶಕ್ತಿ ಇದೆ. ಅಂತರರಾಷ್ಟ್ರೀಯ ಸ್ನೇಹ ಸಂಬಂಧಗಳ ಸುಧಾರಣೆಯಲ್ಲಿ ಇತ್ತೀಚೆಗೆ ಪಾಕಿಸ್ತಾನ ಭಾರಿ ಯಶಸ್ಸು ಸಾಧಿಸಿದೆ ಎಂದು ತನ್ನ ಜನರ ಎದುರು ಹೇಳಿದ್ದಾರೆ. ಭಾರತದೊಂದಿಗಿನ ಸಂಘರ್ಷದ ಬಳಿಕ ಮುನೀರ್ ಅವರು ಅಮೆರಿಕಕ್ಕೆ ನೀಡಿದ ಎರಡನೇ ಭೇಟಿ ಇದಾಗಿದೆ.

ಈ ಅಧಿಕೃತ ಭೇಟಿಯಲ್ಲಿ ರಾಜಕೀಯ ನಾಯಕರು ಅಮೆರಿಕ ಸೇನೆಯ ಮುಖ್ಯಸ್ಥರನ್ನು ಅವರು ಭೇಟಿ ಮಾಡಿದ್ದಾರೆ. ಅಮೆರಿಕದ ಸೆಂಟ್ರಲ್ ಕಮಾಂಡ್ ಕಮಾಂಡರ್ ಜನರಲ್ ಮೈಕೆಲ್ ಇ. ಕುರಿಲ್ಲಾ ಅವರ ನಿವೃತ್ತಿಯ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗಿಯಾಗಿದ್ದ ಅವರು, ದ್ವಿಪಕ್ಷೀಯ ಮಿಲಿಟರಿ ಸಹಕಾರ ಬಲಪಡಿಸಲು ಕುರಿಲ್ಲಾ ನೀಡಿದ್ದ ಕೊಡುಗೆಯನ್ನು ಸ್ಮರಿಸಿದ್ದಾರೆ. ಇದೇ ವೇಳೆ ಅಡ್ಮಿರಲ್ ಬ್ರಾಡ್ ಕೂಪರ್ ಭೇಟಿಯಾಗಿ ಜನ್ಮದಿನಕ್ಕೆ ಶುಭ ಕೋರಿದ್ದಾರೆ. ಅಮೆರಿಕ ಸೇನಾ ಪಡೆಯ ಜಂಟಿ ಮುಖ್ಯಸ್ಥ ಜನರಲ್ ಡಾನ್ ಕೇನ್ ಅವರನ್ನು ಭೇಟಿ ಮಾಡಿ ಚರ್ಚಿಸಿದ ಪಾಕ್ ಜನರಲ್, ಪಾಕಿಸ್ತಾನಕ್ಕೆ ಭೇಟಿ ನೀಡುವಂತೆ ಕೇನ್ ಅವರಿಗೆ ಆಹ್ವಾನ ನೀಡಿದ್ದಾರೆ.

# ಸಂಸದರಿದ್ದ ವಿಮಾನ ತುರ್ತು ಭೂಸ್ಪರ್ಶ



**ಪೈಲಟ್ ಕೌಶಲ ಮತ್ತು ನಮ್ಮ ಅದೃಷ್ಟದಿಂದಾಗಿ ನಾವು ಬಚಾವಾದೆವು. ಪ್ರಯಾಣಿಕರ ಸುರಕ್ಷತೆ ಎಂಬುದು ಅದೃಷ್ಟದ ಮೇಲೆ ಅವಲಂಬಿತವಾಗಿರಬಾರದು. ಈ ಘಟನೆಯ ಬಗ್ಗೆ ತಕ್ಷಣವೇ ತನಿಖೆ ನಡೆಸಬೇಕು. ಇಂಥ ವಿಚಾರದಲ್ಲಿ ಹೊಣೆಗಾರಿಕೆ ಮುಖ್ಯ. ಮುಂದೆ ಇಂತಹ ಘಟನೆಗಳಾಗಬಾರದು ಎಂದು ನಾಗರಿಕ ವಿಮಾನಯಾನ ಸಚಿವಾಲಯ, ನಾಗರಿಕ ವಿಮಾನಯಾನ ನಿರ್ದೇಶನಾಲಯವನ್ನು ಕೆಸಿ ವೇಣುಗೋಪಾಲ್ ಆಗ್ರಹಿಸಿದ್ದಾರೆ.**

**ಚೆನ್ನೈ:** ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಸಂಸತ್ತಿನ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಅಧ್ಯಕ್ಷ ಕೆಸಿ ವೇಣುಗೋಪಾಲ್ ಸೇರಿದಂತೆ ಹಲವಾರು ಸಂಸದರನ್ನು ಕರೆದೊಯ್ಯುತ್ತಿದ್ದ ಏರ್ ಇಂಡಿಯಾ ವಿಮಾನ ತಾಂತ್ರಿಕ ದೋಷದ ಕಾರಣ ಚೆನ್ನೈಯಲ್ಲಿ ತುರ್ತು ಲ್ಯಾಂಡಿಗ್ ಮಾಡಿದೆ. ಸಂಜೆ ತಿರುವನಂತಪುರಂನಿಂದ ದೆಹಲಿಗೆ ಹೊರಟಿದ್ದ ವಿಮಾನ 2455 ರಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿತ್ತು. ಅಲ್ಲದೆ, ಹವಾಮಾನ ವೈಪರೀತ್ಯವೂ ತುರ್ತು ಲ್ಯಾಂಡಿಂಗ್‌ಗೆ ಕಾರಣವಾಯಿತು ಎನ್ನಲಾಗಿದೆ. ಈ ವಿಚಾರವಾಗಿ ಕೆಸಿ ವೇಣುಗೋಪಾಲ್ ಅವರು ಎಕ್ಸ್ ಸಂದೇಶ ಪ್ರಕಟಿಸಿ, ವಿಮಾನಯಾನ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ಕೆಸಿ ವೇಣುಗೋಪಾಲ್ ಸಂದೇಶದಲ್ಲೇನಿದೆ ನಾನು, ಹಲವಾರು ಸಂಸದರು ಮತ್ತು ನೂರಾರು ಪ್ರಯಾಣಿಕರನ್ನು ಒಳಗೊಂಡು ತಿರುವನಂತಪುರದಿಂದ ದೆಹಲಿಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ 2455 ದುರಂತಕ್ಕೀಡಾಗುವುದರಿಂದ ಸ್ವಲ್ಪದರಲ್ಲೇ ಬಚಾವಾಯಿತು ಎಂದು ಕೆಸಿ ವೇಣುಗೋಪಾಲ್ ಎಕ್ಸ್ ಸಂದೇಶದಲ್ಲಿ ತಿಳಿಸಿದ್ದಾರೆ. ತಡವಾಗಿ ಆರಂಭವಾದ ಪ್ರಯಾಣ ಕೆಲವೇ ಕ್ಷಣಗಳಲ್ಲಿ ಅತ್ಯಂತ ಭಯಾನಕವಾದ ಯಾನವಾಗಿ ಬದಲಾಯಿತು. ಟೇಕ್ ಆಫ್ ಆದ ಕೆಲವೇ ಕ್ಷಣಗಳಲ್ಲಿ ಟರ್ಬೊಲೆನ್ಸ್ ಸಮಸ್ಯೆ ಎದುರಾಯಿತು. ಆದಾದ ಒಂದು ಗಂಟೆಯ ನಂತರ ವಿಮಾನದಲ್ಲಿ ಸಿಗ್ನಲ್ ತೊಂದರೆ ಇದೆ ಎಂದು ಕ್ಯಾಪ್ಟನ್ ಘೋಷಣೆ ಮಾಡಿದರು. ಬಳಿಕ ವಿಮಾನವನ್ನು ಚೆನ್ನೈ ಕಡೆಗೆ ತಿರುಗಿಸಲಾಯಿತು.

ತಾಂತ್ರಿಕ ತೊಂದರೆ ಇದ್ದ ಹೊರತಾಗಿಯೂ ಸುಮಾರು ಎರಡು ಗಂಟೆ ಕಾಲ ವಿಮಾನ ನಿಲ್ದಾಣದ ಸುತ್ತ ಹಾರಾಡಿದ ನಂತರ ಲ್ಯಾಂಡಿಂಗ್‌ಗೆ ಅನುಮತಿ ದೊರೆಯಿತು. ಮೊದಲ ಲ್ಯಾಂಡಿಂಗ್ ಯತ್ನದ ವೇಳೆ ಅದೇ ರನ್‌ವೇಯಲ್ಲಿ ಮತ್ತೊಂದು ವಿಮಾನ ಇರುವುದು ತಿಳಿದು ಕೊನೇ ಕ್ಷಣದಲ್ಲಿ ಪೈಲೆಟ್ ಟೇಕ್ ಆಫ್ ಮಾಡಿ ನಮ್ಮನ್ನು ಬಚಾವ್ ಮಾಡಿದರು. ಎರಡನೇ ಪ್ರಯತ್ನದಲ್ಲಿ ಸುರಕ್ಷಿತವಾಗಿ ಲ್ಯಾಂಡಿಂಗ್ ಮಾಡಲಾಯಿತು ಎಂದು ವೇಣುಗೋಪಾಲ್ ಉಲ್ಲೇಖಿಸಿದ್ದಾರೆ.

# ಭಾರತೀಯ ನೌಕಾಪಡೆಗೆ ಮತ್ತೆರಡು ಅತ್ಯಾಧುನಿಕ ಯುದ್ಧನೌಕೆ ಸೇರ್ಪಡೆ

### ಎರಡು ಪ್ರತಿಷ್ಠಿತ ಭಾರತೀಯ ಹಡಗುಕಟ್ಟೆಗಳಿಂದ ಎರಡು ಪ್ರಮುಖ ಮೇಲ್ಮೈ ಯುದ್ಧನೌಕೆಗಳನ್ನು ಏಕಕಾಲದಲ್ಲಿ ನಿಯೋಜನೆ

**ವಿಶಾಖಪಟ್ಟಣಂ:** ಭಾರತೀಯ ನೌಕಾಪಡೆಯು ಆ. 26 ರಂದು ಉದಯಗಿರಿ (ಎಫ್ 35), ಹಿಮಗಿರಿ (ಎಫ್ 34) ಎಂಬ ಎರಡು ಮುಂದುವರಿದ ಫ್ರಂಟ್‌ಲೈನ್ ಫ್ರಿಗೇಟ್‌ಗಳನ್ನು ನಿಯೋಜಿಸಲಿದೆ ಎಂದು ಪೂರ್ವ ನೌಕಾ ಕಮಾಂಡ್ ಅಧಿಕಾರಿಗಳು ತಿಳಿಸಿದ್ದಾರೆ.

ಈ ಎರಡು ಫ್ರಿಗೇಟ್ ಯುದ್ಧನೌಕೆಗಳ ಕಾರ್ಯಾರಂಭವು ವಿಶಾಖಪಟ್ಟಣಂನಲ್ಲಿ 2 ಪ್ರತಿಷ್ಠಿತ ಭಾರತೀಯ ಹಡಗುಕಟ್ಟೆಗಳಿಂದ ಎರಡು ಪ್ರಮುಖ ಮೇಲ್ಮೈ ಯುದ್ಧನೌಕೆಗಳನ್ನು ಏಕಕಾಲದಲ್ಲಿ ನಿಯೋಜಿಸಲಾಗುತ್ತಿರುವ ಮೊದಲ ಪ್ರಯತ್ನವಾಗಿದೆ. ಭಾರತೀಯ ನೌಕಾಪಡೆಯು ಆ. 26 ರಂದು ಎರಡು ಮುಂದುವರಿದ ಫ್ರಂಟ್‌ಲೈನ್ ಫ್ರಿಗೇಟ್‌ಗಳಾದ ಉದಯಗಿರಿ (ಎಫ್35), ಹಿಮಗಿರಿ (ಎಫ್34) ಗಳನ್ನು ಏಕಕಾಲದಲ್ಲಿ ನಿಯೋಜಿಸಲು ಸಿದ್ಧತೆ ನಡೆಸುತ್ತಿದೆ ಎಂದು ತಡರಾತ್ರಿ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆ ತಿಳಿಸಿದೆ. ಪೂರ್ವ ನೌಕಾ ಕಮಾಂಡ್ (ಇಎನ್‌ಸಿ) ಪ್ರಕಾರ, ಉದಯಗಿರಿ ಪ್ರಾಜೆಕ್ಟ್ 17 ಎ ಸ್ಟೆಲ್ತ್ ಫ್ರಿಗೇಟ್‌ಗಳಿಂದ ಎರಡನೇ ಹಡಗು ಮತ್ತು ಇದನ್ನು ಮುಂಬೈನಲ್ಲಿ ಮಜಗಾನ್ ಡಾಕ್ ಶಿಪ್‌ಬಿಲ್ಡರ್ಸ್ ಲಿಮಿಟೆಡ್ (ಎಂಡಿಎಲ್) ನಿರ್ಮಿಸಿದೆ. ಹಿಮಗಿರಿ ಕೋಲ್ಕತ್ತಾದ ಗಾರ್ಡನ್ ರೀಚ್ ಶಿಪ್‌ಬಿಲ್ಡರ್ಸ್ ಎಂಜಿನಿಯರ್ಸ್ (ಜಿಆರ್‌ಎಸ್‌ಇ) ನಿರ್ಮಿಸುತ್ತಿರುವ ಪಿ 17 ಎ ಹಡಗಿನಲ್ಲಿ ಮೊದಲನೆಯದು. ಎರಡೂ ಯುದ್ಧನೌಕೆಗಳು ಹಿಂದಿನ ವಿನ್ಯಾಸಗಳಿಗಿಂತ ಒಂದು ಪೀಳಿಗೆಯ ಅಧಿಕವನ್ನು ಪ್ರತಿನಿಧಿಸುತ್ತವೆ.



ಸುಮಾರು 6,700 ಟನ್‌ಗಳನ್ನು ಸ್ಥಳಾಂತರಿಸುವ 17ವರ್ಗದ ಯುದ್ಧನೌಕೆಗಳು ಅವುಗಳ ಹಿಂದಿನ ಶಿವಾಲಿಕ್-ವರ್ಗದ ಯುದ್ಧನೌಕೆಗಳಿಗಿಂತ ಸರಿಸುಮಾರು ಐದು ಪ್ರತಿಶತ ದೊಡ್ಡದಾಗಿದ್ದು, ಕಡಿಮೆ ರಾಡಾರ್ ಅಡ್ಡ ವಿಭಾಗದೊಂದಿಗೆ ನಯವಾದ ರೂಪವನ್ನು ಒಳಗೊಂಡಿವೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಇವು ಡೀಸೆಲ್ ಎಂಜಿನ್‌ಗಳು, ಗ್ಯಾಸ್ ಟರ್ಬೈನ್‌ಗಳನ್ನು ಬಳಸಿಕೊಂಡು ಸಂಯೋಜಿತ ಡೀಸೆಲ್ ಅಥವಾ ಗ್ಯಾಸ್ ಪ್ರೊಪಲ್ಷನ್ ಪ್ಲಾಂಟ್‌ಗಳಿಂದ ಚಾಲಿತವಾಗಿದ್ದು, ನಿಯಂತ್ರಿಸಬಹುದಾದ-ಪಿಚ್ ಪ್ರೊಪೆಲ್ಲರ್‌ಗಳನ್ನು ಚಾಲನೆ ಮಾಡುತ್ತವೆ ಮತ್ತು ಇಂಟಿಗ್ರೇಟೆಡ್ ಪ್ಲಾಟ್‌ಫಾರ್ಮ್ ಮ್ಯಾನೇಜ್‌ಮೆಂಟ್ ಸಿಸ್ಟಮ್ ಮೂಲಕ ನಿರ್ವಹಿಸಲ್ಪಡುತ್ತವೆ.

2025ರಲ್ಲಿ ನಿಯೋಜಿಸಲಾದ ಇತರ ಸ್ಥಳೀಯ ವೇದಿಕೆಗಳಲ್ಲಿ ವಿಧ್ವಂಸಕ ಐಎನ್‌ಎಸ್ ಸೂರತ್, ಫ್ರಿಗೇಟ್ ಐಎನ್‌ಎಸ್ ನೀಲಗಿರಿ, ಜಲಾಂತರ್ಗಾಮಿ ಐಎನ್‌ಎಸ್ ವಾಘಶೀರ್, ಎಎಸ್ಡಬ್ಲ್ಯು ಆಳವಿಲ್ಲದ ನೀರಿನ ಕ್ರಾಫ್ಟ್ ಐಎನ್‌ಎಸ್ ಅರ್ನಾಲಾ ಮತ್ತು ಡೈವಿಂಗ್ ಸಪೋರ್ಟ್ ಹಡಗು ಐಎನ್‌ಎಸ್ ನಿಸ್ತಾರ್ ಸೇರಿವೆ.ಉದಯಗಿರಿ, ಹಿಮಗಿರಿಯ ಕಾರ್ಯಾರಂಭವು ಭಾರತದ ದೃಢವಾದ, ಸ್ವಾವಲಂಬಿ ಕಡಲ ರಕ್ಷಣಾ ಪರಿಸರ ವ್ಯವಸ್ಥೆಯತ್ತ ಪ್ರಯಾಣದ ಆಚರಣೆಯಾಗಲಿದೆ ಎಂದು ಅದು ಹೇಳಿದೆ. ಭಾರತೀಯ ನೌಕಾಪಡೆಗೆ ಮತ್ತೊಂದು ಪ್ರಮುಖ ಮೈಲಿಗಲ್ಲು ಎಂದರೆ, ಉದಯಗಿರಿ ನೌಕಾಪಡೆಯ ಯುದ್ಧನೌಕೆ ವಿನ್ಯಾಸ ಬ್ಯೂರೋ ವಿನ್ಯಾಸಗೊಳಿಸಿದ 100 ನೇ ಹಡಗು.ಎರಡೂ ಹಡಗುಗಳು 200 ಕ್ಕೂ ಹೆಚ್ಚು ಎಂಎಸ್‌ಎಂಇಗಳನ್ನು ವ್ಯಾಪಿಸಿರುವ ಕೈಗಾರಿಕಾ ಪರಿಸರ ವ್ಯವಸ್ಥೆಯ ಪರಿಣಾಮವಾಗಿದ್ದು, ಸುಮಾರು 4,000 ನೇರ ಉದ್ಯೋಗಗಳು ಮತ್ತು 10,000 ಕ್ಕೂ ಹೆಚ್ಚು ಪರೋಕ್ಷ ಉದ್ಯೋಗಗಳನ್ನು ಬೆಂಬಲಿಸುತ್ತದೆ. ಈ ನಿಗದಿತ ಕಾರ್ಯಕ್ರಮವು ಭಾರತದ ನೌಕಾ ಆಧುನೀಕರಣವನ್ನು ವೇಗಗೊಳಿಸುತ್ತಿದೆ ಮತ್ತು ಬಹು ಹಡಗುಕಟ್ಟೆಗಳಿಂದ ಅತ್ಯಾಧುನಿಕ ಯುದ್ಧನೌಕೆಗಳನ್ನು ತಲುಪಿಸುವ ಸಾಮರ್ಥ್ಯವನ್ನು ಒತ್ತಿಹೇಳುತ್ತದೆ ಎಂದು ಪ್ರಕಟಣೆ ತಿಳಿಸಿದೆ.

### ಕಾರ್ಯಾಚರಣೆಯ ನಿಯೋಜನೆಗೆ ಸಿದ್ಧ

**ಕಠಿಣ ಸಮುದ್ರ ಪ್ರಯೋಗಗಳು ಯುದ್ಧನೌಕೆಗಳ ಹಲ್, ಯಂತ್ರೋಪಕರಣಗಳು, ಅಗ್ನಿಶಾಮಕ, ಹಾನಿ ನಿಯಂತ್ರಣ, ಸಂಚರಣೆ ಮತ್ತು ಸಂವಹನ ವ್ಯವಸ್ಥೆಗಳನ್ನು ಮೌಲ್ಯೀಕರಿಸಿವೆ, ಅವು ಕಾರ್ಯಾಚರಣೆಯ ನಿಯೋಜನೆಗೆ ಸಿದ್ಧವಾಗಿವೆ ಎಂದು ಖಚಿತಪಡಿಸುತ್ತವೆ. ಉದಯಗಿರಿ, ಹಿಮಗಿರಿಯ ಕಾರ್ಯಾರಂಭವು ಹಡಗು ವಿನ್ಯಾಸ, ನಿರ್ಮಾಣದಲ್ಲಿ ನೌಕಾಪಡೆಯ ಸ್ವಾವಲಂಬನೆಗೆ ಬದ್ಧತೆಯನ್ನು ಒತ್ತಿಹೇಳುತ್ತದೆ ಮತ್ತು ಇತರ ಸ್ಥಳೀಯ ವೇದಿಕೆಗಳ ಕಾರ್ಯಾರಂಭವನ್ನು ಅನುಸರಿಸುತ್ತದೆ ಎಂದು ತಿಳಿದುಬಂದಿದೆ.**

### ನೀರೊಳಗಿನ ಶಸ್ತ್ರಾಸ್ತ್ರ ವ್ಯವಸ್ಥೆ

**ಈ ಯುದ್ಧನೌಕೆಗಳ ಶಸ್ತ್ರಾಸ್ತ್ರಗಳ ಸೂಟ್ ಸೂಪರ್ ಸಾನಿಕ್ ಮೇಲ್ಮೈಯಿಂದ ಮೇಲ್ಮೈಗೆ ಕ್ಷಿಪಣಿಗಳು, ಮಧ್ಯಮ-ಶ್ರೇಣಿಯ ಮೇಲ್ಮೈಯಿಂದ ಗಾಳಿಗೆ ಕ್ಷಿಪಣಿಗಳು, 76 ಎಂಎಂ ಎಂಆರ್ ಗನ್ ಮತ್ತು 30 ಎಂಎಂ ಮತ್ತು 12.7 ಎಂಎಂ ಕ್ಲೋಸ್-ಇನ್ ಶಸ್ತ್ರಾಸ್ತ್ರ ವ್ಯವಸ್ಥೆಗಳು ಮತ್ತು ಜಲಾಂತರ್ಗಾಮಿ ವಿರೋಧಿ ಮತ್ತು ನೀರೊಳಗಿನ ಶಸ್ತ್ರಾಸ್ತ್ರ ವ್ಯವಸ್ಥೆಗಳ ಸಂಯೋಜನೆಯನ್ನು ಒಳಗೊಂಡಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.**

## ಮಿನಿ ನ್ಯೂಸ್

### 6.1ರಷ್ಟು ತೀವ್ರತೆಯ ಭೂಕಂಪನ

**ಇಸ್ತಾಂಬುಲ್:** ಟರ್ಕಿಯ ವಾಯವ್ಯ ಪ್ರಾಂತ್ಯ ಬಲಿಕೆಸಿರ್‌ನಲ್ಲಿ 6.1 ತೀವ್ರತೆಯ ಭೂಕಂಪನವಾಗಿದೆ. 10ಕ್ಕೂ ಹೆಚ್ಚು ಕಟ್ಟಡಗಳು ಕುಸಿದಿವೆ. ಅವಶೇಷಗಳಡಿ ಕನಿಷ್ಠ ಇಬ್ಬರು ಸಿಲುಕಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಸಿಂದಿರ್ಗಿ ಪಟ್ಟಣದಲ್ಲಿ ಕಂಪನ ಕೇಂದ್ರ ಕಂಡುಬಂದಿದ್ದು, 200 ಕಿ.ಮೀ. ದೂರದ ಇಸ್ತಾಂಬುಲ್‌ನಲ್ಲಿ ಕಂಪನದ ಅನುಭವವಾಗಿದೆ. ಇದರ ಬೆನ್ನಲ್ಲೇ ಹಲವೆಡೆ ಕೂಡ ಭೂಮಿ ಕಂಪಿಸಿದ್ದು, ಒಂದು ಕಡೆ 4.6ರಷ್ಟು ತೀವ್ರತೆ ದಾಖಲಾಗಿದೆ ಎಂದು ವಿಪತ್ತು ಮತ್ತು ತುರ್ತು ನಿರ್ವಹಣಾ ಸಂಸ್ಥೆ ಹೇಳಿದೆ.

### ಪ್ರಿಯಾಂಕಾ ಗಾಂಧಿ ಕಾಣೆಯಾಗಿದ್ದಾರೆ ಎಂದು ದೂರು ದಾಖಲಿಸಿದ ಬಿಜೆಪಿ

**ವಯನಾಡ್:** ಸಂಸದೆ ಪ್ರಿಯಾಂಕಾ ಗಾಂಧಿ ಅವರು ಮೂರು ತಿಂಗಳಿನಿಂದ ಕಾಣೆಯಾಗಿದ್ದಾರೆ ಎಂದು ಬಿಜೆಪಿ ನಾಯಕರೊಬ್ಬರು ಸೋಮವಾರ ದೂರು ದಾಖಲಿಸಿದ್ದಾರೆ. ಬಿಜೆಪಿಯ ಪರಿಶಿಷ್ಟ ಪಂಗಡ ಮೋರ್ಚಾದ ಅಧ್ಯಕ್ಷ ಪಲ್ಲಿಯಾರ ಮುಕುಂದನ್ ಅವರು ವಯನಾಡ್ ಜಿಲ್ಲಾ ಪೊಲೀಸ್ ಮುಖ್ಯಸ್ಥರಿಗೆ ದೂರು ನೀಡಿದ್ದಾರೆ. ವಯನಾಡ್ ಸಂಸದೆ ಪ್ರಿಯಾಂಕಾ ಗಾಂಧಿ ಅವರು ಕಳೆದ ಮೂರು ತಿಂಗಳಿನಿಂದ ವಯನಾಡ್‌ಗೆ ಆಗಮಿಸಿಲ್ಲ, ಭೂಕುಸಿತವಾಗಿರುವ ಚೂರಲ್‌ಲ – ಮುಂಡಕ್ಕೆ ಪ್ರದೇಶಕ್ಕೆ ಕೂಡ ಭೇಟಿ ನೀಡಿಲ್ಲ. ಬುಡಕಟ್ಟು ಜನರ ಸಮಸ್ಯೆಗಳಿಗೆ ಕಿವಿಯಾಗುತ್ತಿಲ್ಲ ಎಂದು ಮುಕುಂದನ್ ಆರೋಪಿಸಿದ್ದಾರೆ. ಕೇರಳ ವಿದ್ಯಾರ್ಥಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಗೋಕುಲ್ ಗುರುವಾಯೂರು ಅವರು ಕೇಂದ್ರ ಸಚಿವ ಹಾಗೂ ಸಂಸದ ಸುರೇಶ್ ಗೋಪಿ ಅವರು ಕಾಣೆಯಾಗಿದ್ದಾರೆ ಎಂದು ದೂರು ದಾಖಲಿಸಿದ್ದರು. ಸುರೇಶ್ ಗೋಪಿ ಅವರು ಕ್ಷೇತ್ರದ ಜನರಿಗೆ ಸಿಗುತ್ತಿಲ್ಲ ಎಂದು ಆರೋಪಿಸಿದ್ದರು.

### ಕಂದಕಕ್ಕೆ ಬಿದ್ದ ಪಿಕ್‌ಅಪ್ ವಾಹನ; ಏಳು ಜನರ ಸಾವು

**ಪುಣೆ:** ಜಿಲ್ಲೆಯ ಗುಡ್ಡಗಾಡು ಪ್ರದೇಶದಲ್ಲಿ ಸಾಗುತ್ತಿದ್ದ ಪಿಕ್‌ಅಪ್ ವ್ಯಾನ್ ಕಂದಕಕ್ಕೆ ಬಿದ್ದ ಪರಿಣಾಮ ದೇವಸ್ಥಾನಕ್ಕೆ ಹೊರಟಿದ್ದ ಮಹಿಳೆಯರು, ಮಕ್ಕಳನ್ನು ಒಳಗೊಂಡಂತೆ ಏಳು ಜನ ಸೋಮವಾರ ಮೃತಪಟ್ಟಿದ್ದಾರೆ. ಶ್ರಾವಣ ಮಾಸದ ಪ್ರಯುಕ್ತ ಖೇಡ್ ತಹಶೀಲ್‌ನಲ್ಲಿರುವ ಕುಂದೇಶ್ವರ ದೇವಸ್ಥಾನಕ್ಕೆ ಇವರು ತೆರಳುತ್ತಿದ್ದರು. ಮಹಿಳೆಯರು, ಮಕ್ಕಳು ಸೇರಿದಂತೆ ಸುಮಾರು 30 ರಿಂದ 35 ಪ್ರಯಾಣಿಕರು ಪಿಕ್-ಅಪ್ ವ್ಯಾನ್‌ನಲ್ಲಿ ಪ್ರಯಾಣಿಸುವಾಗ ಘಟ್ಟ ಪ್ರದೇಶದ ತಿರುವಿನಲ್ಲಿ ಸಾಗುತ್ತಿದ್ದ ವಾಹನ ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಬಿದ್ದಿದೆ. ಪರಿಣಾಮ ಏಳು ಜನ ಮೃತಪಟ್ಟಿದ್ದಾರೆ. ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆಂದು ಪಿಂಪ್ರಿ ಚಿಂಚ್‌ವಾಡ್ ಪೊಲೀಸರು ಮಾಹಿತಿ ನೀಡಿದ್ದಾರೆ. ಗಾಯಳುಗಳನ್ನು ಹತ್ತಿರದ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು ಅಪಘಾತಕ್ಕೆ ಒಳಗಾದವರು ಪಾಪಲ್ವಾಡಿ ಗ್ರಾಮದವರೆಂದು ಹೇಳಲಾಗಿದೆ.

### ಭಾರತದ ಶೇ. 55ರಷ್ಟು ಉತ್ಪನ್ನಗಳ ಮೇಲೆ ಪರಿಣಾಮ: ಕೇಂದ್ರ

**ಮುಂಬೈ:** ಭಾರತದಿಂದ ಅಮೆರಿಕಗೆ ರಫ್ತಾಗುವ ಶೇ. 55ರಷ್ಟು ಉತ್ಪನ್ನಗಳ ಮೇಲೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ ವಿಧಿಸಿರುವ ಸುಂಕವು ಪರಿಣಾಮ ಬೀರಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ರಷ್ಯಾದಿಂದ ಕಚ್ಚಾತೈಲ ಖರೀದಿ ಮಾಡಿದ್ದರ ಪರಿಣಾಮ ಭಾರತೀಯ ಸರಕುಗಳ ಮೇಲೆ ಟ್ರಂಪ್ ಸರ್ಕಾರ ಹೆಚ್ಚುವರಿ ಶೇ 25ರಷ್ಟು ಸುಂಕವನ್ನು ಹೇರಿತ್ತು. ಇದು ಅಮೆರಿಕದ ವ್ಯಾಪಾರ ಪಾಲುದಾರ ದೇಶದ ಮೇಲೆ ವಿಧಿಸಿದ ಅತ್ಯಧಿಕ ತೆರಿಗೆಯಾಗಿದೆ. ಅಮೆರಿಕವು ಈ ಮೊದಲು ಭಾರತೀಯ ಸರಕುಗಳ ಮೇಲೆ ವಿಧಿಸಿದ್ದ ಶೇ 25 ರಷ್ಟು ಸುಂಕವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗಿದೆ ಎಂದು ಹಣಕಾಸು ಇಲಾಖೆಯ ರಾಜ್ಯ ಖಾತೆ ಸಚಿವ ಪಂಕಜ್ ಚೌಧರಿ ಶಾಸಕರೊಬ್ಬರ ಪ್ರಶ್ನೆಗೆ ಲಿಖಿತ ರೂಪದಲ್ಲಿ ಉತ್ತರಿಸಿದ್ದಾರೆ. ಹಣಕಾಸು ಇಲಾಖೆಯ ರಾಜ್ಯ ಖಾತೆ ಸಚಿವ ಪಂಕಜ್ ಚೌಧರಿ ಮಾತನಾಡಿ, ಭಾರತದ ರಫ್ತುದಾರರು, ಪಾಲುದಾರರು ಸೇರಿದಂತೆ ವಿವಿಧ ಕೈಗಾರಿಕೆಗಳೊಂದಿಗೆ ಚರ್ಚೆ ನಡೆಸಿರುವ ವಾಣಿಜ್ಯ ಇಲಾಖೆಯು ಅವರ ಅಭಿಪ್ರಾಯಗಳನ್ನು ಪಡೆದಿದೆ ಎಂದು ಹೇಳಿದ್ದಾರೆ. ಜಗತ್ತಿನ ದೊಡ್ಡ ಆರ್ಥಿಕತೆಗಳಾಗಿರುವ ಭಾರತ ಮತ್ತು ಅಮೆರಿಕದ ನಡುವೆ ಕಳೆದ ಆರ್ಥಿಕ ವರ್ಷದಲ್ಲಿ 87 ಶತಕೋಟಿಯಷ್ಟು ವ್ಯಾಪಾರ ವಹಿವಾಟು ನಡೆದಿದೆ ಎಂದು ಭಾರತ ಸರ್ಕಾರವು ತಿಳಿಸಿದೆ.

### ಹೆಂಡತಿಯನ್ನು ದರೋಡೆಕೋರರು ಕೊಂದಿದ್ದಾರೆ ಎಂದಿದ್ದ ಗಂಡನೇ ಕೊಲೆಗಾರ

**ಜೈಪುರ:** ಹೆಂಡತಿಯನ್ನು ದರೋಡೆಕೋರರು ಕೊಂದಿದ್ದಾರೆ ಎಂದು ಪ್ರಕರಣ ದಾಖಲಿಸಿದ್ದ ಗಂಡನೇ ನಿಜವಾದ ಕೊಲೆಗಾರನಾಗಿರುವ ಘಟನೆಯು ರಾಜಸ್ಥಾನದ ಕಿಶನ್‌ಗಢದಲ್ಲಿ ಜರುಗಿದೆ. ರಾತ್ರಿ ಗಂಭೀರ ಗಾಯಗೊಂಡ ಹೆಂಡತಿಯೊಂದಿಗೆ ಕಿಶನ್‌ಗಢದ ಸರ್ಕಾರಿ ಆಸ್ಪತ್ರೆಗೆ ರೋಹಿತ್ ಸೈನಿ(35) ಎನ್ನುವವರು ದಾಖಲಾಗಿದ್ದರು. ಅವರಿಗೂ ಚಿಕ್ಕಪುಟ್ಟ ಗಾಯವಾಗಿತ್ತು. ಆ ವೇಳೆಗಾಗಲೇ ಅವರ ಹೆಂಡತಿ ಸಂಜು(33) ಮೃತಪಟ್ಟಿದ್ದರು ಎಂದು ವೈದ್ಯರು ತಿಳಿಸಿದ್ದಾರೆ. ಕೆಲವು ಅಪರಿಚಿತರು ತನ್ನ ಹೆಂಡತಿಯ ಮೇಲೆ ದಾಳಿ ಮಾಡಿದ್ದರು ಎಂದು ರೋಹಿತ್ ಸೈನಿ ದೂರು ದಾಖಲಿಸಿದ್ದರು. ಪ್ರಕರಣದ ಪ್ರಾಥಮಿಕ ತನಿಖೆಯ ವೇಳೆ ರೋಹಿತ್ ಸೈನಿ ಅವರು ಘಟನೆಯ ಕುರಿತು ಹೇಳಿರುವುದು ಸುಳ್ಳು ಎಂದು ಪತ್ತೆಯಾಗಿದೆ. ಅವರ ಹೇಳಿಕೆಗಳು ಪ್ರಕರಣದ ದಿಕ್ಕು ತಪ್ಪಿಸುವಂತಿತ್ತು. ತನಿಖೆಯ ವೇಳೆ, ಗಂಡನೇ ಹೆಂಡತಿಯ ಮೇಲೆ ಹಲ್ಲೆ ಮಾಡಿ, ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದಾನೆ ಎನ್ನುವುದು ಸಾಬೀತಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಯಾವ ಕಾರಣಕ್ಕಾಗಿ ಕೊಲೆ ಮಾಡಿದ್ದಾರೆ ಎನ್ನುವುದು ತಿಳಿದುಬಂದಿಲ್ಲ. ಪ್ರಕರಣದ ಕುರಿತು ಹೆಚ್ಚಿನ ತನಿಖೆಯಾಗುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ.

### ಲೋಕಸಭೆ: ತೆರಿಗೆ ಕಾನೂನು ತಿದ್ದುಪಡಿ ಮಸೂದೆ ಮಂಡಿಸಿದ ಸಚಿವೆ

**ನವದೆಹಲಿ:** ಏಕೀಕೃತ ಪಿಂಚಣಿದಾರರಿಗೆ ತೆರಿಗೆ ವಿನಾಯಿತಿ ನೀಡುವುದನ್ನೂ ಒಳಗೊಂಡ ತೆರಿಗೆ ಕಾನೂನುಗಳ ತಿದ್ದುಪಡಿ ಮಸೂದೆ 2025 ಅನ್ನು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಲೋಕಸಭೆಯಲ್ಲಿ ಸೋಮವಾರ ಮಂಡಿಸಿದರು. ಸೌದಿ ಅರೇಬಿಯಾದ ಕೆಲ ಸಾರ್ವಜನಿಕ ಹೂಡಿಕೆಗಳಿಗೆ ನೇರ ತೆರಿಗೆ ಪ್ರಯೋಜಗಳನ್ನು ಕಲ್ಪಿಸುವ, ಆದಾಯ ತೆರಿಗೆಯಲ್ಲಿ ಕೆಲ ಬದಲಾವಣೆಗಳನ್ನು ಒಳಗೊಂಡ ತಿದ್ದುಪಡಿ ಮಸೂದೆ ಇದಾಗಿದೆ. ತೆರಿಗೆ ಕಾನೂನುಗಳ ತಿದ್ದುಪಡಿ ಮಸೂದೆ 2025ರಲ್ಲಿ ಆದಾಯ ತೆರಿಗೆ 1961, ಹಣಕಾಸು ಕಾಯ್ದೆ 2025ರ ತಿದ್ದುಪಡಿಯನ್ನು ಒಳಗೊಂಡಿದೆ. ಹೊಸ ಪಿಂಚಣಿ ವ್ಯವಸ್ಥೆಯಲ್ಲಿ ಲಭ್ಯವಿರುವ ಎಲ್ಲಾ ಪ್ರಯೋಜನಗಳು ಏ. 1ರಿಂದ ಜಾರಿಗೆ ಬಂದಿರುವ ಏಕೀಕೃತ ಪಿಂಚಣಿ ಯೋಜನೆಯಲ್ಲೂ ಸಿಗಲಿದೆ ಎಂದು ಸರ್ಕಾರವು ಜುಲೈನಲ್ಲಿ ಹೇಳಿತ್ತು.

